ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಸಂಪುಟ: 21, ಸಂಚಿಕೆ: 298, ಪುಟಗಳು: 8, ಸೋಮವಾರ, 5 ಆಗಸ್ಟ್ 2024 RNI NO. KARKAN/2002/08054
epaper: www.sanjemugilu.com
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3


ನೇಹಾ ಸಾರಥ್ಯದಲ್ಲಿ...



ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines

### ಸುಭಾಷಿತ

ಬಾಳುವಷ್ಟು ಕಾಲವೂ ಕಲಿಯುತ್ತಲೇ ಇರಬೇಕು.
। ತೀ.ನಂ.ಶ್ರೀ

### ಪಂಚಾಂಗ

(ಸೋಮವಾರ 5, ಆಗಸ್ಟ್-2024)
- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯಣ, ವರ್ಷ ಋತು
- ಶ್ರಾವಣ ಮಾಸ, ಶುಕ್ಲ ಪಕ್ಷ,
- ವಾರ: ಸೋಮವಾರ, ತಿಥಿ: ಪಾಡ್ಯ
- ನಕ್ಷತ್ರ: ಆಶ್ಲೇಷ
- ರಾಹುಕಾಲ: 7.44 ರಿಂದ 9.19
- ಗುಳಿಕಕಾಲ: 2.04 ರಿಂದ 3.39
- ಯಮಗಂಡಕಾಲ: 10.54 ರಿಂದ 12.29

## ಕೇರಳದಲ್ಲಿ ಮತ್ತೆ ನಿಫಾ ವೈರಸ್ ಭೀತಿ

**ಕೇರಳ:** ಕೇರಳಕ್ಕೆ ಮತ್ತೆ ನಿಫಾ ವೈರಸ್ ಭೀತಿ ಎದುರಾಗಿದೆ. ಮಲಪ್ಪುರಂ ಜಿಲ್ಲೆಯ ಪಂಡಿಕ್ಕಾಡ್ ನಲ್ಲಿ ಜುಲೈ ತಿಂಗಳಲ್ಲಿ ನಿಫಾ ಸೋಂಕಿನಿಂದ 14 ವರ್ಷದ ಬಾಲಕ ಸಾವನ್ನಪ್ಪಿದ್ದಾನೆ. ಬಾವಲಿಗಳ ಮಾದರಿಯಲ್ಲಿ ನಿಫಾ ವೈರಸ್ ಇರುವುದು ಪತ್ತೆಯಾಗಿದೆ. ಆರೋಗ್ಯ ಸಚಿವೆ ವೀಣಾ ಜಾರ್ಜ್ ಈ ಕುರಿತು ಮಾತನಾಡಿದ್ದು, ಐದು ಕಿಲೋಮೀಟರ್ ವ್ಯಾಪ್ತಿಯೊಳಗೆ ಸಂಗ್ರಹಿಸಲಾದ 27 ಬಾವಲಿಗಳ ಮಾದರಿಗಳಲ್ಲಿ ಆರರಲ್ಲಿ ವೈರಸ್ ಕಂಡುಬಂದಿದೆ.

ನಿಫಾ ಪ್ರೋಟೋಕಾಲ್ ಪ್ರಕಾರ ನಡೆಸಿದ ಸೋಂಕಿತ ವ್ಯಕ್ತಿಯ ಸಂಪರ್ಕ ಪಟ್ಟಿಯಲ್ಲಿರುವವರ ಎಲ್ಲಾ ಪರೀಕ್ಷೆಗಳು ವೈರಸ್‌ಗೆ ಇದುವರೆಗೆ ನಕಾರಾತ್ಮಕವಾಗಿವೆ ಎಂದು ಸಚಿವರು ಹೇಳಿದರು.

ಒಟ್ಟು 472 ಜನರು ಸಂಪರ್ಕ ಪಟ್ಟಿಯಲ್ಲಿದ್ದಾರೆ ಮತ್ತು ಕಡ್ಡಾಯವಾಗಿ 21 ದಿನಗಳ ಪ್ರತ್ಯೇಕ ಅವಧಿಯನ್ನು ಪೂರ್ಣಗೊಳಿಸಿದ 261 ವ್ಯಕ್ತಿಗಳನ್ನು ಪಟ್ಟಿಯಿಂದ ತೆಗೆದುಹಾಕಲಾಗಿದೆ ಎಂದು ಅವರು ಹೇಳಿದರು.


ಬಾವಲಿಗಳಲ್ಲಿ ವೈರಸ್ ಪತ್ತೆ

ನಿಫಾ ವೈರಸ್ ಒಂದು ಝೂನೋಟಿಕ್ ವೈರಸ್, ಅಂದರೆ ಇದು ಸೋಂಕಿತ ಪ್ರಾಣಿಗಳು ಅಥವಾ ಕಲುಷಿತ ಆಹಾರದ ಮೂಲಕ ಮನುಷ್ಯರಿಗೆ ಹರಡುತ್ತದೆ. WHO ಪ್ರಕಾರ, ಇದು ಸೋಂಕಿತ ವ್ಯಕ್ತಿಯೊಂದಿಗೆ ನಿಕಟ ಸಂಪರ್ಕದ ಮೂಲಕ ನೇರವಾಗಿ ಹರಡುತ್ತದೆ.

ವೈರಸ್ ಮೊದಲ ಬಾರಿಗೆ 1998 ರಲ್ಲಿ ಮಲೇಷ್ಯಾ ಮತ್ತು ಸಿಂಗಾಪುರದಲ್ಲಿ ಕಂಡುಬಂದಿತ್ತು. ಪ್ರಾಥಮಿಕವಾಗಿ ದೇಶೀಯ ಹಂದಿಗಳ ಮೇಲೆ ಪರಿಣಾಮ ಬೀರಿತು. ಮೊದಲ ಮಾನವ ಸೋಂಕು ಮತ್ತು ಸಾವು ಸಂಭವಿಸಿದ ಮಲೇಷಿಯಾದ ಹಳ್ಳಿಯಲ್ಲಿ ಸೋಂಕು ಕಂಡುಬಂದ ನಂತರ ಅದೇ ಹಳ್ಳಿಯ ಹೆಸರನ್ನು ಈ ನಿಫಾ ವೈರಸ್ ಪಡೆದುಕೊಂಡಿದೆ.

ನಾಯಿಗಳು, ಬೆಕ್ಕುಗಳು, ಕುರಿಗಳು, ಕುದುರೆಗಳು ಸೇರಿದಂತೆ ಹಲವಾರು ಜಾತಿಯ ಸಾಕುಪ್ರಾಣಿಗಳಲ್ಲಿ ವೈರಸ್ ಕಂಡುಬಂದಿದೆ.

ಪುಟ 2

## ಜನರ ಗಮನ ಸೆಳೆದ ವಯನಾಡು ಡಿಸಿ ಕನ್ನಡತಿ ಮೇಘಶ್ರೀ

**ಚಿತ್ರದುರ್ಗ:** ಕೇರಳದ ವಯನಾಡು ಜಿಲ್ಲೆಯಲ್ಲಿ ಸಂಭವಿಸಿದ ಸರಣಿ ಭೂಕುಸಿತದಲ್ಲಿ ಮೃತಪಟ್ಟವರ ಸಂಖ್ಯೆ 350ಕ್ಕೂ ಅಧಿಕವಿದೆ. ಇನ್ನು 66 ಮೃತದೇಹಗಳ ಗುರುತೇ ಸಿಕ್ಕಿಲ್ಲ. ಇಂತಹ ಶವಗಳ ಡಿಎನ್‌ಎ ಸ್ಯಾಂಪಲ್ ಪಡೆದಿರೋ ಕೇರಳ ಸರ್ಕಾರ, ಪುತ್ತುಮಲಾ ಅನ್ನೋ ಏರಿಯಾದಲ್ಲಿ ಸಾಮೂಹಿಕ ಅಂತ್ಯಕ್ರಿಯೆ ನಡೆಸಿದೆ. ಈ ದುರಂತದ ಬಳಿಕ ವಯನಾಡು ಜಿಲ್ಲಾಡಳಿತ ಜನರಿಗಾಗಿ ನಿಂತಿದೆ. ಹಗಲಿರುಳು ಕೆಲಸ ಮಾಡುತ್ತಿದೆ. ಈ ನಡುವೆ ಜಿಲ್ಲಾಧಿಕಾರಿ, ಕನ್ನಡತಿ ತಮ್ಮ ಉತ್ತಮ ಕೆಲಸದ ಮೂಲಕ ಜನರ ಗಮನ ಸೆಳೆದಿದ್ದಾರೆ.

» **ಸೊಸೆ ಬಗ್ಗೆ ಮಾವನ ಮೆಚ್ಚುಗೆ ಮಾತುಗಳು**



ವಯನಾಡ್ ಡಿಸಿ ಆಗಿರುವ ಮೇಘಶ್ರೀ ಅವರು ಚಿತ್ರದುರ್ಗ ಜಿಲ್ಲೆ ಚಳ್ಳಕೆರೆ ತಾಲೂಕಿನ ದೊಡ್ಡೇರಿ ಗ್ರಾಮದವರು. ಸದ್ಯ ಈಗ ಕೋಟೆನಾಡಿನ ಸುಪುತ್ರಿ ಬಗ್ಗೆ ಎಲ್ಲೆಡೆ ಮೆಚ್ಚುಗೆ ವ್ಯಕ್ತವಾಗುತ್ತಿದೆ.

ಪುಟ 2

## ಸಂಕ್ಷಿಪ್ತ ಸುದ್ದಿ

### ಪೆನ್ನಿಗಾಗಿ ಶುರುವಾದ ಜಗಳ ಕೊಲೆಯಲ್ಲಿ ಅಂತ್ಯ



**ಉತ್ತರ ಪ್ರದೇಶ:** ಮದರಸಾದಲ್ಲಿ ಪೆನ್ನಿಗಾಗಿ ಶುರುವಾದ ಕಲಹ ಕೊಲೆಯಲ್ಲಿ ಅಂತ್ಯಗೊಂಡಿರುವ ಘಟನೆ ಉತ್ತರ ಪ್ರದೇಶದ ಬಲರಾಂಪುರದಲ್ಲಿ ನಡೆದಿದೆ. ಮದರಸಾದಲ್ಲಿ ಆಗಸ್ಟ್ 2ರಂದು 12 ವರ್ಷದ ಬಾಲಕನ ಶವ ಪತ್ತೆಯಾಗಿತ್ತು. ಇದೀಗ ಆತನೊಂದಿಗೆ ಓದುತ್ತಿದ್ದ ವಿದ್ಯಾರ್ಥಿಯೇ ಕೊಲೆ ಮಾಡಿರುವುದಾಗಿ ತಿಳಿದುಬಂದಿದೆ. ಅಪ್ರಾಪ್ತ ಬಾಲಕನನ್ನು ಬಂಧಿಸಲಾಗಿದೆ. ಇಬ್ಬರೂ ಮದರಸಾದಲ್ಲಿ ಒಂದೇ ಹಾಸ್ಟೆಲ್‌ನಲ್ಲಿ ವಾಸಿಸುತ್ತಿದ್ದರು. ವಿಚಾರಣೆ ವೇಳೆ ಅಪ್ರಾಪ್ತ ಆರೋಪಿಯು ಮೃತ ವಿದ್ಯಾರ್ಥಿಯೊಂದಿಗೆ ಜಗಳವಾಡಿದ್ದಾಗಿ ಪೊಲೀಸರಿಗೆ ತಿಳಿಸಿದ್ದಾನೆ. ಈ ವೇಳೆ ಇಬ್ಬರೂ ಪರಸ್ಪರ ಬೆದರಿಕೆ ಹಾಕಿದ್ದರು.

ಪುಟ 2

### ಬಿಹಾರದಲ್ಲಿ ವಿದ್ಯುತ್ ಸ್ಪರ್ಶದಿಂದ ಸುಟ್ಟು ಕರಕಲಾದ 9 ಕನ್ವಾರಿಯಾಗಳು



**ಪಹೇಲಜಾ:** ಶ್ರಾವಣ ಸೋಮವಾರವಾಗಿರುವುದರಿಂದ ಕನ್ವಾರಿಯಾಗಳು ನೀರು ತರಲು ನದಿ ಬಳಿ ಹೋಗುತ್ತಿದ್ದರು, 11 ಸಾವಿರ ವೋಲ್ಟ್ ವಿದ್ಯುತ್ ತಂತಿಗೆ ಟ್ರಾಲಿ ತಾಗಿದ್ದು 9 ಮಂದಿ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಪಹೇಲಜಾ ಘಾಟ್‌ನಿಂದ ನೀರು ತೆಗೆದುಕೊಂಡು ಬಾಬಾ ಹರಿಹರನಾಥ ದೇವಸ್ಥಾನಕ್ಕೆ ತೆರಳುತ್ತಿದ್ದರು. ಅಷ್ಟರಲ್ಲಿ ಡಿಜೆ ಟ್ರಾಲಿ ಹೈ ಟೆನ್ಷನ್ ವೈರ್ ಸ್ಪರ್ಶಿಸಿತು. ಧರ್ಮೇಂದ್ರ ಪಾಸ್ವಾನ್ ಅವರ ಪುತ್ರ ರವಿಕುಮಾರ್, ಲಾಲಾ ದಾಸ್ ಅವರ ಪುತ್ರ ರಾಜಕುಮಾರ್, ದಿವಂಗತ ಫುಡೇನಾ ಪಾಸ್ವಾನ್ ಅವರ ಪುತ್ರ ನವೀನ್ ಕುಮಾರ್, ಸನೋಜ್ ಭಗತ್ ಅವರ ಪುತ್ರ ಅಮರೇಶ್ ಕುಮಾರ್, ಮಂಟು ಪಾಸ್ವಾನ್ ಅವರ ಪುತ್ರ ಅಶೋಕ್ ಕುಮಾರ್ ಸೇರಿದ್ದಾರೆ. , ಪರಮೇಶ್ವರ ಪಾಸ್ವಾನ್ ಅವರ ಮಗ ಕಾಲು ಕುಮಾರ್,

ಪುಟ 2

## 104 ಕಡೆಗಳಲ್ಲಿ ಭೂಕುಸಿತದ ಭೀತಿ
# 2,995 ಕುಟುಂಬ ಸ್ಥಳಾಂತರಕ್ಕೆ ನೋಟಿಸ್

**ಮಡಿಕೇರಿ:** ಕೇರಳದ ವಯನಾಡಿನಲ್ಲಿ ಭಾರೀ ಭೂಕುಸಿತ ಸಂಭವಿಸಿದ ನಂತರ ಎಚ್ಚರಿಕೆ ವಹಿಸಿರುವ ಕೊಡಗು ಜಿಲ್ಲಾಡಳಿತವು ಭೂಕುಸಿತ ಸಾಧ್ಯತೆ ಇರುವ 104 ಪ್ರದೇಶಗಳನ್ನು ಗುರುತಿಸಿದೆ. ಭಾರತೀಯ ಭೂಗರ್ಭ ಇಲಾಖೆ ಸಲ್ಲಿಸಿದ ವರದಿಯನ್ನು ಆಧರಿಸಿ ಈ ಪ್ರದೇಶಗಳನ್ನು ಗುರುತಿಸಲಾಗಿದೆ. ಈ ತಿಂಗಳು ಭಾರೀ ಮಳೆಯಾಗುವ ನಿರೀಕ್ಷೆ ಇರುವುದರಿಂದ ಜಿಲ್ಲಾಡಳಿತವು ಸಂಭಾವ್ಯ ಭೂಕುಸಿತದ ಪ್ರದೇಶಗಳಲ್ಲಿ ನೆಲೆಗೊಂಡಿರುವ 2,995 ಕುಟುಂಬಗಳಿಗೆ ಸುರಕ್ಷಿತ ಪ್ರದೇಶಗಳಿಗೆ ತೆರಳಲು ನೋಟಿಸ್ ನೀಡಿದೆ.

ಈ ಹಿಂದಿನ ವಿಪತ್ತು ವರದಿಗಳು ಮತ್ತು ಸಮೀಕ್ಷೆಗಳ ಆಧಾರದ ಮೇಲೆ ಈ ಪ್ರದೇಶಗಳನ್ನು ಗುರುತಿಸಲಾಗಿದೆ. ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಪ್ರದೇಶಗಳನ್ನು ಗುರುತಿಸಿ ಸ್ಥಳಾಂತರಿಸಬೇಕಾದ ಕುಟುಂಬಗಳನ್ನು ಅಂತಿಮಗೊಳಿಸಲಾಯಿತು. ಶೀಘ್ರದಲ್ಲೇ ಸ್ಥಳಾಂತರ ಆಗಬಹುದು ಎಂದು ಮೂಲಗಳು ತಿಳಿಸಿವೆ.

ಜಿಲ್ಲಾಡಳಿತ ಸದ್ಯ 14 ಪರಿಹಾರ ಕೇಂದ್ರಗಳನ್ನು ಸ್ಥಾಪಿಸಿದೆ. ಅಲ್ಲಿ 200 ಕ್ಕೂ ಹೆಚ್ಚು ನಿವಾಸಿಗಳು ಆಶ್ರಯ ಪಡೆದಿದ್ದಾರೆ. ಅಲ್ಲದೆ, ವಿಪತ್ತಿನ ಆತಂಕ ಎದುರಿಸುತ್ತಿರುವ ಪ್ರದೇಶಗಳಲ್ಲಿ 95 ಪರಿಹಾರ ಕೇಂದ್ರಗಳನ್ನು ತೆರೆಯಲು ಸ್ಥಳಗಳನ್ನು ಗುರುತಿಸಲಾಗಿದೆ.

ಮಳೆಯ ಮುನ್ಸೂಚನೆಯನ್ನು ಆಧರಿಸಿ ಭೂಕುಸಿತ ಸಾಧ್ಯತೆ ಇರುವ ಪ್ರದೇಶಗಳಿಂದ ನಿವಾಸಿಗಳನ್ನು ಸ್ಥಳಾಂತರಿಸಲು ಕ್ರಮಕೈಗೊಳ್ಳಲಾಗುವುದು ಎಂದು ಡಿಸಿ ವೆಂಕಟ್ ರಾಜಾ ತಿಳಿಸಿದ್ದಾರೆ. ಕೊಡಗು ಜಿಲ್ಲೆಯಲ್ಲಿ ಈ ವರ್ಷ ಶೇ 24ರಷ್ಟು ಅಧಿಕ ಮಳೆಯಾಗಿದ್ದು, ಈ ತಿಂಗಳು ಹೆಚ್ಚಿನ ಮಳೆಯಾಗುವ ನಿರೀಕ್ಷೆ ಇದೆ.



ಪುಟ 2

## ಪಾದಯಾತ್ರೆಗೆ ಸಿಮೀತವಲ್ಲ ಬಿಜೆಪಿ ಹೋರಾಟ
# ಬಳ್ಳಾರಿಯಲ್ಲಿ ನಡೆಯಲಿದೆ ಬೃಹತ್ ಸಮಾವೇಶ

**ಬಿಡದಿ:** ಮುಡಾ ನಿವೇಶನ ಹಂಚಿಕೆ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಪಾದಯಾತ್ರೆ ಹಮ್ಮಿಕೊಂಡಿರುವ ಬಿಜೆಪಿ ಹೋರಾಟವನ್ನು ಇನ್ನೂ ತೀವ್ರಗೊಳಿಸಲಿದೆ ಎಂದು ಪಕ್ಷದ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ಭಾನುವಾರ ಹೇಳಿದ್ದಾರೆ. ಮೈಸೂರು ಚಲೋ ಪಾದಯಾತ್ರೆಯ ಎರಡನೇ ದಿನ ಮಾತನಾಡಿದ ಅವರು, 'ನಮ್ಮ ಹೋರಾಟ ಯಾವುದೇ ವ್ಯಕ್ತಿಯ ವಿರುದ್ಧವಲ್ಲ. ಆದರೆ ಭ್ರಷ್ಟಾಚಾರ ಮತ್ತು ಅಧಿಕಾರದ ದುರಹಂಕಾರದ ವಿರುದ್ಧ.



ಪುಟ 2

## ತಮಿಳುನಾಡಿಗೂ ಕಾವೇರಿ ಹರಿದರೂ ರೈತರಿಗೆ ತಪ್ಪದ ಕಂಟಕ!

**ಮಂಡ್ಯ:** ಕಾವೇರಿ ಜಲಾನಯನ ಪ್ರದೇಶದಲ್ಲಿ ನಿರೀಕ್ಷೆಗಿಂತ ಹೆಚ್ಚಿನ ಪ್ರಮಾಣದಲ್ಲಿ ಮಳೆಯಾಗಿದೆ. ಇದರಿಂದ ಕೆಆರ್‌ಎಸ್ ಅಣೆಕಟ್ಟೆ ಭರ್ತಿಯಾಗಿದೆ. ಇತ್ತ ತಮಿಳುನಾಡಿಗೆ ಕೊಡಬೇಕಾದ ಕೋಟಾದ ನೀರನ್ನು ಕೂಡ ಕೊಟ್ಟಾಗಿದೆ. ಜೊತೆಗೆ ಈಗಲೂ ಸಹ ತಮಿಳುನಾಡಿಗೆ ನೀರು ಹೋಗುತ್ತಿದೆ. ಯಾವುದೇ ತೊಂದರೆ ಇಲ್ಲದೇ ಬೆಳೆ ಬೆಳೆಯಬಹುದು ಎಂದು ಕನಸು ಕಟ್ಟಿಕೊಂಡಿದ್ದ ರೈತರಿಗೆ ಮತ್ತೆ ಕಾವೇರಿ ಶಾಕ್ ಎದುರಾಗಿದೆ.

ಕಳೆದ 20 ದಿನಗಳಿಂದ ಕಾವೇರಿ ಜಲಾನಯನ ಪ್ರದೇಶದಲ್ಲಿ ವರುಣನ ಅಬ್ಬರ ಹೆಚ್ಚಾಗಿದೆ. ಇದರಿಂದ ಹಳೆ ಮೈಸೂರು ಭಾಗದ ಜೀವನಾಡಿ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಕೆಆರ್‌ಎಸ್ ಅಣೆಕಟ್ಟೆ ಸಂಪೂರ್ಣವಾಗಿ ಭರ್ತಿಯಾಗಿದೆ. ಜೊತೆಗೆ ಕೆಆರ್‌ಎಸ್ ಡ್ಯಾಂನಿಂದ ಅಪಾರ ಪ್ರಮಾಣದ ನೀರು ಬಿಟ್ಟಿರುವ ಕಾರಣ ಕಾವೇರಿ ಮೈದುಂಬಿ ಹರಿದು ತಮಿಳುನಾಡಿನ ಮೆಟ್ಟೂರು ಡ್ಯಾಂನ ಒಡಲು ಸೇರಿದ್ದಾಳೆ. ಹೀಗಿರುವಾಗ ಕೆಆರ್‌ಎಸ್ ಡ್ಯಾಂನ ನಂಬಿರುವ ಕಾರಣ ಕಳೆದ ವರ್ಷ ಬೆಳೆ ಇಲ್ಲದೆ ಕಂಗಾಲಾಗಿದ್ದ ರೈತರು ಈ ಬಾರಿ ಯಾವುದೇ ಅಡ್ಡಿ ಆತಂಕಗಳು



ಪುಟ 2

## ಶೇಖ್ ಹಸೀನಾ ರಾಜೀನಾಮೆಗೆ ಒತ್ತಾಯಿಸಿ ಪ್ರತಿಭಟನೆ
# ಹಿಂಸಾಚಾರ, 100 ಮಂದಿ ಸಾವು

**ಬಾಂಗ್ಲಾದೇಶ:** ಬಾಂಗ್ಲಾದೇಶದ ಪ್ರಧಾನಿ ಶೇಖ್ ಹಸೀನಾ ರಾಜೀನಾಮೆಗೆ ಒತ್ತಾಯಿಸಿ ನಡೆಯುತ್ತಿರುವ ಪ್ರತಿಭಟನೆ ಹಿಂಸಾಚಾರಕ್ಕೆ ತಿರುಗಿದೆ. ಪ್ರತಿಭಟನಕಾರರು ಮತ್ತು ಆಡಳಿತಾರೂಢ ಅವಾಮಿ ಲೀಗ್‌ನ ಬೆಂಬಲಿಗರ ನಡುವೆ ನಡೆದ ಭೀಕರ ಘರ್ಷಣೆಯಲ್ಲಿ 14 ಪೊಲೀಸರು ಸೇರಿದಂತೆ ಸುಮಾರು 100 ಜನರು ಸಾವನ್ನಪ್ಪಿದ್ದಾರೆ. ನೂರಾರು ಜನರು ಗಾಯಗೊಂಡಿದ್ದಾರೆ. ಇಸ್ಕಾನ್ ಮತ್ತು ಕಾಳಿ ದೇವಾಲಯಗಳು ಸೇರಿದಂತೆ ಹಿಂದೂ ದೇವಾಲಯ ಹಾಗೂ ಮನೆಗಳನ್ನು ಗುರಿಯಾಗಿಸಲಾಗಿದೆ. ಇದರಿಂದಾಗಿ ಭಕ್ತರು ಪರದಾಡಬೇಕಾಯಿತು. ಹಿಂಸಾಚಾರದಲ್ಲಿ ಒಬ್ಬ ಹಿಂದೂ ಕೂಡ ಸಾವನ್ನಪ್ಪಿದ್ದಾನೆ.



ಪುಟ 2

## ಕೆತ್ತಿಕಲ್ ಗುಡ್ಡದ ಮೇಲಿವೆ 200ಕ್ಕೂ ಹೆಚ್ಚು ಮನೆ
# ವಯನಾಡು ರೀತಿಯ ದುರಂತದ ಭೀತಿ

**ಮಂಗಳೂರು:** ವಯನಾಡಿನಲ್ಲಿ ಸಂಭವಿಸಿದ ಭೀಕರ ಭೂಕುಸಿತ, ಗುಡ್ಡ ಕುಸಿತದ ಪರಿಣಾಮ ನೂರಾರು ಜನ ಮೃತಪಟ್ಟಿದ್ದಾರೆ. ಇನ್ನೂ ಮೃತದೇಹಗಳು ಪತ್ತೆಯಾಗುತ್ತಲೇ ಇವೆ. ಇಂಥ ಭಯಾನಕ ಸನ್ನಿವೇಶದಲ್ಲಿ ಇದೀಗ ಕರ್ನಾಟಕದ ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನ ಬಳಿಯೂ ಅಂಥದ್ದೇ ಅನಾಹುತ ಸಂಭವಿಸುವ ಭೀತಿ ಎದುರಾಗಿದೆ. ನಗರದ ಹೊರವಲಯದ ವಾಮಂಜೂರು ಸಮೀಪದ ಕೆತ್ತಿಕಲ್ ಗುಡ್ಡದ ಮಣ್ಣು ಕುಸಿಯುತ್ತಲೇ ಇದ್ದು ಆತಂಕ ಸೃಷ್ಟಿಸಿದೆ.

ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಾಗಿ ಅವೈಜ್ಞಾನಿಕವಾಗಿ ಗುಡ್ಡ ಅಗೆತ ಮಾಡಿರುವ ಕಾರಣ ಇದೀಗ ಭಾರಿ ಮಳೆಯ ಸಂದರ್ಭದಲ್ಲಿ ಗುಡ್ಡದ ಮಣ್ಣು ಕುಸಿಯುತ್ತಿದೆ. ಹೆದ್ದಾರಿ ಕಾಮಗಾರಿ ಜೊತೆ ಮಣ್ಣು ಗಣಿಗಾರಿಕೆ ನಡೆಸಿದ ಆರೋಪವೂ ಇಲ್ಲಿ ಕೇಳಿಬಂದಿದೆ. ಬೇಕಾಬಿಟ್ಟಿಯಾಗಿ ಕೆತ್ತಿಕಲ್ ಗುಡ್ಡ ಅಗೆಯಲಾಗಿದ್ದು, ಆ ಸ್ಥಳ ಭಯಾನಕವಾಗಿದೆ.

ಗುಡ್ಡ ಅಗೆಯುವ ಸಂದರ್ಭ ಅಧಿಕಾರಿಗಳ ಗಮನಕ್ಕೆ ತರಲಾಗಿತ್ತು. ಆದರೆ, ಆ ಬಗ್ಗೆ ಅಧಿಕಾರಿಗಳು ಮೌನವಹಿಸಿದ್ದರು. ಇದೀಗ ಊರೆಲ್ಲಾ ಕೊಳ್ಳೆ ಹೊಡೆದ ಮೇಲೆ ಕೋಟೆ ಬಾಗಿಲು ಮುಚ್ಚಿದ್ದಾರೆ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.




**ಕೆತ್ತಿಕಲ್ ಗುಡ್ಡದ ಮೇಲ್ಭಾಗದಲ್ಲಿವೆ 200ಕ್ಕೂ ಹೆಚ್ಚು ಮನೆ:** ಕೆತ್ತಿಕಲ್ ಗುಡ್ಡದ ಮೇಲ್ಭಾಗದಲ್ಲಿ 200ಕ್ಕೂ ಹೆಚ್ಚು ಮನೆಗಳಿವೆ. ಒಂದು ವೇಳೆ ಇಡೀ ಗುಡ್ಡವೇನಾದರೂ ಕುಸಿದುಹೋದಲ್ಲಿ ಕೇರಳದ ವಯನಾಡು ದುರಂತದಂತೆ ಇಲ್ಲಿಯೂ ಸಂಭವಿಸುವ ಆತಂಕ ಎದುರಾಗಿದೆ.

ಪುಟ 2

## ಉದ್ಘಾಟನೆಗೂ ಮುನ್ನವೇ ಸೋರುತ್ತಿದೆ ವಿಜಯನಗರ ಪಾಲಿಕೆ ಬಜಾರ್
# ಖರ್ಚಾಗಿದೆ 16 ಕೋಟಿ ರೂ.

**ಬೆಂಗಳೂರು:** ವಿಜಯನಗರ ಮುಖ್ಯ ರಸ್ತೆಯಲ್ಲಿ 2017ರಲ್ಲಿ ಬೀದಿಬದಿಯ ವ್ಯಾಪಾರಿಗಳಿಗಾಗಿ ಸುಮಾರು ಹತ್ತು ಕೋಟಿ ರೂಪಾಯಿ ವೆಚ್ಚದಲ್ಲಿ ಅಂಡರ್ ಗ್ರೌಂಡ್ ಮಾರ್ಕೆಟ್ ಕಾಮಗಾರಿ ಆರಂಭ ಮಾಡಲಾಯಿತು. ಆದರೆ ಸುಮಾರು ಏಳು ವರ್ಷಗಳಿಂದ ಕಾಮಗಾರಿ ನಡೆಯುತ್ತಲೇ ಇದೆ ಇನ್ನೂ ಪೂರ್ಣವಾಗಿಲ್ಲ. ಈ ತಿಂಗಳೋ, ಮುಂದಿನ ತಿಂಗಳು ಓಪನ್ ಮಾಡಲಾಗುತ್ತದೆ ಎಂಬ ಮಾತುಗಳು ಕೇಳಿ ಬರುತ್ತಿವೆ. ಆದರೆ, ಈ ಅಂಡರ್ ಗ್ರೌಂಡ್ ಮಾರ್ಕೆಟ್ ನಲ್ಲಿ ಕುಡಿಯುವ ನೀರು, ಶೌಚಾಲಯ ಸೇರಿದಂತೆ ಯಾವುದೇ ಮೂಲಭೂತ ಸೌಕರ್ಯಗಳಿಲ್ಲ. ಆರಂಭದಲ್ಲಿ ಬೀದಿಬದಿ ವ್ಯಾಪಾರಿಗಳಿಗೆ ಅಂತ ನಿರ್ಮಾಣ ಮಾಡಿದ್ದರೂ ಈಗ ನೋಡಿದರೆ ಟೆಂಡರ್ ಮೂಲಕ ಮಳಿಗೆಗಳನ್ನು ಪಡೆದುಕೊಳ್ಳಬೇಕು ಎನ್ನಲಾಗುತ್ತಿದೆ.

**16 ಕೋಟಿ ರೂಪಾಯಿ ವೆಚ್ಚ; ಇಲ್ಲ ಸೌಕರ್ಯ:** ಮೊದಲಿಗೆ 10 ಕೋಟಿ ರೂಪಾಯಿ ವೆಚ್ಚ ಅಂದಾಜಿಸಿ ಕಾಮಗಾರಿ ಆರಂಭ ಮಾಡಿದ್ದರು. ಈಗ ನೋಡಿದರೆ 16 ಕೋಟಿ ರೂಪಾಯಿ ವೆಚ್ಚವಾಗಿದೆ ಎನ್ನುತ್ತಿದ್ದಾರೆ. ಈ ಪಾಲಿಕೆ ಬಜಾರ್ ಗೆ ಬರುವ ಗ್ರಾಹಕರಿಗೆ ವಾಹನಗಳನ್ನು ಪಾರ್ಕಿಂಗ್ ಮಾಡಲು ಯಾವುದೇ ವ್ಯವಸ್ಥೆ ಇಲ್ಲ. ಉದ್ಘಾಟನೆಗೂ ಮುನ್ನವೇ ಮಳಿಗೆಗಳಲ್ಲಿ ನೀರು ಸೋರುತ್ತಿದೆ.

'ಉದ್ಘಾಟನೆಗೆ ಮುನ್ನವೇ ಮಳೆ ನೀರು ಸೋರುತ್ತಿದೆ ಅಂದರೆ ಎಷ್ಟರಮಟ್ಟಿಗೆ ಕಳಪೆ ಕಾಮಗಾರಿ ಮಾಡಿರಬೇಡಿ ಹೇಳಿ' ಎಂದು ಸ್ಥಳೀಯ ನಿವಾಸಿ ರಾಜು ಎಂಬವರು ಪ್ರಶ್ನಿಸಿದ್ದಾರೆ. ಈ ಬಗ್ಗೆ ಕೂಡಲೇ ಅಧಿಕಾರಿಗಳು, ಸ್ಥಳೀಯ ಜನಪ್ರತಿನಿಧಿಗಳು ಸ್ಥಳ ಪರಿಶೀಲನೆ ಮಾಡಿ ಸಮಸ್ಯೆ ಬಗಹರಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.




ಪುಟ 2

# ರಾಜಭವನವನ್ನು ಅತಿಹೆಚ್ಚು ದುರುಪಯೋಗ ಪಡೆಸಿಕೊಂಡ ಶ್ರೇಯಸ್ಸು ಕಾಂಗ್ರೆಸ್ಸಿಗಿದೆ

**ಬೆಂಗಳೂರು:** ರಾಜಭವನವನ್ನು ಅತಿ ಹೆಚ್ಚು ದುರುಪಯೋಗ ಪಡೆಸಿಕೊಂಡಿರುವ ಶ್ರೇಯಸ್ಸು ಕಾಂಗ್ರೆಸ್ಸಿಗಿದೆ. ದೇಶದಲ್ಲಿ ಸುಮಾರು 56ಕ್ಕಿಂತಲೂ ಹೆಚ್ಚುಬಾರಿ ರಾಜಭವನವನ್ನು ದುರುಪಯೋಗ ಪಡೆಸಿಕೊಂಡು ಸರ್ಕಾರಗಳನ್ನು ಉರುಳಿಸಿದ್ದು ಕಾಂಗ್ರೆಸ್ ಎಂದು ಮಾಜಿ ಸಿಎಂ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಹಾಗೂ ಕೇಂದ್ರದ ಬಿಜೆಪಿ ನಾಯಕರು ರಾಜ್ಯಭವನವನ್ನು ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸಲು ಪ್ರಯತ್ನ ನಡೆಸಿದ್ದಾರೆ ಎಂಬ ಕಾಂಗ್ರೆಸ್ ನ ಆರೋಪಕ್ಕೆ ಪ್ರತಿಕ್ರಿಯಿಸಿದರು. ಈ ವೇಳೆ ಅತಿ ಹೆಚ್ಚು ವಿವಾದಾತ್ಮಕ ಹಾಗೂ ಪ್ರಶ್ನಾರ್ಹ ರಾಜ್ಯಪಾಲರಾಗಿದ್ದ ಗ್ರೇಟ್ ಹಂಸರಾಜ ಭಾರದ್ವಾಜ್ ಅವರು ನಮ್ಮ ನಾಯಕ ಬಿ.ಎಸ್ .ಯಡಿಯೂರಪ್ಪ ಅವರ ಮೇಲೆ ಏನೂ ಪ್ರಕರಣ ಇಲ್ಲದೇ ಅವರ ವಿರುದ್ಧ ತನಿಖೆಗೆ ಆದೇಶ ನೀಡಿದ್ದರು. ಈಗ ಆ ಪ್ರಕರಣ ಬಿದ್ದುಹೋಗಿದೆ. ಕಾಂಗ್ರೆಸ್ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಕ್ಷಮೆ ಕೇಳುತ್ತದೆಯೇ ಎಂದು ಪ್ರಶ್ನಿಸಿದರು. ಇನ್ನೂ ಅವರೇನು ನಮಗೆ ಪಾಠ ಹೇಳುವುದು ಎಂದು ತಿರುಗೇಟು ಕೊಟ್ಟರು.

ಇನ್ನೂ ಹಿಂದಿನ ಸರ್ಕಾರದಲ್ಲಿ ನಡೆದ ಹಗರಣಗಳನ್ನು ಬಹಿರಂಗಪಡಿಸುವುದಾಗಿ ಕಾಂಗ್ರೆಸ್ಸಿಗರು ಹೇಳುತ್ತಿರುವ ಕುರಿತು, ಇವರದೇ ಸರ್ಕಾರ ಇದೆ. ಯಾವುದೇ ತನಿಖೆ ನಡೆಸಲಿ ಎಂದು ಸವಾಲು ಹಾಕಿದರು. ಪಿಎಸ್ಐ ಸಾವಿನ ವಿಚಾರವಾಗಿ, ಈ ಸರ್ಕಾರ ಅಧಿಕಾರಕ್ಕೆ ಬಂದ ಮೊದಲ ದಿನದಿಂದಲೇ ವರ್ಗಾವಣೆ ದಂಧೆ ಆರಂಭವಾಗಿದೆ. ಅಭಿವೃದ್ಧಿಯಲ್ಲಿ ನಯಾಪೈಸೆ ಕೊಡುತ್ತಿಲ್ಲ. ಶಾಸಕರೆಲ್ಲ ಗಂಟು ಬಿದ್ದಿದ್ದಾರೆ. ಮುಖ್ಯಮಂತ್ರಿಯಾದಿಯಾಗಿ ಕಾಂಗ್ರೆಸ್ ನಾಯಕರೆಲ್ಲ ವರ್ಗಾವಣೆಯಲ್ಲಿಯೇ ದುಡ್ಡು ಮಾಡುವಂತೆ ಶಾಸಕರಿಗೆ ಸೂಚನೆ ನೀಡಿದ್ದಾರೆ. ಭ್ರಷ್ಟಾಚಾರಕ್ಕೆ ಸಾಂಸ್ಥಿಕ ರೂಪ ನೀಡಿದ್ದಾರೆ. ಆ ಅಡಿಯಲ್ಲಿಯೇ ವರ್ಗಾವಣೆಗಳು ನಡೆಯುತ್ತಿವೆ. ವಿಪರೀತ ಹಣ ಕೇಳುವುದರಿಂದ ಇಡೀ ನೌಕರರ ಸಮೂಹ ಒತ್ತಡದಲ್ಲಿದೆ. ಸಾವಿಗೀಡಾದವರಷ್ಟೇ ಅಲ್ಲ. ಬಹಳ ಜನ ತೀವ್ರ ಒತ್ತಡದಲ್ಲಿದ್ದಾರೆ. ಅವರು ಹಣ ಕೊಡಲು ಆಗುವುದಿಲ್ಲ. ಹಣ ಕೊಟ್ಟವರು ಭ್ರಷ್ಟಾಚಾರದಲ್ಲಿ ತೊಡಗಿಕೊಳ್ಳುತ್ತಾರೆ. ಭ್ರಷ್ಟಾಚಾರವನ್ನು ಮೇಲಿನಿಂದ ಕೆಳಗೆ ವ್ಯವಸ್ಥಿತವಾಗಿ ಮಾಡಿರುವುದರಿಂದ ಈ ರೀತಿಯ ಸಾವುಗಳು ಸಂಭವಿಸುತ್ತವೆ ಎಂದು ಅವರು ಹೇಳಿದ್ದಾರೆ.

## ಹೆಚ್‌ಡಿಕೆಯದ್ದು ಅವಕಾಶವಾದಿ ಮೈತ್ರಿ

**ಬೆಂಗಳೂರು:** ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಅವರು ಹಿಂದೆ ಬಿಜೆಪಿ ಜೊತೆ, ಆಮೇಲೆ ಕಾಂಗ್ರೆಸ್ ಜೊತೆ ಸೇರಿಕೊಂಡು ಸರ್ಕಾರ ರಚಿಸಿ, ಸಿಎಂ ಹುದ್ದೆ ಅಲಂಕರಿಸಿದ್ದರು. ಈಗ ಪುನಃ ಬಿಜೆಪಿ ಜೊತೆ ಹೋಗಿದ್ದಾರೆ. ಅವರದ್ದು ಅವಕಾಶವಾದಿ ಮೈತ್ರಿ. ಅವರು ತಮ್ಮ ಸರ್ಕಾರವನ್ನೇ ಉಳಿಸಿಕೊಳ್ಳಲಿಲ್ಲ. ಈಗ ನಮ್ಮ ಸರ್ಕಾರ ಉರುಳಿಸುವ ಮಾತುಗಳನ್ನು ಆಡುತ್ತಿದ್ದಾರೆ ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ ಪಾಟೀಲ್ ಅವರು ಹೆಚ್‌ಡಿಕೆ ವಾಗ್ದಾಳಿ ನಡೆಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕುಮಾರಸ್ವಾಮಿ ಮೊದಲು ಪಾದಯಾತ್ರೆಗೆ ತಮ್ಮ ನೈತಿಕ ಬೆಂಬಲವೂ ಇಲ್ಲ ಎಂದಿದ್ದರು. ಆಮೇಲೆ ಯಾರದೋ ಒತ್ತಡಕ್ಕೆ ಮಣಿದು ಕಾಟಾಚಾರಕ್ಕೆ ಪಾದಯಾತ್ರೆಗೆ ಹೋಗಿದ್ದಾರೆ ಎಂದು ಅವರು ಕುಟುಕಿದರು. ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಯಾವ ತಪ್ಪೂ ಇಲ್ಲ. ಸ್ವತಃ ಮುಡಾ ತಪ್ಪು ಮಾಡಿ, ಅದನ್ನು ಒಪ್ಪಿಕೊಂಡಿದೆ. ನಿಯಮಗಳಂತೆಯೇ ಸಿಎಂ ಪತ್ನಿಗೆ ಬದಲಿ ನಿವೇಶನಗಳನ್ನು ಅದು ಕೊಟ್ಟಿದೆ. ಇದರಲ್ಲಿ ಸಿದ್ದರಾಮಯ್ಯ ಅವರ ತಪ್ಪೇನಿದೆ ಎಂದು ಅವರು ಪ್ರಶ್ನಿಸಿದರು. ಕಾಂಗ್ರೆಸ್ ನಾಯಕ ಕೆ.ಸಿ ವೇಣುಗೋಪಾಲ್ ಅವರು ಸಚಿವರ ಸಭೆ ಕರೆದಿರುವುದರಲ್ಲಿ ತಪ್ಪೇನೂ ಇಲ್ಲ. ಪಕ್ಷದ ಹಿತದೃಷ್ಟಿಯಿಂದ ಅವರು ನಮಗೆ ಸಲಹೆ ಕೊಡಬಹುದಷ್ಟೆ. ಇದಕ್ಕಿಂತ ಹೆಚ್ಚು ಈ ಬಗ್ಗೆ ನನಗೇನೂ ಗೊತ್ತಿಲ್ಲ. ಪೊಲೀಸ್ ಎಸ್ಐ ಒಬ್ಬರು ಸತ್ತಿರುವುದರ ಹಿಂದೆ ಅಲ್ಲಿನ ಕಾಂಗ್ರೆಸ್ ಶಾಸಕರ ಕೈವಾಡವೇನೂ ಇಲ್ಲ. ಈಗ ಪ್ರತಿಯೊಂದಕ್ಕೂ ಶಾಸಕರು ಮತ್ತು ಮಂತ್ರಿಗಳನ್ನು ದೂರುವುದು ಒಂದು ಕಾಯಿಲೆಯಾಗಿದೆ ಎಂದು ಬೇಸರ ಹೊರಹಾಕಿದರು.

# ಒಲಿಂಪಿಕ್ಸ್, ಏಷ್ಯನ್ ಗೇಮ್ಸ್‌ನಲ್ಲಿ ಪದಕ ಪಡೆದವರಿಗೆ ನೇಮಕಾತಿ ಪತ್ರ ವಿತರಿಸಿದ ಸಿಎಂ



**ಬೆಂಗಳೂರು:** ಒಲಿಂಪಿಕ್ಸ್ ಹಾಗೂ ಏಷ್ಯನ್ ಗೇಮ್ಸ್‌ನಲ್ಲಿ ಪದಕ ವಿಜೇತರಿಗೆ ಸರ್ಕಾರಿ ಗ್ರೂಪ್ ಎ, ಬಿ ಹುದ್ದೆಗಳ ನೇಮಕಾತಿ ಸಂಬಂಧ 12 ಮಂದಿ ವಿಜೇತರಿಗೆ ಸಿಎಂ ಸಿದ್ದರಾಮಯ್ಯ ಆಫರ್ ಲೆಟರ್ ವಿತರಣೆ ಮಾಡಿದ್ದಾರೆ.

ಹೆಚ್.ಎನ್ ಗಿರೀಶ್, ಟಿ.ಎಸ್ ದಿವ್ಯಾ, ಎನ್.ಉಷಾರಾಣಿ, ಸುಷ್ಮಿತಾ ಪವಾರ್, ನಿಕ್ಕಿನ್ ತಿಮ್ಮಯ್ಯ, ಎಸ್.ವಿ ಸುನೀಲ್, ಮಲಪ್ರಭಾ ಯಲ್ಲಪ್ಪ, ಗುರುರಾಜ, ಎಂ.ಎಸ್ ಶರತ್, ವಿ.ರಾಧಾ, ರಾಘವೇಂದ್ರ, ಕಿಶನ್ ಗಂಗೊಳ್ಳಿ ಅವರಿಗೆ ನೇಮಕಾತಿ ಪತ್ರವನ್ನು ಸಿಎಂ ವಿತರಿಸಿದ್ದಾರೆ. ನೇಮಕಾತಿ ಪತ್ರ ವಿತರಣೆ ಬಳಿಕ ಮಾತನಾಡಿದ ಸಿಎಂ, ಒಲಿಂಪಿಕ್ಸ್, ಪ್ಯಾರಾಲಿಂಪಿಕ್ಸ್, ಏಷ್ಯನ್ ಗೇಮ್ಸ್, ಪ್ಯಾರಾ ಏಷ್ಯನ್ ಗೇಮ್ಸ್, ಕಾಮನ್‌ವೆಲ್ತ್ ಗೇಮ್ಸ್‌ಗಳಲ್ಲಿ ಪದಕ ಪಡೆದ 12 ಜನರಿಗೆ ಅವಕಾಶ ಪತ್ರ ನೀಡಿ ನೇರ ನೇಮಕಾತಿ ಮಾಡುತ್ತಿದ್ದೇವೆ. 2016-17 ರಲ್ಲಿ ಹುಬ್ಬಳ್ಳಿಯಲ್ಲಿ ಆಯೋಜಿಸಿದ್ದ ಕ್ರೀಡಾಕೂಟದಲ್ಲಿ ಘೋಷಣೆ ಮಾಡಲಾಗಿತ್ತು. ಪದಕ ಪಡೆದವರಿಗೆ ಆದ್ಯತೆ ಮೇರೆಗೆ ಕೆಲಸ ನೀಡುವ ಘೋಷಣೆ ಮಾಡಿದ್ದೆ. ನಂತರ ಬಂದ ಸರ್ಕಾರ ಇದನ್ನು ಮಾಡಲಿಲ್ಲ. ಈಗ ನಾನು ಅಧಿಕಾರಕ್ಕೆ ಬಂದಿದ್ದೇನೆ. ಈಗ ನೇಮಕ ಮಾಡಿಕೊಳ್ಳುತ್ತೇವೆ. ಪದವಿ ಪಡೆದು ಪದಕ ಪಡೆದವರಿಗೆ ಕ್ಲಾಸ್ 1, ಕ್ಲಾಸ್ 2 ಹುದ್ದೆ ಕೊಡುತ್ತಿದ್ದೇವೆ. ಒಬ್ಬರಿಗೆ ಕ್ಲಾಸ್ 1 ಉಳಿದ 11 ಮಂದಿಗೆ ಕ್ಲಾಸ್ 2 ಉದ್ಯೋಗ ಕೊಡ್ತಿದ್ದೇವೆ. ಸಮಿತಿಯ ಶಿಫಾರಸ್ಸಿನ ಮೇರೆಗೆ ನೇಮಕಾತಿ ಪತ್ರ ಕೊಡುತ್ತಿದ್ದೇವೆ ಎಂದು ಅವರು ಹೇಳಿದ್ದಾರೆ.

ವಯಸ್ಸಿನ ಮಿತಿಯ ವಿನಾಯಿತಿ ನೀಡಿ, 45 ವರ್ಷದವರಿಗೂ ಅವಕಾಶ ನೀಡ್ತಿದ್ದೇವೆ. ನಮ್ಮ ಸರ್ಕಾರ ಕ್ರೀಡೆಗೆ ಹೆಚ್ಚಿನ ಒತ್ತು ನೀಡುತ್ತಿದೆ. ನೀವೆಲ್ಲ ನಮ್ಮ ರಾಷ್ಟ್ರಕ್ಕೆ ಗೌರವ ಕೊಟ್ಟಿದ್ದೀರಿ ಎಂದು ಪದಕ ಪಡೆದ ಕ್ರೀಡಾಪಟುಗಳನ್ನು ಅವರು ಅಭಿನಂದಿಸಿದ್ದಾರೆ.

# ಪಿಎಸ್ಐ ಪರಶುರಾಮ್ ಸಾವು ಪ್ರಕರಣ: ಯಾದಗಿರಿಗೆ ಸಿಐಡಿ ತಂಡ ಎಂಟ್ರಿ



**ಯಾದಗಿರಿ:** ಇಲ್ಲಿನ ನಗರ ಠಾಣೆ ಪಿಎಸ್ಐ ಪರಶುರಾಮ್ ಅವರ ನಿಗೂಢ ಸಾವಿನ ಪ್ರಕರಣದ ತನಿಖೆ ಹೊಣೆ ಹೊತ್ತಿರುವ ಸಿಐಡಿ ತನಿಖಾ ತಂಡ ಯಾದಗಿರಿಗೆ ಭಾನುವಾರ ಭೇಟಿ ನೀಡಿದೆ.

ಪರಶುರಾಮ್ ಸಾವು ಪ್ರರಕರಣ ಸಂಬಂಧ ಯಾದಗಿರಿ ಶಾಸಕ ಚನ್ನಾರೆಡ್ಡಿ ಪಾಟೀಲ ತುನ್ನೂರು ಮತ್ತು ಅವರ ಪುತ್ರ ಪಂಪಣ್ಣಗೌಡ ವಿರುದ್ಧ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಈ ಬೆನ್ನಲ್ಲೇ ಸಿಐಡಿ ತನಿಖೆಗೆ ವಹಿಸಿ ರಾಜ್ಯ ಸರ್ಕಾರ ಶನಿವಾರ (ಆ.3) ಆದೇಶ ಹೊರಡಿಸಿತ್ತು. ಸರ್ಕಾರ ಆದೇಶಿಸಿದ ಮರುದಿನವೇ ಡಿವೈಎಸ್‌ಪಿ ಪುನೀತ ನೇತೃತ್ವದ ಸಿಐಡಿ ತನಿಖಾ ತಂಡ ಯಾದಗಿರಿಗೆ ಭೇಟಿ ಕೊಟ್ಟಿದೆ.

ಯಾದಗಿರಿ ನಗರ ಪೊಲೀಸ್ ಠಾಣೆಗೆ ಭೇಟಿ ನೀಡಿದ್ದ ಸಿಐಡಿ ತಂಡ ಈಗಾಗಲೇ ಡಿವೈಎಸ್ಪಿ ಕಚೇರಿಯಲ್ಲಿ ಕೇಸ್‌ಗೆ ಸಂಬಂಧಿಸಿದ ಮಾಹಿತಿ ಪಡೆದುಕೊಂಡಿದೆ. ಇಂದೇ ಪೊಲೀಸರಿಂದ ಕೇಸ್ ಫೈಲ್ ಪಡೆದು, ತನಿಖೆ ಚುರುಕುಗೊಳಿಸುವ ಸಾಧ್ಯತೆ ಇದೆ ಎಂದು ಅಧಿಕಾರಿ ಮೂಲಗಳು ತಿಳಿಸಿವೆ.

**ಶಾಸಕ ಚನ್ನಾರೆಡ್ಡಿ, ಪಂಪಣ್ಣಗೌಡಗೆ ಬಂಧನ ನಾಪತ್ತೆ:** ಇನ್ನೂ ಪರಶುರಾಮ್ ನಿಗೂಢ ಸಾವು ಪ್ರಕರಣದಲ್ಲಿ ಶಾಸಕ ಚೆನ್ನಾರೆಡ್ಡಿ ಹಾಗು ಪುತ್ರ ಪಂಪನಗೌಡ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಕೇಸ್ ದಾಖಲಾಗುತ್ತಿದ್ದಂತೆ ಬಂಧನದ ಭೀತಿಗೆ ಒಳಗಾಗಿರುವ ಶಾಸಕ ಹಾಗೂ ಪುತ್ರ ನಾಪತ್ತೆಯಾಗಿದ್ದಾರೆ ಎಂದು ಹೇಳಲಾಗಿದೆ. ಕೇಸ್ ದಾಖಲಾಗುತ್ತಿದ್ದಂತೆ ಚೆನ್ನಾರೆಡ್ಡಿ ಹಾಗು ಪುತ್ರ ಪಂಪನಗೌಡ ಮೊಬೈಲ್ ಸ್ವಿಚ್ ಆಫ್ ಮಾಡಿಕೊಂಡಿದ್ದಾರೆ. ಯಾರ ಸಂಪರ್ಕದಲ್ಲಿಯೂ ಇಲ್ಲ ಎಂದು ಮೂಲಗಳಿಂದ ತಿಳಿದುಬಂದಿದೆ.

# ನೀವು ರೈತರ ಮಗ, ಈಗ ಪ್ಯಾಂಟ್ ಬಿಚ್ಚಿ ಪಂಚೆ ಹಾಕಿದ್ದೀರಿ



**ರಾಮನಗರ:** ಬಿಜೆಪಿ-ಜೆಡಿಎಸ್ ಮಾಡುತ್ತಿರುವುದು ಪಾದಯಾತ್ರೆಯಲ್ಲ, ಇದು ಪಾಪ ವಿಮೋಚನಾ ಪಾದಯಾತ್ರೆ. ಅವರ ಎಲ್ಲಾ ಪಾಪ ವಿಮೋಚನೆ ಮಾಡಿಕೊಳ್ಳಲು ಪಾದಯಾತ್ರೆ ಮಾಡುತ್ತಿದ್ದಾರೆ ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ವ್ಯಂಗ್ಯವಾಡಿದ್ದಾರೆ.

ಚನ್ನಪಟ್ಟಣದಲ್ಲಿ ಕಾಂಗ್ರೆಸ್ ಜನಾಂದೋಲನ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು. ಈ ವೇಳೆ ಅವರು, ಬಿಜೆಪಿ ಹಾಗೂ ಜೆಡಿಎಸ್ ಪಾದಯಾತ್ರೆ ವಿಚಾರವಾಗಿ, ಭ್ರಷ್ಟಾಚಾರದಿಂದ ಭ್ರಷ್ಟಾಚಾರಕ್ಕೋಸ್ಕರ ಭ್ರಷ್ಟಾಚಾರಿಗಳೇ ಪಾದಯಾತ್ರೆ ನಡೆಸುತ್ತಿದ್ದಾರೆ. ಬಿಜೆಪಿ-ಜೆಡಿಎಸ್ ಕುಟುಂಬದವರ ಪಾಪದ ಕೊಡ ತುಂಬಿ ತುಳುಕುತ್ತಿದೆ. ಅವರ ಪಾಪಗಳನ್ನ ಜನರಿಗೆ ತಿಳಿಸಲು ಪಾದಯಾತ್ರೆ ಮಾಡ್ತಿದ್ದಾರೆ ಎಂದು ಅವರು ಕಿಡಿಕಾರಿದ್ದಾರೆ.

ಬಿಜೆಪಿಯಯವರು ಕುಮಾರಸ್ವಾಮಿಗೆ ಹಿಂದೆ ಯಾವ ಪ್ರಶ್ನೆ ಕೇಳಿದ್ದರೋ, ಅದಕ್ಕೆ ಮೊದಲು ಉತ್ತರ ಕೊಡಬೇಕು. ಶಾಸಕ ಯತ್ನಾಳ್, ಮಾಜಿ ಸಿಎಂ ಬಿಎಸ್‌ವೈ ಹಾಗೂ ಅವರ ಮಗ ವಿಜಯೆಂದ್ರಗೆ ಕೆಲವು ಪ್ರಶ್ನೆಗಳನ್ನು ಕೇಳಿದ್ದಾರೆ. ನಿಮ್ಮ ಪಾಪ ವಿಮೋಚನೆ ಪಾದಯಾತ್ರೆಯಲ್ಲಿ ಈ ಎಲ್ಲಾ ಪ್ರಶ್ನೆಗಳಿಗೆ ಉತ್ತರ ಕೊಡಬೇಕು ಎಂದು ಆಗ್ರಹಿಸಿದರು.

ಈ ಭಾಗದಲ್ಲಿ ಹೆಚ್‌ಡಿಕೆ ಆಯ್ಕೆ ಆಗಿ, ಇಲ್ಲಿ 6 ವರ್ಷ ಅಧಿಕಾರ ನಡೆಸಿದ್ದೀರಿ. ನೀವು ರೈತನ ಮಗ ಪಾಪ, ಈಗ ಪ್ಯಾಂಟ್ ಬಿಚ್ಚಿ ಪಂಚೆ ಹಾಕಿದ್ದೀರಿ. ನಮ್ಮ ಕಡೆ ಒಂದು ಗಾದೆ ಇದೆ. ಹುಟ್ಟಿದ ಕರು ಎಲ್ಲಾ ಗೂಳಿ ಆಗಲು ಸಾಧ್ಯವಿಲ್ಲ. ಹಾಗೆ ಎಲ್ಲರೂ ರೈತರಾಗಲು ಸಾಧ್ಯವಿಲ್ಲ. ಕುಮಾರಣ್ಣ ನಿನ್ನ ಕೈಯಲ್ಲಿ ಬಡವರಿಗೆ ಜಮೀನು ಕೊಡಲು ಆಗಲಿಲ್ಲ. ಒಂದು ಸೈಟ್ ಹಂಚಿಕೆ ಮಾಡಿಲ್ಲ.

ನಾನು ಈ ಕ್ಷೇತ್ರದಲ್ಲಿ ಬಂದು ಜನಸಂದರ್ಶನ ಸಭೆ ಮಾಡಿದ್ದೆ. 22 ಸಾವಿರ ಜನ ಬಂದು ಅರ್ಜಿ ಕೊಟ್ಟಿದ್ದಾರೆ. ಇಷ್ಟು ದಿನ ನೀವು ಇಲ್ಲಿ ಏನು ಮಾಡಿದ್ದೀರಿ ಎಂದು ಪ್ರಶ್ನಿಸಿದ್ದಾರೆ. ಬಾಲಕೃಷ್ಣನಿನ್ನ ಸಹೋದರ ಅಲ್ವಾ? ನಿನ್ನ ತಂದೆ, ಪತ್ನಿ, ಕುಟುಂಬ, ಸಹೋದರರು ಎಷ್ಟು ಆಸ್ತಿ ಮಾಡ್ತಿದ್ದಾರೆ. ಒಬ್ಬ ಸರ್ಕಾರಿ ನೌಕರ ಎಷ್ಟು ಆಸ್ತಿ ಮಾಡಲು ಸಾಧ್ಯ? ನಾನು ಹುಟ್ಟಿನಿಂದ ರೈತ, ನೀವು ಎಷ್ಟು ಬೆಳೆ ಬೆಳೆದಿದ್ದೀರಿ ಹೇಳಿ? ನನ್ನನ್ನ ಕಲ್ಲು ಕಳ್ಳ, ಕಲ್ಲು ಲೂಟಿ ಮಾಡಿದ್ದಾನೆ ಎಂದಿದ್ದೀರಿ. ನನ್ನ ಮೇಲೆ, ನನ್ನ ತಮ್ಮನ ಮೇಲೆ ಮತ್ತು ನನ್ನ ಪತ್ನಿ ಮೇಲೆ ಕೇಸ್ ಹಾಕಿ, ನನ್ನನ್ನ ಜೈಲಿಗೆ ಹಾಕಿದ್ದಾಗ ಬಂದು ನೀನು ನೋಡಿದ್ದೆ. ಆಗ ನನ್ನ ಆತ್ಮಸ್ಥೈರ್ಯ ಹೇಗಿತ್ತು ನೋಡಿದ್ದೆ ಅಲ್ವಾ? ನನ್ನ ಹಾಗೂ ನನ್ನ ಕುಟುಂಬ ಮೇಲೆ ಹಾಕಿದ್ದ ಕೇಸ್ ವಜಾ ಆಗಿದೆ ಗೊತ್ತಾ? ಹಾಗೆ ನಿನ್ನ ಅಕ್ರಮವನ್ನೂ ಪಟ್ಟಿ ಮಾಡಿಸುತ್ತಿದ್ದೇನೆ. ಅದರ ಬಗ್ಗೆಯೂ ತನಿಖೆ ಆಗಲಿದೆ ಎಂದು ಎಚ್ಚರಿಸಿದ್ದಾರೆ.

ಹಿಟ್ ಅಂಡ್ ರನ್ ಕುಮಾರಸ್ವಾಮಿ ನೀನು. ನೀನು ಎಲ್ಲರನ್ನೂ ಹೆದರಿಸಿದ ಹಾಗೆ ಬಿಜೆಪಿಯವ್ರನ್ನೂ ಹೆದರಿಸಲು ಹೋದೆ. ಪಾದಯಾತ್ರೆ ಬಗ್ಗೆ ನೀನೊಂದು ಮಾತು, ನಿನ್ನ ಮಗ ಒಂದು ಮಾತು, ಜಿಟಿಡಿ ಒಂದು ಮಾತು ಆಡಿದ್ದೀರಿ. ಈಗ ಪಾದಯಾತ್ರೆಗೆ ಬಂದು ಹೆಜ್ಜೆ ಹಾಕ್ತಿದ್ದೀಯಾ? ನಿನಗೆ ನೈತಿಕತೆ ಇದ್ಯಾ ಎಂದು ಏಕವಚನದಲ್ಲೇ ವಾಗ್ದಾಳಿ ನಡೆಸಿದ್ದಾರೆ.

ಚನ್ನಪಟ್ಟಣದ ಉಪಚುನಾವಣೆ ವಿಚಾರವಾಗಿ, ಇಲ್ಲಿ ಹಸ್ತದ ಚಿಹ್ನೆಯೇ ಅಭ್ಯರ್ಥಿ. ಕುಮಾರಸ್ವಾಮಿ ನಾನು ಐದೇ ನಿಮಿಷದಲ್ಲಿ ಮೇಕೆದಾಟಿಗೆ ಅನುಮತಿ ಕೊಡಿಸ್ತೀನಿ ಎಂದಿದ್ದಾರೆ. ನಾನು ಮಂಡ್ಯದಲ್ಲಿ ಅದನ್ನ ರಿವೀಲ್ ಮಾಡ್ತೀನಿ. ಮಂಡ್ಯದ ನಾಯಕರಿಗೆ ನಾನು ಹೇಳ್ತೇನೆ. ಕುಮಾರಸ್ವಾಮಿ, ಯಡಿಯೂರಪ್ಪ ಏನು ಹೇಳಿದ್ರು, ಅದನ್ನ ಡಿಸ್ಪ್ಲೆ ಮಾಡಿ. ಚುನಾವಣೆ ವೇಳೆ ಏನು ಮಾತನಾಡಿದ್ರೂ, ಅದನ್ನ ಸ್ಕ್ರೀನ್ ಮೇಲೆ ತೋರಿಸಿ. ಅವರ ನವರಂಗಿ ಬಣ್ಣ ಬಯಲು ಮಾಡೋಣ ಎಂದು ಬಿಜೆಪಿ ಹಾಗೂ ಜೆಡಿಎಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ದೇವರಾಜು ಟ್ರಕ್ ಟರ್ಮಿನಲ್ ಹಗರಣದಲ್ಲಿ ಯಾಕೆ ನಿಮ್ಮ ಸಿಎಂ, ಮಂತ್ರಿಗಳು ರಾಜೀನಾಮೆ ಕೊಟ್ಟಿಲ್ಲ. ನಿಮ್ಮ ಪಕ್ಷದವರೇ ಏನು ಹೇಳಿದ್ರು ಅಂತಾ ಗೊತ್ತಿಲ್ವ ಎಂಬ ಪತ್ರಕರ್ತರ ಪ್ರಶ್ನೆಗೆ, ಅಮಿತ್ ಶಾ, ಮೋದಿ ಬಗ್ಗೆ ಕುಮಾರಸ್ವಾಮಿ ಏನು ಮಾತಾಡಿದ್ರು, ಅನ್ನೋದು ತೋರಿಸಬೇಕಾ? ಅಪ್ಪ ಮಗನ ನಂಬಬೇಡಾ ಹುಷಾರ್ ಅಂತಾ ಯಡಿಯೂರಪ್ಪ ನನಗೆ ಹೇಳಿದ್ರು. ಅಲ್ಲದೇ ಇವಾಗ ಏನು ಇಬ್ರೂ ತಬ್ಬಾಡ್ತ ಇದ್ದೀರಿ. ಪಾಪ ನಿಮ್ಮ ಕುಟುಂಬ ಬೇರೆ ರೇವಣ್ಣ ಕುಟುಂಬ ಬೇರೆ ಅಂತೀರಿ. ಭಾಗ ಆಗಿಬಿಟ್ಟಿದ್ದೀವಿ ಅಂತೀರಿ. ಇನ್ನೂ ನಾನು ಪೆನ್‌ಡ್ರೈವ್ ಹಂಚಿದ್ದೀನಿ ಎಂದು ಹೇಳಿದ್ದೆ. ನಾನು ಫೇಸ್ ಟು ಫೇಸ್ ಫೈಟರ್. ನನ್ನ ಮೇಲೆ ಒಂದು ಸಲ ಸೋತಿದ್ದಿ, ಮತ್ತೊಮ್ಮೆ ಬೇಕಿದ್ರೆ ಫೈಟ್ ಮಾಡೋಣ ಬಾ ಎಂದು ಹೆಚ್‌ಡಿಕೆಗೆ ಬಹಿರಂಗ ಸವಾಲು ಹಾಕಿದ್ದಾರೆ.

# ಪರಶುರಾಮ್ ಪತ್ನಿಗೆ ಸರ್ಕಾರಿ ಕೆಲಸ, ಪರಿಹಾರ ಕೊಡೋದಕ್ಕೆ ತೀರ್ಮಾನ



**ಬೆಂಗಳೂರು:** ಮೃತ ಪಿಎಸ್ಐ ಪರಶುರಾಮ್ ಪತ್ನಿಗೆ ಸರ್ಕಾರಿ ಇಲಾಖೆಯಲ್ಲಿ ಕೆಲಸ, ಪರಿಹಾರ ಕೊಡೋದಕ್ಕೆ ಸರ್ಕಾರ ತೀರ್ಮಾನ ಮಾಡಿದೆ ಎಂದು ಗೃಹಸಚಿವ ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಪಿಎಸ್ಐ ಪರಶುರಾಮ್ ನಿಗೂಢ ಸಾವು ಪ್ರಕರಣದ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಅಲ್ಲಿನ ಆಡಳಿತ ಪಕ್ಷದ ಶಾಸಕ ಮೇಲೆ ಆಪಾದನೆ ಮಾಡಿದ್ದಾರೆ. ಸಿಐಡಿ ತನಿಖೆಗೆ ಪ್ರಕರಣವನ್ನು ಕೊಟ್ಟಿದ್ದೇವೆ, ತನಿಖೆ ನಡೆಯುತ್ತಿದೆ. ಇದು ಆತ್ಮಹತ್ಯೆ ಅಲ್ಲ, ಅಂತ ಇಲಾಖೆ ಹೇಳಿದೆ. ಮರಣೋತ್ತರ ಪರೀಕ್ಷೆ ವರದಿ ಬಂದ ಬಳಿಕ ಸಾವಿಗೆ ಕಾರಣ ಗೊತ್ತಾಗುತ್ತೆ. ಪರಶುರಾಮ್ ಪತ್ನಿಗೆ ಇಲಾಖೆಯಲ್ಲಿ ಕೆಲಸ, ಪರಿಹಾರ ಕೊಡೋಕೆ ಸರ್ಕಾರ ತೀರ್ಮಾನ ಸರ್ಕಾರ ಮಾಡಿದೆ ಎಂದು ತಿಳಿಸಿದ್ದಾರೆ

10 ತಿಂಗಳು ಸರ್ಕಾರ ಇರಲ್ಲ ಎಂಬ ಕೇಂದ್ರ ಸಚಿವ ಕುಮಾರಸ್ವಾಮಿ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿ, ಇಂತಹ ಮಾತುಗಳು ಬರೋದು ಸ್ವಾಭಾವಿಕ. ಅಸ್ಥಿರವಾಗುವ ಸೂಚನೆಗಳು ನಮ್ಮಲ್ಲಿ ಕಾಣಿಸ್ತಿಲ್ಲ ಎಂದು ತಿಳಿಸಿದ್ದಾರೆ.

ರಾಜ್ಯಪಾಲರು ಸಿಎಂಗೆ ಶೋಕಾಸ್ ನೀಡಿದ್ದಾರೆ. ಸಂಪುಟ, ಡಿಕೆ ಶಿವಕುಮಾರ್ ನೇತೃತ್ವದಲ್ಲಿ ರೆಸಲ್ಯೂಷನ್ ಮಾಡಿ, ಶೋಕಾಸ್ ನೋಟಿಸ್ ವಾಪಾಸ್ ಪಡೆಯುವಂತೆ ಮನವಿ ಮಾಡಿದ್ದೇವೆ. ಅಡ್ವಸರಿ ರೂಪದಲ್ಲಿ ಮನವಿ ಮಾಡಿದ್ದೇವೆ ಎಂದು ನುಡಿದಿದ್ದಾರೆ.

# ಒಂದು ವರ್ಷದೊಳಗಿನ 10 ಮಕ್ಕಳಿಗೆ ಡೆಂಗ್ಯೂ

**ಬೆಂಗಳೂರು:** ರಾಜ್ಯದಾದ್ಯಂತ ಡೆಂಗ್ಯೂ ಆರ್ಭಟ ಮುಂದುವರಿದಿದೆ. ಇಲ್ಲಿವರೆಗೆ ಡೆಂಗ್ಯೂಗೆ 10 ಮಂದಿ ಬಲಿಯಾಗಿದ್ದು, ಒಟ್ಟು ಪ್ರಕರಣಗಳ ಸಂಖ್ಯೆ 19 ಸಾವಿರಕ್ಕೆ ಏರಿಕೆಯಾಗಿದೆ.

ರಾಜ್ಯದಲ್ಲಿ 2,406 ಪ್ರಕರಣಗಳು ಸಕ್ರಿಯವಾಗಿದ್ದು, ಜನರಲ್ಲಿ ಆತಂಕ ಮೂಡಿಸಿದೆ. ಕಳೆದ 24 ಗಂಟೆಯಲ್ಲಿ 337 ಪ್ರಕರಣಗಳು ದಾಖಲಾಗಿದೆ. ಅದರಲ್ಲಿ ಒಂದು ವರ್ಷದೊಳಗಿನ 10 ಮಕ್ಕಳಲ್ಲಿ ಡೆಂಗ್ಯೂ ಧೃಡಪಟ್ಟಿದೆ. ಇಲ್ಲಿಯವರೆಗೆ 1 ವರ್ಷದೊಳಗಿನ 360 ಮಕ್ಕಳಲ್ಲಿ, 1 ರಿಂದ 18 ವರ್ಷದ 6,863 ಮಕ್ಕಳಲ್ಲಿ ಮತ್ತು 18 ವರ್ಷ ಮೇಲ್ಪಟ್ಟ 12,090 ಜನರಲ್ಲಿ ಡೆಂಗ್ಯೂ ಪತ್ತೆಯಾಗಿದೆ. ಬಿಬಿಎಂಪಿ ವ್ಯಾಪ್ತಿಯಲ್ಲಿ ಕಳೆದ 24 ಗಂಟೆಯಲ್ಲಿ 123 ಡೆಂಗ್ಯೂ ಪ್ರಕರಣಗಳು ದಾಖಲಾಗಿದೆ. ಇಲ್ಲಿಯವರೆಗೆ ಪಾಲಿಕೆ ವ್ಯಾಪ್ತಿಯಲ್ಲಿ 8,800 ಪ್ರಕರಣಗಳು ಪತ್ತೆಯಾಗಿದ್ದು, ಮೂವರು ಡೆಂಗ್ಯೂಗೆ ಬಲಿಯಾಗಿದ್ದಾರೆ.

## ನಿಫಾ ವೈರಸ್ ಭೀತಿ

ಪ್ರಾಣಿಗಳಿಂದ ಮನುಷ್ಯರಿಗೆ ಪ್ರಸರಣವು ಪ್ರಾಥಮಿಕವಾಗಿ ಕಲುಷಿತ ಆಹಾರ ಸೇವನೆಯ ಮೂಲಕ ಸಂಭವಿಸುತ್ತದೆ. ಬಾವಲಿಗಳು ನಿಫಾ ವೈರಸ್‌ಗೆ ನೈಸರ್ಗಿಕ ಮಾಧ್ಯಮವಾಗಿ ಕಾರ್ಯನಿರ್ವಹಿಸುತ್ತವೆ.

## ಡಿಸಿ ಕನ್ನಡತಿ ಮೇಘಶ್ರೀ

ಜಿಲ್ಲಾಧಿಕಾರಿ ಡಿ. ಆರ್. ಮೇಘಶ್ರೀ ಅವರು ದುರಂತ ನಡೆದ ಬಳಿಕ ಮುಂಜಾನೆ 3 ಗಂಟೆಯಿಂದ ಕೆಲಸ ಮಾಡುತ್ತಿದ್ದಾರೆ. ಜುಲೈ 10ರಂದು ಮೇಘಶ್ರೀ ಜಿಲ್ಲಾಧಿಕಾರಿಯಾಗಿ ಅಧಿಕಾರವಹಿಸಿಕೊಂಡರು. ಜಿಲ್ಲಾಧಿಕಾರಿಯಾಗಿ ಆಗಮಿಸಿದ ಕೆಲವೇ ದಿನಗಳಲ್ಲಿ ಅವರು ಅತಿ ದೊಡ್ಡ ಸವಾಲು ಎದುರಿಸಿದ್ದಾರೆ. ಮೇಘಶ್ರೀ ಅವರ ಕಾರ್ಯ ವೈಕರಿಗೆ ಜನ ಫಿದಾ ಆಗಿದ್ದಾರೆ.

ಇನ್ನು ಮೇಘಶ್ರೀ ಅವರ ಬಗ್ಗೆ ಕುಟುಂಬಸ್ಥರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಮೇಘಶ್ರೀ ಅವರಿಗೆ ಬಾಲ್ಯದಿಂದಲೇ ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲೂಕಿನ ಹರ್ತಿಕೋಟೆ ಗ್ರಾಮದ ಡಾ. ವಿಕ್ರಂ ಸಿಂಹ ಜೊತೆ ಪ್ರೇಮ ಅಂಕುರಿಸಿತ್ತು. ಜಾತಿ ಬೇಧ ಮರೆತು ಎರಡೂ ಕುಟುಂಬ ಒಂದಾಗಿ ಮದುವೆ ಮಾಡಿದ್ದರು. ಮೇಘಶ್ರೀ ಅವರು ವಯನಾಡ್ ಡಿಸಿ ಆದ್ರೆ, ಡಾ.ವಿಕ್ರಂ ಸಿಂಹ ಅಗ್ರಿಕಲ್ಚರ್ ವಿವಿ ಅಸಿಸ್ಟೆಂಟ್ ಪ್ರೊಫೆಸರ್ ಆಗಿದ್ದಾರೆ ಎಂದು ಹರ್ತಿಕೋಟೆಯಲ್ಲಿ ವಯನಾಡ್ ಡಿಸಿ ಮಾವ ವಿರೇಂದ್ರ ಸಿಂಹ ಮಾಹಿತಿ ನೀಡಿದರು. ಇನ್ನು ಮೇಘಶ್ರೀ ಮಾವ ವಿರೇಂದ್ರ ಸಿಂಹ ಅವರು ನಿವೃತ್ತ ಜೈಲರ್ ಆಗಿದ್ದಾರೆ.

20 ದಿನಗಳ ಹಿಂದಷ್ಟೇ ಮೇಘಶ್ರೀ ವಯನಾಡ್ ಡಿಸಿಯಾಗಿ ಚಾರ್ಜ್ ತೆಗೆದುಕೊಂಡರು. ಅಧಿಕಾರ ಸ್ವೀಕರಿಸಿದ ಕೆಲವೇ ದಿನಗಳಲ್ಲಿ ದೊಡ್ಡ ಸವಾಲು ಕಣ್ಮುಂದೆ ಇದೆ. ಹತ್ತಾರು ಹಳ್ಳಿಗಳು ಸರ್ವನಾಶ ಆಗಿವೆ. ಈ ವೇಳೆ ಮೇಘಶ್ರೀ ದಿಟ್ಟತನದಿಂದ ಕಾರ್ಯನಿರ್ವಹಿಸುತ್ತಿದ್ದಾರೆ. ಪಾಳೇಗಾರರ ಹಿನ್ನೆಲೆಯ ಮನೆತನ ನಮ್ಮದು. ನಮ್ಮ ಮನೆ ಸೊಸೆ ಮೇಘಶ್ರೀ ಧೈರ್ಯದಿಂದ ಸೇವೆ ಸಲ್ಲಿಸುತ್ತಿದ್ದಾರೆ. ಪುಟ್ಟ ಮಕ್ಕಳೊಂದಿಗೆ ನನ್ನ ಪುತ್ರ ಮನೆಯಲ್ಲಿದ್ದು ಪತ್ನಿಗೆ ಧೈರ್ಯ ತುಂಬಿದ್ದಾರೆ. ಸಾವು, ನೋವು ಸಂಭವಿಸಿದ ಸ್ಥಳಕ್ಕೆ ಮೇಘಶ್ರೀ ಭೇಟಿ ನೀಡಿದ್ದಾರೆ. ನಮ್ಮಂಥವರಿಗೆ ಆ ದೃಶ್ಯಗಳನ್ನು ನೋಡಿದರೆ ಆತಂಕ ಆಗುತ್ತದೆ. ಮೇಘಶ್ರೀ ಸ್ಥಳದಲ್ಲಿದ್ದು ರಕ್ಷಣಾ ಕಾರ್ಯದಲ್ಲಿ ತೊಡಗಿದ್ದಾರೆ. ನಾವು ಆಗಾಗ ಫೋನ್ ಕರೆ ಮಾಡಿ ಮಾತಾಡಿದ್ದೇವೆ. ನಮಗೂ ಸಹ ಮೊದಲಿಗೆ ತುಂಬಾ ಆತಂಕ ಆಗಿತ್ತು. ಸದ್ಯ ಯಾವುದೇ ಅಪಾಯ ಇಲ್ಲ ಎಂದು ತಿಳಿದು ಸಮಾಧಾನ ಆಗಿದೆ. ನಮ್ಮ ಸೊಸೆ ಜನರ ಸಂಕಷ್ಟಕ್ಕೆ ಸ್ಪಂದಿಸುವ ಪರಿ ಹೆಮ್ಮೆ ತಂದಿದೆ. ಕನ್ನಡತಿ ಮೇಘಶ್ರೀ ಎಂಬ ಮಾತು ಕೇಳಿ ಖುಷಿ ಆಗುತ್ತಿದೆ ಎಂದು ಸೊಸೆ ಬಗ್ಗೆ ಮಾವ ಸಂತೋಷದ ಮಾತುಗಳನ್ನಾಡಿ ಹೆಮ್ಮೆ ವ್ಯಕ್ತಪಡಿಸಿದ್ದಾರೆ.

## ಸ್ಥಳಾಂತರಕ್ಕೆ ನೋಟಿಸ್

**ಕರ್ನಾಟಕದ ಹಲವೆಡೆ ಭೂಕುಸಿತದ ಆತಂಕ:** ಕರ್ನಾಟಕದ 1,351 ಸ್ಥಳಗಳು ಭೂಕುಸಿತಕ್ಕೆ ಒಳಗಾಗುವ ಸಾಧ್ಯತೆಯಿದೆ ಎಂದು ಅಧ್ಯಯನ ವರದಿಯೊಂದು ಇತ್ತೀಚೆಗೆ ಮುನ್ಸೂಚನೆ ನೀಡಿತ್ತು. ಜಿಯೋಲಾಜಿಕಲ್ ಸರ್ವೆ ಆಫ್ ಇಂಡಿಯಾ ಮತ್ತು ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ರಾಕ್ ಮೆಕ್ಯಾನಿಕ್ಸ್ ನಡೆಸಿದ ಸಮೀಕ್ಷೆಯಲ್ಲಿ ಈ ವಿಚಾರ ಬಹಿರಂಗವಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ವಿಧಾನ ಪರಿಷತ್ ನಲ್ಲಿ ಮಾಹಿತಿ ನೀಡಿದ್ದರು.

ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ಬಳಿಯ ಶಿರೂರು ಎಂಬಲ್ಲಿ ಇತ್ತೀಚೆಗೆ ದೊಡ್ಡ ಪ್ರಮಾಣದಲ್ಲಿ ಭೂಕುಸಿತ ಸಂಭವಿಸಿ ಹತ್ತಕ್ಕೂ ಹೆಚ್ಚು ಜನ ಮೃತಪಟ್ಟಿದ್ದಾರೆ. ಅದಾದ ನಂತರ ರಾಜ್ಯದ ಅನೇಕ ಕಡೆಗಳಲ್ಲಿ ಭೂಕುಸಿತ ಸಂಭವಿಸಿದ್ದು, ಆತಂಕಕ್ಕೆ ಕಾರಣವಾಗಿದೆ.

## ಬೃಹತ್ ಸಮಾವೇಶ

ಈ ಸರ್ಕಾರದ ವೈಫಲ್ಯಗಳನ್ನು ಎತ್ತಿ ತೋರಿಸಲು ಆಗಸ್ಟ್ 10

## ಮೊದಲನೇ ಪುಟದಿಂದ...

ರಂದು ಪಾದಯಾತ್ರೆ ಮುಗಿದ ನಂತರ ನಾವು ಒಂದೆರಡು ಕಾರ್ಯಕ್ರಮಗಳನ್ನು ಯೋಜಿಸುತ್ತಿದ್ದೇವೆ ಎಂದಿದ್ದಾರೆ.

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಕೋಟ್ಯಂತರ ರೂಪಾಯಿ ಅವ್ಯವಹಾರದಲ್ಲಿ ಶಾಮೀಲಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜೀನಾಮೆಗೆ ಒತ್ತಡ ಹೇರಲು ಆಗಸ್ಟ್ ಅಂತ್ಯದ ವೇಳೆಗೆ ಬಳ್ಳಾರಿಯಲ್ಲಿ ಬೃಹತ್ ಸಮಾವೇಶವನ್ನು ಆಯೋಜಿಸಲು ಬಿಜೆಪಿ ಚಿಂತನೆ ನಡೆಸಿದೆ ಎಂದು ಬಿಜೆಪಿ ಪ್ರಧಾನ ಕಾರ್ಯದರ್ಶಿ ಮತ್ತು ಮಾಜಿ ಸಚಿವ ವಿ ಸುನೀಲ್ ಕುಮಾರ್ ಹೇಳಿದ್ದಾರೆ.

ಬಿಡದಿ ವೃತ್ತದಲ್ಲಿ ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿದ ವಿಜಯೇಂದ್ರ, ಆಡಳಿತಾರೂಢ ಕಾಂಗ್ರೆಸ್ ಜನಾಂದೋಲನ ಸಭೆಗಳನ್ನು ಆಯೋಜಿಸುತ್ತಿರುವ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಇದು ನಮ್ಮ ಕಾಲದ ವಿಪರ್ಯಾಸವಲ್ಲವೇ ಅವರು ಅಧಿಕಾರದಲ್ಲಿದ್ದಾರೆ ಮತ್ತು ಎಲ್ಲಾ ದುಡ್ಡು ಹೊಂದಿದ್ದಾರೆ. ಆದರೆ ಅವರು ನಮ್ಮ ಪಾದಯಾತ್ರೆಯನ್ನು ಎದುರಿಸಲು ಜನಾಂದೋಲನ ಸಭೆಗಳನ್ನು ಆಯೋಜಿಸುತ್ತಿದ್ದಾರೆ. ಇದು, ನಮ್ಮ ಪಾದಯಾತ್ರೆಯಿಂದ ಸರ್ಕಾರಕ್ಕೆ ಆತಂಕ ಸೃಷ್ಟಿಯಾಗಿದೆ ಎಂಬುದನ್ನು ಸ್ಪಷ್ಟವಾಗಿ ತೋರಿಸುತ್ತದೆ. ಭ್ರಷ್ಟಾಚಾರದಲ್ಲಿ ತೊಡಗಿರುವ ಬಗ್ಗೆ ನಮ್ಮ ಪ್ರಶ್ನೆಗಳಿಗೆ ಅವರೇ ಉತ್ತರ ನೀಡಬೇಕು ಎಂದು ವಿಜಯೇಂದ್ರ ಆಗ್ರಹಿಸಿದ್ದಾರೆ.

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದಲ್ಲಿ ಅಕ್ರಮವಾಗಿ ವರ್ಗಾವಣೆಯಾಗಿರುವುದು 189 ಕೋಟಿ ರೂ. ಅಲ್ಲ, 89 ಕೋಟಿ ರೂ. ಎಂದು ನೀವೇ (ಸಿಎಂ ಸಿದ್ದರಾಮಯ್ಯ) ಹೇಳಿದ್ದೀರಿ. ಹೀಗಾಗಿ ನೀವು ಹುದ್ದೆಗೆ ರಾಜೀನಾಮೆ ನೀಡಬೇಕು ಎಂದು ವಿಜಯೇಂದ್ರ ಆಗ್ರಹಿಸಿದ್ದಾರೆ.

## 100 ಮಂದಿ ಸಾವು

ಭಾರತೀಯರು ಮನೆಯಿಂದ ಆಚೆ ಬಾರದಂತೆ ಸೂಚನೆ ನೀಡಲಾಗಿದೆ. ಹಿಂಸಾಚಾರದ ಪರಿಣಾಮವಾಗಿ ಅಧಿಕಾರಿಗಳು ಮೊಬೈಲ್ ಇಂಟರ್ನೆಟ್ ಸೇವೆಗಳನ್ನು ಸ್ಥಗಿತಗೊಳಿಸಿದರು ಮತ್ತು ಅನಿರ್ದಿಷ್ಟ ರಾಷ್ಟ್ರವ್ಯಾಪಿ ಕರ್ಫ್ಯೂ ವಿಧಿಸಲಾಗಿದೆ. ಸರ್ಕಾರಿ ಉದ್ಯೋಗಗಳಲ್ಲಿ ಮೀಸಲಾತಿ ವ್ಯವಸ್ಥೆ ವಿಚಾರವಾಗಿ ಗದ್ದಲ ಎದ್ದಿರುವ ಹಿನ್ನೆಲೆಯಲ್ಲಿ ಶೇಖ್ ಹಸೀನಾ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ಪ್ರತಿಭಟನೆ ನಡೆಸಲಾಯಿತು.300ಕ್ಕೂ ಹೆಚ್ಚು ಪೊಲೀಸರು ಗಾಯಗೊಂಡಿದ್ದಾರೆ.

ವಿವಾದಾತ್ಮಕ ಮೀಸಲಾತಿ ವ್ಯವಸ್ಥೆಯನ್ನು ರದ್ದುಗೊಳಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಯಿತು. 1971ರ ಬಾಂಗ್ಲಾದೇಶ ವಿಮೋಚನಾ ಯುದ್ಧದಲ್ಲಿ ಹೋರಾಡಿದ ಮಾಜಿ ಸೈನಿಕರ ಸಂಬಂಧಿಕರಿಗೆ ಈ ಕೋಟಾ ವ್ಯವಸ್ಥೆಯಲ್ಲಿ ಸರ್ಕಾರಿ ಉದ್ಯೋಗಗಳಲ್ಲಿ ಶೇ.30ರಷ್ಟು ಮೀಸಲಾತಿಯನ್ನು ನೀಡಲಾಯಿತು.

ದೇಶಾದ್ಯಂತ ವಿಧ್ವಂಸಕ ಕೃತ್ಯಗಳಲ್ಲಿ ತೊಡಗುವವರು ವಿದ್ಯಾರ್ಥಿಗಳಲ್ಲ ಆದರೆ ಭಯೋತ್ಪಾದಕರು ಎಂದು ಪ್ರಧಾನಿ ಹಸೀನಾ ಹೇಳಿದ್ದಾರೆ. ಇದೀಗ ಬೀದಿಗಿಳಿದು ಪ್ರತಿಭಟನೆ ನಡೆಸುತ್ತಿರುವವರು ವಿದ್ಯಾರ್ಥಿಗಳಲ್ಲ, ರಾಷ್ಟ್ರವನ್ನು ಅಸ್ಥಿರಗೊಳಿಸಲು ಹೊರಟಿರುವ ಭಯೋತ್ಪಾದಕರು. ಅವರನ್ನು ದೃಢವಾಗಿ ನಿಗ್ರಹಿಸುವಂತೆ ದೇಶವಾಸಿಗಳಿಗೂ ಮನವಿ ಮಾಡಿದ್ದಾರೆ.

ಭಾರತವು ವಿದ್ಯಾರ್ಥಿಗಳು ಸೇರಿದಂತೆ ತನ್ನ ಪ್ರಜೆಗಳಿಗೆ ಸಲಹೆಯನ್ನು ನೀಡಿದೆ, ಅಲ್ಲಿನ ಭಾರತೀಯ ಹೈಕಮಿಷನ್ ನೊಂದಿಗೆ ಸಂಪರ್ಕದಲ್ಲಿರಲು ಮತ್ತು ಜಾಗರೂಕರಾಗಿರಲು ಕೇಳಿಕೊಳ್ಳಲಾಗಿದೆ.

## ರೈತರಿಗೆ ತಪ್ಪದ ಕಂಟಕ!

ಇಲ್ಲದೆ ಬೆಳೆ ಬೆಳೆಯಬಹುದು ಎಂಬ ಸಂತಸದಲ್ಲಿದ್ದರು. ಆದರೆ ಆ ಖುಷಿಗೆ ಸರ್ಕಾರ ಬ್ರೇಕ್ ಹಾಕಿದೆ.

ಕಳೆದ ವರ್ಷ ಸರಿಯಾದ ಪ್ರಮಾಣದ ಮಳೆ ಬೀಳದ ಕಾರಣ ಕಾವೇರಿ ಕೊಳ್ಳದ ರೈತರು ಬೆಳೆ ಬೆಳೆಯಲು ಸಾಧ್ಯವಾಗಿರಲಿಲ್ಲ. ಈ ಬಾರಿ ಕನ್ನಂಬಾಡಿ ಕಟ್ಟೆ ಅವಧಿಗೂ ಮುನ್ನವೇ ಭರ್ತಿಯಾಗಿದೆ. ಹೀಗಾಗಿ ರೈತರು ಉತ್ತಮ ಬೆಳೆ ಬೆಳೆಯಬಹುದು ಎಂಬ ನಿರೀಕ್ಷೆಯಲ್ಲಿದ್ದರು. ಇದೀಗ ಸರ್ಕಾರ ಕೆಆರ್‌ಎಸ್ ಡ್ಯಾಂನಿಂದ ಕಟ್ಟು ಪದ್ಧತಿಯಲ್ಲಿ ನಾಲೆಗಳಿಗೆ ನೀರು ಬಿಡುವ ತೀರ್ಮಾನಕ್ಕೆ ಬಂದಿದೆ. ಸಚಿವ ಚಲುವರಾಯಸ್ವಾಮಿ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಈ ನಿರ್ಧಾರಕ್ಕೆ ಬರಲಾಗಿದೆ. ಆಗಸ್ಟ್ 8 ರಿಂದ ಪದ್ಧತಿಯಂತೆ ನೀರು ಹರಿಸಲು ತೀರ್ಮಾನ ಮಾಡಲಿದೆ. ನಾಲ್ಕು ತಿಂಗಳ ಕಾಲ ತಿಂಗಳಲ್ಲಿ 18 ದಿನಗಳು ಮಾತ್ರ ನೀರು ಹರಿಸಲಾಗುತ್ತಿದೆ ಎಂದು ಕಾವೇರಿ ನಿಗಮ ಆದೇಶ ಹೊರಡಿಸಿದೆ.

ಇತ್ತ ಸಚಿವ ಚಲುವರಾಯಸ್ವಾಮಿ ನೇತೃತ್ವದ ಸಭೆಯಲ್ಲಿ ಇಂತಹದೊಂದು ನಿರ್ಧಾರ ತೆಗೆದುಕೊಂಡು, ಈಗಾಗಲೇ ಘೋಷಣೆ ಮಾಡಲಾಗಿದೆ. ಅತ್ತ ಕಾಂಗ್ರೆಸ್ ಪಕ್ಷದ ಶಾಸಕ ಗಣಿಗ ರವಿಕುಮಾರ್ ಇದಕ್ಕೆ ವಿರೋಧ ವ್ಯಕ್ತಪಡಿಸಿ ರೈತರ ಪರ ನಿಂತಿದ್ದಾರೆ. ಈ ವರ್ಷ ಕೆಆರ್‌ಎಸ್ ಡ್ಯಾಂನಲ್ಲಿ ನೀರಿದ್ದರೂ ರೈತರು ಬಾಯಿಗೆ ಮಣ್ಣು ಹಾಕಿಕೊಳ್ಳಬೇಕಾ ಕಟ್ಟು ಪದ್ಧತಿಯಲ್ಲಿ ನೀರು ಬಿಡಲು ನಿರ್ಧಾರ ಮಾಡಿರುವುದು ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಒಟ್ಟಾರೆ ವರುಣನ ಕೃಪೆಯಿಂದ ಅವಧಿಗೂ ಮುನ್ನವೇ ಕೆಆರ್‌ಎಸ್ ಡ್ಯಾಂ ಭರ್ತಿಯಾಗಿದೆ. ಇದೀಗ ಸರ್ಕಾರ ಯಾವ ಪೂರ್ವಗ್ರಹ ಪೀಡಿತವಾಗಿ ಕಟ್ಟು ಪದ್ಧತಿಯಲ್ಲಿ ನಾಲೆಗಳಿಗೆ ನೀರು ಹರಿಸುತ್ತೇವೆ ಎಂದು ಹೇಳಿದೆ ಗೊತ್ತಿಲ್ಲ. ಸರ್ಕಾರದ ಈ ನಿರ್ಧಾರದ ವಿರುದ್ಧ ರೈತಾಪಿ ವಲಯದಲ್ಲಿ ಭಾರೀ ಆಕ್ರೋಶ ವ್ಯಕ್ತವಾಗಿದೆ.

## 16 ಕೋಟಿ ರೂ.

ಒಟ್ಟಿನಲ್ಲಿ ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ಸರ್ಕಾರ ಬೀದಿ ಬದಿಯ ವ್ಯಾಪಾರಿಗಳಿಗಾಗಿ ಅಂಡರ್ ಗ್ರೌಂಡ್ ಮಾರ್ಕೆಟ್ ನಿರ್ಮಾಣ ಮಾಡಿದೆ. ಆದರೆ ಉದ್ಘಾಟನೆಗೂ ಮುನ್ನವೇ ಮಳಿಗೆಗಳಲ್ಲಿ ಮಳೆ ನೀರು ಸೋರುತ್ತಿದ್ದು, ಮಳಿಗೆಗಳಲ್ಲಿ ವ್ಯಾಪಾರ ಮಾಡಲು ವ್ಯಾಪಾರಸ್ಥರು ಯಾರಾದರೂ ಈ ಕಡೆ ಬರಲು ಧೈರ್ಯ ಮಾಡುತ್ತಾರೆಯೇ ಎಂಬ ಪ್ರಶ್ನೆ ಉದ್ಭವಿಸಿದೆ. ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳೇ ಉತ್ತರ ನೀಡಬೇಕಿದೆ.

## ದುರಂತದ ಭೀತಿ

ಸದ್ಯ ಜರಿದಿರುವ ಗುಡ್ಡದ ಸಮೀಪದಲ್ಲೇ ಇರುವ ಮನೆಗಳಿಗೆ ನೋಟಿಸ್ ನೀಡಲಾಗಿದೆ. ಅಪಾಯಕಾರಿ ಸ್ಥಳದಲ್ಲಿನ 12 ಮನೆಗಳಿಗೆ ನೋಟಿಸ್ ನೀಡಿರುವ ಅಧಿಕಾರಿಗಳು, ಸುರಕ್ಷಿತ ಸ್ಥಳಕ್ಕೆ ತೆರಳುವಂತೆ ಸೂಚನೆ ನೀಡಿದ್ದಾರೆ. ಹೀಗಾಗಿ ಜನ ಮನೆ ಖಾಲಿ ಮಾಡಿಕೊಂಡು ಹೋಗಿದ್ದಾರೆ. ಯಾರೋ ಮಾಡಿದ ತಪ್ಪಿಗೆ ಜನ ಶಿಕ್ಷೆ ಅನುಭವಿಸುವಂತಾಗಿದೆ.

ಎರಡು ತಿಂಗಳ ಹಿಂದಷ್ಟೇ ಮನೆ ಖರೀದಿಸಿದ್ದರು!

ಎರಡು ತಿಂಗಳ ಹಿಂದಷ್ಟೇ ಖರೀದಿ ಮಾಡಿದ್ದ ಮನೆಯನ್ನು ಖಾಲಿ ಮಾಡುವ ಸ್ಥಿತಿ ಕೆತ್ತಿಕಲ್ ಗುಡ್ಡ ಸಮೀಪದ ಉಷಾ ಎಂಬವರದ್ದಾಗಿದೆ. ಹಲವು ವರ್ಷಗಳಿಂದ ಕೆತ್ತಿಕಲ್ ಗುಡ್ಡದ ಮೇಲ್ಭಾಗದಲ್ಲಿ ಜನ ನೆಲೆಸಿದ್ದಾರೆ. ಕಾಮಗಾರಿಗಾಗಿ ಗುಡ್ಡವನ್ನು ಅಗೆದಿರುವುದರಿಂದ ಅವರೆಲ್ಲರಿಗೆ ಸಮಸ್ಯೆ ಎದುರಾಗಿದೆ.

**ಕೆತ್ತಿಕಲ್ ನಲ್ಲಿರುವ ಮನೆಗಳು ಮತ್ತು ಸ್ಥಳೀಯರು:** ಅಧಿಕಾರಿಗಳ ವಿರುದ್ಧ ಕೆತ್ತಿಕಲ್ ಗುಡ್ಡದ ಸಂತ್ರಸ್ತರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಮನೆ ಖಾಲಿ ಮಾಡಿ ಹೋಗಿ ಎಂದರೆ ನಾವೆಲ್ಲಿಗೆ ಹೊಗುವುದು ಗುಡ್ಡ ಅಗೆಯುವ ಸಂದರ್ಭದಲ್ಲಿ ಕ್ರಮ ಕೈಗೊಳ್ಳುತ್ತಿದ್ದರೆ ಇಷ್ಟೆಲ್ಲಾ ಸಮಸ್ಯೆ ಆಗುತ್ತಿತ್ತೇ ಎಂದು ಸ್ಥಳೀಯ ನಿವಾಸಿಗಳು 'ಟಿವಿ9' ಜೊತೆ ಅಳಲು ತೋಡಿಕೊಂಡಿದ್ದಾರೆ. ಜತೆಗೆ, ಅಧಿಕಾರಿಗಳ, ಜನಪ್ರತಿನಿಧಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಕಳೆದ ವಾರವಷ್ಟೇ ಜಿಲ್ಲೆಗೆ ಭೇಟಿ ನೀಡಿದ್ದ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್, ಕೆತ್ತಿಕಲ್ ಗುಡ್ಡ ಕುಸಿತದ ಬಗ್ಗೆ ಉನ್ನತ ಮಟ್ಟದ ತನಿಖೆಗೆ ಆದೇಶಿಸಿದ್ದರು. ಕೆತ್ತಿಕಲ್ ಗುಡ್ಡಕ್ಕೆ ಭೇಟಿ ನೀಡಲು ತಂತ್ರಜ್ಞರ ಸಮಿತಿಗೆ ಸೂಚನೆ ನೀಡಿದ್ದೇನೆ. ಗುಡ್ಡ ಕುಸಿತವಾದ ಕೆತ್ತಿಕಲ್ ಹಾಗೂ ಮುಳುಗಡೆಯಾಗುವ ಅದ್ಯಪಾಡಿ ಬಗ್ಗೆ ವರದಿ ಕೊಡಲು ಹೇಳುತ್ತೇವೆ. ಕೆತ್ತಿಕಲ್ ನಲ್ಲಿ ಗುಡ್ಡ ಕುಸಿದು ಭಾರೀ ಭಯದ ವಾತಾವರಣ ಇದೆ. ರಾಷ್ಟ್ರೀಯ ಹೆದ್ದಾರಿ ಯೋಜನೆಯ ಹೆಸರಿನಲ್ಲಿ ಮಣ್ಣು ಸಾಗಿಸಲಾಗುತ್ತಿದೆ. ಗಣಿಗಾರಿಕೆ ಮಾಡಿ ಅವ್ಯಾಹತವಾಗಿ ಮಣ್ಣು ಸಾಗಿಸಲಾಗುತ್ತಿದೆ. ಇಲ್ಲಿ ಮೇಲ್ನೋಟಕ್ಕೆ ಲೋಪದೋಷ ಆಗಿರುವುದು ಕಂಡುಬಂದಿದೆ ಎಂದು ಸಚಿವರು ಹೇಳಿದ್ದರು.

## ಅಂತ್ಯ

ಹೀಗಾಗಿ ಆರೋಪಿ ವಿದ್ಯಾರ್ಥಿಯನ್ನು ಹತ್ಯೆ ಮಾಡಲು ಯೋಜಿಸಿದ್ದ ಎಂದು ಹೆಚ್ಚುವರಿ ಎಸ್ಪಿ ಯೋಗೇಶ್ ಕುಮಾರ್ ತಿಳಿಸಿದ್ದಾರೆ. ಘಟನೆ ನಡೆಯುವ ಕೆಲ ದಿನಗಳ ಹಿಂದೆ ಆರೋಪಿಗಳು ಮಾರುಕಟ್ಟೆಯಿಂದ ಚಾಕು ಖರೀದಿಸಿ ಸೂಟ್‌ಕೇಸ್‌ನಲ್ಲಿ ಬಚ್ಚಿಟ್ಟಿದ್ದ.

ಘಟನೆಗೆ ಬಳಸಿದ್ದ ಚಾಕು ಕೂಡ ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಕುರಿತು ಹೆಚ್ಚಿನ ತನಿಖೆ ನಡೆಸಲಾಗುತ್ತಿದೆ. ಬಲರಾಂಪುರ ಜಿಲ್ಲೆಯಿಂದ 30 ಕಿಲೋಮೀಟರ್ ದೂರದಲ್ಲಿರುವ ತುಳಸಿಪುರ ಇಟ್ವಾ ರಸ್ತೆಯಲ್ಲಿರುವ ಜಾಮಿಯಾ ನೈಮಿಯಾನ್ ಇರ್ವಿಯಲ್ಲಿ ಘಟನೆ ನಡೆದಿದೆ.

ಆಗಸ್ಟ್ 2ರಂದು ಜಾಮಿಯಾ ನೈಮಿಯಾನ್ ಕ್ಲಾಸ್ ನ ಬೆಂಚ್ ಮೇಲೆ ವಿದ್ಯಾರ್ಥಿಯ ಶವ ಬಿದ್ದಿತ್ತು. ಈ ಪ್ರಕರಣದಲ್ಲಿ ಪ್ರಾಂಶುಪಾಲರು, ಶಿಕ್ಷಕ ಸೇರಿದಂತೆ 7 ಮಂದಿಯನ್ನು ಪೊಲೀಸರು ವಿಚಾರಣೆಗೆ ಒಳಪಡಿಸಿದ್ದರು. ಈ ವಿಚಾರದಲ್ಲಿ ಹಲವು ಮಕ್ಕಳನ್ನೂ ವಿಚಾರಣೆಗೊಳಪಡಿಸಲಾಗಿದೆ.

ಮೃತರು ಛತ್ರ ಪೊಲೀಸ್ ಠಾಣೆ ವ್ಯಾಪ್ತಿಯ ಭಗವಾನ್ ಪುರ ಗ್ರಾಮದ ನಿವಾಸಿಯಾಗಿದ್ದಾರೆ. 3 ತಿಂಗಳ ಹಿಂದೆಯಷ್ಟೇ ಮದರಸಾದಲ್ಲಿ ಪ್ರವೇಶ ಪಡೆದಿದ್ದರು.

ಅಪ್ರಾಪ್ತ ಆರೋಪಿಯು ಪೊಲೀಸರಿಗೆ ಒಂದು ವಾರದ ಹಿಂದೆ ಮೃತ ವಿದ್ಯಾರ್ಥಿಯಿಂದ ಪೆನ್ ಕೇಳಿದ್ದಾಗಿ ತಿಳಿಸಿದ್ದಾನೆ. ಆದರೆ ಆತ ಪೆನ್ನು ಕೊಟ್ಟಿರಲಿಲ್ಲ, ಇದರಿಂದಾಗಿ ಇಬ್ಬರ ನಡುವೆ ವಾಗ್ವಾದ ಉಂಟಾಗಿತ್ತು. ಈ ಜಗಳದಲ್ಲಿ ಇಬ್ಬರೂ ಪರಸ್ಪರ ಕೊಲೆ ಬೆದರಿಕೆ ಹಾಕಿದ್ದರು.

## ಕನ್ವಾರಿಯಾಗಳು

ಮಿಂಟು ಪಾಸ್ವಾನ್ ಅವರ ಮಗ ಆಶಿ ಕುಮಾರ್, ಚಂದೇಶ್ವರ್ ಪಾಸ್ವಾನ್ ಅವರ ಮಗ ಚಂದನ್ ಕುಮಾರ್ ಮತ್ತು ದೇವಿ ಲಾಲ್ ಅವರ ಮಗ ಅಮೋದ್ ಕುಮಾರ್ ಅವರ ಹೆಸರುಗಳು ಕೇಳಿಬಂದಿವೆ.

ಉಮೇಶ್ ಪಾಸ್ವಾನ್ ಅವರ ಪುತ್ರ ರಾಜೀವ್ ಕುಮಾರ್ (17) ಸೇರಿದಂತೆ ಮೂವರು ಚಿಕಿತ್ಸೆ ಪಡೆಯುತ್ತಿದ್ದಾರೆ. ಸದ್ಯ ಆಸ್ಪತ್ರೆಯಲ್ಲಿ ಗೊಂದಲದ ವಾತಾವರಣ ನಿರ್ಮಾಣವಾಗಿದೆ. ಡಿಜೆಯಲ್ಲಿ ಹಾಡುಗಳು ಮೊಳಗುತ್ತಿದ್ದವು, ಎಲ್ಲರೂ ನೃತ್ಯ ಮಾಡುತ್ತಾ ನೀರು ತರಲೆಂದು ಹೋಗುತ್ತಿದ್ದರು. ತಕ್ಷಣವೇ 11 ಸಾವಿರ ವೋಲ್ಟ್ ಇರುವ ವಿದ್ಯುತ್ ಸಂಪರ್ಕಕ್ಕೆ ಬಂದು 9 ಮಂದಿ ಸುಟ್ಟು ಕರಕಲಾಗಿದ್ದಾರೆ.

ಘಟನೆಯ ಬಗ್ಗೆ ಸ್ಥಳೀಯರು ಸ್ಥಳೀಯ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ . ಘಟನೆಯ ಬಗ್ಗೆ ಮಾಹಿತಿ ಪಡೆದ ತಕ್ಷಣ ಸ್ಥಳೀಯ ಪೊಲೀಸರು ಹಾಗೂ ವೈಶಾಲಿ ಡಿಎಂ ಸ್ಥಳಕ್ಕೆ ಆಗಮಿಸಿದರು. ಸದ್ಯ ಮೃತ ದೇಹಗಳ ಗುರುತು ದೃಢಪಡಿಸಲಾಗುತ್ತಿದೆ. ಸಾವಿನ ಸಂಖ್ಯೆಯೂ ಹೆಚ್ಚಾಗುವ ಸಾಧ್ಯತೆ ಇದೆ ಎನ್ನುತ್ತಾರೆ ಸ್ಥಳೀಯರು.

ಇದಕ್ಕೂ ಮೊದಲು ಆಗಸ್ಟ್ 1 ರಂದು ಜಾರ್ಖಂಡ್‌ನಲ್ಲಿ ಇದೇ ರೀತಿಯ ದುರಂತ ಸಂಭವಿಸಿತ್ತು. ಲತೇಹರ್ ಜಿಲ್ಲೆಯಲ್ಲಿ ಅವರ ವಾಹನವು ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದು ಕನಿಷ್ಠ ಐವರು ಕನ್ವಾರಿಯಾಗಳು ಸಾವನ್ನಪ್ಪಿದ್ದರು.

ಬಾಲುಮಾತ್ ಪೊಲೀಸ್ ಠಾಣಾ ವ್ಯಾಪ್ತಿಯ ಟಮ್ ಟಮ್ ಟೋಲಾ ಬಳಿ ಬೆಳಗ್ಗೆ 3 ಗಂಟೆ ಸುಮಾರಿಗೆ ಈ ಘಟನೆ ಸಂಭವಿಸಿದೆ, ಗುಂಪು ದಿಯೋಘರ್‌ನ ಬಾಬಾ ಬೈದ್ಯನಾಥ ದೇವಸ್ಥಾನದಿಂದ ಹಿಂದಿರುಗುತ್ತಿದ್ದಾಗ ಅವರ ವಾಹನವು ಕಂಬಕ್ಕೆ ಡಿಕ್ಕಿ ಹೊಡೆದು ಹೈ-ಟೆನ್ಷನ್ ಓವರ್‌ಹೆಡ್ ತಂತಿ ತಾಗಿತ್ತು.

# ನಿಗದಿಯಾಗಿದ್ದ ಕೊಪ್ಪಳ, ವಿಜಯನಗರ ಸಿಎಂ ಪ್ರವಾಸ ದಿಢೀರ್ ರದ್ದು



**ಬಳ್ಳಾರಿ:** ಮುಡಾ ಹಗರಣದ ಆರೋಪ ಹಾಗೂ ಬಿಜೆಪಿ-ಜೆಡಿಎಸ್ ಪಾದಯಾತ್ರೆಯಿಂದ ಸಿಎಂ ಸಿದ್ದರಾಮಯ್ಯ ವಿಚಲಿತರಾದ್ರಾ? ಹೀಗೊಂದು ಪ್ರಶ್ನೆ ಈಗ ಎದ್ದಿದೆ.

ನಿಗದಿಯಾಗಿದ್ದ ವಿಜಯನಗರ ಜಿಲ್ಲಾ ಪ್ರವಾಸವನ್ನು ಸಿಎಂ ಸಿದ್ದರಾಮಯ್ಯ ದಿಢೀರ್ ರದ್ದು ಮಾಡಿದ್ದರಿಂದ ಈ ಪ್ರಶ್ನೆ ಎದ್ದಿದೆ. ಮಂಗಳವಾರ ಕೊಪ್ಪಳ ಹಾಗೂ ವಿಜಯನಗರದಲ್ಲಿ ಸಿದ್ದರಾಮಯ್ಯ ಪ್ರವಾಸ ನಿಗದಿಯಾಗಿತ್ತು. ಭರ್ಜರಿ ಮಳೆಯಿಂದ ಭರ್ತಿಯಾದ ಹಿನ್ನೆಲೆಯಲ್ಲಿ ತುಂಗಭದ್ರಾ ಜಲಾಶಯಕ್ಕೆ ಸಿಎಂ ಬಾಗಿನ ಅರ್ಪಿಸಬೇಕಿತ್ತು. ಈ ಬಾಗಿನ ಅರ್ಪಿಸುವ ಕಾರ್ಯಕ್ರಮವನ್ನು ಮುಖ್ಯಮಂತ್ರಿಗಳ ಕಚೇರಿ ದೃಢಪಡಿಸಿತ್ತು. ಆದರೆ ಮುಖ್ಯಮಂತ್ರಿಗಳು ಬರುವುದಕ್ಕೆ ಒಂದು ದಿನಕ್ಕೆ ಮೊದಲೇ ಕಾರ್ಯಕ್ರಮ ಮುಂದೂಡಿಕೆಯಾಗಿದೆ. ತಾತ್ಕಾಲಿಕವಾಗಿ ಸಿಎಂ ಕಾರ್ಯಕ್ರಮ ಮುಂದೂಡಿಕೆಯಾದ ಬಗ್ಗೆ ವಿಜಯನಗರ ಜಿಲ್ಲಾಧಿಕಾರಿ ಎಂ.ಎಸ್ ದಿವಾಕರ್ ಮಾಧ್ಯಮಗಳಿಗೆ ಮಾಹಿತಿ ನೀಡಿದ್ದಾರೆ.

# ಸಿಎಂ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಟ್ಟರೆ ಕಾನೂನು ಹೋರಾಟ

**ಬೆಂಗಳೂರು :** ಸಿಎಂ ಸಿದ್ದರಾಮಯ್ಯ ವಿರುದ್ಧ ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಿದರೆ ಕಾನೂನು ಹೋರಾಟ ಮಾಡುತ್ತೇವೆ ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಲ್ಲಿ ಮಾತನಾಡಿದ ಅವರು, ರಾಜ್ಯಪಾಲರು ಪ್ರಾಸಿಕ್ಯೂಷನ್ ಅನುಮತಿ ಕೊಟ್ಟರೆ ಕಾನೂನು ಹೋರಾಟ ಮಾಡುತ್ತೇವೆ. ಕ್ಯಾಬಿನೆಟ್ ನಿರ್ಣಯವನ್ನು ರಾಜ್ಯಪಾಲರು ಒಪ್ಪುತ್ತಾರೆ ಅಂತ ನಮಗೆ ರಾಜ್ಯಪಾಲರ ಮೇಲೆ ವಿಶ್ವಾಸ ಇದೆ. ನೋಟೀಸ್ ವಾಪಸ್ ಪಡೆಯಬೇಕು. ಈ ಪ್ರಕರಣದಲ್ಲಿ ಸತ್ಯಾಂಶ ಇಲ್ಲ ಅಂತ ನಿರ್ಣಯ ಮಾಡಿ ಕಳುಹಿಸಿದಾಗ ಅದನ್ನು ಮೀರಿ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಡುತ್ತಾರೆ ಎಂದು ನಾನು ಅಂದುಕೊಳ್ಳೊಲ್ಲ ಅಂತ ವಿಶ್ವಾಸ ವ್ಯಕ್ತಪಡಿಸಿದರು.

ರಾಜ್ಯಪಾಲರಿಗೆ ಅವರಿಗೆ ದತ್ತವಾದ ಅಧಿಕಾರ ಇರಬಹುದು. ಆದರೆ ಕ್ಯಾಬಿನೆಟ್ ಸಲಹೆಯನ್ನು ಅವರು ಅಷ್ಟು ಸುಲಭವಾಗಿ ತಿರಸ್ಕಾರ ಮಾಡುವುದಿಲ್ಲ ಎಂದು ಅಂದುಕೊಂಡಿದ್ದೇನೆ. ಅದನ್ನು ಮೀರಿಯೂ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದರೆ ನಾವು ಕೂಡಾ ಕಾನೂನು ಹೋರಾಟವನ್ನು ಮಾಡುತ್ತೇವೆ ಎಂದು ತಿಳಿಸಿದರು.

### ಕಾಳಜಿ ಕೇಂದ್ರದ ವ್ಯವಸ್ಥೆ ಪರಿಶೀಲಿಸಿದ ಜಿಲ್ಲಾ ಉಸ್ತುವಾರಿ ಸಚಿವ ವೆಂಕಟೇಶ್

# ಕೊಳ್ಳೇಗಾಲದ ಪ್ರವಾಹ ಪೀಡಿತ ಗ್ರಾಮಗಳಿಗೆ ಸಚಿವರ ಭೇಟಿ

**ಚಾಮರಾಜನಗರ:** ಕೊಳ್ಳೇಗಾಲ ತಾಲೂಕಿನ ನದಿ ಪಾತ್ರದ ಪ್ರವಾಹ ಪೀಡಿತ ಗ್ರಾಮಗಳು ಹಾಗೂ ಪ್ರವಾಹ ಸಂತ್ರಸ್ತರಿಗೆ ತೆರೆಯಲಾಗಿರುವ ಕಾಳಜಿ ಕೇಂದ್ರಗಳಿಗೆ ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಭೇಟಿ ನೀಡಿ ಪರಿಶೀಲಿಸಿದರು.

ಕೊಳ್ಳೇಗಾಲ ಪಟ್ಟಣದ ಮಹದೇಶ್ವರ ಕಾಲೇಜು ಬಳಿಯಿರುವ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳಲ್ಲಿ ತೆರೆಯಲಾಗಿರುವ ಕಾಳಜಿ ಕೇಂದ್ರಕ್ಕೆ ಉಸ್ತುವಾರಿ ಸಚಿವರು, ಶಾಸಕರಾದ ಎ.ಆರ್. ಕೃಷ್ಣಮೂರ್ತಿ, ಎಂ.ಆರ್. ಮಂಜುನಾಥ್ ಅವರೊಂದಿಗೆ ಭೇಟಿ ಕೊಟ್ಟು ವೀಕ್ಷಿಸಿದರು. ಕಾಳಜಿ ಕೇಂದ್ರದಲ್ಲಿ ನೀಡಲಾಗುತ್ತಿರುವ ಊಟ, ಉಪಹಾರಗಳು ಇನ್ನಿತರ ಸೌಲಭ್ಯಗಳನ್ನು ಪರಿಶೀಲಿಸಿದರು.

ಡಿ. ದೇವರಾಜು ಅರಸು ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯದಲ್ಲಿ ಆರಂಭಿಸಿರುವ ಕಾಳಜಿ ಕೇಂದ್ರಕ್ಕೂ ಭೇಟಿ ನೀಡಿದ ಉಸ್ತುವಾರಿ ಸಚಿವರು ಸಂತ್ರಸ್ತರೊಂದಿಗೆ ಮಾತನಾಡಿದರು. ನಿಮಗೆ ನೀಡುತ್ತಿರುವ ಊಟ ಉಪಹಾರ



ಚೆನ್ನಾಗಿದೆಯೇ, ಇತರೆ ಸೌಕರ್ಯಗಳು ನೀಡಲಾಗುತ್ತಿದೆಯೇ ಎಂದು ಪ್ರಶ್ನಿಸಿದರು. ನೀರು ಕಡಿಮೆಯಾದ ನಂತರ ನಿಮ್ಮ ಗ್ರಾಮಗಳಿಗೆ ಕಳುಹಿಸಿಕೊಡಲಿದ್ದೇವೆ. ಅಲ್ಲಿಯವರೆಗೂ ನೀವು ಇಲ್ಲಿಯೇ ಉಳಿಯಬೇಕು. ಯಾವುದೇ ತೊಂದರೆಗಳಿದ್ದರೂ ಪರಿಹರಿಸುತ್ತೇವೆ ಎಂದರು.

ಮುಳ್ಳೂರು ಗ್ರಾಮದಲ್ಲಿ ತೆರೆಯಲಾಗಿರುವ ಕಾಳಜಿ ಕೇಂದ್ರಕ್ಕೂ ತೆರಳಿ ಅಲ್ಲಿನ ಸಂತ್ರಸ್ತರ ಅಹವಾಲುಗಳನ್ನು ಆಲಿಸಿದರು. ಮಳೆ ಹೆಚ್ಚಾದಾಗ ಉಂಟಾಗುವ ಪ್ರವಾಹದಿಂದ ಸಾಕಷ್ಟು ವರ್ಷಗಳಿಂದ ತೊಂದರೆ ಅನುಭವಿಸುತ್ತಿದೇವೆ. ಇದಕ್ಕೆ ಶಾಶ್ವತ ಪರಿಹಾರ ಒದಗಿಸಬೇಕು ಎಂದು ಗ್ರಾಮಸ್ಥರು ಮನವಿ ಮಾಡಿದರು.

ಪ್ರವಾಹ ಪೀಡಿತ ದಾಸನಪುರ ಗ್ರಾಮಕ್ಕೆ ಭೇಟಿ ನೀಡಿ ಪ್ರವಾಹ ಪರಿಸ್ಥಿತಿ ಅವಲೋಕಿಸಿದ ಸಚಿವರು ಗ್ರಾಮಕ್ಕೆ ನೀರು ನುಗ್ಗಿದ ಪರಿಣಾಮ ಹಾನಿಯಾಗಿರುವ ಮನೆಗಳನ್ನು ವೀಕ್ಷಿಸಿದರು. ಸ್ಥಳೀಯರ ಮನವಿ ಆಲಿಸಿ ಹಾನಿಗೀಡಾದ ಮನೆಗಳನ್ನು ನಿರ್ಮಾಣ ಮಾಡಿಕೊಡಲು ಸರ್ವೆ ಕಾರ್ಯ ನಡೆಸಲು ಸೂಚಿಸಲಾಗುವುದು. ಬೆಳೆ ಹಾನಿಗೂ ಸೂಕ್ತ ಪರಿಹಾರ ಒದಗಿಸಲು ಅಧಿಕಾರಿಗಳು ಪರಿಶೀಲನೆ ನಡೆಸಲಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ತಿಳಿಸಿದರು.

ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಅವರು ಮಾತನಾಡಿ ಈಗಾಗಲೇ ಅಧಿಕಾರಿಗಳಿಗೆ ಪ್ರವಾಹದಿಂದ ಉಂಟಾಗಿರುವ ಹಾನಿ ಕುರಿತು ವಿವರವಾದ ವರದಿ ನೀಡಲು ತಿಳಿಸಲಾಗಿದೆ. ಸಮೀಕ್ಷೆ ವರದಿ ಬಂದ ಕೂಡಲೇ ಎಲ್ಲಾ ಪರಿಹಾರ ಕ್ರಮಗಳಿಗೆ ಮುಂದಾಗಲಿದ್ದೇವೆ ಎಂದರು.

ಮುಳ್ಳೂರು ಗ್ರಾಮದಲ್ಲಿ ಭೇಟಿ ನೀಡಿದ ವೇಳೆ ಸ್ಥಳೀಯರು ಇಲ್ಲಿನ ಸಣ್ಣ ಕಾಲುವೆ ಗಳಲ್ಲಿ ಹೂಳು ತೆಗೆಯಬೇಕು. ಗ್ರಾಮದಲ್ಲಿ ನೀರು ಆವೃತವಾಗದಂತೆ ಶಾಶ್ವತ ಕಾಮಗಾರಿ ಕೈಗೊಳ್ಳಬೇಕು. ಜಾನುವಾರುಗಳಿಗೆ ಸೂಕ್ತ ಮೇವು ಒದಗಿಸಬೇಕು ಎಂದು ಸಚಿವರಿಗೆ ಕೋರಿದರು.

ಕಾಡಾ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಮಾಜಿ ಶಾಸಕರಾದ ಆರ್. ನರೇಂದ್ರ, ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಮೋನಾ ರೊತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ, ಉಪವಿಭಾಗಾಧಿಕಾರಿ ಮಹೇಶ್, ತಹಶೀಲ್ದಾರ್ ಮಂಜುಳಾ, ಇತರರು ಇದ್ದರು.

# ಭೂಕುಸಿತ ನಿರಾಶ್ರಿರಿಗೆ ನೆರವು

**ಗುಂಡ್ಲುಪೇಟೆ:** ಕೇರಳ ರಾಜ್ಯದ ವಯನಾಡ್ ಜಿಲ್ಲೆಯ ಮೇಪಾಡಿ ಗ್ರಾಮದಲ್ಲಿ ಸಂಭವಿಸಿದ ಭೂಕುಸಿತದಿಂದ ನಿರಾಶ್ರಿತರಾಗಿರುವ ಜನರಿಗೆ ಆಹಾರ ಮತ್ತು ಇನ್ನಿತರ ಮೂಲಭೂತ ವಸ್ತುಗಳನ್ನು ನೀಡುವ ನಿಟ್ಟಿನಲ್ಲಿ ಕರುನಾಡ ಯುವಶಕ್ತಿ ಸಂಘಟನೆಯ ವತಿಯಿಂದ ಶನಿವಾರ ಅಗತ್ಯ ವಸ್ತುಗಳನ್ನು ಸಂತ್ರಸ್ತರಿಗೆ ತಲುಪಿಸಿದರು.

ನಿರಾಶ್ರಿತರಿಗೆ ನೆರವು ನೀಡುವ ನಿಟ್ಟಿನಲ್ಲಿ ಕರುನಾಡ ಯುವಶಕ್ತಿ ಸಂಘಟನೆ ಅಧ್ಯಕ್ಷ ಮುನೀರ್ ನೇತೃತ್ವದಲ್ಲಿ ಸ್ನೇಹಿತರ ಬಳಗದ ಮುಖಂಡರು ಸುಮಾರು 30 ಸಾವಿರ ರೂ ಪ್ರಮಾಣದ ದಿನನಿತ್ಯ ಬಳಕೆಯ ಪದಾರ್ಥಗಳು ಹಾಗೂ ತಿಂಡಿ ತಿನಿಸುಗಳನ್ನು ಒಂದು ಟಾಟಾ ಏಸ್ ವಾಹನವು ವಯನಾಡ್ ಜಿಲ್ಲೆಗೆ ಪ್ರಯಾಣ ಬೆಳೆಸಿತು. ಕರುನಾಡ ಯುವಶಕ್ತಿ ಸಂಘಟನೆ ಅಧ್ಯಕ್ಷ ಮುನೀರ್ ಪಾಷಾ ಮಾತನಾಡಿ ಕೇರಳದಲ್ಲಿ ಮೊನ್ನೆಯಷ್ಟೇ ಭೂಕುಸಿತದಿಂದ ಆ ಭಾಗದಲ್ಲಿನ ಪರಿಸ್ಥಿತಿ ಘನಘೋರವಾಗಿದೆ, ಪ್ರವಾಹ ಪೀಡಿತ ನಿರಾಶ್ರಿತರಿಗೆ ನೆರವಾಗುವ ನಿಟ್ಟಿನಲ್ಲಿ ಯುವ ಶಕ್ತಿ ಸಂಘಟನೆಯ ಸ್ನೇಹ ಬಳಗ ಹಾಗೂ ಕುಮಾರ್ ಅವರು ಸೇರಿ ಅಗತ್ಯ ವಸ್ತುಗಳನ್ನು ರವಾನಿಸುವ ಮೂಲಕ ನೆರವು ನೀಡುತ್ತಿರುವುದಾಗಿ ಹೇಳಿದರು. ವಯನಾಡಿನಲ್ಲಿ ಆದ ಭೂಕುಸಿತದಿಂದ ಜನ ಸಾಮಾನ್ಯರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ, ಇಂತಹ ಸಮಯದಲ್ಲಿ ಸಣ್ಣ ಸಹಾಯ ನೀಡಲು ನಿರ್ಧರಿಸಲಾಗಿದೆ, ಮೊದಲ ಹಂತವಾಗಿ ಒಂದು ವಾಹನದಲ್ಲಿ ನಮ್ಮ ಸಂಘಟನೆ ವತಿಯಿಂದ ಹಾಗೂ ವಿವಿಧ ಕ್ಷೇತ್ರಗಳಿಂದ ಬಂದ ಅಗತ್ಯ ಸಾಮಗ್ರಿಗಳನ್ನು ಕಳುಹಿಸಲಾಗಿದೆ. ಸಾವಿರಾರು ಜನರು ಮನೆ ಮಠ ತೊರೆದು ನಿರಾಶ್ರಿತ ಕೇಂದ್ರಗಳಲ್ಲಿ ಆಶ್ರಯ ಪಡೆದಿದ್ದಾರೆ. ಇಂತಹ ಸನ್ನಿವೇಶದಲ್ಲಿ ಎಲ್ಲಾ ಸಾರ್ವಜನಿಕರು ಮುಂದಿನ ದಿನಗಳಲ್ಲಿ ಇನ್ನಷ್ಟು ಸಹಾಯ ಮಾಡಿ ಅವರ ಜೊತೆ ಕೈ ಜೋಡಿಸೋಣ ಎಂದು ತಿಳಿಸಿದರು. ಕುಮಾರ್ (ಇಲಿಯಾಸ್), ಮಾದೇಶ, ಕಾಳಿಂಗಸ್ವಾಮಿ, ಮುಬಾರಕ್, ಮಂಜು ಮತ್ತಿತರರು ಇದ್ದರು.




# ವ್ಯಸನಮುಕ್ತಿಯಿಂದ ನೆಮ್ಮದಿ ಜೀವನ

## ಸುತ್ತೂರು ಶ್ರೀಶಿವರಾತ್ರಿ ದೇಶೀಕೇಂದ್ರ ಸ್ವಾಮೀಜಿ ಅಭಿಮತ

**ಚಾಮರಾಜನಗರ:** ಒಬ್ಬ ವ್ಯಕ್ತಿ ಕುಡಿತಕ್ಕೆ ದಾಸನಾದರೆ ಅವನ ಆರೋಗ್ಯ ಹದಗೆಡುವುದರ ಜೊತೆಗೆ ಅವನ ಘನತೆಗೆ ಕುಂದುಂಟಾಗಿ ಸಮಾಜದ ಸ್ವಾಸ್ಥ ಕೂಡ ಹಾಳಾಗುತ್ತದೆ ಹೀಗಾಗಿ ವ್ಯಸನಿಗಳು ವ್ಯಸನಮುಕ್ತರಾಗುವುದರಿಂದ ನೆಮ್ಮದಿಯ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂದು ಸುತ್ತೂರು ಶ್ರೀ ಶಿವರಾತ್ರಿ ದೇಶೀಕೇಂದ್ರ ಮಹಾಸ್ವಾಮಿಗಳು ಸಲಹೆ ನೀಡಿದರು.



ಅವರು ಮೈಸೂರಿನ ಜೆಎಸ್‌ಎಸ್ ಮಹಾವಿದ್ಯಾಪೀಠ ಹಾಗೂ ಅನೇಕ ಸ್ಥಳೀಯ ಸಂಘ ಸಂಸ್ಥೆಗಳ ಜೊತೆಗೂಡಿ ಯಳಂದೂರಿನ ಡಾ. ಬಿ. ಆರ್. ಅಂಬೇಡ್ಕರ್ ಭವನದಲ್ಲಿ ಕಳೆದ ಒಂದು ವಾರದಿಂದ ಏರ್ಪಡಿಸಲಾಗಿದ್ದ ಉಚಿತ ಕುಡಿತ ಬಿಡಿಸುವ ಶಿಬಿರ ಕಾರ್ಯಕ್ರಮದ ಸಮಾರೋಪದಲ್ಲಿ ಮಾತನಾಡಿದರು.

ಮದ್ಯಪಾನ ಧೂಮಪಾನಗಳಂತಹ ವ್ಯಸನಗಳಿಂದ ಜನರು ಮುಕ್ತರಾಗಬೇಕಿದೆ. ನಾವು ವ್ಯಸನಕ್ಕೆ ದಾಸರಾದರೆ ಅದರಿಂದ ಹೊರಬರುವುದು ಬಲು ಕಠಿಣ. ಕುಡಿತವು ಸಾರ್ವಕಾಲಿಕ ಸಮಸ್ಯೆಯಾಗಿದೆ. ಇದರಿಂದ ಅನೇಕ ದುಷ್ಪರಿಣಾಮಗಳು ಉಂಟಾಗುತ್ತದೆ. ವ್ಯಕ್ತಿಯ ಘನತೆ ಹಾಗೂ ಆರೋಗ್ಯಕ್ಕೆ ಕುಂದುಂಟಾಗುತ್ತದೆ. ಸಮಾಜ ಹಾಗೂ ಸಮುದಾಯಗಳ ಸ್ವಾಸ್ಥ್ಯವೂ ಹದಗೆಡುತ್ತದೆ. ಇದರಿಂದ ಇದರ ಜಾಡ್ಯಕ್ಕೆ ಒಳಗಾದವರು ಇದರಿಂದ ಮುಕ್ತರಾಗುವ ಪಣ ತೊಡಬೇಕು. ಆಮೂಲಕ ಸಮಾಜಕ್ಕೆ ಉತ್ತಮ ಸಂದೇಶ ಸಾರಬೇಕೆಂದ ಅವರು ಇದಕ್ಕಾಗಿ ಜೆಎಸ್ ಎಸ್ ಸಂಸ್ಥೆಯು ಕಾರ್ಯಪ್ರವೃತ್ತವಾಗಿದ್ದು, ಇಂತಹ ಸಮಾಜಮುಖಿ ಕೆಲಸ ಕಾರ್ಯಗಳಲ್ಲಿ ತೊಡಗಿಕೊಂಡಿದೆ. ಇದರ ಮಾಹಿತಿ ಇರುವವರು ಮುಂದಿನ ದಿನಗಳಲ್ಲಿ ಇಂತಹ ಮದ್ಯವ್ಯಸನಿಗಳನ್ನು ಗುರುತಿಸಿ, ಅಂತಹವರನ್ನು ಇಂತಹ ಶಿಬಿರಗಳಿಗೆ ದಾಖಲು ಮಾಡಿ, ಅವರನ್ನು ಬದಲಾಯಿಸುವ ನಿಟ್ಟಿನಲ್ಲಿ ಶ್ರಮಿಸಬೇಕು. 10 ದಿನಗಳ ಕಾಲ ನಡೆದ ಶಿಬಿರದಲ್ಲಿ ಸುಮಾರು 30 ಮಂದಿ ಪಾಲ್ಗೊಂಡು ಇದೀಗ ವ್ಯಸನಮುಕ್ತರಾಗಿದ್ದಾರೆ. ಮುಂದಿನ ದಿನಗಳಲ್ಲಿಯೂ ಸಹ ಪುನಃ ಇಂತಹ ಚಟಗಳಿಗೆ ಬಲಿಯಾಗದೇ ಸಾರ್ಥಕ ಜೀವನ ನಡೆಸಬೇಕೆಂದು ಕರೆ ನೀಡಿದರು.

ಕೊಳ್ಳೇಗಾಲ ಮೀಸಲು ವಿಧಾನಸಭಾ ಕ್ಷೇತ್ರದ ಶಾಸಕ ಎ. ಆರ್. ಕೃಷ್ಣಮೂರ್ತಿ ಮಾತನಾಡಿ ಜಿಲ್ಲೆಯ ಬಹುತೇಕ ಭಾಗಗಳಿಂದ ಶಿಬಿರದಲ್ಲಿ ಪಾಲ್ಗೊಂಡಿದ್ದು, ಇವರಿಗೆ ಪ್ರತಿನಿತ್ಯ, ಧ್ಯಾನ, ಯೋಗ, ಪ್ರವಚನ, ಸಾಂಸ್ಕೃತಿಕ ಕಾರ್ಯಕ್ರಮ, ಮನೋಲ್ಲಾಸ ಚಟುವಟಿಕೆಗಳು, ಆರೋಗ್ಯ ತಪಾಸಣೆ, ವಿಚಾರ ವಿನಿಮಯ, ಸಮೂಹ ಚರ್ಚೆ, ಆಟೋಟ, ನಾಟಕಗಳು ಸೇರಿದಂತೆ ಇನ್ನಿತರ ಕಾರ್ಯಕ್ರಮಗಳ ಮೂಲಕ ಮಧ್ಯಪಾನದಿಂದಾಗುವ ಸಮಸ್ಯೆಗಳ ಕುರಿತು ತಿಳಿಹೇಳಲಾಗಿದೆ. ಸಾಮಾಜಿಕ ಪಿಡುಗಾಗಿರುವ ಕುಡಿತದಿಂದ ಮನೆಯಲ್ಲಿ ನೆಮ್ಮದಿ ಇಲ್ಲದಂತಾಗಿ, ಹೆಂಡತಿ, ಮಕ್ಕಳೆನ್ನದೇ ಕುಟುಂಬದಲ್ಲಿ ತೊಂದರೆಗಳುಂಟಾಗುತ್ತದೆ. ಬದುಕಿಗೆ ತೊಡಕೆನಿಸಿರುವ ಕುಡಿತದ ಅಭ್ಯಾಸವನ್ನು ಬಿಟ್ಟು ಇದೀಗ ವ್ಯಸನಮುಕ್ತರಾಗಿ ಹೊಸ ಬದುಕು ನಡೆಸಲು ಹೊರಟಿರುವ ಶಿಬಿರಾರ್ಥಿಗಳು ಸಮಾಜಮುಖಿ ಕೆಲಸ ಕಾರ್ಯಗಳಲ್ಲಿ ತಮ್ಮನ್ನು ತೊಡಗಿಸಿಕೊಂಡು ಉತ್ತಮ ಜೀವನ ನಡೆಸಬೇಕೆಂದು ಸಲಹೆ ನೀಡಿದರು. ಶಿಬಿರಾರ್ಥಿ ಮಾರ್ಟಳ್ಳಿಯ ಸೆಲ್ವಾನಾಥನ್ ಮಾತನಾಡಿ ತಾವು ಕುಡಿತ ಚಟಕ್ಕೆ ಬಲಿಯಾಗಿ ಕೆಲಸ ಹಾಗೂ ಕುಟುಂಬವನ್ನು ಕಳೆದುಕೊಳ್ಳಬೇಕಾಯಿತು. ಇದರಿಂದ ಘಾಸಿಯಾದ ನಾನು ಕುಡಿತ ಬಿಡಬೇಕೆಂಬ ಪಣ ತೊಟ್ಟು ಈಗ ಶಿಬಿರಕ್ಕೆ ದಾಖಲಾಗಿ ಇಂದು ಕುಡಿತದ ಚಟದಿಂದ ಮುಕ್ತನಾಗಿದ್ದೇನೆ. ಮುಂದಿನ ದಿನಗಳಲ್ಲಿ ಮಾದರಿ ಜೀವನ ನಡೆಸಲಿದ್ದೇನೆ ಎಂದರು.

ಅಗರ ಮಠದ ಶ್ರೀ ಸಿದ್ದಮಲ್ಲಸ್ವಾಮಿ, ಕಾರಾಪುರ ಮಠದ ಬಸವರಾಜಸ್ವಾಮಿ, ಗೌಡಹಳ್ಳಿ ಮಠದ ಮರಿತೋಂಟದಾರ್ಯಸ್ವಾಮಿ, ಕೆಸ್ತೂರು ಮಠದ ತೋಂಟದಾರ್ಯ ಸ್ವಾಮಿಗಳು ಆಶೀರ್ವಚನ ನೀಡಿದರು. ಕಾರ್ಯಕ್ರಮದಲ್ಲಿ ಡಿ ಜಿ ರಾಜೇಶ್, ವಿ ಮಲ್ಲಿಕಾರ್ಜುನಸ್ವಾಮಿ, ಶಿಬಿರಾಧಿಕಾರಿ ಮನೋಹರ್, ಡಾ ನಾಗೇಂದ್ರ, ಸೇರಿದಂತೆ ಇತರರು ಹಾಜರಿದ್ದರು.

# ರಸ್ತೆ ಒತ್ತುವರಿ ತೆರವಿಗೆ ಆಗ್ರಹ



**ಮಂಡ್ಯ:** ಹಲ್ಲೇಗೆರೆ ಸಂತೇಮಾಳ ಸ್ಥಳ ಮತ್ತು ಗ್ರಾಮಕ್ಕೆ ಸಂಪರ್ಕಿಸುವ ರಸ್ತೆ ಒತ್ತುವರಿ ತೆರವುಗೊಳಿಸಬೇಕು ಎಂದು ಆಗ್ರಹಿಸಿ ಹಲ್ಲೆಗೆರೆ ಮತ್ತು ಚಂದಗಾಲು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಸ್ಥರು ಮತ್ತು ಸದಸ್ಯರು ರಸ್ತೆ ತಡೆ ಮಾಡಿ ಧರಣಿ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಗ್ರಾಮ ಪಂಚಾಯಿತಿ ಸದಸ್ಯ ಕೃಷ್ಣ, ಶಿರಾ ಮತ್ತು ಮಂಡ್ಯ ರಾಜ್ಯ ಹೆದ್ದಾರಿಗೆ ಸಂಬಂಧಿಸಿದಂತೆ ಕಳೆದ ಎರಡು ವರ್ಷಗಳಿಂದಲೂ ಕೆಲಸ ಮಾಡಿಕೊಂಡು ಬರುತ್ತಿದ್ದಾರೆ, ಆದರೆ ರಸ್ತೆ ದುರಸ್ತಿ ಕಾರ್ಯ ಮಾತ್ರ ಪರಿಪೂರ್ಣವಾಗಿಲ್ಲ, ನಮ್ಮ ಗ್ರಾಮದ ಸಂತೇಮಾಳವನ್ನು ಕಡೆಗಣಿಸಿ ಅದರ ಸ್ಥಳವನ್ನು ಒತ್ತುವರಿ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದರು. ಉತ್ತಮ ರಸ್ತೆ ನಿರ್ಮಿಸುವ ಮೂಲಕ ರಾಜ್ಯ ಹೆದ್ದಾರಿಯಲ್ಲಿ ಮುಕ್ತವಾಗಿ ಸಂಚಾರ ಮಾಡಲು ಅವಕಾಶ ಮಾಡಿಕೊಡಬೇಕು. ಈಗ ನಕಲಿ ಆರ್ಟಿಸಿ ಸೃಷ್ಟಿಸಿಕೊಂಡಿರುವ ಕೆಲವು ಸಂತೇಮಾಳದ ಸ್ಥಳದವರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಿ ತಕ್ಷಣವೇ ಉಪಯೋಗಕ್ಕೆ ಅವಕಾಶ ಮಾಡಿಕೊಡಬೇಕು ಎಂದು ಆಗ್ರಹಿಸಿದರು.

ರೈತ ಸಂಘದ ಮುಖಂಡ ಹಲ್ಲೇಗೆರೆ ಹರೀಶ್ ಮಾತನಾಡಿ, ರಸ್ತೆ ಅಭಿವೃದ್ಧಿಯಾಗಿದೆ ಎಂದು ನಮ್ಮ ಭಾಗದ ರಸ್ತೆಯ ಹಣವನ್ನು ಗುತ್ತಿಗೆದಾರ ತೆಗೆದುಕೊಂಡಿದ್ದಾನೆ, ಒಂದು ಭಾಗದ ರಸ್ತೆ ಕಡೆಯವರು ಒತ್ತುವರಿಯಾಗಿದೆ ಎಂದರೆ ಮತ್ತೊಂದು ಬದಿಯ ಜನರು ಒತ್ತುವರಿಯಾಗಿಲ್ಲ ಎನ್ನುತ್ತಾರೆ, ಇದನ್ನು ಜಿಲ್ಲಾಡಳಿತ ಮತ್ತು ರಾಜ್ಯ ಸರ್ಕಾರ ನಿರ್ಲಕ್ಷ್ಯ ಮಾಡಿದೆ. ನಿಜವಾಗಲೂ ರಸ್ತೆ ಒತ್ತುವರಿಯಾಗಿದ್ದರೆ ಅವರಿಗೆ ಪರಿಹಾರ ನೀಡಬೇಕು. ಜೊತೆಗೆ ಒತ್ತುವರಿ ಮಾಡಿಕೊಂಡಿರುವ ಕಡೆ ತೆರವುಗೊಳಿಸಿ ಸಂಚಾರಕ್ಕೆ ಅವಕಾಶ ಮಾಡಿಕೊಡಬೇಕು ಎಂದು ಮನವಿ ಮಾಡಿದರು.

ಮುಖಂಡ ಚಲ್ಲನಾಯಕನಹಳ್ಳಿ ಸುರೇಶ್ ಮಾತನಾಡಿ, ಕರ್ನಾಟಕ ರಾಜ್ಯ ರಸ್ತೆಯು 2002ರಲ್ಲಿ ಡಿಪಿಆರ್ ಆಗಿದೆ ಅದರ ಕಾಫಿ ಇದೆ, ಎಲ್ಲಿ ಒತ್ತುವರಿಯಾಗಿದೆ ಎಂಬುದನ್ನು ತಿಳಿದು ಬಿಡಿಸಬೇಕು. ಈ ಹಿಂದೆ ಭೂ ಸ್ವಾಧೀನ ಆಗಿರುವುದನ್ನು ಬಿಟ್ಟು ಬೇರೆ ಜಾಗವನ್ನು ತೆಗೆದುಕೊಂಡಿದ್ದಾರೆ, ಅದನ್ನು ಬಿಟ್ಟು ಮೂಲ ಭೂ ಸ್ವಾಧೀನವಾಗಿರುವ ಕಡೆ ರಸ್ತೆ ನಿರ್ಮಾಣ ಮಾಡಿ ರೈತರಿಗೆ ಪರಿಹಾರ ನೀಡಲಿ ಎಂದು ಒತ್ತಾಯಿಸಿದರು. ಕಳೆದ ವಾರದ ಹಿಂದೆ ಬಂದ ಎಸಿ ಮತ್ತು ತಹಶೀಲ್ದಾರ್, ಜಿಲ್ಲಾ ಪಂಚಾಯಿಯಿ ಸಿಇಒ ಅವರು ಸ್ಥಳ ಪರಿಶೀಲನೆ ಮಾಡಿದ್ದಾರೆ, ಮೂಲ ರಸ್ತೆ ಎಲ್ಲಿ ಹೋಗಬೇಕು ಎನ್ನುವುದನ್ನು ತಿಳಿಸಿದ್ದಾರೆ, 2010 ರಲ್ಲಿಯೂ ಈ ಹಿಂದೆ ಆದಂತಹ ಡಿಪಿಆರ್ ಅನ್ನು ಮುಂದುವರಿಸುತ್ತಾರೆ, ಈ ಸಂಬಂಧಪಟ್ಟ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿಗೆ ಹೇಳಿದರೆ ನಮ್ಮ ಜನರ ಮೇಲೆಯೇ ಆರೋಪ ಮಾಡುತ್ತಾರೆ, ಅವರಿಗೆ ಒಂದು ಮತಕ್ಕೂ ನಾವು ಬೇಕಿತ್ತು ಈಗ ಬೇಡ, ಅದೇ ಶಾಸಕ ರವಿಕುಮಾರ್ ಗಣಿಗ ಅವರು ಸಮಸ್ಯೆ ಬಗೆಹರಿಸುವ ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.

ಧರಣಿಯಲ್ಲಿ ಗ್ರಾ.ಪಂ.ಅಧ್ಯಕ್ಷೆ ಸುಮ, ಉಪಾಧ್ಯಕ್ಷೆ ಭಾಗ್ಯಮ್ಮ, ಮುಖಂಡರಾದ ನಿಂಗರಾಜು, ಸಿ.ಕೆ.ಪಾಪಯ್ಯ, ಕರೀಗೌಡ, ಚಲ್ಲನಾಯಕನಹಳ್ಳಿ ಶಂಕರ್, ರಾಜಣ್ಣ, ದಯಾನಂದ, ರಾಮಲಿಂಗಯ್ಯ, ಮಣಿ, ಶಶಿ, ವಿಜಯೇಂದ್ರ ಭಾಗವಹಿಸಿದ್ದರು.

# ಮನರೇಗಾ ಸದುಪಯೋಗ ಪಡೆದುಕೊಳ್ಳಿ

**ಯಳಂದೂರು:** ಬೆಟ್ಟಪ್ರದೇಶದಲ್ಲಿ ಬುಡಕಟ್ಟು ಜನಾಂಗದವರು ಹಾಗೂ ಇತರೆ ಬಡ ಕೂಲಿ ಕಾರ್ಮಿಕರಿಗೆ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ವರದಾನವಾಗಿದ್ದು ಇಲ್ಲಿನ ಸಾರ್ವಜನಿಕರು ಇದರ ಲಾಭವನ್ನು ಪಡೆದುಕೊಳ್ಳಬೇಕು ಎಂದು ಬಿಳಿಗಿರಿರಂಗನಬೆಟ್ಟದ ಗ್ರಾಪಂ ಅಧ್ಯಕ್ಷ ಸಿ. ಪ್ರತೀಪ್‌ಕುಮಾರ್ ಸಲಹೆ ನೀಡಿದರು.

ಅವರು ಶನಿವಾರ ಇಲ್ಲಿನ ಗ್ರಾಮ ಪಂಚಾಯಿತಿ ಕಚೇರಿಯ ಸಭಾಂಗಣದಲ್ಲಿ ನಡೆದ ಸಾಮಾಜಿಕ ಲೆಕ್ಕತಪಾಸಣಾ ವಿಶೇಷ ಗ್ರಾಮಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಬೆಟ್ಟದಲ್ಲಿ ಗಿರಿಜನರು ಕಿರು ಅರಣ್ಯ ಉತ್ಪನ್ನಗಳನ್ನು ಸಂಗ್ರಹಿಸಿ ತಮ್ಮ ಜೀವವನ್ನು ಕಟ್ಟಿಕೊಳ್ಳುತ್ತಿದ್ದಾರೆ. ಆದರೆ ಮಳೆಗಾಲದಲ್ಲಿ ಕಾಡಿಗೆ ತೆರಳಲು ಸಾಧ್ಯವಾಗದ ಪರಿಸ್ಥಿತಿ ಇರುತ್ತದೆ. ಇಲ್ಲಿನ ಗಿರಿಜನರೂ ಸೇರಿದಂತೆ ಅನೇಕರಿಗೆ ಕೃಷಿ ಜಮೀನು ಇದೆ. ನರೇಗಾ ಯೋಜನೆಯಡಿಯಲ್ಲಿ ತಮ್ಮ ಕೃಷಿ ಭೂಮಿಯನ್ನು ಅಭಿವೃದ್ಧಿ ಮಾಡಿಕೊಳ್ಳಲು ಅವಕಾಶವಿದ್ದು ಇದರ ಲಾಭವನ್ನು ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಪಿಡಿಒ ಸಿ.ಎನ್. ಕಾವ್ಯ ಮಾತನಾಡಿ, ಈ ಪಂಚಾಯಿತಿ ವ್ಯಾಪ್ತಿಯಲ್ಲಿ ಕಳೆದ ಆರ್ಥಿಕ ವರ್ಷದಲ್ಲಿ ಒಟ್ಟು 199 ಕಾಮಗಾರಿಗಳನ್ನು ಮಾಡಲಾಗಿದೆ. ಇದರಲ್ಲಿ 08 ಸಮುದಾಯ ಕಾಮಗಾರಿಗಳಲ್ಲಿ 8.6ಲಕ್ಷ ರೂ. 191 ವೈಯುಕ್ತಿಕ ಕಾಮಗಾರಿಗಳಿಗೆ 13.7 ಲಕ್ಷ ರೂ.ಗಳು ಅರಣ್ಯ ಇಲಾಖೆಯ ವತಿಯಿಂದ ಸೀಗೇಬೆಟ್ಟ ಪೋಡಿನಿಂದ ಸೋಮೇಶ್ವರ ಕೆರೆಯ ತನಕ ರಸ್ತೆ ಬದಿಯಲ್ಲಿ ಗಿಡ ನೆಟ್ಟಿರುವ ಒಂದು ಕಾಮಗಾರಿಗೆ 78,627 ರೂ. ಕಾಮಗಾರಿ ಸೇರಿದಂತೆ ಒಟ್ಟು 23.18 ಲಕ್ಷ ರೂ.ಗಳ ಕಾಮಗಾರಿಗಳು ನಡೆದಿದ್ದು ನೂರಾರು ಮಾನವ ದಿನಗಳನ್ನು ಸೃಜನೆ ಮಾಡಲಾಗಿದೆ. ಇಲ್ಲಿ ಕಾಮಗಾರಿಗಳನ್ನು ಮಾಡಲು ಅವಕಾಶಗಳು ಹೇರಳವಾಗಿದ್ದು ಸಾರ್ವಜನಿಕರು ಇದರ ಲಾಭವನ್ನು ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು. ಜಿಪಂ ಮಾಜಿ ಉಪಾಧ್ಯಕ್ಷೆ ಕೇತಮ್ಮ, ಬೊಮ್ಮಯ್ಯ ಉಪಾಧ್ಯಕ್ಷೆ ಕಮಲಮ್ಮ ಸದಸ್ಯರಾದ ಸಿ.ಡಿ. ಮಹದೇವ, ಸಾಕಮ್ಮ, ರಂಗಮ್ಮ, ಕಮಲಮ್ಮ, ಮಾದಮ್ಮ, ಬಸವಣ್ಣ ಗ್ರಾಪಂ ಕಾರ್ಯದರ್ಶಿ ನಟರಾಜು, ನರೇಗಾ ಮಾಹಿತಿ ಸಂಚಾಲಕ ಹರೀಶ್, ತಾಲೂಕು ವ್ಯವಸ್ಥಾಪಕ ಸಿ. ಪ್ರಸನ್ನ, ನಾಗೇಂದ್ರ, ಬಸವಣ್ಣ, ಸೇರಿದಂತೆ ಅನೇಕರು ಇದ್ದರು.

# ಅಧ್ಯಕ್ಷರಾಗಿ ರಮೇಶ್ ಅವಿರೋಧ ಆಯ್ಕೆ



**ಕೆ.ಆರ್.ಪೇಟೆ :** ತಾಲ್ಲೂಕು ಶಿಕ್ಷಣ ಇಲಾಖೆಯ ನೌಕರರ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಆರ್. ಕೆ.ರಮೇಶ್ ಅವಿರೋಧವಾಗಿ ಆಯ್ಕೆಯಾದರು.ಕಳೆದ ಹದಿನೈದು ದಿನಗಳ ಹಿಂದೆ ಶಿಕ್ಷಣ ಇಲಾಖೆಯ ನೌಕರರ ಪತ್ತಿನ ಸಹಕಾರ ಸಂಘಕ್ಕೆ ನಿರ್ದೇಶಕರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿತ್ತು. ಮಂಗಳವಾರ ನಡೆದ ಕಾರ್ಯಕಾರಿ ಮಂಡಳಿಯ ಚುನಾವಣೆಯಲ್ಲಿ ಶಿಕ್ಷಣ ಇಲಾಖೆಯ ನೌಕರರ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಅಗಸರಹಳ್ಳಿ ಸರ್ಕಾರಿ ಶಾಲೆಯ ಶಿಕ್ಷಕ ಆರ್.ಕೆ.ರಮೇಶ್, ಉಪಾಧ್ಯಕ್ಷರಾಗಿ ಆನೆಗೊಳ ಶಾಲೆಯ ಶಿಕ್ಷಕ ಕೋದಂಡರಾಮು, ಗೌರವಾಧ್ಯಕ್ಷರಾಗಿ ಅಕ್ಕಿಹೆಬ್ಬಾಳು ಶಾಲೆಯ ನಾಗಕುಮಾರ್ ಮತ್ತು ಆಂತರಿಕ ಲೆಕ್ಕ ಪರಿಶೋಧಕರಾಗಿ ಅಗ್ರಹಾರಬಾಚಹಳ್ಳಿ ಶಾಲೆಯ ಬಡ್ತಿ ಮುಖ್ಯಶಿಕ್ಷಕ ಎ.ಎಚ್.ಯೋಗೇಶ್ ಅವಿರೊಧವಾಗಿ ಆಯ್ಕೆಯಾದರು. ನೂತನ ಅಧ್ಯಕ್ಷರನ್ನು ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಪದ್ಮೇಶ್, ಕಾರ್ಯದರ್ಶಿ ಸಿ.ಟಿ.ಲಕ್ಷ್ಮಣಗೌಡ, ರಾಜ್ಯ ಉಪಾಧ್ಯಕ್ಷ ಎಲ್. ಎಸ್.ಧರ್ಮಪ್ಪ, ರಾಜ್ಯ ಸಹ ಕಾರ್ಯದರ್ಶಿ ಸಂಧ್ಯಾರಾಣಿ, ತಾಲ್ಲೂಕು ಕಸಾಪ ಅಧ್ಯಕ್ಷ ಪೂರ್ಣಚಂದ್ರ ತೇಜಸ್ವಿ, ಜಿಲ್ಲಾ ಗ್ರಾಮೀಣ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎಸ್. ಕೆ.ಹೇಮಣ್ಣ ಮುಂತಾದವರು ಅಭಿನಂದಿಸಿದ್ದಾರೆ.

## ರಸ್ತೆ ಒತ್ತುವರಿಯಿಂದ ಸಂಚಾರಕ್ಕೆ ಅಡ್ಡಿ: ಗ್ರಾಮಸ್ಥರಿಂದ ಪ್ರತಿಭಟನೆ

**ಮಂಡ್ಯ:** ಮಂಡ್ಯ ಮತ್ತು ಶಿರಾ ಎಸ್‌ಎಚ್-84 ರಾಜ್ಯ ಹೆದ್ದಾರಿಯ ರಸ್ತೆ ಮುಚ್ಚಿ ಒತ್ತುವರಿ ಮಾಡಿಕೊಂಡು ಸಂಚಾರಕ್ಕೆ ತೊಂದರೆ ಕೊಡುತ್ತಿರುವುದನ್ನು ಖಂಡಿಸಿ ಹಲ್ಲೇಗೆರೆ ಗ್ರಾಮಸ್ಥರು, ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.ಹಲ್ಲೇಗೆರೆ ಗ್ರಾಮದ ಹೆದ್ದಾರಿಗಿಳಿದ ಗ್ರಾಮಸ್ಥರು ಜಿಲ್ಲಾಡಳಿತ, ಸರ್ಕಾರ, ಜನಪ್ರತಿನಿಧಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಈ ರಾಜ್ಯ ಹೆದ್ದಾರಿಯು ಗ್ರಾಮದಲ್ಲಿ ಹಾದು ಹೋಗಿದೆ, ಗ್ರಾಮದ ಹೃದಯಭಾಗದಲ್ಲಿರುವ ಈ ರಸ್ತೆಯ ಸ್ಥಳವನ್ನು ಕೆಲವು ಜನರು ವಿನಾಕಾರಣ ಒತ್ತುವರಿ ಮಾಡಿಕೊಂಡು ಸಂಚಾರಕ್ಕೆ ಅಡ್ಡಿಪಡಿಸುತ್ತಿದ್ದಾರೆ ಎಂದು ಆರೋಪಿಸಿದ ಮುಖಂಡರು ಮತ್ತು ಗ್ರಾಮ ಪಂಚಾಯಿತಿ ಸದಸ್ಯರು, ದಿನನಿತ್ಯ ಶಾಲಾ ಕಾಲೇಜುಗಳಿಗೆ ಹೋಗುವ ವಿದ್ಯಾರ್ಥಿಗಳು, ಉದ್ಯೋಗಸ್ಥರು ಹಾಗೂ ಸಾರ್ವಜನಿಕರಿಗೆ ತೊಂದರೆ ಆಗುತ್ತಿದೆ ಎಂದು ಕಿಡಿಕಾರಿದರು. ಯಾರೋ ಒಬ್ಬರ ಹಿತಾಶಕ್ತಿಯಿಂದ ಸಂಚಾರಕ್ಕೆ ಅಡ್ಡಿ ಪಡಿಸುತ್ತಿರುವುದು ಖಂಡನೀಯವಾಗಿದೆ, ಈ ರಸ್ತೆಯ ದುರಸ್ತಿ ಮಾಡಿಸುವುದಾಗಿ ತಿಂಗಳುಗಳೇ ಕಳೆದಿವೆ, ಆದರೂ ಇತ್ತ ಯಾವ ಅಧಿಕಾರಿಗಳು ಸುಳಿದಿಲ್ಲ, ಶಾಸಕರು ಮತ್ತು ಜಿಲ್ಲಾ ಉಸ್ತುವಾರಿ ಸಚಿವರು ಇಲ್ಲಿನ ಅಧಿಕಾರಿಗಳಿಗೆ ತಕ್ಷಣವೇ ಆದೇಶ ನೀಡಿ ಸಮಸ್ಯೆ ಇತ್ಯರ್ಥ ಪಡಿಸಬೇಕು ಎಂದು ಒತ್ತಾಯಿಸಿದರು. ನಮ್ಮ ಗ್ರಾಮದಲ್ಲಿ ಕೆಸರು ಗದ್ದೆಯಾಗಿರುವ ಕಿರಿದಾದ ರಸ್ತೆಯಲ್ಲಿಯೇ ಸಂಚಾರ ಮಾಡುವ ಸ್ಥಿತಿ ನಿರ್ಮಾಣವಾಗಿದೆ, ದಿನ ನಿತ್ಯದ ಹೊಲ ಗದ್ದೆಗಳಿಗೆ ಹೋಗುವುದಕ್ಕೂ ತೊಂದರೆ ಆಗಿದೆ. ವಯೋವೃದ್ಧರು ಸಹ ಇಲ್ಲಿರುವ ಗುಂಡಿಗಳಲ್ಲಿ ಬೀಳುವಂತಾಗಿದೆ. ಎಲ್ಲರೂ ಈ ರಸ್ತೆಯನ್ನೇ ಅವಲಂಬಿಸಿರುವುದರಿಂದ ದುರಸ್ತಿ ಕಾರ್ಯವನ್ನು ತಕ್ಷಣ ಮುಗಿಸಿ ನೆರವಾಗಬೇಕು. ಇಲ್ಲವಾದರೆ ನಿರಂತರ ಧರಣಿ ಹಮ್ಮಿಕೊಳ್ಳಲಾಗುವುದು ಎಂದು ಪಿಎಲ್ಡಿ ಬ್ಯಾಂಕ್ ನಿರ್ದೇಶಕ ಸಿ.ಕೆ.ಪಾಪಯ್ಯ, ಗ್ರಾ.ಪಂ.ಅಧ್ಯಕ್ಷೆ ಎ.ಪಿ.ಸುಮಾ, ಉಪಾಧ್ಯಕ್ಷೆ ಭಾಗ್ಯಮ್ಮ, ಸದಸ್ಯರಾದ ಕರೀಗೌಡ, ರಾಮಲಿಂಗೇಗೌಡ, ಕೃಷ್ಣ, ದಯಾನಂದ್, ಶ್ರುತಿ, ಕೆ.ಎಂ.ನಾಗರಾಜು, ಗೀತಾ, ಜಯರಾಮೇಗೌಡ ಎಚ್ಚರಿಕೆ ನೀಡಿದರು. ಪ್ರತಿಭಟನೆಯಲ್ಲಿ ಮುಖಂಡರಾದ ಶಶಿಕುಮಾರ್, ಬೋರೇಗೌಡ, ವಿದ್ಯಾರ್ಥಿಗಳು ಮತ್ತು ಮಹಿಳೆಯರು ಭಾಗವಹಿಸಿದ್ದರು.

## ಸಾಮಾಜಿಕ ಕಾರ್ಯಕ್ರಮಗಳಲ್ಲಿ ತೊಡಗಿರುವ ಜೈ ಕರ್ನಾಟಕ ಪರಿಷತ್: ಶ್ಲಾಘನೆ

**ಮಂಡ್ಯ:** ಜೈ ಕರ್ನಾಟಕ ಪರಿಷತ್ ವತಿಯಿಂದ ಹಲವು ಕನ್ನಡ ಕಾರ್ಯಕ್ರಮಗಳನ್ನು ರೂಪಿಸಿ ಕನ್ನಡದ ಕಂಪು ಪಸರಿಸುತ್ತಿದೆ, ಜೊತೆಗೆ ಕಾವೇರಿ ನೀರು ಹೋರಾಟ ಸೇರಿದಂತೆ ಕನ್ನಡಿಗರ ಅಸ್ಮಿತೆಗಾಗಿ ಸದಾ ದುಡಿಯುತ್ತಿರುವ ಪರಿಷತ್ ಎಂದು ಸಾಹಿತಿ ಡಾ.ಪ್ರದೀಪಕುಮಾರ ಹೆಬ್ರಿ ಶ್ಲಾಘಿಸಿದರು. ನಗರದ ಗುತ್ತಲು ಬಡಾವಣೆಯ 28ನೇ ವಾರ್ಡಿನಲ್ಲಿ ನೂತನ ಶಾಖೆಯ ಉದ್ಘಾಟನೆ ಹಾಗೂ ಶಾಖಾ ಅಧ್ಯಕ್ಷರ ಅಭಿನಂದನಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸಂಘಟನೆಯು ಸ್ವಯಂ ಹೋರಾಟದಿಂದ ಚಿರಕಾಲ ಉಳಿಯುತ್ತದೆ. ತಂದೆ ತಾಯಿ ಮಾತ್ರ ಯಾರಿಗೂ ಬೇಡ, ಆದರೆ ಅವರ ಆಸ್ತಿ ಮಾತ್ರ ಎಲ್ಲರಿಗೂ ಬೇಕು. ಇಂಯಹ ನಡೆಯನ್ನು ಸಂಘಟನೆಗಳು ಖಂಡಿಸಿ ಅನ್ಯಾಯವಾದವರಿಗೆ ನ್ಯಾಯ ಕೊಡಿಸುವ ದಿಕ್ಕಿನಲ್ಲಿ ಸಾಗಬೇಕು ಎಂದು ಸಲಹೆ ನೀಡಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ಎಂ.ವಿ.ಧರಣೇಂದ್ರಯ್ಯ ಮಾತನಾಡಿ, ಮಂಡ್ಯ ಸೇರಿದಂತೆ ಜಿಲ್ಲೆಯಷ್ಟೇ ಅಲ್ಲ ರಾಜ್ಯ ಮಟ್ಟದಲ್ಲಿ ಉತ್ತಮ ನಾಯಕರನ್ನು ಗುರುತಿಸಿ ಉದ್ಯೋಗ ಕೊಡಿಸಲು, ನಾಡು ನುಡಿ ಸಂಸ್ಕೃತಿ ಉಳಿಯುವ ಹೋರಾಟಗಳು ನಡೆಯಲಿ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಜೈ ಕರ್ನಾಟಕ ಪರಿಷತ್ನ ರಾಜ್ಯಾಧ್ಯಕ್ಷ ಡಾ.ಎಸ್.ನಾರಾಯಣ್, ನೂತನ ಶಾಖಾಧ್ಯಕ್ಷ ಕೆ.ಬಿ.ಕೆಂಪೇಗೌಡ, ರಾಜ್ಯ ಉಪಾಧ್ಯಕ್ಷ ಬಸವರಾಜು, ಶಾಖಾಧ್ಯಕ್ಷ ಕೆ.ಆರ್.ಪ್ರಸಾದ್, ಮಹಿಳಾ ಅಧ್ಯಕ್ಷೆ ಎಚ್.ಪಿ.ಇಂದಿರಾ ಇದ್ದರು.

## ಸಂಚಾರಿ ಸುರಕ್ಷತೆಗೆ ಆದ್ಯತೆ ನೀಡಿ

**ತಿಪಟೂರು :** ಶಾಲಾ ಮಕ್ಕಳು ವಿಕಲ ಚೇತನರು ಹಾಗೂ ವೃದ್ದರಿಗೆ ರಸ್ತೆಯಲ್ಲಿ ಸಂಚರಿಸಲು ಸೂಕ್ತ ವ್ಯವಸ್ಥೆ ಕಲ್ಪಿಸುವಂತೆ ಹಾಗೂ ರಸ್ತೆ ಸಂಚಾರದ ಸೂಚನಾ ಫಲಕಗಳನ್ನು ಅಳವಡಿಸ ಬೇಕೆಂದು ಸಾಮಾಜಿಕ ಚಿಂತಕ ಟಿ.ಸಿ.ಗೋವಿಂದರಾಜು ತಾಲ್ಲೂಕು ಆಡಳಿತವನ್ನು ಹಾಗೂ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಮುಖ್ಯ ರಸ್ತೆಗಳಲ್ಲಿ ಪ್ರತ್ಯೇಕ ಸೈಕಲ್ ಪಥ ನಿರ್ಮಿಸುವುದು. ರಸ್ತೆ ದಾಟಲು ಟ್ರಾಫಿಕ್ ಪೋಲಿಸ್ ವ್ಯವಸ್ಥೆ ಕಲ್ಪಿಸುವುದು, ಪುಟ್‌ಪಾತ್‌ಗಳನ್ನು ಸಾರ್ವಜನಿಕರಿಗೆ ಸಂಚರಿಸಲು ಮುಕ್ತವಾಗಿ ಇಡುವುದು ಹಾಗೂ ಪುಟ್‌ಪಾತ್ ಇಲ್ಲದ ಕಡೆ ಪುಟ್‌ಪಾತ್ ನಿರ್ಮಿಸುವುದು ಸೇರಿದಂತೆ, ಜೊತೆಗೆ ನಿರ್ಲಕ್ಷ್ಯದಿಂದ ವಾಹನ ಚಲಾಯಿಸುವುದನ್ನು ಹಾಗೂ ಮೊಬೈಲ್ ವೀಕ್ಷಿಸಿಕೊಂಡು ವಾಹನ ಚಲಾಯಿಸುವುದನ್ನು ತಡೆಯುವುದರಿಂದ ಅಪಘಾತಗಳನ್ನು ತಡೆಯುವುದರ ಮೂಲಕ ಮೃತಬಾಲಕಿ ಚಂದನಾಳಿಗೆ ನಿಜವಾದ ಶ್ರದ್ಧಾಂಜಲಿ ಸಲ್ಲಿಸುವಂತೆ ಆಗಲಿ ಎಂದು ಪತ್ರಿಕೆಗೆ ತಿಳಿಸಿದ್ದಾರೆ.

## ಪರೀಕ್ಷಾ ಕೇಂದ್ರದ ಸುತ್ತ ನಿಷೇಧಾಜ್ಞೆ

**ಮಂಡ್ಯ:** ಜಿಲ್ಲಾ ವ್ಯಾಪ್ತಿಯಲ್ಲಿ ಗಣಕಯಂತ್ರ ಶಿಕ್ಷಣ ಪರೀಕ್ಷೆಯು ಆಗಸ್ಟ್ 4 ರಿಂದ 13 ರವರೆಗೆ ನಡೆಯಲಿದೆ. ಗಣಕಯಂತ್ರ ಶಿಕ್ಷಣ ಪರೀಕ್ಷೆಯು ಸುಗಮವಾಗಿ ನಡೆಯಲು ಮಂಡ್ಯ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಪರೀಕ್ಷಾ ದಿನಗಳಂದು 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿದೆ. ಪರೀಕ್ಷಾ ಕೇಂದ್ರದ ಸುತ್ತಮುತ್ತ ಇರುವ ಜೆರಾಕ್ಸ್ ಮತ್ತು ಸೈಬರ್ ಅಂಗಡಿಗಳನ್ನು ಪರೀಕ್ಷಾ ಅವಧಿಯಲ್ಲಿ ಮುಚ್ಚುವಂತೆ ಜಿಲ್ಲಾಧಿಕಾರಿ ಡಾ.ಕುಮಾರ ಅ ಆದೇಶ ಹೊರಡಿಸಿದ್ದಾರೆ. ಪರೀಕ್ಷಾರ್ಥಿಗಳು ಮತ್ತು ಪರೀಕ್ಷಾ ಕಾರ್ಯಕ್ಕೆ ನೇಮಕಗೊಂಡ ಅಧಿಕಾರಿಗಳು/ಸಿಬ್ಬಂದಿಗಳು ಹೊರತುಪಡಿಸಿ ಇತರರು ಯಾರೂ ನಿಷೇಧಿತ ಪ್ರದೇಶದೊಳಗೆ ಪ್ರವೇಶಿಸುವಂತಿಲ್ಲ ಎಂದು ಅವರು ಆದೇಶದಲ್ಲಿ ತಿಳಿಸಿದ್ದಾರೆ. ಪರೀಕ್ಷಾ ಕೇಂದ್ರಗಳು: ನಾಗಮಂಗಲ ಸರ್ಕಾರಿ ಪದವಿ ಪೂರ್ವ ಕಾಲೇಜು, ನಾಗಮಂಗಲ ಯು.ಸಿ. ಐ. ಎಸ್. ಕಂಪ್ಯೂಟರ್ ಎಜುಕೇಷನ್ ಸೆಂಟರ್, ಮಂಡ್ಯ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಹಾಗೂ ಮಂಡ್ಯ ಮಾಂಡವ್ಯ ಎಜುಕೇಷನ್ ಟ್ರಸ್ಟ್ ಪರೀಕ್ಷಾ ಕೇಂದ್ರಗಳಾಗಿವೆ.

# ನೆರೆ ಸಂತ್ರಸ್ತರಿಗೆ ಆತ್ಮಸ್ಥೈರ್ಯ ತುಂಬಿದ ಸಚಿವ ಎಚ್ಸಿಎಂ

**ನಂಜನಗೂಡು:** ಕಪಿಲಾ ಪ್ರವಾಹದಿಂದಾಗಿ ತಗ್ಗು ದೇಶಗಳಿಗೆ ನೀರು ನುಗ್ಗಿ ಹಾನಿಯಾದ ಹಿನ್ನಲೆ ಸ್ಥಳಕ್ಕೆ ಭೇಟಿ ನೀಡಿದ ಜಿಲ್ಲಾ ಉಸ್ತುವಾರಿ, ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಎಚ್. ಸಿ. ಮಹದೇವಪ್ಪ ಸಂತ್ರಸ್ಥ ಕುಟುಂಬಗಳಿಗೆ ಸಾಂತ್ವ ಹೇಳಿ ಧೈರ್ಯ ತುಂಬಿದರು.

ಕೂಡಲೇ ಸರ್ಕಾರದಿಂದ ನೊಂದ ಕುಟುಂಬಳಿಗೆ ಪರಿಹಾರದ ಹಣ ನೀಡಲಾಗುವುದು. ವಾಸದ ಮನೆಗಳ ನಿರ್ಮಾಣಕ್ಕೆ ಈಗಾಗಲೇ ಎಲ್ಲಾ ತಯಾರಿ ನಡೆಸಲಾಗಿದೆ. ಯಾವುದೇ ಕಾರಣಕ್ಕೂ ನಂಜನಗೂಡಿನ ಜನತೆ ಆತಂಕ ಪಡುವ ಅವಶ್ಯಕತೆ ಇಲ್ಲ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಮಹದೇವಪ್ಪ ಸಂದರ್ಭದಲ್ಲಿ ನೊಂದವರಿಗೆ ಆತ್ಮಸ್ಥೈರ್ಯ ತುಂಬಿದರು. ಈಗಾಗಲೇ ಕಂದಾಯ ಸಚಿವರಾದ ಕೃಷ್ಣಭೈರೇಗೌಡ ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್ ಸಿ ಮಹದೇವಪ್ಪ ಜಿಲ್ಲಾಧಿಕಾರಿಗಳ ಸಮೇತ ಅಧಿಕಾರಿಗಳ ತಂಡವೇ ಇಲ್ಲಿ ಪರಿಶೀಲನೆ ನಡೆಸಿದೆ ತಗ್ಗು ಪ್ರದೇಶಗಳಿಗೆ ಶಾಶ್ವತ ಪರಿಹಾರ ನೀಡಲು ಈಗ ತಯಾರಿ ನಡೆಸಲಾಗಿದೆ ಅದಕ್ಕೆ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರ ಬದ್ಧವಾಗಿದೆ ಎಂದು ಎಂಎಲ್ಸಿ ಡಾ. ಯತೀಂದ್ರ ಸಿದ್ದರಾಮಯ್ಯ ಸಂದರ್ಭದಲ್ಲಿ ಮಾತನಾಡಿದರು. ಕೇರಳದ ವಯನಾಡಿನಲ್ಲಿ ಸುರಿದ ಧಾರಾಕಾರ ಮಳೆಯ ಹಿನ್ನೆಲೆ ರಾಜ್ಯದ ಕಬಿನಿ ಜಲಾಶಯದಲ್ಲಿ ಬಾರಿ ಪ್ರಮಾಣದ ಒಳಹರಿವಿನ ಪ್ರಮಾಣ



ಹೆಚ್ಚಾದ ಕಾರಣ ನಂಜನಗೂಡಿನ ಕಪಿಲಾ ನದಿಯ ಮೂಲಕ ಸುಮಾರು 80000ಕ್ಕೂ ಅಧಿಕ ಕ್ಯೂಸೆಕ್ಸ್ ನೀರನ್ನು ಹೊರ ಬಿಟ್ಟ ಹಿನ್ನೆಲೆ ನಂಜನಗೂಡಿನ ಕಪಿಲಾ ನದಿಯಲ್ಲಿ ಬಾರಿ ಪ್ರಮಾಣದ ಪ್ರವಾಹದ ನೀರು ಹರಿದು ಬಂದ ಕಾರಣ ತಗ್ಗು ಪ್ರದೇಶದ ಬಡಾವಣೆಗಳಿಗೆ ಪ್ರವಾಹದ ನೀರು ನುಗ್ಗಿ ಅವಾಂತರ ಸೃಷ್ಟಿ ಮಾಡಿತು.

ನಂಜನಗೂಡು ಪಟ್ಟಣದ ತೋಪಿನ ಬೀದಿ ಒಕ್ಕಲಗೇರಿ ಹಳ್ಳದ ಕೇರಿ ಹಾಗೂ ಹುಲ್ಲಹಳ್ಳಿಯ ಸಮೀಪದ ಕಡಬೂರು, ಹಳೆ ಕಡಜಟ್ಟಿ, ಹೆಜ್ಜಿಗೆ, ಬೊಕ್ಕಹಳ್ಳಿ ,ತೊರೆ ಮಾವು ಗ್ರಾಮಗಳ ವಾಸದ ಮನೆಗಳಿಗೆ ಪ್ರವಾಹದ ನೀರು ನುಗ್ಗಿ ಸಾಕಷ್ಟು ಹಾನಿಯಾಗಿತ್ತು ಕೃಷಿ ಭೂಮಿಗಳಲ್ಲಿ ಮಾಡಿದ ಬೆಳೆ ನಾಶವಾಗಿ ಸಾಕಷ್ಟು ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ತಾಲೂಕು ಮತ್ತು ಜಿಲ್ಲಾಡಳಿತಎಚ್ಚೆತ್ತು ಏಳು ಕಡೆ ಕಾಳಜಿ ಕೇಂದ್ರಗಳನ್ನು ತೆರೆದು 250ಕ್ಕೂ ಹೆಚ್ಚು ಕುಟುಂಬಗಳನ್ನು ಕಾಳಜಿ ಕೇಂದ್ರಗಳಲ್ಲಿ ಬಿಟ್ಟು ಮೂಲಭೂತ ಸೌಲಭ್ಯಗಳನ್ನು ಒದಗಿಸಿಕೊಡಲಾಗಿತ್ತು.

ಈ ವೇಳೆ ಎಂಎಲ್ಸಿ ಡಾ. ಯತೀಂದ್ರ ಸಿದ್ದರಾಮಯ್ಯ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮೈಸೂರು ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ, ನಂಜನಗೂಡಿನ ತಹಸಿಲ್ದಾರ್ ಶಿವಕುಮಾರ್ ಕಾಸ್ನೂರು, ಸಿಇಓ ಗಾಯತ್ರಿ, ಈ ಓ ಜೆರಾಲ್ಡ್ ರಾಜೇಶ್ ಸೇರಿದಂತೆ ಸಾಕಷ್ಟು ಅಧಿಕಾರಿಗಳ ತಂಡವು ಸ್ಥಳದಲ್ಲಿ ಹಾಜರಿದ್ದು ನೊಂದ ಕುಟುಂಬಗಳ ಸಂಕ್ಷಿಪ್ತ ಮಾಹಿತಿಯನ್ನು ಸಚಿವರಿಗೆ ಮತ್ತು ಜಿಲ್ಲಾಧಿಕಾರಿಗಳಿಗೆ ವಿವರಿಸಿದರು.

# ಅಬಲರ ಸೇವೆಯೇ ರೋಟರಿ ಧ್ಯೇಯ : ರಾಜೇಗೌಡ

**ಪಿರಿಯಾಪಟ್ಟಣ:** ಸ್ವಹಿತ ಮೀರಿದ ಸೇವೆಯಿಂದ ವಿಶ್ವಶಾಂತಿ ಸಾಧ್ಯ ಎಂಬ ಧ್ಯೇಯವಾಕ್ಯದಿಂದ ರೋಟರಿ ಸಂಸ್ಥೆಯ ಮುನ್ನಡೆದು ನೂರು ವರ್ಷಗಳಿಗೂ ಮೀರಿ ಸೇವಾ ಕಾರ್ಯದಲ್ಲಿ ನಿರತವಾಗಿದೆ ಎಂದು ರೋಟರಿ ರೋಟರಿ ಸಂಸ್ಥೆ ಅಧ್ಯಕ್ಷ ಎಂ.ಎಂ. ರಾಜೇಗೌಡ ತಿಳಿಸಿದರು.

ಪಟ್ಟಣದ ರೋಟರಿ ಭವನದಲ್ಲಿ ಒಳಕೋಟೆ ನಿವಾಸಿ ಕಾಂತರಾಜು ಎಂಬುವವರಿಗೆ ಊರುಗೋಲು ( ವಾಕಿಂಗ್ ಸ್ಟಿಕ್) ವಿತರಿಸಿ ಮಾತನಾಡಿದರು.

ದೈನಂದಿನ ಬದುಕಿನಲ್ಲಿ ಅನೇಕ ಕಷ್ಟ ಕಾರ್ಪಣ್ಯಗಳ ನಡುವೆ ಇತ್ತೀಚೆಗೆ ಅಕಾಲಿಕ ಕಾಯಿಲೆಗೆ ತುತ್ತಾಗಿ ಕಾಲು ಕಳೆದುಕೊಂಡು ಪಟ್ಟಣದಲ್ಲಿ ಅಕ್ಕಸಾಲಿಗ ವೃತ್ತಿ ಮಾಡಿಕೊಂಡು ಬದುಕು ನಡೆಸುತ್ತಿರುವ ಕಾಂತರಾಜು ಎದೆಗುಂದದೆ ತಮ್ಮ ಕಾಯಕ ನಡೆಸುತ್ತಿರುವುದು ಇತರರಿಗೆ ಮಾದರಿಯಾಗಿದೆ. ಇಂಥ ಅಬಲರ ಬದುಕಿಗೆ ನಮ್ಮ ಸಂಸ್ಥೆ ಸದಾ ನೆರವು ನೀಡುವ ಮೂಲಕ ಅವರ ಸ್ವಾವಲಂಬನೆ ಬದುಕಿಗೆ ಸಹಕಾರಿಯಾಗಿದೆ. ಸಮಾಜದಲ್ಲಿ ಉಳ್ಳವರು




ಕೊಡುಗೈ ದಾನಿಗಳಾಗಿ ಸಮಾಜ ಕಟ್ಟಬೇಕು. ಮಾಡಿದ ಸೇವೆ ಅಜರಾಮರವಾಗಿ ಉಳಿಯುತ್ತದೆ. ಜನಿಸಿದಾಗ ಯಾರು ಶ್ರೀಮಂತರಲ್ಲ, ಮಾಡುವ ಸತ್ಕಾರ್ಯಗಳು ಅವರನ್ನು ಗುರುತಿಸಿ ಸಮಾಜ ಬೆಳೆಸುತ್ತದೆ. ಸಮುದಾಯ ಸೇವೆಗಳಲ್ಲಿ ಪ್ರಪಂಚದಲ್ಲೇ ರೋಟರಿ ಸಂಸ್ಥೆಯು ಪ್ರಥಮ ಸ್ಥಾನದಲ್ಲಿ ಇದೆ. ಪಲ್ಸ್ ಪೊಲಿಯೋ ಹಾಗೂ ಕರೋನ ಸಂದರ್ಭದಲ್ಲಿ ರೋಟರಿಯ ಸೇವೆ ಸದಾ ಅವಿಸ್ಮರಣೀಯ ಕೆಲಸಗಳನ್ನು ಮಾಡಿದೆ, ರೋಟರಿ ಸಂಸ್ಥೆ ಇತ್ತೀಚಿನ ದಿನಗಳಲ್ಲಿ ಆರೋಗ್ಯ ಹಾಗೂ ವಿದ್ಯಾಭ್ಯಾಸಕ್ಕೆ ಹೆಚ್ಚು ಹೊತ್ತನ್ನು ನೀಡುವುದರ ಮುಖಾಂತರ ಸೇವೆಯನ್ನು ಸಲ್ಲಿಸುತ್ತಿದೆ ಎಂದರು. ರೋಟರಿ ಕ್ಲಬ್ ಕಾರ್ಯದರ್ಶಿ ಐಕೆಪಿ ಹೆಗಡೆ, ಪದಾಧಿಕಾರಿಗಳಾದ ಸತ್ಯನಾರಾಯಣ, ಕೆ.ಆರ್.ನಾಗರಾಜ್, ರವಿಶಂಕರ್, ಹರೀಶ್ ಗೌಡ, ಪಾರೆ ಕೊಪ್ಪಲು ಚಂದ್ರು, ಇದ್ದರು.

## ಉಚಿತ ಯುಪಿಎಸ್‌ಸಿ ತರಬೇತಿ

**ಹುಳಿಯಾರು:** ಕರ್ನಾಟಕ ಆರ್ಯವೈಶ್ಯ ಮಹಾಸಭೆಯ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಾಸವಿ ಅಕಾಡೆಮಿ ಸೇವಾ ಸಂಸ್ಥೆಯಿಂದ ಪ್ರತಿವರ್ಷದಂತೆ ಈ ವರ್ಷವೂ ಸಹ ಎಲ್ಲಾ ಜಾತಿಯ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉಚಿತವಾಗಿ ಯುಪಿಎಸ್‌ಸಿ ತರಬೇತಿ ನೀಡಲಿದೆ ಎಂದು ತುಮಕೂರು ಜಿಲ್ಲಾ ಆರ್ಯವೈಶ್ಯ ಮಹಾಸಭಾದ ಅಧ್ಯಕ್ಷ ಹುಳಿಯಾರಿನ ಎಲ್.ಆರ್.ಚಂದ್ರಶೇಖರ್ ತಿಳಿಸಿದ್ದಾರೆ.



ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು ತರಬೇತಿ ಅವಧಿ 8 ತಿಂಗಳಿದ್ದು 2025 ರ ಲೋಕಸೇವಾ ಆಯೋಗದ ಪರೀಕ್ಷೆಗಳನ್ನು ಬರೆಯಲು ಇಚ್ಛಿಸುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿ ಇದರ ಸದುಪಯೋಗ ಪಡೆದುಕೊಳ್ಳಬಹುದಾಗಿದೆ. ಪ್ರವೇಶಾಸಕ್ತ ವಿದ್ಯಾರ್ಥಿಗಳು ವಾಸವಿ ಅಕಾಡೆಮಿಯು ನಡೆಸುವ ಪ್ರವೇಶ ಮತ್ತು ಮೌಖಿಕ ಪರೀಕ್ಷೆಯಲ್ಲಿ ಭಾಗವಹಿಸಿ ಉತ್ತೀರ್ಣರಾಗಬೇಕಿರುತ್ತದೆ ಎಂದು ವಿವರಿಸಿದ್ದಾರೆ. ಅರ್ಜಿ ಸಲ್ಲಿಸಲು ಆಗಸ್ಟ್ 25 ಕೊನೆ ದಿನವಾಗಿದ್ದು ಸೆಪ್ಟೆಂಬರ್ 1 ರಂದು ಪ್ರವೇಶ ಪರೀಕ್ಷೆ ಮತ್ತು ಮೌಖಿಕ ಪರೀಕ್ಷೆ ನಡೆಯಲಿದೆ ಹೆಚ್ಚಿನ ಮಾಹಿತಿಗೆ ಮೊ. ಸಂ.9916116615/9663900439 ಕರೆ ಮಾಡುವಂತೆ ಚಂದ್ರಶೇಖರ್ ತಿಳಿಸಿದ್ದಾರೆ.

## ಕೋರಮಂಗಲ ಗ್ರಾಪಂ ಅಧ್ಯಕ್ಷರಾಗಿ ಎಚ್ .ಧನಂಜಯ ಆಯ್ಕೆ

**ವಿಜಯಪುರ :** ಹೋಬಳಿಯ ಕೋರಮಂಗಲ ಗ್ರಾಮ ಪಂಚಾಯತಿ ಅಧ್ಯಕ್ಷರಾಗಿದ್ದ ಕೆಎಂ .ಕೃಷ್ಣಪ್ಪ ರವರು ಅನಾರೋಗ್ಯ ಕಾರಣದಿಂದ ನಿಧನ ಹೊಂದಿದ ಹಿನ್ನೆಲೆಯಲ್ಲಿ ತೆರವಾಗಿದ್ದ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನಕ್ಕೆ ಎಲ್ಲಾ ಸದಸ್ಯರುಗಳು ಸರ್ವಾನುಮತದಿಂದ ಅವಿರೋಧವಾಗಿ ಎಚ್ .ಧನಂಜಯ ( ಮಂಜುನಾಥ)ರವರನ್ನು ಆಯ್ಕೆ ಮಾಡಿರುವುದಾಗಿ ಚುನಾವಣಾಧಿಕಾರಿ ಎನ್ ಸುನೀಲ್ ಘೋಷಿಸಿದರು. ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಎಚ್.ಧನಂಜಯ ಹಲವಾರು ಮುಖಂಡರುಗಳ ಶುಭಹಾರೈಕೆ ಮತ್ತು ಅಭಿನಂದನೆಗಳನ್ನು ಸ್ವೀಕರಿಸಿ ಮಾತನಾಡಿ, ಅಧ್ಯಕ್ಷ ಸ್ಥಾನದಿಂದ ಜವಾಬ್ದಾರಿ ಹೆಚ್ಚಾಗಿದ್ದು, ತಾಲೂಕಿನಲ್ಲಿ ಮಾದರಿ ಗ್ರಾಮ ಪಂಚಾಯಿತಿಯನ್ನಾಗಿಸ ಅಭಿವೃದ್ಧಿಯತ್ತ ಕೊಂಡೊಯ್ಯಲು ಗ್ರಾಮಸ್ಥರು ಹಾಗೂ ಎಲ್ಲಾ ಸದಸ್ಯರುಗಳ ಸಹಕಾರ ತೆಗೆದುಕೊಂಡು ಮೂಲಭೂತ ಸೌಕರ್ಯಗಳನ್ನು ಒದಗಿಸಿ, ಸ್ವಚ್ಛತೆಗೆ ಹೆಚ್ಚಿನ ಆದ್ಯತೆಯನ್ನು ಕೊಟ್ಟು ಗ್ರಾಮದ ಸಕಲ ಅಭಿವೃದ್ಧಿಯನ್ನು ಮಾಡುತ್ತೇನೆ ಎಂದು ಹೇಳಿದರು. ಕೆಪಿಸಿಸಿ ಸದಸ್ಯರಾದ ಎ.ಚಿನ್ನಪ್ಪ, ಮುಖಂಡರಾದ ಗೋಪಾಲಕೃಷ್ಣ, ಭುವನಹಳ್ಳಿ ಮುನಿರಾಜು, ಗೊಬ್ಬರಗುಂಟೆ ಕೋರಮಂಗಲ ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ಪುಷ್ಪ ಟಿ. ಶಿವರಾಜ್, ಸದಸ್ಯರುಗಳಾದ ಹರೀಶ್ ಕುಮಾರ್, ಕನಕರತ್ನಮ್ಮ, ಗಾಯಿತ್ರಿ, ದೇವರಾಜ, ಮಂಜುಳಾ, ಕಿರಣ್, ಭಾಗ್ಯಲಕ್ಷ್ಮಿ,ಪಿಡಿಒ ಸತೀಶ್, ಸೇರಿದಂತೆ ಹಲವಾರು ಮುಖಂಡರುಗಳು ಚುನಾಯಿತ ಪ್ರತಿನಿಧಿಗಳು ಗ್ರಾಮಸ್ಥರು ಭಾಗವಹಿಸಿದ್ದರು



**ವಿಜಯಪುರ ಪಟ್ಟಣದ ಧರ್ಮರಾಯಸ್ವಾಮಿ ಗುಡಿ ಬೀದಿಯಲ್ಲಿನ ಧರ್ಮರಾಯಸ್ವಾಮಿ ದೇವಾಲಯದಲ್ಲಿ ಭೀಮನ ಅಮಾವಾಸ್ಯೆ ಪ್ರಯುಕ್ತ ಭಾನುವಾರದಂದು ಭೀಮ ದೇವರಿಗೆ ವಿಶೇಷ ಪೂಜೆ ಹೂವಿನ ಅಲಂಕಾರ ಏರ್ಪಡಿಸಿರುವುದು ಹಾಗೂ ಶ್ರೀ ಧರ್ಮರಾಯಸ್ವಾಮಿ ದ್ರೌಪತಮ್ಮನವರ ಸಮೇತ ಪಾಂಡವರು ಹಾಗೂ ಪರಿವಾರ ದೇವರುಗಳು**

## ಕೊಳವೆ ಬಾವಿಗೆ ಪುರಸಭಾ ಮುಖ್ಯಧಿಕಾರಿ ಸಂತೋಷ್ ಕುಮಾರ್ ಚಾಲನೆ

**ವಿಜಯಪುರ:** ಪಟ್ಟಣದ 11 ನೇ ವಾರ್ಡಿನ ಕಂದಕ ರಸ್ತೆಯಲ್ಲಿ ಪುರಸಭಾ ವತಿಯಿಂದ ರಾಜ್ಯ ಹಣಕಾಸು ಕಾರ್ಪೊರೇಷನ್ ಯೋಜನೆ ಅಡಿಯಲ್ಲಿ ಕೊಳವೆಬಾವಿಗೆ ಪುರಸಭಾ ಮುಖ್ಯಧಿಕಾರಿ ಸಂತೋಷ್ ಕುಮಾರು ಚಾಲನೆ ನೀಡಲಾಯಿತು. ಈ ವೇಳೆ ಮಾತನಾಡಿದ ಅವರು ಪಟ್ಟಣದ ಕೆಲ ವಾರ್ಡ್ ಗಳಲ್ಲಿ ನೀರಿನ ಸಮಸ್ಯೆ ಇದ್ದು ಈಗಗಾಲೇ ಸಮಸ್ಯೆವಿರುವ ವಾರ್ಡ್ ಗಳಲ್ಲಿ ಸರಕಾರದ ಅನುಧಾನಗಳನ್ನು ಬಳಸಿ ಪಟ್ಟಣದಲ್ಲಿ ಕೊಳವೆ ಬಾವಿಗಳನ್ನು ಕೊರೆಸಲಾಗುತ್ತಿದ್ದು ಸಾರ್ವಜನಿಕರು ನೀರನ್ನು ಮಿತವಾಗಿ ಬಳಸಿಕೊಳ್ಳಬೇಕು ಜೊತೆಗೆ ತಮ್ಮ ಮನೆಗಳ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸ್ವಚ್ಛತೆಯ ಕಡೆ ಗಮನಹರಿಸಬೇಕು ಎಂದರು. ಪುರಸಭಾ ಅಭಿಯಂತರ ಶೇಖರ್, ಪುರಸಭಾ ಮಾಜಿ ಉಪಾಧ್ಯಕ್ಷ ಹಾಲಿ ಸದಸ್ಯ ಎಂ. ಕೇಶವಪ್ಪ ಪುರಸಭಾ ಸದಸ್ಯರಾದ ಎ.ಆರ್. ಹನೀಪುಲ್ಲಾ, ನಾರಾಯಣಸ್ವಾಮಿ, ಮಾಜಿ ಉಪಾಧ್ಯಕ್ಷ ಜೆ.ಎನ್. ಶ್ರೀನಿವಾಸ್, ಗಂಟೆ ಪೂಜಾರಿ ಮುನಿಶಾಮಪ್ಪ, ಸಮಾಜ ಸೇವಕ ಎಂ.ಡಿ. ಮಂಜುನಾಥ್, ಎಸ್.ಆರ್. ಎಸ್. ಬಸವರಾಜ್, ಸಿ.ವಿಜಯರಾಜ್, ವಿ.ವಿಶ್ವನಾಥ , ಕಂಟ್ರಾಕ್ಟರ್ ಬಿ. ನಟಶೇಖರ್, ಬೇಕರಿ ಶಿವಣ್ಣ, ನಟರಾಜ್, ಅರ್ಚಕ ಸತ್ಯನಾರಾಯಣ ಶರ್ಮಾ, ವಾಟರ್ ಮ್ಯಾನ್ ಮಂಜುನಾಥ ಉಪಸ್ಥಿತರಿದ್ದರು.





**ಅಗ್ರ ಪ್ರಶಸ್ತಿ**

**ಮೈಸೂರಿನಲ್ಲಿ ನಡೆದ ಸಾರಿಗೆ ನೌಕರರ ರಾಜ್ಯ ಮಟ್ಟದ ಶಟಲ್ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಕೆಂಕೆರೆ ಯು.ಸಿ.ಗೌಡ ಮತ್ತು ಹುಳಿಯಾರಿನ ರವಿ ಅವರು ಅಗ್ರ ಪ್ರಶಸ್ತಿ ತಮ್ಮದಾಗಿಸಿಕೊಂಡಿದ್ದಾರೆ.**

# ಮಹಮ್ಮದ್‌ರಫೀ ಸಂಗೀತ ಸಂಜೆ ಕಾರ್ಯಕ್ರಮ

**ಮೈಸೂರು:** ರಾಘವೇಂದ್ರರತ್ನಾಕರ್ ಅರ್ಪಿಸಿರುವ ಸಂಗೀತ ಸಾಮ್ರಾಟ್ ಮಹಮ್ಮದ್‌ರಫೀ ಸಂಗೀತ ಸಂಜೆ ಕಾರ್ಯಕ್ರಮ ಗುರುವಾರ ನಾದಬ್ರಹ್ಮ ಸಂಗೀತ ಸಭಾದಲ್ಲಿ ನೆರವೇರಿತು.

ದೀಪ ಬೆಳಗಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ನಿವೃತ್ತ ಪ್ರಾಧ್ಯಾಪಕರಾದ ಡಾ.ಶಿವರಾಜಪ್ಪ ಮಾತನಾಡಿ, ಮೈಸೂರು ಸಾಂಸ್ಕೃತಿಕ ಕ್ಷೇತ್ರದ ರಾಯಭಾರಿ. ಕಲೆಗಳನ್ನು ಪ್ರೋತ್ಸಾಹಿಸುವ ನೆಲಬಿಡು. ಇಲ್ಲಿ ಸಾಧು ಸಂತರಿಂದ ಹಿಡಿದು ರಾಜಮನೆತನದ ವರೆಗೆ ಸಂಗೀತವನ್ನು ಪ್ರೋತ್ಸಾಹಿಸಿ ಬೆಳೆಸಿದ್ದಿದೆ. ಅಂತಹ ವಿರಳರಲ್ಲಿ ರಾಘವೇಂದ್ರರತ್ನಾಕರ್‌ರವರು ಸಂಗೀತವನ್ನೇ ಜೀವನವನ್ನಾಗಿಸಿಕೊಂಡು ಬದುಕಿದವರು.ಅದರಲ್ಲೂ ಮುಖ್ಯವಾಗಿಕನ್ನಡದ ಹಾಡುಗಳ ಜೊತೆಗೆ ಸಂಗೀತ ಸಾಮ್ರಾಟ್ ಮಹಮ್ಮದ್‌ರಫೀರವರ ಹಾಡುಗಳನ್ನು ಯಥಾವತ್ತಾಗಿ ಹಾಡುಗಳನ್ನು ಹಾಡಿ ನಮಗೆ ಹಳೆಯ ಚಲನಚಿತ್ರದ ನೆನಪುಗಳನ್ನು ಮೆಲುಕು ಹಾಕಲು ಅವಕಾಶ ಮಾಡಿಕೊಟ್ಟಿರುವುದು ನಿಜಕ್ಕೂ ಅವಿಸ್ಮರಣೀಯ.ಯಾವುದೇ ಆಗಲಿ ಅದೃಷ್ಟವನ್ನು ನಂಬದೆ ಆತ್ಮಬಲವನ್ನು ನಂಬಿ ಬದುಕನ್ನು ರೂಪಿಸಿಕೊಂಡು ಜೀವನ ಸಾರ್ಥಕತೆಯನ್ನು ಕಂಡುಕೊಳ್ಳಬೇಕು ಅಂತಹ ಅಪರೂಪದ ಕಲಾವಿದ ಕುಟುಂಬ ರತ್ನಾಕರ್ ರವರಕುಟುಂಬ. ಇಂತಹ ಮಹನೀಯರಿಗೆ ಸರ್ಕಾರ ಹಾಗೂ ಸಂಘ ಸಂಸ್ಥೆಗಳು ಹೆಚ್ಚಿನ ಪ್ರೋತ್ಸಾಹ ಮತ್ತು ಸಹಕಾರದೊಂದಿಗೆ ಬದುಕಲು ಅವಕಾಶ ನೀಡಬೇಕೆಂದು ಮನವಿ ಮಾಡಿದರು. ಕಲಾವಿದರಾದ ರಾಘವೇಂದ್ರರತ್ನಾಕರ್, ಡಾ.ಪ್ರೀತಂರಾಘವೇಂದ್ರ, ಶ್ರೇಷ್ಠ ಕೆ ರಾಘ್, ಕಲಾ ಪೋಷಕರಾದ ಟಿ.ಆರ್.ಹರೀಶ್ ಪ್ರಸಾದ್, ಎಂ.ಕೆ.ಪುರಾಣಿಕ್, ಉದ್ಯಮಿರವಿಗೌಡ, ಸಮಾಜ ಸೇವಕರಾದಕೆ.ರಘುರಾಮ್ ವಾಜಪೇಯಿ, ಜಿಲ್ಲಾಕನ್ನಡ ಸಾಹಿತ್ಯ ಪರಿಷತ್‌ಅಧ್ಯಕ್ಷರಾದ ಮಡ್ಡಿಗೆರೆಗೋಪಾಲ್, ಕವಿಯತ್ರಿಡಾ.ಸೌಗಂಧಿಕ ವಿ ಜೋಯಿಸ್, ಎಂ.ನಂಜುಂಡಯ್ಯ, ಸೋಮಶೇಖರ್‌ಆರಾಧ್ಯ ಉಪಸ್ಥಿತರಿದ್ದರು.ಗಾಯಕಆರ್.ಸುಧಿಂದ್ರರವರ ನಿರೂಪಣೆಯಿಂದ ಪ್ರಾರಂಭವಾದ ಕಾರ್ಯಕ್ರಮ ಮಹಮ್ಮದ್‌ರಫೀರವರಆಯ್ದ ಹಿಂದಿ ಚಿತ್ರಗೀತೆಗಳಾದ




ಯೊಹೀತುಂ ಮುಜಸೆ ಬಾತ್‌ಕಲ್‌ತೀ ಹೋ, ಖುದಾಬೀಆಸುಮಾನ್‌ಸೆ, ಕುಮಾರಿ ಶ್ರೇಷ್ಠ ರವರಿಂದ ನಾದಮಯ ಹಾಡು, ಓ ಮೇರೆ ಶಾಹೆ ಕುಬಾನ್, ಅಕೀಲೆ ಹೇ ಚಲೀ ಆವೂ ಜಾಹಾ ಹೋ, ಹಾಯ್ ರೆ ಹಾಯ್, ನೀನೆಲ್ಲಿ ನಡೆವೆದೂರ, ತುಂ ಮುಝುಸೆಯಾ ಬುಲಾನ ಪಾವೋಗೆ, ಬದನ್ ಪೇ ಸಿತಾರೇ ಲೇ ಪತೇ ಹೂಯೆ, ಮೇರಾ ಮನೆ ತೇರಾ ಪ್ಯಾಸಾ, ಏ ಚಾಂದ್ ಸಾ ರೋಷನ್‌ಚೆಹ್ರಾ, ಕಲೆ ಪಾಲಕ್ ಮೇ ಜೂಟಾಗುಸ್ಯಾ, ತುಂ ಬಿನ್ ಜಾವೂ ಕಹಾ, ಚಾಹೆ ಕೋಯಿ ಮುಝೋಜಂಗ್ಲೀ ಕಹೇ, ಓ ದುನಿಯಾ ಕೆ ರಖವಾಲೇ ಹಾಗೂ ಕುಮಾರಿ ಶ್ರೇಷ್ಠ ರವರಿಂದಕನ್ನಡ, ಹಿಂದ ಹಾಗೂ ಕೊರಿಯನ್ ಗೀತೆಗಳನ್ನು ನಿಮ್ಮ ಮೆಚ್ಚಿನ ಬ್ಲಾಕ್ ಪಿಂಕ್‌ನಲ್ಲಿ ಹಾಡಲಾಯಿತು.

**ಚಕಾರವೆತ್ತದ ಚೆಸ್ಕಾಂ ಆತಂಕದಲ್ಲಿ ನಾಗರೀಕರು**

# ಅಪಘಾತಕ್ಕೆ ಆಹ್ವಾನ ನೀಡುತ್ತಿರುವ ವಿದ್ಯುತ್ ತಂತಿ

**ಚಾಮರಾಜನಗರ:** ರಸ್ತೆ ಅಗಲೀಕರಣ ಕಾಮಗಾರಿಯ ವೇಳೆ ಕೆ-ಶಿಪ್ ನವರು ವಿದ್ಯುತ್ ಕಂಬ ಬದಲಾವಣೆಯಲ್ಲಿ ನಿಯಮ ಉಲ್ಲಂಘಿಸಿ ಬೇಕಾ ಬಿಟ್ಟಿಯಾಗಿ ಮನಸೋಇಚ್ಚೆ ಕಂಬ ಅಳವಡಿಸುತ್ತಿದ್ದರೂ ಚಕಾರವೆತ್ತದ ಚೆಸ್ಕಾಂನವರು ಸಾರ್ವಜನಿಕ ಜೀವದ ಜತೆ ಚೆಲ್ಲಾಟವಾಡುತ್ತಿರುವುದಾಗಿ ಪ್ರಬುದ್ಧ ನಾಗರೀಕರಿಂದ ವ್ಯಾಪಕ ಆಕ್ರೋಶ ವ್ಯಕ್ತವಾಗಿದೆ.

ಚಾಮರಾಜನಗರ ಜಿಲ್ಲೆಯ ಹನೂರು ಪಟ್ಟಣದಲ್ಲಿ ತರಾತುರಿಯಲ್ಲಿ ನಡೆಯುತ್ತಿರುವ ರಸ್ತೆ ಫುಟ್ಪಾತ್ ಬದಿಯಲ್ಲಿ ಅಳವಡಿಕೆ ಮಾಡಲಾಗಿರುವ ವಿದ್ಯುತ್ ಕಂಬ ತಂತಿ ಕಟ್ಟಡಗಳಿಗೆ ತಾಕುವಂತಿದ್ದು ಇದು ಮುಂದೊಂದು ದಿನ ವಿದ್ಯುತ್ ಅವಘಡಗಳು ಸಂಭವಿಸಿ ಪ್ರಾಣಾ ಪಾಯಕ್ಕೆ ಎಡೆ ಮಾಡಿಕೊಡುವುದು ಸ್ಪಷ್ಟವಾಗಿ ಗೋಚರಿಸುತ್ತಿದೆ. ಮುಖ್ಯ ರಸ್ತೆ ಬದಿಯಲ್ಲಿ ಪಾದಚಾರಿ ರಸ್ತೆ ಕಾಮಗಾರಿ ನಡೆಯುತ್ತಿದ್ದು ಅದರ ಸಮೀಪವೇ ವಿದ್ಯುತ್ ಕಂಬಗಳ ಬದಲಾವಣೆ ಕಾಮಗಾರಿಯೂ ನಡೆಯುತ್ತಿದೆ.ಅದರಲ್ಲಿ ಕಂಬದಿಂದ ಕಂಬಕ್ಕೆ ಎಳೆಯಲಾಗಿರುವ ತಂತಿಗಳು ಕಟ್ಟಡಗಳ ಹತ್ತಿರದಲ್ಲಿ ಹಾದು ಹೋಗಿರುವುದರಿಂದ ವಿದ್ಯುತ್ ಅವಘಡಗಳು ಸಂಭವಿಸುವ ಸಾಧ್ಯತೆ ಇರುವುದು ಸ್ಪಷ್ಟವಾಗಿದೆ. ರಸ್ತೆ ಪಕ್ಕದಲ್ಲಿ ಇದ್ದಂತಹ ಖಾಸಗಿ ಕಟ್ಟಡಗಳನ್ನು ತೆರವು ಮಾಡಲು ಮಾಲೀಕರಿಗೆ ಪರಿಹಾರ ಸಹ ನೀಡಲಾಗಿದೆ. ಆದರೆ ಕೆಲವು ಕಟ್ಟಡ ಮಳಿಗೆಗಳು ಮೇಲ್ನೋಟಕ್ಕೆ ತೆರವು ಮಾಡಿರುವಂತೆ ಕಂಡರು. ಫುಟ್ಪಾತ್ ರಸ್ತೆಯನ್ನು ಆಕ್ರಮಿಸಿಕೊಂಡಿರುವ ಕಟ್ಟಡದಿಂದ ಅವೈಜ್ಞಾನಿಕ ವಿದ್ಯುತ್ ಕಂಬ ಅಳವಡಿಸಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ.



ರಸ್ತೆ ಅಗಲೀಕರಣಕ್ಕೆ ಬೇಕಾದಂತಹ ಜಾಗವನ್ನು ಬಿಡಿಸಿ ರಸ್ತೆ ಫುಟ್ ಬಾತ್ ಕಾಮಗಾರಿ ಜತೆಗೆ ಯಾವುದೇ ಅಡಚಣೆ ಇಲ್ಲದೆ ಸಾರ್ವಜನಿಕರಿಗೆ ಕಟ್ಟಡಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ವಿದ್ಯುತ್ ಕಂಬಗಳನ್ನು ಅಳವಡಿಸಿ ವಿದ್ಯುತ್ ಸಂಪರ್ಕ ಕಲ್ಪಿಸುವ ವ್ಯವಸ್ಥೆಯನ್ನು ಮಾಡಬೇಕೆಂಬ ನಿಯಮಾನುಸಾರ ಇದ್ದರು ಕೆ-ಶಿಪ್ ಅಧಿಕಾರಿ ಸಿಬ್ಬಂದಿಗಳು ಇದರ ಬಗ್ಗೆ ತಲೆ ಕೆಡಿಸಿಕೊಳ್ಳದೆ ತರಾತುರಿಯಲ್ಲಿ ವಿದ್ಯುತ್ ಕಂಬ ಅಳವಡಿಸಿ ಕಾಮಗಾರಿ ಮಾಡುತ್ತಿದ್ದಾರೆ.

ಕಟ್ಟಡದ ಪಕ್ಕದಲ್ಲಿಯೇ ಕಟ್ಟಡಗಳಿಗೆ ತಾಗುವ ಹಾಗೆ 11ಕೆ ವಿ ಯ ಜೊತೆಗೆ ಎ ಬಿ ಕೇಬಲ್ ಮತ್ತು 440 ವೋಲ್ಟೇಜ್ ಇರುವ ವಿದ್ಯುತ್ ತಂತಿಗಳನ್ನು ಅಳವಡಿಕೆ ಮಾಡುತ್ತಿದ್ದಾರೆ. ಕಂಬದ ಲೈನ್ ವೈರ್ ನಿಂದ ಕನಿಷ್ಠ 1.2 ಮೀಟರ್ , 4 ಅಡಿಗಳ ಅಂತರದಲ್ಲಿ ಕಟ್ಟಡ ಇರಬೇಕು. ವಿದ್ಯುತ್ ಸಂಪರ್ಕ ಕಾಮಗಾರಿಯ ಬೆಳವಣಿಗೆ ಇದೂ ಸಹಾ ಅಪಾಯಕಾರಿ ಮತ್ತು ಸೂತ್ರೋಲೆಯ ನಿಯಮ ಉಲ್ಲಂಘನೆಯಾಗಿದೆ.

ನಿಯಮಾನುಸಾರ ವಿದ್ಯುತ್ ಕಂಬ ತಂತಿ ಅಳವಡಿಕೆಗೆ ಹೊರಡಿಸಿರುವ ಆದೇಶವನ್ನು ಮೀರಿ ಅವೈಜ್ಞಾನಿಕ ಬೇಕಾಬಿಟ್ಟಿ ವಿದ್ಯುತ್ ಕಂಬ ತಂತಿ ಅಳವಡಿಕೆಯಿಂದ ಸಂಭವಿಸಬಹುದಾದ ಅವಘಡಗಳಿಗೆ ಹೊಣೆ ಯಾರು.? ಈ ಬಗ್ಗೆ ಈಗಲೇ ಎಚ್ಚೆತ್ತು ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲಿಸಿ ಸಮರ್ಪಕ ಹಾಗೂ ಸುರಕ್ಷಿತವಾಗಿ ಉತ್ತಮ ರೀತಿಯಲ್ಲಿ ವಿದ್ಯುತ್ ಸಂಪರ್ಕದ ವ್ಯವಸ್ಥೆ ಕಲ್ಪಿಸುವ ಮೂಲಕ ಮುಂದಾಗುವ ಅವಘಡಗಳನ್ನು ತಪ್ಪಿಸಬೇಕಾಗಿದೆ.

### ಹೊಣೆ ಯಾರಾಗ್ತಾರೆ?

**ಹನೂರು ಪಟ್ಟಣದ ತರಾತುರಿಯಲ್ಲಿ ನಡೆಯುತ್ತಿರುವ ರಸ್ತೆ ಚರಂಡಿ ಫುಟ್ ಪಾತ್ ರಸ್ತೆ ಕಾಮಗಾರಿಯ ವೇಳೆ ವಿದ್ಯುತ್ ಕಂಬ ಅಳವಡಿಸಿರುವುದು. ಕಟ್ಟಡಗಳ 1.2 ಮೀಟರ್ ಗೆ 4 ಅಡಿ ಅಂತರದಲ್ಲಿ ವಿದ್ಯುತ್ ಕಂಬ ತಂತಿ ಅಳವಡಿಸಬೇಕೆಂಬ ಇಲಾಖೆಯ ನಿಯಮಗಳನ್ನು ಗಾಳಿಗೆ ತೂರಿ ತೀರಾ ಸನಿಹದಲ್ಲೆ ಕಂಬ ಅಳವಡಿಸುತ್ತಿದರು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಆಡಳಿತ ವರ್ಗ ಇಲಾಖೆ ಕಣ್ಮುಚ್ಚಿ ಕುಳಿತಿರುವುದು ಬೇಜವಾಬ್ದಾರಿತ ಆಡಳಿತ ವೈಖರಿಗೆ ಹಿಡಿದ ಕೈಗನ್ನಡಿಯಾಗಿದೆ. ಪಟ್ಟಣದ ರಸ್ತೆ ಬದಿಯಲ್ಲಿ ಕಟ್ಟಡಗಳ ಒತ್ತುವರಿಯಾದಂತೆ ವಿದ್ಯುತ್ ಕಂಬಗಳನ್ನು ಅಳವಡಿಸಿ ಯಾವುದೇ ಸುರಕ್ಷತೆಗಳಿಲ್ಲದೆ. 11ಕೆ ವಿ ಯ ಜೊತೆಗೆ ಎ ಬಿ ಕೇಬಲ್ ಮತ್ತು 440 ವೋಲ್ಟೇಜ್ ಇರುವ ವಿದ್ಯುತ್ ತಂತಿಗಳನ್ನು ಅಳವಡಿಕೆ ಅಂತರವಿಲ್ಲದೆ ಅವೈಜ್ಞಾನಿಕವಾಗಿ 11 ಕೆವಿ ಮತ್ತು 440 ವೋಲ್ಟೇಜ್ ಎರಡು ಲೈನ್ ಗಳನ್ನು ಜೊತೆಯಲ್ಲಿ ಮಾಡುತ್ತಿದ್ದಾರೆ. ಇದರ ಬಗ್ಗೆ ಕಟ್ಟಡಗಳ ಮಾಲೀಕರು ಸಹ ಪ್ರಶ್ನೆ ಮಾಡದೆ. ಸುಮ್ಮನಿರುವುದು ಅವೈಜ್ಞಾನಿಕ ಕಾಮಗಾರಿಗೆ ಪುಷ್ಠಿ ನೀಡಿದಂತಾಗಿದೆ. ಕಟ್ಟಡ ಅಂಗಡಿಯ ತಳಭಾಗ ಮೇಲ್ಭಾಗದಲ್ಲಿರುವ ಅಂಗಡಿ ಮಳಿಗೆಗಳಿಗೆ ಕೈಗೆಟಕುವ ಅಂತರದಲ್ಲಿ ವಿದ್ಯುತ್ ತಂತಿ ಹಾದು ಹೋಗಿರುತ್ತದೆ. ಇದರಿಂದ ಆಕಸ್ಮಿಕವಾಗಿ ಜನಸಾಮಾನ್ಯರಿಗೆ ವಿದ್ಯುತ್ ಅವಘಡದಿಂದ ಸಾವು ನೋವು ಸಂಭವಿಸಿದರೆ. ಇದರ ಹೊಣೆ ಯಾರ ಜವಾಬ್ದಾರಿ ಮೇಲಿರುತ್ತದೆ.? ವಿದ್ಯುತ್ ಇಲಾಖೆಯವರಾ? ಕೆ- ಶಿಫ್ ಇಲಾಖೆಯ? ಅಥವಾ ಕಟ್ಟಡಗಳ ಮಾಲೀಕರಾ ? ಇದಕ್ಕೆ ಯಾರು ಹೊಣೆಯಾಗುತ್ತಾರೆ ಎಂಬುದೇ ಯಕ್ಷ ಪ್ರಶ್ನೆಯಾಗಿದೆ.**



**ಚಿನ್ನದ ಪದಕ**

**ಬೆಂಗಳೂರಿನ ಕೋರಮಂಗಲದಲ್ಲಿ ನಡೆದ 41ನೇ ರಾಜ್ಯ ಮಟ್ಟದ ಟೇಕ್ವಾಂಡೋ ಪಂದ್ಯವಳಿಯಲ್ಲಿ ಚನ್ನಪಟ್ಟಣ ತಾಲೂಕಿನ ನ್ಯಾಷನಲ್ ಪಬ್ಲಿಕ್ ಶಾಲೆ 8ನೇ ತರಗತಿ ವಿದ್ಯಾರ್ಥಿ ಪೇಟೆಕೇರಿಯ ಎ.ಎಸ್.ನಂದನ್ ಕುಮಾರ್ ಪ್ರಥಮ ಬಹುಮಾನದೊಂದಿಗೆ ಚಿನ್ನದ ಪದಕ ಪಡೆದಿದ್ದಾರೆ.**

## ಗಾಳಿ-ಮಳೆಗೆ ರಸ್ತೆಗುರುಳಿದ ಮರ

**ಯಳಂದೂರು:** ತಾಲೂಕಿನ ಪ್ರಸಿದ್ಧ ಪ್ರವಾಸಿ ತಾಣವಾಗಿರುವ ಬಿಳಿಗಿರಿರಂಗನಬೆಟ್ಟದಲ್ಲಿ ಗಾಳಿಗೆ ಮರವೊಂದು ರಸ್ತೆಗೆ ಉರುಳಿ ಬಿದ್ದಿದ್ದು ಇದರೊಂದಿಗೆ ವಿದ್ಯುತ್ ಕಂಬವೂ ಬಿದ್ದಿದ್ದು ಅದೃಷ್ಟವಶಾತ್ ಯಾವುದೇ ಪ್ರಾಣ ಹಾನಿಯಾಗಿಲ್ಲ. ಬಿಳಿಗಿರಿರಂಗನಬೆಟ್ಟದಿಂದ ಕೆ. ಗುಡಿ ಮಾರ್ಗಕ್ಕೆ ತೆರಳುವ ಮುಖ್ಯ ರಸ್ತೆಯ ವಿಜಿಕೆಕೆ ಬಳಿ ಇರುವ ತಿರುವಿನಲ್ಲಿ ಗುರುವಾರ ಮಧ್ಯಾಹ್ನ ದೊಡ್ಡ ಮರವೊಂದು ಗಾಳಿಮಳೆಗೆ ಸಿಲುಕಿ ಧರೆಗುರುಳಿದೆ. ಇದರಿಂದ ಮರದ ಪಕ್ಕದಲ್ಲಿದ್ದ ವಿದ್ಯುತ್ ಕಂಬವೂ ನೆಲಕ್ಕುರುಳಿದೆ. ಈ ಸಮಯದಲ್ಲಿ ಕೂಡಲೇ ಸ್ಥಳೀಯರು ಮಾಹಿತಿಯನ್ನು ನೀಡಲಾಗಿ ಸೆಸ್ಕ್ ಸಿಬ್ಬಂಧಿ ಕೂಡಲೇ ವಿದ್ಯುತ್ ಕಡಿತಗೊಳಿಸಿದ್ದಾರೆ. ಈ ರಸ್ತೆಯ ಮೂಲಕ ಕೆಸ್ಸಾರ್ಟಿಸಿ ಬಸ್ ಹಾಗೂ ಅನೇಕ ಪ್ರವಾಸಿಗರು ಚಾಮರಾಜನಗರ ಮಾರ್ಗವಾಗಿ ಸಂಚರಿಸುತ್ತಾರೆ. ಅದೃಷ್ಟವಶಾತ್ ಈ ಸಮಯದಲ್ಲಿ ಯಾವ ವಾಹನವೂ ಇಲ್ಲವಾದ್ದರಿಂದ ಯಾವುದೇ ಹಾನಿ ಸಂಭವಿಸಿಲ್ಲ. ನಂತರ ಅರಣ್ಯ ಇಲಾಖೆಯ ಸಿಬ್ಬಂಧಿ ಮರವನ್ನು ತೆರವುಗೊಳಿಸಿ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಟ್ಟಿದ್ದಾರೆ.



## ಜಿಲ್ಲೆ ಅಭಿವೃದ್ಧಿಗೆ ಹಲವು ಮಹಾಶಯರ ಕೊಡುಗೆ ಅಪಾರ

**ಚಾಮರಾಜನಗರ:** ಜಿಲ್ಲೆ ಅಭಿವೃದ್ಧಿಗೆ ಹಲವು ಮಹಾಶಯರ ಪಾತ್ರಗಳು ಬಹಳಷ್ಟಿದೆ ಹಾಗೂ ಜಿಲ್ಲೆಗೆ ಹೆಸರಾಂತ ಕೈಗಾರಿಗಳು ಬರುತ್ತಿರುವುದರಿಂದ ಯುವಕರಿಗೆ ಉದ್ಯೋಗ ಭಾಗ್ಯಗಳು ದೊರೆತಂತಾಗುತಿದೆ ಎಂದು ಚಾಮರಾಜನಗರ ಸಣ್ಣ ಕೈಗಾರಿಕ ಸಂಘದ ಅಧ್ಯಕ್ಷ ಎ.ಜಯಸಿಂಹ ತಿಳಿಸಿದರು.




ನಗರದ ನಂಜನಗೂಡು ರಸ್ತೆಯಲ್ಲಿ ಇರುವ ಸಿಂಹ ಮೂವಿಪ್ಯಾರಡೆಸ್ ಸಭಾಗೃಹದಲ್ಲಿ ನಡೆದ ಚಾಮರಾಜನಗರ ಸಣ್ಣ ಕೈಗಾರಿಕೆಗಳ ಸಂಘದ (ಛಾಸಿಯ) ವಾರ್ಷಿಕೋತ್ಸವದ ಸರಳ ಸಮಾರಂಭದಲ್ಲಿ ಮಾತನಾಡುತ್ತ ಸಣ್ಣ ಕೈಗಾರಿಕೆ ಹಾಗೂ ದೊಡ್ಡ ಕೈಗಾರಿಕೆಗಳ ಸ್ಥಾಪಾನೆಯಿಂದ ಜಿಲ್ಲೆಯ ಅಭಿವೃದ್ಧಿ ಸಾಧ್ಯವಾಗುತ್ತದೆ. ಜೊತೆಗೆ ಯುವಕರಿಗೆ ಉದ್ಯೋಗ ಅವಕಾಶಗಳು ಸಿಗಲಿದೆ. ಜಿಲ್ಲೆಯ ಅಭಿವೃದ್ಧಿಗೆ ಪೂರಕವಾದ ವಾತಾವರಣ ನಿರ್ಮಿಸಿದ ಕೀರ್ತಿ ಮುಖ್ಯಮಂತ್ರಿಗಳಾದ ಸನ್ಮಾನ್ಯ ಸಿದ್ದರಾಮಯ್ಯ ನವರು, ಅಂದಿನ ಉಸ್ತುವಾರಿ ಮಂತ್ರಿಗಳಾಗಿದ್ದ ದಿವಂಗತ ಶ್ರೀ ಎಚ್.ಎಸ್. ಮಹದೇವ ಪ್ರಸಾದ್, ಅಂದಿನ ಸಂಸದರಾಗಿದ್ದ ದಿವಂಗತ ಆರ್. ಧ್ರುವನಾರಾಯಣ್ ರವರಿಗೆ ಮತ್ತು ಜಿಲ್ಲೆಯ ಎಲ್ಲಾ ಶಾಸಕರುಗಳಿಗೆ ಸಲ್ಲುತ್ತದೆ ಎಂದು ಹೇಳಿದರು. ಕಾಡ ಅಧ್ಯಕ್ಷರಾದ ಶ್ರೀ ಮರಿಸ್ವಾಮಿಯವರು ಮಾತನಾಡಿ ಚಾಮರಾಜನಗರ ಹಿಂದುಳಿದ ಜಿಲ್ಲೆಯಾದ್ದರಿಂದ ಮಾನ್ಯ ಮುಖ್ಯಮಂತ್ರಿಗಳು ವಿಶೇಷ ಆಸಕ್ತಿ ವಹಿಸಿ ಅಭಿವೃದ್ಧಿಗೆ ಸಹಕಾರ ನೀಡುತ್ತಾರೆಂದು ತಿಳಿಸಿದರು. ಚುಡಾ ಅಧ್ಯಕ್ಷರಾದ ಶ್ರೀ ಮಹಮದ್ ಅಸ್ಗರ್ ರವರು 50-50 ಅನುಪಾತದಲ್ಲಿ ನಿವೇಶನಗಳನ್ನು ಚೂಡಾವತಿಯಿಂದ ಹಂಚಲಾಗುವು ಎಂದು ತಿಳಿಸಿದರು. ನಿವೃತ್ತ ಜಂಟಿ ನಿರ್ದೇಶಕರಾದ ಶ್ರೀ ರಾಜೇಂದ್ರ ಪ್ರಸಾದ್ ಅವರು ಚಾಮರಾಜನಗರ ಜಿಲ್ಲೆಯಲ್ಲಿ ಕೈಗಾರಿಕೆಗಳ ಬೆಳವಣಿಗೆಗೆ ಪೂರಕವಾದ ವಾತಾವರಣ ಇದೆ ತಿಳಿಸಿದರು.

ಕಾಡ ಅಧ್ಯಕ್ಷರಾದ ಶ್ರೀಮರಿಸ್ವಾಮಿಯವರಿಗೆ , ಚೂಡ ಅಧ್ಯಕ್ಷರಾದ ಶ್ರೀ ಮಹಮದ್ ಅಸ್ಕರ್ ( ಮುನ್ನ ) ಹಾಗೂ ಜಿಲ್ಲಾ ಕೈಗಾರಿಕಾ ಮತ್ತು ವಾಣಿಜ್ಯ ಕೇಂದ್ರದ ಜಂಟಿ ನಿರ್ದೇಶಕರಾಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿರುವ ಕೆ. ಎ. ರಾಜೇಂದ್ರ ಪ್ರಸಾದ್ ದರವರಿಗೆ ಗೌರವಿಸಿ ಸನ್ಮಾನಿಸರಾಯಿತು.

ಈ ಸಂದರ್ಭದಲ್ಲಿ ನೂತನವಾಗಿ ವರ್ತಕರ ಸಂಘಕ್ಕೆ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಶ್ರೀ ಎನ್ ಶಂಕರ್, ಗೌರವ ಕಾರ್ಯದರ್ಶಿಗಳಾದ ಶ್ರೀ ಚಿದಾನಂದಗಣೇಶ್ ರವರನ್ನು ಗೌರವಿಸಲಾಯಿತು. ಚಾಮರಾಜನಗರ ಸಣ್ಣ ಕೈಗಾರಿಕೆಗಳ ಸಂಘದ ಪದಾಧಿಕಾರಿಗಳು,ನಿರ್ದೇಶಕರು, ಸದಸ್ಯರುಗಳು ಉಪಸ್ಥಿತರಿದ್ದರು.



**ವಿಜಯಪುರ ಪಟ್ಟಣದ ಶ್ರೀ ನಗರೇಶ್ವರ ಸ್ವಾಮಿ ಜ್ಞಾನ ಮಂದಿರದಲ್ಲಿ ಕಾರ್ಗಿಲ್ ವಿಜಯೋತ್ಸವದ 25 ವರ್ಷಗಳ ಸಂಭ್ರಮವನ್ನು ನಗರ್ತ ಮಹಿಳಾ ಸಂಘದ ವತಿಯಿಂದ ಏರ್ಪಡಿಸಲಾಗಿದ್ದು ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸಿದ ಅಶೋಕ್ ರವರನ್ನು ಈ ಸಂದರ್ಭದಲ್ಲಿ ಸಂಘದ ವತಿಯಿಂದ ಗೌರವ ಸಮರ್ಪಣೆ ನೀಡಲಾಯಿತು. ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷರಾದ ಲೀಲಾವತಿ ರುದ್ರಮೂರ್ತಿ, ಕಾರ್ಯದರ್ಶಿ ಭಾರತಿ ಪ್ರಭುದೇವ್, ಉಪಾಧ್ಯಕ್ಷರಾದ ಭಾರತಿ ವಿಶ್ವನಾಥ್, ಸಹಕಾರ್ಯದರ್ಶಿ ರಮಾ ನಟರಾಜ್, ಖಜಾಂಚಿ ಶ್ವೇತಾ ಮಂಜುನಾಥ್, ಸದಸ್ಯರುಗಳಾದ ವೀಣಾ ನಟರಾಜ್, ಸವಿತಾ ಮುರಳಿಧರ್, ಮಾಣಿಕ್ಯ ನಂಜಣ್ಣ, ಶೋಭಾ ರಾಜಶೇಖರ್, ಸುವರ್ಣ ಶಿವಕುಮಾರ್ ಉಪಸ್ಥಿತರಿದ್ದರು.**

# ಸಬ್ಬೇನಹಳ್ಳಿಗೆ ಸಮರ್ಪಕ ರಸ್ತೆ ಮಾಡಿಸಿ



**ಹುಳಿಯಾರು:** ಹಂದನಕೆರೆ ಹೋಬಳಿಯ ಸಬ್ಬೇನಹಳ್ಳಿಗೆ ಸಮರ್ಪಕವಾದ ರಸ್ತೆ ಕಲ್ಪಿಸುವಂತೆ ಗ್ರಾಮಸ್ಥರು ಒತ್ತಾಯಿಸಿದ್ದಾರೆ. ಸಬ್ಬೇನಹಳ್ಳಿಯಿಂದ ತಿಪಟೂರು-ಹೊಸದುರ್ಗ ಮುಖ್ಯ ರಸ್ತೆಗೆ ಭೂತನಗುಡಿ ಬಳಿ ಹೊಂದಿಕೊಳ್ಳುವ ರಸ್ತೆ ಇದಾಗಿದ್ದು ತುಂಬಾ ಹದಗೆಟ್ಟಿದ್ದು ನಿತ್ಯ ನೂರಾರು ಜನ ಸಂಚರಿಸುತ್ತಾರೆ. ಗವಿರಂಗಾಪುರ, ಹೊಸದುರ್ಗ, ಪಂಚನಹಳ್ಳಿ, ಬಾಣಾವರ ಕಡೆಗೆ ಸುತ್ತಮುತ್ತಲಿನ ಗ್ರಾಮಸ್ಥರು ಇದೆ ರಸ್ತೆಯಲ್ಲಿ ಓಡಾಡುತಿದ್ದು ಮಳೆ ಬಂದರೆ ಸಾಕು ಇಲ್ಲಿ ಓಡಾಡಲು ಆಗದಂತೆ ಕೆಸರುಗದ್ದೆಯಾಗಿ ಮಾರ್ಪಡುತ್ತದೆ. ಸಬ್ಬೇನಹಳ್ಳಿ ಗ್ರಾಮದಿಂದ ಒಂದು ಕಿಲೋಮೀಟರ್ ದೂರದಲ್ಲಿರುವ ಬೋವಿ ಕಾಲೋನಿ ಈ ರಸ್ತೆಗೆ ಹೊಂದಿಕೊಂಡಿದ್ದು ಮಳೆ ಬಂದಾಗ ವಾಹನಗಳನ್ನು ಆಚೆ ತೆಗೆಯದ ಪರಿಸ್ಥಿತಿ ಉಂಟಾಗುತ್ತದೆ, ವಿದ್ಯಾರ್ಥಿಗಳು, ಶಾಲಾ ವಾಹನ ಸೇರಿದಂತೆ ರೈತರು ತಮ್ಮ ಹೊಲ ಗದ್ದೆ ತೋಟಗಳಿಗೆ ಇದೇ ರಸ್ತೆಯಲ್ಲಿ ಹೋಗಬೇಕು. ಸುಮಾರು 20 ವರ್ಷಗಳಿಂದಲೂ ಈ ರಸ್ತೆ ಹೀಗೆ ಹದಗೆಟ್ಟಿದ್ದರೂ ಸಹ ಯಾರೊಬ್ಬರೂ ರಸ್ತೆ ಡಾಂಬರೀಕರಣ ಮಾಡಲು ಮುಂದಾಗಿಲ್ಲ ಎಂದು ಆರೋಪಿಸಿದ್ದಾರೆ.

> **“ ಹಲವು ಬಾರಿ ಸಂಬಂಧ ಪಟ್ಟ ಇಲಾಖೆಯ ಗಮನಕ್ಕೆ ತಂದರೂ ಪ್ರಯೋಜನ ಆಗಿಲ್ಲ. ಕಳೆದ ಬಾರಿ ಮಂತ್ರಿಗಳಿಗೆ ಮನವಿ ಕೊಟ್ಟಿದ್ದರೂ ಸ್ಪಂಧಿಸಲಿಲ್ಲ. ಶಾಸಕ ಸಿ.ಬಿ.ಸುರೇಶ್‌ಬಾಬು ಅವರಾದರೂ ಇತ್ತ ಗಮನಹರಿಸಬೇಕಿದೆ. ಇಲ್ಲವಾದರೆ ಹೋರಾಟದ ಹಾದಿ ತುಳಿಬೇಕಾಗುತ್ತದೆ.**
> **। ಶ್ರೀನಿವಾಸ್** ಸಬ್ಬೇನಹಳ್ಳಿ

# ಭಧ್ರಾಕಾಳಿ ಪೀಠದಲ್ಲಿ ವಿಶೇಷ ಪೂಜೆ

**ಕೋಲಾರ:** ಕೆಜಿಎಫ್ ತಾಲ್ಲೂಕು ಕ್ಯಾಸಂಬಳ್ಳಿ ಹೋಬಳಿ ಐವಾರಹಳ್ಳಿ -ಗಂಗಾಪುರ ಮುಖ್ಯ ರಸ್ತೆಯಲ್ಲಿ ಶ್ರೀ ೧ಬೇತಾಳ ಮಹಾಶಕ್ತಿ ಪೀಠಂನಲ್ಲಿ ಭಾನುವಾರದ ಅಮಾವಾಸ್ಯೆ ಪ್ರಯುಕ್ತ ಭದ್ರಕಾಳಿದೇವಿಗೆ ಮಹಾಪೂಜೆ ಅದ್ದೂರಿಯಾಗಿ ನಡೆಯಿತು.

108 ಅಡಿಗಳ ಬೇತಾಳ ವಿಗ್ರಹ, ಭದ್ರಕಾಳಿ, ಕಾಲಭೈರವ, ಪ್ರತಿಂಗೀರ, ಕಾಟೇರಮ್ಮ, ಪಾರ್ವತಿದೇವಿ, ನಾಗಮ್ಮ, ವಿಷ್ಣುಮಾಯ, ಕರಿಕುಟ್ಟಿ, ಚಾಟ ದೇವರುಗಳಿಗೆ ಸಂಪ್ರದಾಯದಂತೆ ಭಾನುವಾರ ಬೆಳಿಗ್ಗೆಯಿಂದ ಮಧ್ಯಾಹ್ನದ ವರೆವಿಗೂ ವಿಶೇಷ ಪೂಜೆಗಳು ನಡೆದು ಮಹಾಮಂಗಳಾರತಿ ಮತ್ತು ಭಕ್ತರಿಗೆ ಪ್ರಸಾದವಿನಿಯೋಗ ನಡೆಯಿತು.

ಪ್ರಧಾನ ಅರ್ಚಕ ಅಘೋರಿ ಚಂದ್ರನಾಥ ಮಾತನಾಡಿ ಸುಮಾರು ವರ್ಷಗಳ ಕಾಲ ಕಾಶಿಯಲ್ಲಿ ಕಠಿಣ ಶ್ರಮದಿಂದ ವಿದ್ಯೆ ಸಿದ್ದಿಯಾಯಿತು. ನಂತರದಲ್ಲಿ ಭದ್ರಕಾಳಿ ಉಪಾಸನೆಯಿಂದ ಬೇತಾಳ ಸಿದ್ಧಿಯಾಯಿತು ಈ ಕಾರಣದಿಂದಾಗಿ ಪ್ರಪಂಪಚದ ಯಾವ ಭಾಗದಲ್ಲೂ ಕಾಣ ಸಿಗದ 108 ಅಡಿಗಳ ಬೇತಾಳವನ್ನು ನಿರ್ಮಿಸಲಾಗಿದೆ. ಪ್ರತೀ ಶುಕ್ರವಾರದಂದು ಜಿಲ್ಲೆಯ ಮತ್ತು ಪಕ್ಕದ ರಾಜ್ಯಗಳಾದ ಆಂಧ್ರ,ತೆಲಂಗಾಣ ,ತಮಿಳ್ನಾಡು ಮತ್ತು ಕೇರಳದಿಂದ ಭಕ್ತಾದಿಗಳೂ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ದೇವರ ಕೃಪೆಗೆ ಪಾತ್ರರಾಗುತ್ತಾರೆ .ಮುಳಬಾಗಿಲಿನ ಮುಖಂಡರಾದ



ಸಿ ವಿ ಗೋಪಾಲ್ ಮಾತನಾಡಿ ನಾನು ಸಹ ಈ ದೇವರ ಪವಾಡಗಳ ಬಗ್ಗೆ ಕೇಳಿದ್ದೆ ಆದ ಕಾರಣ ಇಂದು ಖುದ್ದಾಗಿ ಬಂದಿದ್ದು ಇಲ್ಲಿನ ನಿಜರೂಪ ಧರ್ಷಣವಾಗಿದೆಯೆಂದ ಅವರು ದಂಪತಿಗಳೊಂದಿಗೆ ದೇವರ ದರ್ಶನ ಪಡೆದರು.

ವೆಂಕಟೇಶ್ ಮಾತನಾಡಿ ಅಘೋರಿ ಚಂದ್ರನಾಥ್ ರವರು ಭದ್ರಕಾಳಿಗೆ ವಿಶೇಷ ಪೂಜೆ ಸಲ್ಲಿಸಿ ಜನರಲ್ಲಿನ ನಕಾರಾತ್ಮಕ ಶಕ್ತಿಗಳನ್ನು ಓಡಿಸಿ ಸಕಾರಾತ್ಮಕ ಶಕ್ತಿಗಳನ್ನು ತುಂಬುವ ಮತ್ತು ಸೂಕ್ತ ಮಾರ್ಗದರ್ಶನ ನೀಡುವ ಕೆಲಸಗಳಾಗುತ್ತಿವೆಯಂದರು. ನೆರೆದಿದ್ದ ಭಕ್ತರು ಮಾತನಾಡಿ ಈಗಾಗಲೇ ಸುಮಾರು ಪ್ರಸಿದ್ಧಿ ಪಡೆದಿರುವ ದೇವಸ್ಥಾನವಿದಾಗಿದ್ದು ನಮ್ಮ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಸೂಚಿಸಿದ್ದು ಸಾಕಷ್ಟು ಸಮಸ್ಯೆಗಳಿಂದ ಭಕ್ತರು ಹೊರಬಂದಿದ್ದೇವೆಂದರು. ಆರೋಗ್ಯ ಸಮಸ್ಯೆಗಳು,ಕುಟುಂಬ ಸಮಸ್ಯೆಗಳು,ಆಸ್ತಿ ಸಮಸ್ಯೆಗಳು ,ಮಕ್ಕಳಾಗದಿರುವುದು ಇನ್ನೂ ಹಲವಾರು ಸಮಸ್ಯೆಗಳಿಗೆ ಇಲ್ಲಿ ಪರಿಹಾರ ಸಿಕ್ಕಿದೆಯೆಂದರು.

# ಪ್ರವಾಹದಿಂದ ಮುಕ್ತಗೊಳಿಸುವಂತೆ ಬೊಕ್ಕಹಳ್ಳಿ ಗ್ರಾಮಸ್ಥರ ಮನವಿ

**ತಾಂಡವಪುರ:** ಕಪಿಲಾ ನದಿ ಪ್ರವಾಹದಿಂದ ಮೈಸೂರು ಜಿಲ್ಲೆ ನಂಜನಗೂಡು ತಾಲೂಕು ಚಿಕ್ಕಯ್ಯನ ಛತ್ರ ಹೋಬಳಿ ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ಬೊಕ್ಕಹಳ್ಳಿ ಗ್ರಾಮವು ಕಪಿಲಾ ನದಿಯ ಹೆಚ್ಚು ಪ್ರಮಾಣದ ನೀರು ಗ್ರಾಮದ ಮನೆಗಳಿಗೆ ನೀರು ನುಗ್ಗಿ ಜಲಾವೃತಗೊಂಡು ಮನೆಗಳು ಸಂಪೂರ್ಣವಾಗಿ ಶಿಥಿಲ ವ್ಯವಸ್ಥೆಯಲ್ಲಿದ್ದು ನಮ್ಮ ಗ್ರಾಮವನ್ನು ಸಂಪೂರ್ಣವಾಗಿ ಸ್ಥಳಾಂತರಗೊಳಿಸಬೇಕೆಂದು ಗ್ರಾಮಸ್ಥರು ಸಚಿವರಲ್ಲಿ ಮನವಿ ಮಾಡಿಕೊಂಡರು.

ಜಿಲ್ಲಾ ಉಸ್ತುವಾರಿ ಸಚಿವರಾದ ಡಾಕ್ಟರ್ ಎಚ್ ಸಿ ಮಹದೇವಪ್ಪ ಹಾಗೂ ವಿಧಾನಪರಿಷತ್ ಸದಸ್ಯ ವರುಣ ಕ್ಷೇತ್ರದ ಆಶ್ರಯ ಸಮಿತಿಯ ಅಧ್ಯಕ್ಷರಾದ ಡಾಕ್ಟರ್ ಯತಿಂದ್ರ ಸಿದ್ರಾಮಯ್ಯನವರು ಮುಖ್ಯಮಂತ್ರಿಗಳ ಸೂಚನೆ ಮೇರೆಗೆ ಪ್ರವಾಹ ಪೀಡಿತ ಬೊಕ್ಕಹಳ್ಳಿ ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲಿಸಿ ಬಳಿಕ ಗ್ರಾಮಸ್ಥರು ಆಶ್ರಯ ಪಡೆದಿರುವ ಗಂಜಿ ಕೇಂದ್ರಕ್ಕೆ ಭೇಟಿ ನೀಡಿ ಗ್ರಾಮಸ್ಥರ ಸಮಸ್ಯೆಗಳನ್ನು ಆಲಿಸಿ ಮಾತನಾಡುತ್ತಾ ಗ್ರಾಮವನ್ನು ಸಂಪೂರ್ಣವಾಗಿ ಸ್ಥಳಾಂತರ ಮಾಡಬೇಕಾದರೆ ಸುಮಾರು 30 ರಿಂದ 40 ಎಕರೆ ಭೂಮಿ ಬೇಕಾಗಬಹುದು ಈಗಾಗಲೇ ಇದಕ್ಕೆ ಸಂಬಂಧಪಟ್ಟಂತೆ ಅಧಿಕಾರಗಳ ಜೊತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾತನಾಡಿ ಸರ್ಕಾರಿ ಭೂಮಿ ಗುರುತಿಸಲು ಸೂಚನೆ ನೀಡಿದ್ದಾರೆ ಅವರ



ಸೂಚನೆಯಂತೆ ಈಗಾಗಲೇ ಅಧಿಕಾರಿಗಳು ಸರ್ವೇ ಕಾರ್ಯ ನಡೆಸಿದ್ದಾರೆ ಗ್ರಾಮವನ್ನು ಹಂತ ಹಂತವಾಗಿ ಸ್ಥಳಾಂತರ ಮಾಡಲು ಎಲ್ಲ ರೀತಿಯ ಕ್ರಮ ಕೈಗೊಳ್ಳಲಾಗುವುದು ಎಂದು ಗ್ರಾಮಸ್ಥರಿಗೆ ಭರವಸೆ ನೀಡಿದರು ಜೊತೆಗೆ ಪ್ರವಾಹದಿಂದ ನಷ್ಟಕ್ಕೆ ಒಳಗಾದ ಗ್ರಾಮಸ್ಥರಿಗೆ ಸರ್ಕಾರದಿಂದ ಸೂಕ್ತ ಪರಿಹಾರವನ್ನು ದೊರಕಿಸಿಕೊಡಲು ಬದ್ಧವಾಗಿದೆ ಈಗಾಗಲೇ ಕೇಂದ್ರ ಸರ್ಕಾರಕ್ಕೆ ಮುಖ್ಯಮಂತ್ರಿಗಳು ಪ್ರವಾಹ ಪೀಡಿತ ಪ್ರದೇಶಗಳಿಗೆ ಹೆಚ್ಚು ಪರಿಹಾರವನ್ನು ನೀಡುವಂತೆ ಮನವಿ ಮಾಡಿದ್ದಾರೆ ಎಂದು ತಿಳಿಸಿದ ಸಚಿವರು ಕಬಿನಿ ನದಿಯಿಂದ ಹೆಚ್ಚು ನೀರು ಬಿಟ್ಟರೆ ಅದನ್ನು ನಿಭಾಯಿಸಲು ಅಧಿಕಾರಿಗಳಿಗೆ ಈಗಾಗಲೇ ಸೂಚನೆ ನೀಡಲಾಗಿದೆ ಯಾರು ಕೂಡ ಗ್ರಾಮಸ್ಥರು ಭಯಪಡುವ ಅಗತ್ಯವಿಲ್ಲ ನಿಮ್ಮ ಜೊತೆ ನಾವಿದ್ದೇವೆ, ಸರ್ಕಾರವಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಡಾಕ್ಟರ್ ಎಚ್ ಸಿ ಮಹದೇವಪ್ಪ ವಿಧಾನಪರಿಷತ್ ಸದಸ್ಯ ಡಾಕ್ಟರ್ ಯತೀಂದ್ರ ಸಿದ್ದರಾಮಯ್ಯನವರು ಭರವಸೆ ನೀಡಿದರು ಈ ಸಂದರ್ಭದಲ್ಲಿ ರಾಜ್ಯ ವಾಲ್ಮೀಕಿ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎಸ್ ಸಿ ಬಸವರಾಜು ತಗಡೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಂಗಸ್ವಾಮಿ ಶ್ರೀಕಂಠೇಶ್ವರ ದೇವಾಲಯ ವ್ಯವಸ್ಥಾಪನಾ ಸಮಿತಿಯ ಮಾಜಿ ಅಧ್ಯಕ್ಷ ಹೆಜ್ಜಿಗೆ ಆರ್ ಇಂಧನ ಬಾಬು ಗ್ರಾಮದ ಮುಖಂಡರಾದ ಸೋಮಸುಂದರ್ ಮಾದಪ್ಪ ಲಿಂಗಯ್ಯ ನಂಜುಡುಸ್ವಾಮಿ ದೊರೆಸ್ವಾಮಿ ಜಿಲ್ಲಾಧಿಕಾರಿಗಳಾದ ಸತೀಶ್ ರೆಡ್ಡಿ ಕಾರ್ಯ ನಿರ್ವಹಣಾಧಿಕಾರಿಗಳಾದ ಗಾಯತ್ರಿ ತಾಸಿಲ್ದಾರದ ರಕ್ಷಿತ್ ಶಿವಕುಮಾರ್ ತಾಲೂಕು ಪಂಚಾಯತಿ ಕಾರ್ಯನಿರ್ವಾಧಿಕಾರಿ ರಾಜೇಶ್ ತಾಲೂಕು ಕುರುಬ ಸಂಘದ ಅಧ್ಯಕ್ಷ ಕೆಂಪಣ್ಣ ಜಿಲ್ಲಾ ಪಂಚಾಯತಿ ಮಾಜಿ ಸದಸ್ಯ ರೇವಮ್ಮ ನಂದಕುಮಾರ್ ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಮಂಜುಳ ಮಂಜುನಾಥ್ ಬಿಪಿ ಮಹಾದೇವ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷರಾದ ಅಭಿಷೇಕ್ ಅಭಿ ಗುರುಮಲ್ಲಪ್ಪ ಪರಶಿವಮೂರ್ತಿ ಪಿ ಗಿರೀಶ್ ಬಗರ್ ಹುಕುಂ ಸಮಿತಿಯ ಸದಸ್ಯ ರಾಜಣ್ಣ ಮಾದಪ್ಪ ನಟರಾಜು ಹಾರೋಪುರ ಶಿವಣ್ಣ ಆನಂದ್ ಜಿ ಮರಳ್ಳಿ ಮಹೇಶ್ ಮನು ಮೂರ್ತಿ ಟೀಕೆ ನಾಗೇಶ ಹುಳಿಮಾವು ಪರಶಿವಮೂರ್ತಿ ಹಾಜರಿದ್ದರು.

## ಗ್ರಾ.ಪಂನಿಂದ ಪ್ರಮಾಣ ಪತ್ರ ವಿತರಣೆ ಚಾಲನೆ



**ಕೆ.ಆರ್.ಪೇಟೆ:** ತಾಲ್ಲೂಕಿನ ಅಗ್ರಹಾರಬಾಚಹಳ್ಳಿ ಗ್ರಾಮ ಪಂಚಾಯತ್ ವತಿಯಿಂದ ಸರ್ಕಾರದ ಹೊಸ ಆದೇಶದ ಪ್ರಕಾರ ಜನನ-ಮರಣ ಪ್ರಮಾಣ ಪತ್ರಗಳನ್ನು ಫಲಾನುಭವಿಗಳಿಗೆ ವಿತರಣೆ ಮಾಡುವ ಹೊಸ ಯೋಜನೆಗೆ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಎ.ಸಿ.ದಿವಿಕುಮಾರ್ ಚಾಲನೆ ನೀಡಿದರು.ಬಳಿಕ ಮಾತನಾಡಿದ ಗ್ರಾ.ಪಂ.ಅಧ್ಯಕ್ಷರಾದ ಎ.ಸಿ.ದಿವಿಕುಮಾರ್ ಅವರು ಸರ್ಕಾರವು ಅಧಿಕಾರ ವಿಕೇಂದ್ರೀಕರಣ ಮಾಡುವ ಮೂಲಕ ತಾಲ್ಲೂಕು ಮಟ್ಟದ ಹಲವಾರು ಸೌಲಭ್ಯಗಳನ್ನು ಗ್ರಾಮ ಪಂಚಾಯಿತಿ ಮಟ್ಟಕ್ಕೆ ಜಾರಿಗೊಳಿಸಿದೆ. ಜನನ ಮತ್ತು ಮರಣ ಪ್ರಮಾಣ ಪತ್ರವನ್ನು ಪಡೆದುಕೊಳ್ಳಲು ಗ್ರಾಮೀಣ ಪ್ರದೇಶದ ಜನತೆ ತಾಲ್ಲೂಕು ಕೇಂದ್ರಕ್ಕೆ ಅಲೆದಾಡಬೇಕಾಗಿತ್ತು. ಇದೀಗ ಈ ಯೋಜನೆ ಸೇರಿದಂತೆ ಹಲವು ಯೋಜನೆಯನ್ನು ಜಾರಿಗೊಳಿಸಲು ಗ್ರಾಮ ಪಂಚಾಯತಿಗಳಿಗೆ ಅಧಿಕಾರ ವಿಕೇಂದ್ರೀಕರಣ ಮಾಡಿರುವುದರಿಂದ ಜನ ಸಾಮಾನ್ಯರಿಗೆ ಹೆಚ್ಚು ಅನುಕೂಲವಾಗಲಿದೆ. ಜನನ ಅಥವಾ ಮರಣ ದಾಖಲೆ ನೊಂದಣಿ ಮಾಡಿಸದೇ ಇದ್ದರೆ ನ್ಯಾಯಾಲಯದ ಮೂಲಕ ಸಿಮಿಸ್ ಪ್ರಕರಣ ದಾಖಲಿಸಿ ಪಡೆದುಕೊಳ್ಳಬೇಕಾಗುತ್ತದೆ. ಇದಕ್ಕೆ ಕನಿ?ಟ ನಾಲ್ಕು ತಿಂಗಳ ಕಾಲಾವಕಾಶ ಹಾಗೂ ಕನಿಷ್ಠ ಐದಾರು ಸಾವಿರ ರೂ ಹಣ ಬೇಕಾಗುತ್ತದೆ. ಇದನ್ನು ತಪ್ಪಿಸಲು ಈಗ ಗ್ರಾಮ ಪಂಚಾಯಿತಿಗಳಿಗೆ ಜನನ ಮತ್ತು ಮರಣ ನೊಂದಣಿ ಮತ್ತು ಪ್ರಮಾಣ ಪತ್ರಗಳನ್ನು ವಿತರಣೆ ಮಾಡುವ ಅಧಿಕಾರವನ್ನು ಸರ್ಕಾರ ನೀಡಿದೆ. ಮೃತ ಅಥವಾ ಜನನವಾದ ಕುಟುಂಬದವರು ಅರ್ಜಿ ನೀಡಿದ ಕೇವಲ ಮೂರೇ ದಿನಗಳಲ್ಲಿ ಮರಣ ಅಥವಾ ಜನನ ಪ್ರಮಾಣ ಪತ್ರಗಳನ್ನು ವಿತರಣೆ ಮಾಡಲಾಗುತ್ತಿದೆ. ಇದರಿಂದ ಗ್ರಾಮೀಣ ಪ್ರದೇಶದ ಜನತೆ ಬಹು ಸುಲಭವಾಗಿ ಪ್ರಮಾಣ ಪತ್ರಗಳನ್ನು ತಮ್ಮ ಮನೆ ಬಾಗಿಲಿನಲ್ಲಿ ಪಡೆದುಕೊಳ್ಳಲು ಸಹಕಾರಿಯಾಗಿದೆ. ಇದು ಗ್ರಾಮೀಣ ಪ್ರದೇಶದ ಜನತೆಗೆ ಹೆಚ್ಚು ಉಪಯೋಗವಾಗಿದೆ. ತಾಲ್ಲೂಕು ಕೇಂದ್ರಕ್ಕೆ ಅಲೆಯುವುದು ತಪ್ಪಿದೆ. ಜೊತೆಗೆ ಸಮಯ ಉಳಿತಾಯವಾಗಿದೆ ಎಂದು ದಿವಿಕುಮಾರ್ ಅಭಿಪ್ರಾಯ ಪಟ್ಟರು. ಗ್ರಾಮ ಪಂಚಾಯತ್ ಸದಸ್ಯರಾದ ಚಿಕ್ಕೋಸಹಳ್ಳಿ ಕುಮಾರ್ ಗೌಡ, ಚಿಲ್ಲದಹಳ್ಳಿ ಶ್ರೀನಿವಾಸ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಚಂದ್ರಕುಮಾರ್, ಗ್ರಾ.ಪಂ. ಡಿಇಓ ತ್ರಿವೇಣಿ ಹಾಗೂ ಫಲಾನುಭವಿಗಳು ಉಪಸ್ಥಿತರಿದ್ದರು.

## ನಾಳೆ ವಿದ್ಯುತ್ ವ್ಯತ್ಯಯ

**ಮೈಸೂರು:** ಆಗಸ್ಟ್ 06 ರಂದು ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ಸೌತ್ (ದಕ್ಷಿಣ) ವಿದ್ಯುತ್ ವಿತರಣಾ ಕೇಂದ್ರಗಳಿಂದ ಹೊರಹೊಮ್ಮುವ 11 ಕೆ.ವಿ. ರಾಮಾನುಜ ಫೀಡರ್‌ನಲ್ಲಿ ತುರ್ತು ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ವಿದ್ಯುತ್ ವ್ಯತ್ಯಯವಾಗಲಿದೆ. ರಾಮಾನುಜ ರಸ್ತೆ 1 ರಿಂದ 19ನೇ ಕ್ರಾಸ್ ವರೆಗೆ, ಬಸವೇಶ್ವರ ರಸ್ತೆ 1 ರಿಂದ 14ನೇ ಕ್ರಾಸ್ವರೆಗೆ, ಹೊಸಬಂಡಿಕೇರಿ ಹಾಗೂ ಸುತ್ತ-ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ನಿಲುಗಡೆಯಾಗಲಿದ್ದು, ಸಾರ್ವಜನಿಕರು ಹಾಗೂ ಕೈಗಾರಿಕೋದ್ಯಮಿಗಳು ಸಹಕರಿಸಬೇಕೆಂದು ನ.ರಾ. ಮೊಹಲ್ಲಾದ, ಚಾ.ವಿ.ಸ.ನಿ.ನಿ.ಯ ಕಾರ್ಯ ಮತ್ತು ಪಾಲನೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಿಸರ್ಗದ ಯಾವ ಸೃಷ್ಟಿಗೂ ಗಡಿ ಇಲ್ಲ: ನಾಗೇಶ ಹೆಗಡೆ



**ಪೀಣ್ಯ ದಾಸರಹಳ್ಳಿ:** 'ಮನುಷ್ಯ ಮತ್ತು ಜೀವಿಗಳಿಗೆ ಯಾವುದು ಬೇಡವೋ ಅದನ್ನು ನಿಸರ್ಗವು ತನ್ನ ಒಡಲೊಳಗೆ ಮುಚ್ಚಿಟ್ಟುಕೊಂಡಿತ್ತು.ಮರದ ಮೇಲಿದ್ದ ಮನುಷ್ಯ ಕೆಳಗೆ ಇಳಿದು ಓಡಾಡಲು ಶುರು ಮಾಡಿದ ನಂತರ ಭೂಮಿಯನ್ನು ಬಗೆದು ನಿಸರ್ಗದ ಇಂಗಾಲಮಯ ನಿಕ್ಷೇಪಗಳನ್ನ ಬಳಸಲು ಶುರು ಮಾಡಿದಾಗ ಭೂಮಿಯ ಆರೋಗ್ಯದಲ್ಲಿ ವ್ಯತ್ಯಾಸವಾಯಿತು. ಆ ವ್ಯತ್ಯಾಸ ಭೂಮಿಯನ್ನು ಅವಲಂಬಿಸಿ ಬದುಕುವ ಎಲ್ಲ ಜೀವಿಗಳನ್ನು ಗೋಚರಿಸ ತೊಡಗಿತು' ಎಂದು ಖ್ಯಾತ ವಿಜ್ಞಾನ ಮತ್ತು ಪರಿಸರ ಲೇಖಕ ನಾಗೇಶ ಹೆಗಡೆ ಹೇಳಿದರು.

ಹಾವನೂರು ಬಡಾವಣೆಯ ಭೂಮಿಕಾ ಸೇವಾ ಫೌಂಡೇಶನ್ ನಲ್ಲಿ ಆಯೋಜಿಸಿದ್ದ 'ಎಂಟನೇ ಮೈಲಿಯ 'ಪರಸ್ಪರ'ವೇದಿಕೆಯ ಸಮಾರಂಭದಲ್ಲಿ 'ಲೋಕಲ್ ಆಚೆಗಿನ ಲೋಕ 'ಎಂಬ ವಿಷಯದ ಬಗ್ಗೆ ಲೋಕಾಭಿರಾಮವಾಗಿ ಮಾತನಾಡಿದ ಹೆಗಡೆಯವರು

'ಪ್ರಯೋಗ ಮಾಡುತ್ತಾ ಮಾಡುತ್ತಾ ಒಂದೊಂದೇ ಜೀವಿಯನ್ನು ಸೃಷ್ಟಿ ಮಾಡಿದ ನಿಸರ್ಗ ತನ್ನ ಯಾವ ಸೃಷ್ಟಿಗೂ ಗಡಿಯನ್ನು ಹಾಕಿಕೊಂಡಿರಲಿಲ್ಲ. ಆದರೆ ಮನುಷ್ಯ ಗಡಿಗಳನ್ನು ಹಾಕಲು ಪ್ರಾರಂಭಿಸಿದಾಗ ಭೂಮಿ ನಲುಗುತ್ತಾ ಹೋಯಿತು'ಎಂದು ವಿಷಾದಿಸಿದರು.

'ಪ್ರತಿ ಸೃಷ್ಟಿಯು ಅಣುಗಳ ಬಂಧವೇ ಆಗಿದ್ದರೂ ಅದು ಒಂದೆಡೆ ಹತ್ತಿ, ಹೂವಿನಷ್ಟು ಮೃದು ಇನ್ನೊಂದೆಡೆ ಕಬ್ಬಿಣದಷ್ಟು ಗಟ್ಟಿ ಏಕೆ ಎಂಬುದು ನಿಸರ್ಗ ರಹಸ್ಯವೇ ಸರಿ ಎಂದು ಹೇಳುತ್ತಾ ನೀರಿಗೆ, ಆಕಾಶಕ್ಕೆ,ಭೂಮಿ - ಪರ್ವತಗಳಿಗೆ ಗಡಿಗಳನ್ನು ಹಾಕಿಕೊಂಡು ಮೆರೆಯುವ ಮನುಷ್ಯನ ವಿಕಾಸಕ್ಕೆ ಕಾರಣವಾದ ನಿಸರ್ಗದ ಈ ಕೆಲಸ ತಪ್ಪು ಸರಿಯೋ ಎಂಬ ಗೊಂದಲವಿದೆ'ಎಂದರು.

'ಇಂದಿನವರು ಪ್ರಕೃತಿಯ ಪ್ರತಿ ಅಂಶವನ್ನು ಹಣದ ಲೆಕ್ಕಾಚಾರದಲ್ಲಿ ನೋಡುತ್ತಿರುವುದರಿಂದ ಪಾರಿಸರಿಕ ದುರಂತಗಳಿಗೆ ಲೆಕ್ಕವೇ ಇಲ್ಲ,ಆದರೆ ಭೂಮಿಯ ಬೃಹತ್ ಶಕ್ತಿಯ ಮುಂದೆ ಇದು ಬಹಳ ದಿನ ನಡೆಯದು ಎಂದು ಎಚ್ಚರಿಸುತ್ತಾ ಇರುವ ಪ್ರಕೃತಿಯನ್ನು ಉಳಿಸಿಕೊಳ್ಳಲು ಗಾಂಧಿ ಮಾದರಿಯ ಬದುಕಿನ ಮಾರ್ಗವೇ ಸರಿ'ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಲೇಖಕ ಗುರುರಾಜ ದಾವಣಗೆರೆ, ಜಾನಪದ ಪರಿಷತ್ತಿನ ದಾಸರಹಳ್ಳಿ ಕ್ಷೇತ್ರ ಘಟಕದ ಅಧ್ಯಕ್ಷ ವೈ.ಬಿ.ಎಚ್ ಜಯದೇವ್, ಕಥೆಗಾರ ಕಂನಾಡಿಗಾ ನಾರಾಯಣ, ಸುಧಾ ಪತ್ರಿಕೆ ಕಾರ್ಯನಿರ್ವಾಹಕ ಸಂಪಾದಕ ರಘುನಾಥ್ ಚ.ಹ, ಪತ್ರಕರ್ತ ವಿಶಾಖ ಎನ್, ಲೇಖಕಿಯರಾದ ಮಮತಾ ವಾರನಹಳ್ಳಿ, ಭಾರತಿ ಕೊಕಲೆ, ಫೌಂಡೇಶನ್ ಅಧ್ಯಕ್ಷೆ ಲತಾ ಕುಂದರಗಿ, ಕನ್ನಡ ಸೇನೆ ಖಜಾಂಚಿ ರಾಜೇಂದ್ರ, ಕೊಣ್ಣೂರ, ಅಧ್ಯಾಪಕರು, ಬರಹಗಾರರು ಮತ್ತು ಸಾಹಿತ್ಯ ಅಸಕ್ತರು ಸಂವಾದದಲ್ಲಿ ಭಾಗವಹಿಸಿದರು.

### ಲೋಕಸಭಾ ಸದಸ್ಯ ಸುನೀಲ್ ಬೋಸ್ ಅವರಿಗೆ ಮನವಿ

# ಸಂತ್ರಸ್ತರಿಗೆ ಶಾಶ್ವತ ಪರಿಹಾರ ಕಲ್ಪಿಸಿ

**ಚಾಮರಾಜನಗರ:** ಜಿಲ್ಲೆಯ ಕೊಳ್ಳೇಗಾಲ ತಾಲೂಕಿನ ನದಿ ಪಾತ್ರದ ಪ್ರವಾಹ ಸಮಸ್ಯೆ ಗ್ರಾಮಗಳು ಹಾಗೂ ಪ್ರವಾಹ ಸಂತ್ರಸ್ತರಿಗೆ ತೆರೆಯಲಾಗಿರುವ ಕಾಳಜಿ ಕೇಂದ್ರಕ್ಕೆ ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ಭಾನುವಾರ ಭೇಟಿ ನೀಡಿ ವ್ಯಾಪಕವಾಗಿ ಪರಿಶೀಲಿಸಿದರು.

ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ಪಟ್ಟಣದ ಮಹದೇಶ್ವರ ಕಾಲೇಜು ಬಳಿಯಿರುವ ಹಾಸ್ಟೆಲ್ ನಲ್ಲಿ ತೆರೆಯಲಾಗಿರುವ ಕಾಳಜಿ ಕೇಂದ್ರಕ್ಕೆ ಭೇಟಿ ಕೊಟ್ಟು ವೀಕ್ಷಿಸಿದರು.ಅಡುಗೆ ಕೋಣೆಗೆ ಭೇಟಿ ನೀಡಿ ದಾಸ್ತಾನು ಮಾಡಲಾಗಿದ್ದ ಆಹಾರ ಧಾನ್ಯ ಇನ್ನಿತರ ಸಾಮಾಗ್ರಿಗಳನ್ನು ಪರಿಶೀಲಿಸಿದರು. ಸಂತ್ರಸ್ತರಿಗೆ ಸಿದ್ದಪಡಿಸಲಾಗಿದ್ದ ಮಧ್ಯಾಹ್ನದ ಊಟ ಪರಿಶೀಲಿಸಿದರು. ಕಾಳಜಿ ಕೇಂದ್ರದಲ್ಲಿ ಎಷ್ಟು ಮಂದಿ ಆಶ್ರಯ ಪಡೆದಿದ್ದಾರೆ? ಎಂಬ ಬಗ್ಗೆ ಮಾಹಿತಿ ಪಡೆದ ಲೋಕಸಭಾ ಸದಸ್ಯರು ಎಲ್ಲ ಅನುಕೂಲಗಳನ್ನು ಪ್ರವಾಹ ಸಂತ್ರಸ್ತರಿಗೆ ಒದಗಿಸಬೇಕು.ಯಾವುದೇ ತೊಂದರೆ ಇಲ್ಲದಂತೆ ಸಂತ್ರಸ್ತರನ್ನು ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಕಾಳಜಿ ಕೇಂದ್ರದಲ್ಲಿದ್ದ ಗ್ರಾಮಸ್ಥರ ಅಹವಾಲು ಆಲಿಸಿದ ವೇಳೆ ಗ್ರಾಮಸ್ಥರು ಶಿಥಿಲವಾಗಿರುವ ಹಾಗೂ ಭಾಗಶಃ ಹಾನಿಗೊಳಗಾಗಿರುವ ತಮ್ಮ ಮನೆಗಳನ್ನು ತುರ್ತಾಗಿ ನಿರ್ಮಿಸಿಕೊಡಬೇಕು.ಮಳೆ ಪ್ರವಾಹ ಬಂದಾಗ ನಮ್ಮ ಆತಂಕ ಹೆಚ್ಚಾಗುತ್ತದೆ. ನಮಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಮನವಿ ಮಾಡಿದರು.

ಸರ್ಕಾರದ ಮಾರ್ಗಸೂಚಿಗಳನ್ವಯ ಮನೆಗಳ ನಿರ್ಮಾಣ ಮಾಡಿಕೊಡಲಾಗುವುದು. ಅಧಿಕಾರಿಗಳೊಂದಿಗೆ ವಿವರವಾಗಿ ಚರ್ಚಿಸಿ ಅಗತ್ಯ ಕ್ರಮವಹಿಸಲಾಗುವುದು.ವಿಶೇಷ ಪ್ರಕರಣವೆಂದು ಪರಿಗಣಿಸಿ ಸಂತ್ರಸ್ತರಿಗೆ ಸೌಲಭ್ಯ ಕಲ್ಪಿಸಿಕೊಡಲಾಗುವುದು ಎಂದರು.

ಪ್ರವಾಹ ಸಮಸ್ಯೆಯ ದಾಸನಪುರ ಗ್ರಾಮಕ್ಕೆ ಭೇಟಿ ನೀಡಿ ಪರಿಸ್ಥಿತಿ ಅವಲೋಕಿಸಿದ ಸಚಿವರು ಗ್ರಾಮಕ್ಕೆ ನೀರು ನುಗ್ಗಿದ ಪರಿಣಾಮ ಹಾನಿಯಾಗಿರುವ ಮನೆಗಳನ್ನು ಪರಿಶೀಲಿಸಿದರು.. ಸ್ಥಳೀಯರ ಮನವಿ ಆಲಿಸಿ ಹಾನಿಗೀಡಾದ ಮನೆಗಳ ನಿರ್ಮಾಣ ಸಂಬಂಧ ಕ್ರಮಕೈಗೊಳ್ಳಲು ಲೋಕಸಭಾ ಸದಸ್ಯರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಬಳಿಕ ಹಳೆ ಅಣಗಳ್ಳಿ ,ಹಳೆ ಹಂಪಾಪುರ,ಹರಳೆ,ಮುಳ್ಳೂರು ಗ್ರಾಮಗಳಿಗೆ ಭೇಟಿ ನೀಡಿ ಅಲ್ಲಿನ ಗ್ರಾಮಸ್ಥರೊಂದಿಗೆ ಪ್ರವಾಹ ಸಮಸ್ಯೆಗಳನ್ನು ಆಲಿಸಿದರು.ಪ್ರವಾಹ



**ಮುಡಾ, ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣಕ್ಕೂ ಸರ್ಕಾರಕ್ಕೂ ಸಂಬಂಧವಿಲ್ಲ**

**ಮುಡಾ ಹಾಗೂ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ ಹಗರಣಕ್ಕೂ ಸರ್ಕಾರಕ್ಕೂ ಸಂಭಂದವಿಲ್ಲ ಎಂದು ಸಂಸದ ಸುನೀಲ್ ಬೋಸ್ ಹೇಳಿದರು. ಭಾನುವಾರ ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲದ ಪ್ರವಾಹಕ್ಕೆ ಒಳಗಾಗುವ ಗ್ರಾಮಗಳು ಮತ್ತು ಕಾಳಜಿ ಕೇಂದ್ರಕ್ಕೆ ಭೇಟಿಕೊಟ್ಟು ಪರಿಶೀಲನೆ ನಡೆಸಿದ ಸಂಸದ ಸುನೀಲ್ ಬೋಸ್ ಮಾಧ್ಯಮದವರೊಂದಿಗೆ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಉತ್ತಮ ಆಡಳಿತ ನೆಡೆಸುತ್ತಿರುವುದಕ್ಕೆ ಬಿ.ಜೆ.ಪಿ ಗೆ ಸಹಿಸಲಾಗುತ್ತಿಲ್ಲ ಎಂದರು. ಮುಖ್ಯಮಂತ್ರಿಗಳ ಜನಪ್ರಿಯ ಸಹಿಸಲಾಗದೆ ಅವರ ಜನಪ್ರಿಯತೆ ಕುಗ್ಗಿಸಲು ಪಾದಯಾತ್ರೆ ಮಾಡಲಾಗುತ್ತಿದೆ ಎಂದು ದೂರಿದರು. ಮುಡಾ ಹಗರಣವಾಗಿರೋದು ಬಿ.ಜೆ.ಪಿ. ಸರ್ಕಾರದ ಅವಧಿಯಲ್ಲಿ, ಎಂದ ಸಂಸದ ಸುನೀಲ್ ಬೋಸ್, ಹಗರಣದ ತನಿಖೆಯನ್ನು SITಗೆ ಕೊಟ್ಟಿದ್ದಾರೆ, ಹಗರಣದಲ್ಲಿ ಯಾರೇ ಭಾಗಿಯಾಗಿದ್ದು, ತಪ್ಪಿತಸ್ಥರಿಗೆ ಶಿಕ್ಷೆಯಾಗುತ್ತೆ ಎಂದರು. ಮುಖ್ಯಮಂತ್ರಿ ಗಳಿಗೆ ರಾಜ್ಯಪಾಲರಿಗೆ ನೋಟೀಸ್ ಕೊಡುವ ಅಧಿಕಾರವಿಲ್ಲ ಎಂದು ಇದೇ ವೇಳೆ ಹೇಳಿದರು.**

ನೀರು ಆವೃತಗೊಂಡು ಹಾನಿಗೀಡಾಗಿರುವ ಬೆಳೆ ವೀಕ್ಷಣೆ ಮಾಡಿದರು.ನೀರು ನುಗ್ಗದಿರಲು ನಿರ್ವಹಿಸಬಹುದಾದ ಕಾಮಗಾರಿ ಸಂಬಂಧ ಅಧಿಕಾರಿಗಳು ಹಾಗೂ ಸ್ಥಳೀಯರೊಂದಿಗೆ ಸಮಾಲೋಚಿಸಿದರು.

ಈ ನಡುವೆ ದಾಸನಪುರ ಕಾವೇರಿ ನದಿ ತಟದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಕಬಿನಿ ಮತ್ತು ಕೆಆರ್‌ಎಸ್ ಜಲಾಶಯಗಳಿಂದ 2.20 ಲಕ್ಷ ಕ್ಯೂಸೆಕ್ ನೀರನ್ನು ಕಾವೇರಿ ನದಿಗೆ ಹರಿಸಿದ ಹಿನ್ನೆಲೆ ಚಾ.ನಗರ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ನಂಜನಗೂಡು, ತಿ.ನರಸೀಪುರ ಹಾಗೂ ಕೊಳ್ಳೇಗಾಲ ತಾಲೂಕಿನ ನದಿ ಪಾತ್ರದಲ್ಲಿ ಪ್ರವಾಹ ಉಂಟಾಗಿದ್ದು, ಆ ವೇಳೆಗೆ ತಾವು ಸಂಸತ್ತಿನ ಅಧಿವೇಶನದಲ್ಲಿ ಭಾಗವಹಿಸಿದ್ದ ಕಾರಣ ತಕ್ಷಣ ಬರಲಾಗಲಿಲ್ಲ. ಈ ನಡುವೆ ಶನಿವಾರ ಮೈಸೂರಿಗೆ ಬಂದು ಅಧಿಕಾರಿಗಳು ನದಿ ಪ್ರವಾಹದ ಪರಿಸ್ಥಿತಿ ನಿಭಾಯಿಸಲು ಮುನ್ನೆಚ್ಚರಿಕೆ ಕ್ರಮವಾಗಿ ಏನೆಲ್ಲ ನಿರ್ವಹಣೆ ಮಾಡಿದ್ದಾರೆ ಎಂಬುದನ್ನು ತಿಳಿದುಕೊಂಡಿದ್ದೇನೆ ಎಂದರು.

ಅಂತೆಯೇ, ಪ್ರವಾಹದಲ್ಲಿ ಬೆಳೆ ಹಾಗೂ ಮನೆ ಹಾನಿಗೊಳಗಾದವರಿಗೆ ಸೂಕ್ತ ಪರಿಹಾರ ಕೊಡಿಸುವ ನಿಟ್ಟಿನಲ್ಲಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದರು.

ಕಾವೇರಿ ಪ್ರವಾಹ ಎದುರಾದ ಸಂದರ್ಭದಲ್ಲಿ ನದಿ ಪಾತ್ರದ ಗ್ರಾಮಗಳಿಗೆ ಪ್ರತಿಬಾರಿಯೂ ಬೆಳೆ ಮತ್ತು ಮನೆಗೆ ಹಾನಿಯಾಗುತ್ತಿದೆ. ಮುಂದಿನ ದಿನದಲ್ಲಿ ನದಿ ಪ್ರವಾಹದಿಂದ ಆಗುವ ಅನಾಹುತವನ್ನು ಹೇಗೆ ತಪ್ಪಿಸಬೇಕು ಎಂಬುದರ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚೆ ಮಾಡಿದ್ದೇನೆ. ಆ ಕುರಿತು ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ರಾಜ್ಯ ಸರ್ಕಾರದೊಂದಿಗೆ ಚರ್ಚಿಸುವೆ.ಮುಖ್ಯಮಂತ್ರಿಗಳ ಜೊತೆಯಲ್ಲೂ ಸಮಸ್ಯೆ ಪರಿಹಾರ ಕುರಿತು ಮನವಿ ಮಾಡುವುದಾಗಿ ತಿಳಿಸಿದರು. ಕಾಡಾ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಉಪವಿಭಾಗಾಧಿಕಾರಿ ಮಹೇಶ್, ತಹಶೀಲ್ದಾರ್ ಮಂಜುಳಾ, ಪ್ರಭಾರ ತಾಲೂಕು ಪಂಚಾಯತ್ ಕಾರ್ಯ ನಿರ್ವಾಹಕಾಧಿಕಾರಿ ಶಿವಪ್ರಕಾಶ್ ಇತರರು ಇದ್ದರು.



## ಹೂವಿನ ಅಲಂಕಾರ ಹಾಗೂ ಅನ್ನ ಸಂತರ್ಪಣೆ

**ಮೈಸೂರಿನ ಸುಮಯ ಪ್ರಾಪರ್ಟೀಸ್ ವತಿಯಿಂದಆಷಾಢ ಮಾಸದ ನಾಲ್ಕು ಶುಕ್ರವಾರ ಲಲಿತಾದ್ರಿಪುರ ಬೆಟ್ಟದತಪ್ಪಲಿನಲ್ಲಿರುವನಾಡಿನಅಧಿದೇವತೆತಾಯಿಚಾಮುಂಡೇಶ್ವರಿ ವಿಶೇಷ ಪೂಜೆ, ಹೂವಿನ ಅಲಂಕಾರ ಹಾಗೂ ಅನ್ನ ಸಂತರ್ಪಣೆಯನ್ನುಏರ್ಪಡಿಸಲಾಗಿತ್ತು.ಕಾರ್ಯಕ್ರಮದಲ್ಲಿ ಮಾಜಿ ಸಚಿವರಾದ ಸಾ.ರಾ.ಮಹೇಶ್, ವಿಧಾನಪರಿಷತ್ ಸದಸ್ಯರಾದ ಕೆ.ವಿವೇಕಾನಂದ, ಸುಮಯ ಪ್ರಾಪರ್ಟೀಸ್‌ನ ಮಾಲೀಕರಾದ ಸುಧೀಎಸ್ ಶೆಟ್ಟಿ ಹಾಗೂ ಸಿಬ್ಬಂದಿ ವರ್ಗ ಮತ್ತು ಭಕ್ತ ಸಮೂಹ ಭಾಗವಹಿಸಿದ್ದರು.**

# ಬಾಲ್ಯ ವಿವಾಹ ತಡೆಗೆ ಪೋಷಕರ ಪಾತ್ರ ಮುಖ್ಯ

**ಸಂತೇಮರಹಳ್ಳಿ :** ಬಾಲ್ಯ ವಿವಾಹ ಸಾಮಾಜಿಕ ಪಿಡುಗಾಗಿದ್ದು, ಬಾಲ್ಯ ವಿವಾಹವನ್ನು ತಡೆಗಟ್ಟವಲ್ಲಿ ಪೋಷಕರ ಪಾತ್ರ ಬಹಳ ಮುಖ್ಯ, ಬಾಲ್ಯ ವಿವಾಹ ಅಪರಾಧಕ್ಕೆ ಎರಡು ವರ್ಷಗಳ ತನಕ ಕಠಿಣ ಶಿಕ್ಷೆ ಹಾಗೂ ಜೈಲುವಾಸ ಹಾಗೂ ಒಂದು ಲಕ್ಷ ದವರೆಗೂ ದಂಡ ವಿಧಿಸುವ ಕಾನೂನಿನಲ್ಲಿದೆ ಎಂದು ಯಳಂದೂರು ತಾಲೂಕು ನ್ಯಾಯಾಧೀಶರಾದ ಆಕಾಶ್ ಎಂ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಿಶು ಅಭಿವೃದ್ಧಿ ಯೋಜನೆ ಸಂತೇಮರಹಳ್ಳಿ, ಶಾಲಾ ಶಿಕ್ಷಣ ಮತ್ತು ಕುದೇರು ಗ್ರಾಪಂ ಸಹಯೋಗದಲ್ಲಿ ಕುದೇರು ಸಂಗಶೆಟ್ಟಿ ಪ್ರೌಢಶಾಲೆಯಲ್ಲಿ ಆಯೋಜಿಸಲಾಗಿದ್ದ ಬಾಲ್ಯ ವಿವಾಹ ಹಾಗೂ ಪೋಕ್ಸೋ ಕಾಯ್ದೆ ಕುರಿತು ಕಾನೂನು ಅರಿವು ಕಾರ್ಯಕ್ರಮದಲ್ಲಿ ಮಾತನಾಡಿದರು.

ಶಿಕ್ಷಣದಿಂದ ವಂಚಿತರಾಗುವುದೆ ಬಾಲ್ಯ ವಿವಾಹಕ್ಕೆ ಕಾರಣವಾಗಿದ್ದು, ಇತ್ತೀಚಿನ ದಿನಗಳಲ್ಲಿ ಚಾಮರಾಜನಗರ ಜಿಲ್ಲೆಯಲ್ಲಿ ಬಾಲ್ಯವಿವಾಹ ಜಾಸ್ತಿಯಾಗುತ್ತಿದೆ, ಹಾಗಾಗಿ ಪೋಷಕರು ಮಕ್ಕಳಿಗೆ ಶಿಕ್ಷಣ ಕೊಡುವಲ್ಲಿ ಮುಂದಾಗಬೇಕು. 18 ವರ್ಷದ ಒಳಗೆ ವಿವಾಹ ಮಾಡಿದ್ದಲ್ಲಿ ಬಾಲ್ಯ ವಿವಾಹದಡಿಯಲ್ಲಿ ಪ್ರಕರಣ ದಾಖಲಾಗುತ್ತದೆ. 2012 ರಲ್ಲಿ ಪೋಕ್ಸೋ ಕಾಯ್ದೆಯಡಿ 1 ರಿಂದ 18 ವರ್ಷದ ತನಕ ಮಕ್ಕಳ ಮೇಲೆ ದೌರ್ಜನ್ಯ ನಡೆಯುವಂತ ಪ್ರಕರಣಗಳಲ್ಲಿ ಬಾಲ್ಯವಿವಾಹ, ಬಾಲ ಕಾರ್ಮಿಕ ಪದ್ಧತಿಯಂತಹ ಕಾಯ್ದೆಗಳಲ್ಲಿ ಶಿಕ್ಷೆ ನೀಡಲಾಗುವುದು. ಮಕ್ಕಳ ಮೇಲೆ ಯಾವುದೇ ರೀತಿಯ ದೌರ್ಜನ್ಯ ನಡೆದಾಗ ತಕ್ಷಣ ಮಕ್ಕಳ ಸಹಾಯವಾಣಿಗೆ ಕರೆ ಮಾಡಬೇಕು ಎಂದು ಮಕ್ಕಳಿಗೆ ಸಲಹೆ ನೀಡಿದರು.

ನಂತರ ಸಿಡಿಪಿಓ ಜಯಶೀಲ ಮಾತನಾಡಿ ಬಾಲ್ಯ ವಿವಾಹ ದೇಶದ ಅನಿಷ್ಟ ಪಿಡಗು, ಚಾಮರಾಜನಗರ ಜಿಲ್ಲೆ ಬಾಲ್ಯ ವಿವಾಹದಲ್ಲಿ ಕರ್ನಾಟಕದಲ್ಲಿ 2 ನೇ ಸ್ಥಾನದಲ್ಲಿ ಇರುವುದು ದುರ್ದೈವ, ಅದರಲ್ಲೂ ಕುದೇರು ಸುತ್ತ ಮುತ್ತ ಭಾಗಗಳಲ್ಲಿ ಬಾಲ್ಯ ವಿವಾಹದ ಪದ್ಧತಿಡಿಯಲ್ಲಿ ಮದುವೆ ಮಾಡುವವರ ಸಂಖ್ಯೆ ಹೆಚ್ಚಾಗಿದೆ, 2024 ರ ಏಪ್ರಿಲ್ ನಿಂದ 8 ಪ್ರಕರಣ ನಡೆದಿದ್ದು ಹಾಗೂ ಕಳೆದ ವರ್ಷ 16 ಬಾಲ್ಯ ವಿವಾಹ ಪ್ರಕರಣ ಜಿಲ್ಲೆಯಲ್ಲಿ ದಾಖಲಾಗಿದೆ, ಇಂತಹ ಸಾಮಾಜಿಕ ಅನಿಷ್ಟ ಪದ್ಧತಿ ತೊಲಗಿಸುವಲ್ಲಿ ಪೋಷಕರ ಪಾತ್ರ ಬಹಳ ಮುಖ್ಯ ಎಂದರು. ಗ್ರಾ ಪಂ ಅಧ್ಯಕ್ಷೆ ಶಕುಂತಲಾ, ಉಪಾಧ್ಯಕ್ಷ ಶಿವಣ್ಣ, ಪಿಎಸ್ಐ ಕುಮುದ, ಮಹಿಳಾ ಮತ್ತು ಮಕ್ಕಳ ಇಲಾಖೆ ಉಪ ನಿರ್ದೇಶಕ ಮಂಜುನಾಥ್, ಪ್ರಾಂಶುಪಾಲ ಕೆಂಡಗಣ್ಣಸ್ವಾಮಿ, ಉಪ ಪ್ರಾಂಶುಪಾಲ ರಮೇಶ್, ಕಾರ್ಮಿಕ ಇಲಾಖೆ ಮಹೇಶ್, ಸಿದ್ದಶೆಟ್ಟಿ , ಮಕ್ಕಳ ಮತ್ತು ಮಹಿಳಾ ಅಭಿವೃದ್ಧಿ ಮೇಲ್ವಿಚಾರಕರಾದ ಕಲಾವತಿ, ರಾಜಶೇಖರ್, ರಂಗಸ್ವಾಮಿ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಉಪಸ್ಥಿತರಿದ್ದರು.



**ವಿಜಯಪುರ ಪಟ್ಟಣದ ಇತಿಹಾಸ ಪ್ರಸಿದ್ಧ ಹರಿಹರ ಸಂಗಮ ಕ್ಷೇತ್ರವಾದ ಶ್ರೀನಗರೇಶ್ವರ ಸ್ವಾಮಿ ಶ್ರೀಆದಿನಾರಾಯಣ ಸ್ವಾಮಿ ದೇವಾಲಯದಲ್ಲಿ ಭೀಮನ ಅಮಾವಾಸ್ಯೆ ಪ್ರಯುಕ್ತ ಶ್ರೀ ಅನ್ನಪೂರ್ಣಾಂಬೆ ಸಮೇತ ಶ್ರೀ ನಗರೇಶ್ವರ ಸ್ವಾಮಿರವರ ಉತ್ಸವ ಮೂರ್ತಿಗಳಿಗೆ ಹಾಗೂ ಮೂಲದೇವರಿಗೆ ವಿಶೇಷ ಪೂಜೆ ಹಾಗೂ ಹೂವಿನ ಅಲಂಕಾರ ಏರ್ಪಡಿಸಿರುವುದು**

# ಜೀವನ ಶಾಶ್ವತವಲ್ಲ ಸತ್ಕಾರ್ಯಗಳು ಶಾಶ್ವತ : ಶ್ರೀ ರಂಭಾಪುರಿ ಜಗದ್ಗುರು

**ಚನ್ನಗಿರಿ:** ಬಹು ಜನ್ಮದ ಪುಣ್ಯದ ಫಲದಿಂದ ಮಾನವ ಜೀವನ ಪ್ರಾಪ್ತವಾಗಿದೆ. ಅರಿವು ಆದರ್ಶಗಳನ್ನು ಪಡೆದು ಬಾಳಬೇಕು. ಜೀವನ ಶಾಶ್ವತವಲ್ಲ. ಆದರೆ ಮಾಡಿದ ಸತ್ಕಾರ್ಯಗಳು ಶಾಶ್ವತ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಭಾನುವಾರ ತಾಲೂಕಿನ ತಾವರೆಕೆರೆ ಶಿಲಾಮಠದ ಸಿದ್ಧಿ ಪುರುಷ ಲಿಂ. ಶ್ರೀ ಸಿದ್ಧಲಿಂಗ ಶಿವಾಚಾರ್ಯರ 53ನೇ ವಾರ್ಷಿಕ ಪುಣ್ಯ ಸ್ಮರಣೆ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯನಲ್ಲಿ ಅರಿವು ಮತ್ತು ಮರೆವು ಎರಡೂ ಇವೆ. ಅರಿವನ್ನು ಜಾಗೃತಗೊಳಿಸುವ ಶಕ್ತಿ ಶ್ರೀ ಗುರುವಿಗೆ ಇದೆ. ಸಮಾಜದ ಓರೆ ಕೋರೆಗಳನ್ನು ತಿದ್ದಿ ತೀಡಿ ಮುನ್ನಡೆಸುವುದೇ ಗುರುವಿನ ಪರಮ ಕರ್ತವ್ಯವಾಗಿದೆ. ಹಣತೆ ತನಗಾಗಿ ಉರಿಯುವುದಿಲ್ಲ ಪರರಿಗೆ ಬೆಳಕು ಕೊಡುವಂತೆ ಶ್ರೀ ಗುರು ನಂಬಿದ ಭಕ್ತನ ಬಾಳನ್ನು ಬೆಳಗಿಸಲು ಸದಾ ಶ್ರಮಿಸುತ್ತಾನೆ. ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ಆಹಾರ ಆರೋಗ್ಯ ಮತ್ತು ಆಧ್ಯಾತ್ಮ ಚಿಂತನೆ ಬಹಳ ಮುಖ್ಯ. ವೀರಶೈವ ಧರ್ಮದಲ್ಲಿ ಗುರುವಿಗೆ ಪ್ರಥಮ ಸ್ಥಾನವಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಶ್ರೀ ಗುರುವಿನ ಮಹತ್ವವನ್ನು ಸಿದ್ಧಾಂತ ಶಿಖಾಮಣಿಯಲ್ಲಿ ನಿರೂಪಿಸಿದ್ದಾರೆ. ಪರಶಿವನ ಸಾಕಾರ ರೂಪವೇ ಗುರುವೆಂದು ಶಾಸ್ತ್ರ ಸಿದ್ಧಾಂತಗಳು ಹೇಳುತ್ತವೆ. ಶಿಲಾಮಠದ ಸಿದ್ಧಿ ಪುರುಷ ಲಿಂ. ಶ್ರೀ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು ಭಕ್ತರ



ಬಾಳಿಗೆ ಅಜ್ಞಾನ ಕಳೆದು ಜ್ಞಾನದ ಬೆಳಕನ್ನು ತೋರಿದವರು. ವಾಕ್ ಸಿದ್ಧಿ ಪುರುಷರಾದ ಅವರಿಗೆ ಇಡೀ ಸಮಾಜ ಭಕ್ತಿ ಶ್ರದ್ಧೆಯಿಂದ ನಡೆದುಕೊಳ್ಳುತ್ತಾರೆಂದು ನುಡಿದ ಅವರು ಅಂಥ ಮಹಿಮಾನ್ವಿತರ 53ನೇ ಲಿಂಗಾಂಗ ಸಾಮರಸ್ಯದ ಪುಣ್ಯ ಸ್ಮರಣೋತ್ಸವ ನಡೆಯುತ್ತಿರುವುದು ಹೆಮ್ಮೆಯ ಸಂಗತಿ ಎಂದರು. ಇದೇ ಸಂದರ್ಭದಲ್ಲಿ ಹಿಂದಿನ ಶಿಲಾಮಠದ ಲಿಂ.ಶ್ರೀ ಚಂದ್ರಶೇಖರ ಶಿವಾಚಾರ್ಯರ 71ನೇ ಪುಣ್ಯ ದಿನಾಚರಣೆ ಜರುಗಿತು.

ನೇತೃತ್ವ ವಹಿಸಿದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಮನುಷ್ಯ ಕಲಿಕೆ ಗಳಿಕೆ ಮತ್ತು ಭಗವಂತನ ಚಿಂತನೆಯಲ್ಲಿ ಹೆಜ್ಜೆ ಹಾಕಬೇಕು. ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ. ಅದರೊಂದಿಗೆ ಧರ್ಮಪ್ರಜ್ಞೆ ಮತ್ತು ಸದಾಚಾರ ಮುಖ್ಯ. ಲಿಂ.ಸಿದ್ಧಲಿಂಗ ಮತ್ತು ಚಂದ್ರಶೇಖರ ಶ್ರೀಗಳು ಶಿಲಾಮಠದ ಎರಡು ಕಣ್ಣುಗಳಾಗಿ ಭಕ್ತರ ಬಾಳಿಗೆ ಶಕ್ತಿ ತುಂಬಿದರೆಂದು ಸ್ಮರಿಸಿದರು. ಸಮಾರಂಭ ಉದ್ಘಾಟಿಸಿದ ದಾವಣಗೆರೆ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರ ಮಾತನಾಡಿ ವೀರಶೈವ ಪೀಠ ಮಠಗಳ ಕೊಡುಗೆ ಅಪಾರ. ಶಿಕ್ಷಣ ಮತ್ತು ಸಂಸ್ಕಾರ ಕೊಟ್ಟ ಕೀರ್ತಿ ಮಠಗಳಿಗೆ ಸಲ್ಲುತ್ತದೆ. ಶಿವಪಥವನರಿವೊಡೆ ಗುರುಪಥವೇ ಮೊದಲು ಎಂಬುದನ್ನು ಮರೆಯಬಾರದು. ಶಿಲಾಮಠದ ಲಿಂಗೈಕ್ಯ ಸಿದ್ಧಲಿಂಗ ಶಿವಾಚಾರ್ಯರ ಮತ್ತು ಲಿಂಗೈಕ್ಯ ಚಂದ್ರಶೇಖರ ಶ್ರೀಗಳ ಚಿಂತನಗಳು ಸಮಾಜಕ್ಕೆ ದಾರಿದೀಪವೆಂದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡ ಮಾಜಿ ಶಾಸಕ ಮಾಡಳು ವಿರುಪಾಕ್ಷಪ್ಪನವರು ಮಾತನಾಡಿ ವೀರಶೈವ ಧರ್ಮಕ್ಕೆ ಮಠಗಳ ಕೊಡುಗೆ ಅಪಾರ. ಭಕ್ತ ಸಮೂಹಕ್ಕೆ ಸಂಸ್ಕಾರ ಸದ್ವಿಚಾರ ಬೋಧಿಸುವ ನಿಟ್ಟಿನಲ್ಲಿ ನಿರಂತರ ಕಾರ್ಯ ಮಾಡುತ್ತಾ ಬಂದಿವೆ. ಶಿಲಾಮಠದ ಲಿಂಗೈಕ್ಯ ಉಭಯ ಶ್ರೀಗಳು ಧರ್ಮಮುಖಿ ಮತ್ತು ಸಮಾಜ ಮುಖಿಯಾಗಿ ಕಾರ್ಯ ಮಾಡಿದ್ದನ್ನು ಮರೆಯಲಾಗದೆಂದರು.

ಕೆ.ಬಿದರೆ ದೊಡ್ಡಮಠದ ಪ್ರಭುಕುಮಾರ ಶಿವಾಚಾರ್ಯರು, ಚಿಕ್ಕಮಗಳೂರಿನ ಚಂದ್ರಶೇಖರ ಶಿವಾಚಾರ್ಯರು, ತೆಂಡೇಕೆರೆ ಗಂಗಾಧರ ಶಿವಾಚಾರ್ಯರು, ಹುಲಿಕೆರೆ ದೊಡ್ಡಮಠದ ಮಲ್ಲಿಕಾರ್ಜುನ ಪಂಡಿತಾರಾಧ್ಯ ಶಿವಾಚಾರ್ಯರು, ಹಾರನಹಳ್ಳಿ ಶಿವಯೋಗಿ ಶಿವಾಚಾರ್ಯರು, ಚನ್ನಗಿರಿ ಹಿರೇಮಠದ ಶಿವಶಾಂತವೀರ ಶಿವಾಚಾರ್ಯರು ಪುಣ್ಯ ಸ್ಮರಣೋತ್ಸವದಲ್ಲಿ ಪಾಲ್ಗೊಂಡಿದ್ದರು. ತಾವರೆಕೆರೆ ಶಿಲಾಮಠದ ಡಾ,.ಅಭಿನವ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕವಾಗಿ ಮಾತನಾಡಿದರು. ಬಿಳಕಿ ಹಿರೇಮಠದ ರಾಚೋಟೇಶ್ವರ ಶಿವಾಚಾರ್ಯರು ಸ್ವಾಗತಿಸಿ ನಿರೂಪಿಸಿದರು.ಸಮಾರಂಭಕ್ಕೂ ಮುನ್ನ ಶ್ರೀ ರಂಭಾಪುರಿ ಜಗದ್ಗುರುಗಳವರ ಇಷ್ಟಲಿಂಗ ಮಹಾಪೂಜೆ ನೆರವೇರಿತು. ಲಿಂಗೈಕ್ಯ ಶ್ರೀಗಳವರ ಗದ್ದಿಗೆಗೆ ರುದ್ರಾಭಿಷೇಕ ಅಷ್ಟೋತ್ತರ ಪೂಜೆ ಜರುಗಿತು. ಸಮಾರಂಭದ ನಂತರ ಅನ್ನ ದಾಸೋಹ ನೆರವೇರಿತು.

## ಕಾರಗೃಹದಲ್ಲಿ ವಿಶ್ವ ಹೆಪಟೈಟಿಸ್ ದಿನಾಚರಣೆ

**ಮಂಡ್ಯ:** ಇಂದು ಮಂಡ್ಯ ಜಿಲ್ಲಾ ಕಾರಾಗೃಹದಲ್ಲಿ ಜುಲೈ 28 ರಂದು ವಿಶ್ವ ಹೆಪಟೈಟಿಸ್ ದಿನದ ಅಂಗವಾಗಿ ವಿಶ್ವ ಹೆಪಟೈಟಿಸ್ ದಿನ ವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ಕೆ ಮೋಹನ್ ರವರ ಅಧ್ಯಕ್ಷತೆಯಲ್ಲಿ ಆಚರಿಸಲಾಯಿತು. ಕಾರಾಗೃಹ ವಾಸಿಗಳಿಗೆ ಹೆಪಟೈಟಿಸ್ ಕಾಯಿಲೆ ಬಗ್ಗೆ ಅರಿವು ಮೂಡಿಸಲಾಯಿತು. ನಂತರ ಕಾರಾಗೃಹವಾಸಿಗಳಿಗೆ ಹೆಪಟೈಟಿಸ್ ಪರೀಕ್ಷೆಯನ್ನು ನಡೆಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಕ್ಷಯ ರೋಗ ನಿರ್ಮೂಲನಾಧಿಕಾರಿಗಳಾದ ಡಾ. ಆಶಾಲತಾ ರವರು, ಮಂಡ್ಯ ಜಿಲ್ಲಾ ಕಾರಾಗೃಹ ಅಧೀಕ್ಷಕರಾದ ಲೋಕೇಶ್ ಟಿ ಕೆ ರವರು, ಜಿಲ್ಲಾ ಸರ್ಜನ್‌ರವರಾದ ಡಾ. ಗಾಯತ್ರಿರವರು, NVHCP ನೋಡಲ್ ಅಧಿಕಾರಗಳಾದ ಡಾ. ಸುರೇಶ್ ರವರು, ತಾಲ್ಲೂಕು ಆರೋಗ್ಯಾಧಿಕಾರಿಗಳಾದ ಡಾ. ಜವರೇಗೌಡರವರು ಹಾಗೂ ಆರೋಗ್ಯ ಸಿಬ್ಬಂದಿಗಳು ಮತ್ತು ಕಾರಾಗೃಹದ ಅಧಿಕಾರಿಗಳು, ಕಾರಾಗೃಹವಾಸಿಗಳು ಉಪಸ್ಥಿತರಿದ್ದರು.



# ಸಂಜೆ ಟಿಪ್ಸ್



## ಬಿಎಸ್ಸೆ ಅತ್ಯಾಧುನಿಕ ಯಂತ್ರ ತಯಾರಿಕಾ ತಂತ್ರಜ್ಞಾನ ಪ್ರದರ್ಶನ

ಮರಗೆಲಸದ ಯಂತ್ರೋಪಕರಣಗಳ ತಯಾರಿಕೆಯಲ್ಲಿ ಜಾಗತಿಕವಾಗಿ ಮುಂಚೂಣಿಯಲ್ಲಿರುವ ಬಿಎಸ್ಸೆ ಕಂಪನಿಯ ಬಹು ನಿರೀಕ್ಷಿತ ಬಿಎಸ್ಸೆ ಇನ್ ಸೈಡ್ 2024 ಕಾರ್ಯಕ್ರಮವು ಬೆಂಗಳೂರಿನ ಬಿಎಸ್ಸೆ ಶೋರೂಮ್ ನಲ್ಲಿ ಆಗಸ್ಟ್ 8ರಿಂದ ಆಗಸ್ಟ್ 10ರವರೆಗೆ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ಕಂಪನಿಯು ಗ್ರಾಹಕರಿಗೆ ಮರ, ಗಾಜು, ಕಲ್ಲು ಮತ್ತು ಇತರ ವಸ್ತುಗಳನ್ನು ಸಂಸ್ಕರಿಸಲು ಬಳಸುವ ಅತ್ಯಾಧುನಿಕ ಯಂತ್ರಗಳು ಮತ್ತು ತಂತ್ರಜ್ಞಾನಗಳನ್ನು ವೀಕ್ಷಿಸುವ ಅಪೂರ್ವ ಅವಕಾಶ ಒದಗಿಸುತ್ತಿದೆ. ಭಾರತದ ಹೊಸ ಸಂಸತ್ ಕಟ್ಟಡದ ಒಳಾಂಗಣದಲ್ಲಿರುವ ಬಾಗಿಲುಗಳು ಮತ್ತು ಪೀಠೋಪಕರಣಗಳ ಹೂವುಗಳು, ನವಿಲುಗಳು ಚಿತ್ರಗಳು ಸೇರಿದಂತೆ ಹಲವು ಸಂಕೀರ್ಣ ಕೆತ್ತನೆಗಳ ರಚನೆಯಲ್ಲಿ ಮಹತ್ವದ ಪಾತ್ರವಹಿಸಿದ ಬಿಎಸ್ಸೆ ರೋವರ್-ಜೆ ಸಿಎನ್ಸಿ ಯಂತ್ರವೂ ಸಹ ಪ್ರದರ್ಶನದಲ್ಲಿರಲಿದೆ. ಹೊಸ ಉತ್ಪನ್ನಗಳಾದ 'ದಿ ಅಕ್ರಾನ್ 1300' ಮತ್ತು 'ಅಕ್ರಾನ್ 1400' ಇನ್ ಸೈಡ್ 2024 ಕಾರ್ಯಕ್ರಮದ ವಿಶೇಷತೆಯಾಗಿದೆ. ಇವು 'ಮೇಡ್ ಇನ್ ಇಂಡಿಯಾ' ಉತ್ಪನ್ನಗಳಾಗಿದ್ದು ಆಟೋಮೇಷನ್ ಮತ್ತು ಹಲವಾರು ಅತ್ಯಾಧುನಿಕ ಫೀಚರ್ ಗಳನ್ನು ಒಳಗೊಂಡಿರುವ ಬೆಂಡಿಂಗ್ ಮೆಶಿನ್ ಗಳಾಗಿವೆ. ಇನ್ಸೈಡ್ ಬಿಎಸ್ಸೆ 2024 ಕಾರ್ಯಕ್ರಮದಲ್ಲಿ ನಮ್ಮ ಅತ್ಯಾಧುನಿಕ ಉತ್ಪನ್ನಗಳ ಶ್ರೇಷ್ಠತೆಯನ್ನು ತೋರಿಸುವ ಹೊಸ ಉತ್ಪನ್ನಗಳನ್ನು ನೋಡಬಹುದು. ಭಾರತವು ಮ್ಯಾನುಫ್ಯಾಕ್ಚರಿಂಗ್ ಹಬ್ ಆಗುವ ಕಡೆಗೆ ದಾಪುಗಾಲಿಡುತ್ತಾ ಸಾಗುತ್ತಿದೆ. ಹಾಗಾಗಿ ಉತ್ತಮ ಗುಣಮಟ್ಟದ ಯಂತ್ರಗಳಿಗೆ ಬೇಡಿಕೆ ಹೆಚ್ಚಿದೆ. ಬಿಎಸ್ಸೆಯ ಬೆಂಗಳೂರು ಘಟಕದಲ್ಲಿ ತಯಾರಾಗುವ 10,000 ಯಂತ್ರಗಳನ್ನು ರಫ್ತು ಮಾಡಿರುವ ಸಾಧನೆ ಮಾಡಿದ್ದೇವೆ. ಈ ಮೂಲಕ ವಿಕಸನ ಹೊಂದುತ್ತಿರುವ ಗ್ರಾಹಕರ ಅಗತ್ಯಗಳಿಗೆ ತಕ್ಕಂತೆ ಅವರು ಅಭಿವೃದ್ಧಿ ಹೊಂದಲು ಬೇಕಾಗುವ ಅತ್ಯುತ್ತಮ ಗುಣಮಟ್ಟದ ಉತ್ಪನ್ನ ಮತ್ತು ತಂತ್ರಜ್ಞಾನಗಳನ್ನು ಒದಗಿಸಲು ಬದ್ಧರಾಗಿದ್ದೇವೆ ಬಿಎಸ್ಸೆ ಇಂಡಿಯಾದ ಸಿಇಓ ಸಯೀದ್ ಅಹ್ಮದ್ ಎಂದು ಹೇಳಿದರು.

## ಬ್ರೆಡ್ ಪಿಜ್ಜಾ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಬ್ರೌನ್ ಬ್ರೆಡ್ 4, ಚೀಸ್: 2, ಕ್ಯಾಪ್ಸಿಕಂ :1/2 ಕಪ್, ಸ್ವೀಟ್ ಕಾರ್ನ್ : 1/2 ಕಪ್, ಪಿಜ್ಜಾ ಸಾಸ್: ಕಪ್, ಬೆಣ್ಣೆ: 2 ಚಮಚ, ಕರಿಮೆಣಸಿನ ಪುಡಿ: 1/2 ಚಮಚ, ಚಾಟ್ ಮಸಾಲಾ: ಚಮಚ, ಉಪ್ಪು: ರುಚಿಗೆ ತಕ್ಕಷ್ಟು

### ಮಾಡುವ ವಿಧಾನ

ಒಂದು ಪ್ಯಾನ್ ಗೆ ಬೆಣ್ಣೆ ಹಾಕಿ, ಅದಕ್ಕೆ ಸ್ವೀಟ್ ಕಾರ್ನ್, ಕರಿಮೆಣಸಿನ ಪುಡಿ, ಚಾಟ್ ಮಸಾಲಾ, ಉಪ್ಪನ್ನು ಹಾಕಿ ಮಿಕ್ಸ್ ಮಾಡಿ. ನಂತ್ರ ಅದನ್ನು ಪ್ರತ್ಯೇಕವಾಗಿಟ್ಟುಕೊಳ್ಳಿ. ನಂತ್ರ, ಪ್ಯಾನ್ ಗೆ ಬೆಣ್ಣೆ ಹಾಕಿ ಬ್ರೌನ್ ಬ್ರೆಡ್ ಬೇಯಿಸಿ. ಬೇಯಿಸಿದ ಬ್ರೆಡ್ ಗೆ ಪಿಜ್ಜಾ ಸಾಸ್ ಹರಡಿ. ಅದ್ರ ಮೇಲೆ ತುರಿದ ಚೀಸ್ ಹಾಕಿ. ಸಣ್ಣ ಉರಿಯಲ್ಲಿ ಬ್ರೆಡ್ ಕೆಳ ಭಾಗವನ್ನು ಬೇಯಿಸಿ. ಇದಾದ ಮೇಲೆ ಗ್ಯಾಸ್ ಬಂದ್ ಮಾಡಿ, ಸ್ವೀಟ್ ಕಾರ್ನ್ ಮಿಶ್ರಣವನ್ನು ಚೀಸ್ ಮೇಲೆ ಹಾಕಿ, ಸರ್ವ್ ಮಾಡಿ.

## ಐಷಾರಾಮಿ ಬಂಗಲೆ ಮಾರಾಟ ಮಾಡಲು ಮುಂದಾದ ಕಂಗನಾ



ಸಿನಿ ಜೀವನದ ನಂತರ ರಾಜಕೀಯಕ್ಕೆ ಪಾದಾರ್ಪಣೆ ಮಾಡಿರುವ ಕಂಗನಾ ರಣಾವತ್ ಕುರಿತು ಹೊಸ ಸುದ್ದಿಯೊಂದು ಇದೀಗ ಹೊರಬಿದ್ದಿದೆ.

ಹೌದು. ಮುಂಬೈನಲ್ಲಿರುವ ತಮ್ಮ ಬಂಗಲೆಯನ್ನು ಮಾರಾಟ ಮಾಡಲು ಕಂಗನಾ ಹೊರಟಿದ್ದಾರೆ ಎನ್ನಲಾಗಿದೆ. ಬಾಂದ್ರಾದ ಪಾಲಿ ಹಿಲ್ ಪ್ರದೇಶದಲ್ಲಿ ಕಂಗನಾ ಬಂಗಲೆಯನ್ನು ಹೊಂದಿದ್ದಾರೆ.

ಅವರ ನಿರ್ಮಾಣ ಸಂಸ್ಥೆಯಾದ ಮಣಿಕರ್ಣಿಕಾ ಫಿಲಂಸ್‌ನ ಕಚೇರಿಯೂ ಇದೇ ಮನೆಯಲ್ಲಿದೆ.

ಕಂಗನಾ ತನ್ನ ರಾಜಕೀಯ ಜೀವನದಿಂದಾಗಿ ರಾಜಧಾನಿ ದೆಹಲಿ ಮತ್ತು ಹಿಮಾಚಲ ಪ್ರದೇಶದಲ್ಲಿ ಹೆಚ್ಚಿನ ಸಮಯವನ್ನು ಕಳೆಯುತ್ತಿದ್ದಾರೆ ಎಂದು ಹೇಳಲಾಗುತ್ತಿದೆ. ಹೀಗಾಗಿ ಕಂಗನಾ ತನ್ನ ಬಾಂದ್ರಾ ಬಂಗಲೆಯನ್ನು 40 ಕೋಟಿ ರೂಪಾಯಿಗೆ ಮಾರಾಟ ಮಾಡುತ್ತಿದ್ದಾರೆ ಎಂಬ ವದಂತಿಗಳು ಹುಟ್ಟಿಕೊಂಡಿವೆ. ಆದರೆ ಈ ಬಗ್ಗೆ ಇನ್ನೂ ಅಧಿಕೃತ ಮಾಹಿತಿ ಹೊರಬಿದ್ದಿಲ್ಲ.

ಕೋಡ್ ಎಸ್ಟೇಟ್ ಹೆಸರಿನ ಯೂಟ್ಯೂಬ್ ಚಾನೆಲ್ ಕಂಗನಾ ಮನೆ ಮತ್ತು ಪ್ರೊಡಕ್ಷನ್ ಹೌಸ್ನ ಕಚೇರಿ ಮಾರಾಟಕ್ಕಿದೆ ಎಂದು ಹೇಳಲಾದ ವೀಡಿಯೊವನ್ನು ಹಂಚಿಕೊಂಡಿದ್ದು, ಇದೀಗ ಈ ಊಹಾಪೋಹಕ್ಕೆ ಕಾರಣವಾಗಿದೆ. ಪ್ರೊಡಕ್ಷನ್ ಹೌಸ್ ಮತ್ತು ಮಾಲೀಕರ ಹೆಸರನ್ನು ಬಹಿರಂಗಪಡಿಸದಿದ್ದರೂ, ವೀಡಿಯೊದಲ್ಲಿ ಬಳಸಲಾದ ಚಿತ್ರಗಳು ಮತ್ತು ದೃಶ್ಯಗಳು ಇದು ಕಂಗನಾ ಅವರ ಕಚೇರಿ ಎಂಬುದನ್ನು ಸೂಚಿಸುತ್ತದೆ. ಪ್ಲಾಟ್ಸ್‌ನ ಗಾತ್ರವು 285 ಚದರ ಮೀಟರ್ಗಳು ಮತ್ತು 3042 ಚದರ ಅಡಿಗಳ ನಿರ್ಮಾಣ ಪ್ರದೇಶವಾಗಿದೆ. ಮನೆ 500 ಚದರ ಅಡಿ ಹೆಚ್ಚುವರಿ ಪಾರ್ಕಿಂಗ್ ಸ್ಥಳವನ್ನು ಹೊಂದಿದೆ. ಈ ಬಂಗಲೆ ಎರಡು ಮಹಡಿಗಳನ್ನು ಹೊಂದಿದ್ದು ಇದರ ಬೆಲೆ 40 ಕೋಟಿ ರೂ. ಆಗಿದೆ. ಅವರ ಮನೆ ಮಾರಾಟಕ್ಕಿದೆಯೋ ಇಲ್ಲವೋ? ಈ ಬಗ್ಗೆ ಕಂಗನಾ ರಣಾವತ್ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಅಕ್ರಮ ನಿರ್ಮಾಣವನ್ನು ಉಲ್ಲೇಖಿಸಿ 2020 ರಲ್ಲಿ ಃಒಅ ಯಿಂದ ಈ ಬಂಗಲೆಯ ಕೆಲವು ಭಾಗಗಳನ್ನು ಕೆಡವಲಾಗಿತ್ತು.





## ಮೆಂತೆ ಹೀಗೆ ಬಳಸಿದರೆ ತೂಕ ಇಳಿಕೆಯಾಗಲಿದೆ





### ಹೆಲ್ತ್ ಟಿಪ್ಸ್

ಇತ್ತೀಚಿನ ದಿನಗಳಲ್ಲಿ ತೂಕ ಏರಿಕೆ ಅಥವಾ ಸ್ಥೂಲಕಾಯ ಸಮಸ್ಯೆ ಬಹುತೇಕರನ್ನು ಕಾಡುತ್ತಿದೆ, ಮಿತಿಮೀರಿ ತಿನ್ನುವುದು ತೂಕ ಏರಿಕೆಗೆ ಒಂದು ಕಾರಣವಾದರೆ ಅನಾರೋಗ್ಯಕರ ಜೀವನಶೈಲಿ, ಅತಿಯಾದ ಜಂಕ್ಫುಡ್ ಸೇವನೆ, ಒತ್ತಡದಾಯಕ ಜೀವನ ಹೀಗೆ ನಾನಾ ಕಾರಣಗಳಿಂದ ನಾವು ಸ್ಥೂಲಕಾಯದ ಸಮಸ್ಯೆಯಿಂದ ಬಳಲಲು ಆರಂಭಿಸುತ್ತೇವೆ.

ತೂಕ ಇಳಿಕೆ ಮಾಡಲು ಮಾರುಕಟ್ಟೆಯಲ್ಲಿ ನಾನಾ ಬಗೆಯ ಪೌಡರ್ಗಳು, ಔಷಧಿಗಳು ಲಭ್ಯವಿದೆ.

ಆದರೆ ಇದ್ಯಾವುದೂ ಆರೋಗ್ಯದ ದೃಷ್ಟಿಯಿಂದ ಒಳ್ಳೆಯದಲ್ಲ. ಇವುಗಳ ಸೇವನೆಯಿಂದ ಆರೋಗ್ಯಕರ ತೂಕ ಇಳಿಕೆ ಖಂಡಿತವಾಗಿಯೂ ಸಾಧ್ಯವಿಲ್ಲ.

ಆದರೆ ಮನೆಯಲ್ಲಿಯೇ ಇರುವ ಕೆಲವು ವಸ್ತುಗಳನ್ನು ಸರಿಯಾದ ಮಾರ್ಗದಿಂದ ಸೇವನೆ ಮಾಡುವ ಮೂಲಕ ಖಂಡಿತವಾಗಿಯೂ ತೂಕ ಇಳಿಕೆ ಮಾಡಿಕೊಳ್ಳಲು ಸಾಧ್ಯವಿದೆ. ತೂಕ ಇಳಿಕೆ ಮಾಡಲು ನಾವು ಮೆಂತೆಯ ಸಹಾಯವನ್ನು ಪಡೆಯಬಹುದಾಗಿದೆ. ನೋಡಲು ಒಂದು ಸಣ್ಣ ಕಾಳಾದರೂ ಸಹ ಮೆಂತೆಯು ಸಾಕಷ್ಟು ಆರೋಗ್ಯ ಪ್ರಯೋಜನಗಳನ್ನು ಹೊಂದಿದೆ. ಮೆಂತೆಕಾಳುಗಳನ್ನು ದಿನನಿತ್ಯ ಸೇವನೆ ಮಾಡುವ ಮೂಲಕ ತೂಕ ಇಳಿಕೆ ಮಾಡಿಕೊಳ್ಳಲು ಸಾಧ್ಯವಿದೆ.

ಹಾಗಾದರೆ ನಮ್ಮ ದಿನನಿತ್ಯದ ಆಹಾರ ಕ್ರಮದಲ್ಲಿ ಮೆಂತೆಯನ್ನು ಯಾವೆಲ್ಲ ರೀತಿಯಲ್ಲಿ ಬಳಕೆ ಮಾಡಬಹುದು ಎಂಬುದನ್ನು ತಿಳಿದುಕೊಳ್ಳೋಣ.

**ಮೆಂತೆ ನೀರು:** ತೂಕ ಇಳಿಕೆ ಮಾಡುವ ಪ್ರಯಾಣದಲ್ಲಿ ಇರುವವರು ಸಾಮಾನ್ಯವಾಗಿ ಇದನ್ನು ಸೇವಿಸುತ್ತಾರೆ. ಇದಕ್ಕಾಗಿ ನೀವು ಹೆಚ್ಚೇನು ಮಾಡಬೇಕಿಲ್ಲ. ರಾತ್ರಿ 1 ರಿಂದ 2 ಚಮಚ ಮೆಂತೆ ಕಾಳುಗಳನ್ನು ನೀರಿನಲ್ಲಿ ನೆನೆಸಿಟ್ಟರೆ ಸಾಕು. ಬೆಳಗ್ಗೆ ಎದ್ದು ಮೆಂತೆ ಕಾಳುಗಳನ್ನು ಸೋಸಿಕೊಂಡು ನೀರನ್ನು ಮಾತ್ರ ಖಾಲಿ ಹೊಟ್ಟೆಯಲ್ಲಿ ಸೇವನೆ ಮಾಡಬೇಕು. ಇದು ನಿಮ್ಮ ದೇಹದಲ್ಲಿ ಸಕ್ಕರೆ ಅಂಶವನ್ನು ಸರಿದೂಗಿಸುವ ಜೊತೆಯಲ್ಲಿ ಜೀರ್ಣಕ್ರಿಯೆಯನ್ನು ಸುಧಾರಿಸುವುದು ಮಾತ್ರವಲ್ಲದೇ ನಿಮಗೆ ಪದೇ ಪದೇ ಏನಾದರೂ ತಿನ್ನಬೇಕು ಎನ್ನುವ ಕಡುಬಯಕೆಯನ್ನೂ ಕಡಿಮೆ ಮಾಡುತ್ತದೆ.

## ಸತತ ಸಿನಿಮಾಗಳ ಸೋಲಿನ ಬೆನ್ನಲ್ಲೇ ಬಿಗ್ ಚಾನ್ಸ್ ಬಾಚಿಕೊಂಡ ಕೃತಿ ಶೆಟ್ಟಿ



ಕುಡ್ಲದ ಬೆಡಗಿ ಕೃತಿ ಶೆಟ್ಟಿಗೆ ಸಾಲು ಸಾಲು ಸಿನಿಮಾಗಳು ಸೋಲು ಕಂಡರೂ ಅದೃಷ್ಟ ಅವರ ಕೈ ಹಿಡಿದಿದೆ. ಲೇಡಿ ಸೂಪರ್ ಸ್ಟಾರ್ ನಯನತಾರಾ ನಿರ್ಮಾಣದ ಸಿನಿಮಾದಲ್ಲಿ ನಟಿಸುವ ಚಾನ್ಸ್ ಕೃತಿ ಶೆಟ್ಟಿಗೆ ಸಿಕ್ಕಿದೆ.

ಸತತ ಸಿನಿಮಾಗಳ ಸೋಲಿನ ನಡುವೆ 'ಲವ್ ಇನ್ಶೂರೆನ್ಸ್ ಕಂಪನಿ' ಎಂಬ ಚಿತ್ರಕ್ಕೆ ಕೃತಿ ಶೆಟ್ಟಿ ನಾಯಕಿಯಾಗಿದ್ದಾರೆ. ಸದ್ಯ ಚಿತ್ರದ ಫಸ್ಟ್ ಲುಕ್ ರಿವೀಲ್ ಆಗಿದ್ದು, ಕೃತಿ ಸಖತ್ ಸ್ಟೈಲೀಶ್ ಆಗಿ ಕಾಣಿಸಿಕೊಂಡಿದ್ದಾರೆ.

ಕೃತಿ ಶೆಟ್ಟಿ ಜೊತೆ ಎಸ್ ಜೆ ಸೂರ್ಯ ಪ್ರದೀಪ್ ಮತ್ತು ಯೋಗಿ ಬಾಬು ಪ್ರಮುಖ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಈ ಚಿತ್ರಕ್ಕೆ ವಿಘ್ನೇಶ್ ಶಿವನ್ ನಿರ್ದೇಶನ ಮಾಡುತ್ತಿದ್ದು, ಖ್ಯಾತ ನಟಿ ನಯನತಾರಾ ನಿರ್ಮಾಣಕ್ಕೆ ಸಾಥ್ ನೀಡಿದ್ದಾರೆ.

ನಯನತಾರಾ ದಂಪತಿಯ ಸಿನಿಮಾದಲ್ಲಿ ಕೃತಿ ನಟಿಸುತ್ತಿರುವ ಕಾರಣ, ಕುಡ್ಲದ ನಟಿಗೆ ಯಶಸ್ಸು ಸಿಗುತ್ತಾ ಎಂದು ಕಾಯಬೇಕಿದೆ. ಈ ಸಿನಿಮಾದ ಮೇಲೆ ಫ್ಯಾನ್ಸ್‌ಗೆ ಭಾರೀ ನಿರೀಕ್ಷೆಯಿದೆ.

## ಕೂದಲಿನ ಸೌಂದರ್ಯ ಹೆಚ್ಚಿಸುವ ತೆಂಗಿನ ಹಾಲು

### ಬ್ಯೂಟಿ ಟಿಪ್ಸ್



ಕೂದಲು ಸುಂದರವಾಗಿದ್ದರೆ ಪ್ರತಿಯೊಬ್ಬರನ್ನು ಸೆಳೆಯುತ್ತದೆ. ಇತ್ತೀಚಿನ ದಿನಗಳಲ್ಲಿ ಕೂದಲು ಉದುರುವ ಸಮಸ್ಯೆ ಹೆಚ್ಚಾಗಿದೆ. ಪಾರ್ಲರ್ ಗೆ ಹೋಗಿ ಕೂದಲಿನ ಸ್ಪಾ ಮಾಡುವುದು ಬಹಳ ದುಬಾರಿ. ಮನೆಯಲ್ಲೇ ಸುಲಭವಾಗಿ ಸ್ಪಾ ಮಾಡಿಕೊಂಡು ಕೂದಲಿನ ಸೌಂದರ್ಯ ಹೆಚ್ಚಿಸಬಹುದು. ಕೂದಲಿನ ಸೌಂದರ್ಯಕ್ಕೆ ತೆಂಗಿನ ಹಾಲು ಒಳ್ಳೆಯ ಮದ್ದು.

ತೆಂಗಿನ ಹಾಲಿನ ಸಹಾಯದಿಂದ ಮನೆಯಲ್ಲಿಯೇ ನೈಸರ್ಗಿಕ ಹೇರ್ ಸ್ಪಾ ತೆಗೆದುಕೊಳ್ಳಬಹುದು. ತೆಂಗಿನ ಕಾಯಿಯನ್ನು ಸಣ್ಣ ತುಂಡುಗಳನ್ನಾಗಿ ಮಾಡಿ, ಮಿಕ್ಸಿಗೆ ಹಾಕಿ ರುಬ್ಬಬೇಕು. ಅದಕ್ಕೆ ಒಂದು ಕಪ್ ನೀರು ಸೇರಿಸಿ ಚೆನ್ನಾಗಿ ಪೇಸ್ಟ್ ಮಾಡಿ. ಅದನ್ನು ಕಾಟನ್ ಬಟ್ಟೆಯಲ್ಲಿ ಹಾಕಿ, ಜರಡಿ ಹಿಡಿಯಬೇಕು.ಆ ಹಾಲನ್ನು ಹೇರ್ ಕಲರ್ ಬ್ರಶ್ ಮೂಲಕ ನೆತ್ತಿಯ ಮೇಲೆ ಚೆನ್ನಾಗಿ ಹಚ್ಚಬೇಕು. ತೆಂಗಿನ ಹಾಲಿಗೆ ಒಂದು ಚಮಚ ಜೇನುತುಪ್ಪವನ್ನು ಬೆರೆಸಬಹುದು. ಕೂದಲು ಉದ್ದವಾಗಿ ಬೆಳೆಬೇಕೆಂದ್ರೆ, ಇದನ್ನು ಹಚ್ಚಬೇಕು. ತೆಂಗಿನ ಹಾಲನ್ನು ಬೇರುಗಳಿಂದ ಕೂದಲಿನ ತುದಿಯವರೆಗೆ ಹಚ್ಚಿ, ಐದು ನಿಮಿಷಗಳ ಕಾಲ ಮಸಾಜ್ ಮಾಡಬೇಕು. ಬಿಸಿ ನೀರಿನಲ್ಲಿ ಟವೆಲ್ ಅದ್ದಿ, ಹಿಂಡಿ ಅದನ್ನು ತಲೆ ಮೇಲೆ ಹಾಕಿಕೊಳ್ಳಬೇಕು. ನಾಲ್ಕೈದು ಬಾರಿ ಹೀಗೆ ಮಾಡಬೇಕು. ಒಂದು ಗಂಟೆ ನಂತ್ರ ಕೂದಲನ್ನು ಸ್ವಚ್ಚ ನೀರಿನಲ್ಲಿ ತೊಳೆಯಬೇಕು. ಇದರಿಂದ ಕೂದಲು ಬಲಗೊಳ್ಳುತ್ತದೆ. ಕೂದಲಿನ ಬೆಳವಣಿಗೆ ವೇಗವಾಗುತ್ತದೆ. ತಲೆಹೊಟ್ಟು ಕಡಿಮೆಯಾಗುತ್ತದೆ.

## ಉಚಿತ ಕಾಲು, ಕೈ ಜೋಡಣಾ ಶಿಬಿರ

ಸತತ 15ನೇ ವರ್ಷ ಕರ್ನಾಟಕ ಮಾರವಾರಿ ಸಮಾಜವು ಭಗವಾನ್ ಮಹಾವೀರ್ ಜೈನ್ ವಿಕಲಾಂಗ್ ಸಹಾಯತಾ ಸಮಿತಿ(ಜೈಪುರ್ ಫೂಟ್) ಸಹಯೋಗದಲ್ಲಿ 'ಉಚಿತ ಬೃಹತ್ ಕೃತಕ ಕಾಲು ಶಿಬಿರ' ಆಯೋಜಿಸಿದೆ. ಇದು ಮೊಣಕೈಗಳನ್ನು ಕಳೆದುಕೊಂಡವರು ಅಥವಾ ಪೋಲಿಯೋಕ್ಯಾಲಿಪರ್ಸ್ ಅಗತ್ಯವಿರುವವರಿಗೆ ಸಂಪೂರ್ಣ ಉಚಿತ ಕೃತಕ ಅಂಗ ದಾನ ಶಿಬಿರವಾಗಿದೆ. ಈ ಬಾರಿ ಕೆಎಂಎಸ್ ಮೊಣಕೈಗಳನ್ನೂ ಈ ಶಿಬಿರಕ್ಕೆ ಸೇರ್ಪಡೆಮಾಡಿದೆ. ಈ ಅಳತೆಯ ಶಿಬಿರವನ್ನು ಆಗಸ್ಟ್ 18, 2024ರಂದು ರಾಣಿ ಸರಳಾ ದೇವಿ ಕೊಲಾಜ್, 281, 7 ಕ್ರಾಸ್, 1 ನೇಬ್ಲಾಕ್, ಜಯನಗರ ಪೂರ್ವ, ಜಯನಗರ, ಬೆಂಗಳೂರು -560011ಇಲ್ಲಿ ಬೆಳಿಗ್ಗೆ 8:00ರಿಂದ ಮಧ್ಯಾಹ್ನ2:00ರವರೆಗೆ ಆಯೋಜಿಸಲಾಗಿದೆ. ನೋಂದಣಿಯು ಆಗಸ್ಟ್ 17, 2024ರಂದು ಶನಿವಾರ ಮುಕ್ತಾಯಗೊಳ್ಳಲಿದೆ.

ಹೆಚ್ಚಿನ ವಿವರಗಳು ಮತ್ತು ನೋಂದಣಿಗೆ ಈ ಕೆಳಕಂಡ ಸಂಖ್ಯೆಗಳನ್ನು ಸಂಪರ್ಕಿಸಿ:

9019721885 / 8792288404ವಿತರಣೆಯ ಸಮಾರಂಭವು ಸೆಪ್ಟೆಂಬರ್ 22, 2024ರಂದು ಅದೇ ಸ್ಥಳದಲ್ಲಿ ನಡೆಯಲಿದೆ.ಈ ಶಿಬಿರದ ಕುರಿತು ಕರ್ನಾಟಕ ಮಾರವಾರಿ ಸಮಾಜದ ಅಧ್ಯಕ್ಷ ಶ್ರೀ ವಿಕಾಸ್ ಬಲೋದಿಯಾ, ''ಈ ಶಿಬಿರದಲ್ಲಿ ಹಿಂದೆ ಕೃತಕ ಅಂಗಗಳನ್ನು ಕೊಳ್ಳಲು ಅಶಕ್ತರಾದವರಿಗೆ ಹೆಚ್ಚಿನ ಗುಣಮಟ್ಟದ ಕೃತಕ ಅಂಗಗಳು ಮತ್ತು ಇತರೆ ಸಾಧನಗಳನ್ನು ಒದಗಿಸಲಾಗುತ್ತದೆ. ಈ ಶಿಬಿರಗಳುಸಮುದಾಯದ ಬೆಂಬಲ ನಿರ್ಮಿಸುತ್ತವೆ, ಅರಿವು ಹೆಚ್ಚಿಸುತ್ತವೆ ಮತ್ತು ಜನರಿಗೆ ಚಲನೆ ಮತ್ತೆ ಪಡೆಯಲು ನೆರವಾಗುವ ಮೂಲಕ ಅವರಜೀವನಗಳನ್ನು ಮತ್ತು ಸಾಮಾಜಿಕ ಸಕ್ರಿಯತೆಯನ್ನು ಸುಧಾರಿಸುತ್ತವೆ. ಈ ಉಪಕ್ರಮವು ಉಚಿತ ವೈದ್ಯಕೀಯ ಪರೀಕ್ಷೆಗಳು, ಫಿಟ್ಟಿಂಗ್ ಗಳುಮತ್ತು ಜೀವನದ ಗುಣಮಟ್ಟ ಹೆಚ್ಚಿಸುವ ಆರೈಕೆ ನೀಡುವ ಮೂಲಕ ವ್ಯಕ್ತಿಗಳಿಗೆ ದೀರ್ಘಕಾಲೀನ ಪರಿಣಾಮ ಉಂಟು ಮಾಡುತ್ತದೆ. ಕರ್ನಾಟಕದ ಮತ್ತು ಸುತ್ತಮುತ್ತಲಿನ ಜನರು ಈ ಅವಕಾಶವನ್ನು ಬಳಸಿಕೊಳ್ಳಬಹುದಾಗಿದೆ'' ಎಂದರು.

ಕರ್ನಾಟಕ ಮಾರವಾರಿ ಸಮಾಜದ ಪ್ರಾಜೆಕ್ಟ್ ಡೈರೆಕ್ಟರ್ ಶ್ರೀ ಬಿಮಲ್ ಕುಮಾರ್ ಸರೋಗಿ, ''ನಾವೆಲ್ಲರೂ ಒಂದಲ್ಲಾ ಒಂದು ರೀತಿಯಲ್ಲಿಬಾಧಿತರಾಗಿದ್ದೇವೆ ಮತ್ತು ನಮ್ಮ ಸಾಮರ್ಥ್ಯ ಮೀರಿ ಇತರರಿಗೆ ನೆರವಾಗಲು ಶ್ರಮಿಸಬೇಕು. ಕೆಎಂಎಸ್ ದುರ್ಬಲರಿಗೆ ಚಲನೆ ನೀಡಲು ಮತ್ತುಘನತೆ ತರಲು ಅತ್ಯುತ್ತಮ ಗುಣಮಟ್ಟದ, ದೀರ್ಘಬಾಳಿಕೆಯ ಕೃತಕ ಕಾಲುಗಳು, ಇತರೆ ಸಾಧನಗಳು ಮತ್ತು ಸಲಕರಣೆಗಳನ್ನು ಒದಗಿಸುವಸಾಮಾಜಿಕ ಧ್ಯೇಯ ಮತ್ತು ಬದ್ಧತೆ ಹೊಂದಿದೆ. ಉತ್ತಮ ಗುಣಮಟ್ಟದ, ದೀರ್ಘಬಾಳಿಕೆಯ ಕೃತಕ ಅಂಗಗಳು ಮತ್ತು ಇತರೆ ಸಾಧನಗಳಿಂದ ನಾವು ಅವರ ಜೀವನದ ಗುಣಮಟ್ಟವನ್ನು ಗಮನಾರ್ಹವಾಗಿ ಹೆಚ್ಚಿಸುವ ಗುರಿ ಹೊಂದಿದ್ದೇವೆ'' ಎಂದರು.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಸಮಾಜದಲ್ಲಿ ಗೌರವ, ಹೊಸ ಉದ್ಯೋಗ ಪ್ರಾಪ್ತಿ, ಧನ ಲಾಭ, ಉತ್ತಮ ಬುದ್ಧಿಶಕ್ತಿ, ಗಣ್ಯ ವ್ಯಕ್ತಿಗಳ ಭೇಟಿ.

**ವೃಷಭ:** ಯತ್ನ ಕಾರ್ಯಗಳಲ್ಲಿ ವಿಳಂಬ, ಮನೆಯಲ್ಲಿ ಅಶಾಂತಿ, ಸಾಧಾರಣ ಪ್ರಗತಿ, ವಿರೋಧಿಗಳಿಂದ ತೊಂದರೆ.

**ಮಿಥುನ:** ಮಿತ್ರರಿಂದ ಸಹಾಯ, ಸ್ಥಳ ಬದಲಾವಣೆ, ದ್ರವ್ಯ ನಷ್ಟ, ವಿದ್ಯಾಭ್ಯಾಸದಲ್ಲಿ ಹಿನ್ನಡೆ, ಅಕಾಲ ಭೋಜನ.

**ಕಟಕ:** ಹಿರಿಯರ ಮಾತಿಗೆ ಗೌರವ, ಪರಿಶ್ರಮದಿಂದ ಅಭಿವೃದ್ಧಿ, ಮಹಿಳೆಯರಿಗೆ ವಿಶೇಷ ಲಾಭ.

**ಸಿಂಹ:** ವ್ಯಾಪಾರ ವ್ಯವಹಾರಗಳಲ್ಲಿ ಏರುಪೇರು, ಶರೀರದಲ್ಲಿ ಏರುಪೇರು, ವೈದ್ಯರ ಬೇಟಿ, ವಿಪರೀತ ವ್ಯಸನ.

**ಕನ್ಯಾ:** ಶುಭ ಸುದ್ದಿ ಕೇಳುವಿರಿ, ಮಹಿಳೆಯರಿಗೆ ಬಡ್ತಿ, ಶತ್ರು ನಾಶ, ದಾಂಪತ್ಯದಲ್ಲಿ ಪ್ರೀತಿ, ಕೃಷಿಕರಿಗೆ ನಷ್ಟ.

**ತುಲಾ:** ಸಣ್ಣ ಮಾತಿನಿಂದ ಕಲಹ, ಮಕ್ಕಳಿಂದ ನಿಂದನೆ, ಅತಿಯಾದ ಕೋಪ, ಅಕಾಲ ಭೋಜನ.

**ವೃಶ್ಚಿಕ:** ಬಳಕೆ ವಸ್ತುಗಳಿಂದ ಲಾಭ, ಮನಸ್ಸಿನಲ್ಲಿ ಗೊಂದಲ, ಶತ್ರು ಭಾದೆ, ಎಲ್ಲರ ಮನಸ್ಸನ್ನು ಗೆಲ್ಲುವಿರಿ.

**ಧನಸ್ಸು:** ಉತ್ತಮ ಪ್ರಗತಿ, ಕಾರ್ಯ ಸಾಧನೆಗಾಗಿ ತಿರುಗಾಟ, ಅನಾವಶ್ಯಕ ಖರ್ಚು, ಆಪ್ತರಿಂದ ಸಲಹೆ, ಆರೋಗ್ಯ ವೃದ್ಧಿ.

**ಮಕರ:** ಮನಸ್ಸಿಗೆ ಸಂತಸ, ನಾನಾ ರೀತಿಯ ತೊಂದರೆ, ಆರ್ಥಿಕ ಪರಿಸ್ಥಿತಿ ಬಿಕ್ಕಟ್ಟು, ಪರರಿಗೆ ಸಹಾನುಭೂತಿ ತೋರುವಿರಿ.

**ಕುಂಭ:** ಅತಿಯಾದ ನಿದ್ರೆ, ಸ್ನೇಹಿತರಿಂದ ವಂಚನೆ, ಅತಿಯಾದ ಭಯ, ಶ್ರಮಕ್ಕೆ ತಕ್ಕ ಫಲ.

**ಮೀನ:** ದೃಷ್ಟಿ ದೋಷದಿಂದ ತೊಂದರೆ ಎಚ್ಚರ, ಕುಟುಂಬ ಕಲಹ, ಕಾರ್ಯವಿಘ್ನ, ವಾದ ವಿವಾದಗಳಿಂದ ತೊಂದರೆ.

## ವಿಶ್ವ ಪರ್ಯಾಯ ಆಟಗಳ ದಿನ



ವಿಶ್ವ ಪರ್ಯಾಯ ಆಟಗಳ ದಿನವನ್ನು ಆಚರಿಸುತ್ತಿದ್ದೇವೆ. ಈ ವರ್ಷ, ಇದು ಆಗಸ್ಟ್ 5 ರಂದು ನಡೆಯುತ್ತದೆ. ವರ್ಲ್ಡ್ ಆಲ್ಟರ್ನೇಟಿವ್ ಗೇಮ್ಸ್ ರೋಮಾಂಚಕ, ಸಾಹಸಮಯ ಮತ್ತು ಮೋಜಿನ ಆಟಗಳು ಮತ್ತು ಕ್ರೀಡೆಗಳನ್ನು ಒಳಗೊಂಡಿರುವ ವಾರ್ಷಿಕ ಕಾರ್ಯಕ್ರಮವಾಗಿದೆ. ದಿನವು ಸ್ವಲ್ಪ ಕಡಿಮೆ ಅಂತರರಾಷ್ಟ್ರೀಯ ಗಮನ ಮತ್ತು ಪ್ರಮಾಣಿತ ಕಾನೂನುಗಳೊಂದಿಗೆ ಪರ್ಯಾಯ ಒಲಿಂಪಿಕ್ಸ್ ಆಗಿದೆ. ಇದು 2012 ರಲ್ಲಿ ವೇಲ್ಸ್‌ನ ಪೊವಿಸ್ನಲ್ಲಿರುವ ಲ್ಯಾನ್ವರ್ಟಿಡ್ ವೆಲ್ಸ್‌ನಲ್ಲಿರುವ ವರ್ಲ್ಡ್ ಬಾಗ್ ಸ್ನಾರ್ಕ್ಲಿಂಗ್ ಚಾಂಪಿಯನ್ಶಿಪ್ನ ಮನೆಯಲ್ಲಿ ಪ್ರಾರಂಭವಾದ ಅಸಾಮಾನ್ಯ ಕ್ರೀಡಾಕೂಟವಾಗಿದೆ. ಈವೆಂಟ್ಗಳಲ್ಲಿ ಸೇರಿಸಲಾದ ಆಟಗಳು ಚಮತ್ಕಾರಿ ಮತ್ತು ವರ್ಮ್ ಚಾರ್ಮಿಂಗ್, ರಥ ರೇಸಿಂಗ್, ಬಾತ್ಟಬ್ಬಿಂಗ್ ಚಾಂಪಿಯನ್ಶಿಪ್ಗಳು, ವೈಫ್ ಕ್ಯಾರಿಯಿಂಗ್ ಚಾಂಪಿಯನ್ಶಿಪ್ಗಳು ಇತ್ಯಾದಿಗಳನ್ನು ಒಳಗೊಂಡಿವೆ. ಆದ್ದರಿಂದ ನಾವು ಮುಂದಿನ ಈವೆಂಟ್ನ ಭಾಗವಾಗೋಣ ಮತ್ತು ಅನನ್ಯ ಅನುಭವವನ್ನು ಆನಂದಿಸೋಣ.

ನಾವು ಯಾವಾಗಲೂ ಇತರರೊಂದಿಗೆ ಸ್ಪರ್ಧಿಸುವ ಮನೋಭಾವವನ್ನು ಹೊಂದಿದ್ದೇವೆ. ಇದು ವಿಕಸನದ ಯುಗಗಳ ಮೂಲಕ ನಮಗೆ ರವಾನಿಸಲ್ಪಟ್ಟ ವಿಕಸನೀಯ ಲಕ್ಷಣವಾಗಿದೆ. ನಮ್ಮ ಸ್ಪರ್ಧಾತ್ಮಕ ಮನೋಭಾವವು ತಂತ್ರಜ್ಞಾನ, ವಿಜ್ಞಾನ, ಕಲೆ, ಕ್ರೀಡೆ ಮತ್ತು ಜೀವನದ ಇತರ ಅಂಶಗಳಲ್ಲಿ ಮೈಲಿಗಲ್ಲುಗಳನ್ನು ಸಾಧಿಸಲು ನಮಗೆ ಸಹಾಯ ಮಾಡಿದೆ. ಆಧುನಿಕ ಕ್ರೀಡೆಗಳು, ಆಟಗಳು ಮತ್ತು ಇತರ ರೀತಿಯ ಸ್ಪರ್ಧೆಗಳು ಈ ಆಧುನಿಕ ಯುಗದಲ್ಲೂ ಈ ಸ್ಪರ್ಧಾತ್ಮಕ ಮನೋಭಾವವನ್ನು ಕಾಪಾಡಿಕೊಳ್ಳಲು ನಮಗೆ ಸಹಾಯ ಮಾಡುತ್ತವೆ.

ಒಲಿಂಪಿಕ್ಸ್ ಎಂಬುದು ಮಧ್ಯಯುಗದಲ್ಲಿ ಗ್ರೀಸ್ನಲ್ಲಿ ಪ್ರಾರಂಭವಾದ ಘಟನೆಯಾಗಿದೆ. ಇದು ವ್ಯಾಪಕ ಶ್ರೇಣಿಯ ಕ್ರೀಡೆಗಳು ಮತ್ತು ಆಟಗಳನ್ನು ಒಳಗೊಂಡಿದೆ, ಪ್ರತಿ ರಾಷ್ಟ್ರದ ಜನರು ವೈಭವ ಮತ್ತು ಪದಕಗಳಿಗಾಗಿ ಪರಸ್ಪರ ಸ್ಪರ್ಧಿಸುತ್ತಾರೆ. ಒಲಿಂಪಿಕ್ಸ್ ವಿಶ್ವಾದ್ಯಂತ ವೀಕ್ಷಕರು ಮತ್ತು ಅನುಯಾಯಿಗಳನ್ನು ಹೊಂದಿದೆ. ಆದರೆ ಒಲಂಪಿಕ್ಸ್‌ನ ವೈಭವ ಮತ್ತು ಭವ್ಯತೆಯು ನಮ್ಮ ಉತ್ಸಾಹವನ್ನು ನೆಲೆಗೊಳಿಸಲು ಸಾಕಾಗುವುದಿಲ್ಲ. ಹೀಗಾಗಿ, ಸ್ಪರ್ಧೆಯ ವಿವಿಧ ಪರ್ಯಾಯ ರೂಪಗಳು ಕಾಲಾನಂತರದಲ್ಲಿ ಅಭಿವೃದ್ಧಿಗೊಂಡಿವೆ.ವರ್ಲ್ಡ್ ಆಲ್ಟರ್ನೇಟಿವ್ ಗೇಮ್ಸ್ ಅದರ ವಿಶಿಷ್ಟ ಶೈಲಿ ಮತ್ತು ಪ್ರೇಕ್ಷಕರನ್ನು ಹೊಂದಿರುವ ಅಂತಹ ಸ್ಪರ್ಧೆಗಳಲ್ಲಿ ಒಂದಾಗಿದೆ. ನಾವು ಸಾಂದರ್ಭಿಕವಾಗಿ ನಮ್ಮ ಸ್ನೇಹಿತರೊಂದಿಗೆ ಆಡುವ ವಿವಿಧ ರೀತಿಯ ಸ್ಪರ್ಧಾತ್ಮಕ, ಸರಳ ಮತ್ತು ಇನ್ನೂ ಸೊಗಸಾದ ಆಟಗಳಿವೆ. ಆದರೆ ಈ ಆಟಗಳು ಒಲಿಂಪಿಕ್ಸ್‌ನಂತಹ ಮುಖ್ಯವಾಹಿನಿಯ ಈವೆಂಟ್ನಲ್ಲಿ ಸೇರಿಸಲು ಸಾಕಷ್ಟು ಜನಪ್ರಿಯತೆ ಅಥವಾ ರಚನೆಯನ್ನು ಹೊಂದಿಲ್ಲ. ಆದರೆ ಅವರು ವಿಶ್ವ ಪರ್ಯಾಯ ಆಟಗಳಿಗೆ ಸಾಕಷ್ಟು ಹೆಚ್ಚು. ವೆಲ್ಷ್ ಪಟ್ಟಣಗಳು ಈಗಾಗಲೇ ತಮ್ಮ ವಿಶಿಷ್ಟ ಘಟನೆಗಳು ಮತ್ತು ವಿಲಕ್ಷಣ ಕ್ರೀಡೆಗಳಿಗೆ ಪ್ರಸಿದ್ಧವಾಗಿವೆ. ವೇಲ್ಸ್‌ನ ಪೊವಿಸ್ನಲ್ಲಿರುವ ಸಣ್ಣ ಪಟ್ಟಣವಾದ ಲ್ಯಾನ್ವರ್ಟಿಡ್ ವೆಲ್ಸ್ 2012 ರಲ್ಲಿ ಮೊದಲ ಆಟಗಳನ್ನು ಆಯೋಜಿಸಿತು.

# ಇಟಲಿ ಕರಾವಳಿಯಲ್ಲಿ ದೋಣಿ ಮುಳುಗಿ ಇಬ್ಬರು ವಲಸಿಗರು ಸಾವು



**ಇಟಲಿ:** ದಕ್ಷಿಣ ಇಟಲಿಯ ಸಿಸಿಲಿಯ ಪೂರ್ವ ಕರಾವಳಿಯಲ್ಲಿ ಎರಡು ದಿನಗಳ ಹಿಂದೆ ಸಂಭವಿಸಿದ ವಲಸೆ ದೋಣಿ ಅಪಘಾತದಲ್ಲಿ ಇಬ್ಬರು ಸಾವನ್ನಪ್ಪಿದ್ದಾರೆ ಮತ್ತು ಇನ್ನೊಬ್ಬರು ಕಾಣೆಯಾಗಿದ್ದಾರೆ ಎಂದು ದೇಶದ ಕೋಸ್ಟ್ ಗಾರ್ಡ್ ತಿಳಿಸಿದೆ.

ಸಿರಾಕ್ಯೂಸ್ನ ಆಗ್ನೇಯಕ್ಕೆ 17 ಮೈಲಿ ದೂರದಲ್ಲಿರುವ ವಲಸಿಗರನ್ನು ಹೊತ್ತ ದೋಣಿಯಿಂದ ತೊಂದರೆಯ ಕರೆ ಬಂದಿದೆ ಎಂದು ಕೋಸ್ಟ್ ಗಾರ್ಡ್ ಭಾನುವಾರ ತಿಳಿಸಿದೆ ಎಂದು ಕ್ವಿನ್ಸುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ. ಕೋಸ್ಟ್ ಗಾರ್ಡ್ ಗಸ್ತು ದೋಣಿ ಮತ್ತು ವಿಮಾನವನ್ನು ಈ ಪ್ರದೇಶಕ್ಕೆ ಕಳುಹಿಸಿತು, ಆದರೆ ಗಸ್ತು ದೋಣಿ ಸಮೀಪಿಸುತ್ತಿದ್ದಂತೆ ಹಡಗಿನಲ್ಲಿದ್ದವರು ನೀರಿನಲ್ಲಿ ಮುಳುಗಿದರು ಎಂದು ಅದು ಹೇಳಿಕೆಯಲ್ಲಿ ತಿಳಿಸಿದೆ.

34 ಜನರನ್ನು ನೀರಿನಿಂದ ಹೊರತೆಗೆಯಲಾಗಿದ್ದರೂ, ಒಬ್ಬರು ಸ್ಥಳದಲ್ಲೇ ಮತ್ತು ಇನ್ನೊಬ್ಬರು ಆಸ್ಪತ್ರೆಗೆ ತಲುಪಿದ ನಂತರ ಸಾವನ್ನಪ್ಪಿದ್ದಾರೆ.

ಸ್ಥಳೀಯ ಮಾಧ್ಯಮ ವರದಿಗಳ ಪ್ರಕಾರ, ನಂತರ ಮುಳುಗಿದ ಹಡಗಿನಲ್ಲಿದ್ದ ಕಾಣೆಯಾದ ವ್ಯಕ್ತಿಗಾಗಿ ಸಮುದ್ರದಲ್ಲಿ ಶೋಧ ನಡೆಯುತ್ತಿದೆ.

# 2029ರಲ್ಲಿಯೂ ಬಿಜೆಪಿ ಅಧಿಕಾರಕ್ಕೆ ಬರತ್ತೆ; ಅಮಿತ್ ಶಾ



**ಚಂಡೀಗಢ:** 2029ರ ಮುಂಬರುವ ಲೋಕಸಭಾ ಚುನಾವಣೆಯಲ್ಲಿಯೂ ಎನ್ ಡಿಎ ಅಧಿಕಾರಕ್ಕೆ ಬರಲಿದೆ. ನರೇಂದ್ರ ಮೋದಿಯೇ ಪ್ರಧಾನಿ ಆಗಲಿದ್ದಾಲೆ ಎಂದು ಕೇಂದ್ರ ಸಚಿವ ಅಮಿತ್ ಶಾ ಭವಿಷ್ಯ ನುಡಿದಿದ್ದಾರೆ.

ಮಣಿಮಜ್ರಾ ಪ್ರದೇಶದಲ್ಲಿ 75 ಕೋಟಿ ರೂ. ವೆಚ್ಚದಲ್ಲಿ ಸಿದ್ಧಪಡಿಸಿರುವ 24X7 ನೀರಿನ ಯೋಜನೆಗೆ ಚಾಲನೆ ನೀಡಿ ಮಾತನಾಡಿದ ಅವರು, 2029ರಲ್ಲಿ ಮತ್ತೆ ಎನ್ಡಿಎ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬರುತ್ತೆ. ಆ ಸಂದರ್ಭದಲ್ಲಿಯೂ ವಿಪಕ್ಷದಲ್ಲಿ ಕೂರಲು ಇಂಡಿಯಾ ಬಣ ತಯಾರಾಗಬೇಕು ಎಂದು ವಾಗ್ದಾಳಿ ನಡೆಸಿದ್ದಾರೆ.

ಪ್ರತಿಪಕ್ಷಗಳು ಏನು ಬೇಕಾದರೂ ಮಾಡಲಿ. 2029ರಲ್ಲಿ ದೇಶದಲ್ಲಿ ಮತ್ತೆ ಎನ್ಡಿಎ ಸರ್ಕಾರ ಬರಲಿದೆ. ಮತ್ತೆ ಮೋದಿಯೇ ಬರುತ್ತಾರೆಂದು ಅವರಿಗೆ ಗೊತ್ತಿಲ್ಲ ಎಂದು ಹೇಳಿದ್ದಾರೆ.

## ಪಾಕಿಸ್ತಾನದಲ್ಲಿ ಭಾರತದ ವಿರೋಧಿ ಹತ್ಯೆ

**ನವದೆಹಲಿ:** ಪಾಕಿಸ್ತಾನದ ಐಎಸ್ಐ ಏಜೆಂಟ್ ಹಾಗೂ ಕೆನಾಡದ ಉದ್ಯಮಿ ಆಗಿರುವ ವ್ಯಕ್ತಿಯನ್ನು ಓರ್ವ ಅನಾಮಧೇಯ ಯುವಕ ಶೂಟ್ ಮಾಡಿ ಎಸ್ಕೇಪ್ ಆಗಿರುವ ಘಟನೆ ಕೆನಡಾದಲ್ಲಿ ನಡೆದಿದೆ. ಉದ್ಯಮಿಯೂ ಆಗಿರುವ ರಹತ್ ರಾವ್ ಎಂಬುವವನನ್ನು 24 ವರ್ಷದ ಯುವಕನು ರಹತ್ ಕಚೇರಿಗೆ ನುಗ್ಗಿ ಗುಂಡಿಕ್ಕಿ ಕೊಂದಿದ್ದಾನೆ. ಪ್ರಾಥಮಿಕ ವರದಿ ಪ್ರಕಾರ, ಮೃತ ರಹತ್ ಬಳಿ ಹಣಕಾಸು ಎಕ್ಸ್ಚೇಂಜ್ ಮಾಡಿಕೊಳ್ಳುವ ನೆಪದಲ್ಲಿ ಬಂದು ಈ ಕೃತ್ಯ ಎಸಗಿರುವುದಾಗಿ ತಿಳಿದುಬಂದಿದೆ. ಇನ್ನು ಶೂಟ್ ಮಾಡಿದ ಯುವಕ ಕೆನಡಾ ಖಲಿಸ್ತಾನಿ ಉಗ್ರ ಹರ್ದೀಪ್ ಸಿಂಗ್ ನಿಜ್ಜರ್ ಕೊಲೆ ವಿರುದ್ಧದ ಪ್ರತಿಭಟನೆಯಲ್ಲೂ ಕಳೆದ ವರ್ಷ ಭಾಗಿಯಾಗಿದ್ದ ಎಂದು ವರದಿಯಾಗಿದೆ.



# ಎಫ್-16 ಯುದ್ಧ ವಿಮಾನಗಳ ಕಾರ್ಯಾಚರಣೆ ಆರಂಭಿಸಿದ ಉಕ್ರೇನ್



**ಉಕ್ರೇನ್:** ಉಕ್ರೇನ್ ನ ಅಘೋಷಿತ ಸ್ಥಳದಲ್ಲಿ ಉಕ್ರೇನ್ ವಾಯುಪಡೆಯ ಎಫ್ -16 ಫೈಟರ್ ಜೆಟ್‌ಗಳ ಹಿನ್ನೆಲೆಯಲ್ಲಿ ನಿಂತಿರುವ ಮಾಧ್ಯಮ ಪ್ರಶ್ನೆಗಳಿಗೆ ಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಜೆಲೆನ್ಸ್ಕಿ ಉತ್ತರಿಸಿದ್ದಾರೆ.



ಉಕ್ರೇನ್ ರಕ್ಷಣಾ ಪ್ರಯತ್ನಗಳಿಗೆ ಮಹತ್ವದ ಬೆಳವಣಿಗೆಯೊಂದರಲ್ಲಿ, ಉಕ್ರೇನ್ ಪೈಲಟ್ಗಳು ಯುಎಸ್ ನಿರ್ಮಿತ ಎಫ್ -16 ಫೈಟರ್ ಜೆಟ್ಗಳನ್ನು ಅಧಿಕೃತವಾಗಿ ಹಾರಿಸಲು ಪ್ರಾರಂಭಿಸಿದ್ದಾರೆ ಎಂದು ಅಧ್ಯಕ್ಷ ವೊಲೊಡಿಮಿರ್ ಜೆಲೆನ್ಸ್ಕಿ ಭಾನುವಾರ ಘೋಷಿಸಿದರು.

ಈ ಮೈಲಿಗಲ್ಲು ಉಕ್ರೇನ್ ಮೇಲೆ ರಷ್ಯಾದ ಆಕ್ರಮಣದ ನಂತರ 29 ತಿಂಗಳಿಗೂ ಹೆಚ್ಚು ಕಾಲ ನಡೆದ ಸಮರ್ಥನೆ ಮತ್ತು ಮಾತುಕತೆಗಳ ಪರಾಕಾಷ್ಠೆಯನ್ನು ಸೂಚಿಸುತ್ತದೆ. ಅಜ್ಞಾತ ವಾಯುನೆಲೆಯಲ್ಲಿ ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಜೆಲೆನ್ಸ್ಕಿ, ಉಕ್ರೇನ್ ಮಿಲಿಟರಿ ಶಸ್ತ್ರಾಗಾರಕ್ಕೆ ಹೆಚ್ಚು ನಿರೀಕ್ಷಿತ ಸೇರ್ಪಡೆಯಾದ ಎಫ್ -16 ಗಳ ನಿಯೋಜನೆಯನ್ನು ಹೆಮ್ಮೆಯಿಂದ ದೃಢಪಡಿಸಿದರು. ಎಫ್-16 ಯುದ್ಧ ವಿಮಾನಗಳು ಉಕ್ರೇನ್ನಲ್ಲಿವೆ. ನಾವು ಮಾಡಿದೆವು. ಈ ಜೆಟ್ಗಳನ್ನು ಕರಗತ ಮಾಡಿಕೊಳ್ಳುತ್ತಿರುವ ಮತ್ತು ಈಗಾಗಲೇ ಅವುಗಳನ್ನು ನಮ್ಮ ದೇಶಕ್ಕಾಗಿ ಬಳಸಲು ಪ್ರಾರಂಭಿಸಿದ ನಮ್ಮ ಹುಡುಗರ ಬಗ್ಗೆ ನನಗೆ ಹೆಮ್ಮೆ ಇದೆ ಎಂದು ಅವರು ಹೇಳಿದರು.

# ಬಾಂಗ್ಲಾ ಹಿಂಸಾಚಾರಕ್ಕೆ 72 ಮಂದಿ ಬಲಿ
## ಸಂಪರ್ಕದಲ್ಲಿರುವಂತೆ ಭಾರತೀಯರಿಗೆ ಕೇಂದ್ರ ಸೂಚನೆ



**ಢಾಕಾ:** ಬಾಂಗ್ಲಾದೇಶದ ಪ್ರಧಾನಿ ರಾಜೀನಾಮೆಗೆ ಒತ್ತಾಯಿಸಿ ಪ್ರತಿಭಟನೆ ನಡೆಯುತ್ತಿದ್ದು, ಇದಕ್ಕೆ ಆಡಳಿತಾರೂಢ ಅವಾಮಿ ಲೀಗ್ ಕಾರ್ಯಕರ್ತರು ವಿರೋಧ ವ್ಯಕ್ತಪಡಿಸಿದ್ದಾರೆ. ಇದರಿಂದ ಸಂಘರ್ಷ ಭುಗಿಲೆದ್ದಿದ್ದು, 72 ಮಂದಿ ಸಾವಿಗೀಡಾಗಿದ್ದಾರೆ.

ಬಾಂಗ್ಲಾ ಸಂಘರ್ಷದಿಂದಾಗಿ ದೇಶದಲ್ಲಿರುವ ಭಾರತೀಯರು ಆತಂಕ ಗೊಂಡಿದ್ದಾರೆ. ಬಾಂಗ್ಲಾದಲ್ಲಿರುವ ತನ್ನ ನಾಗರಿಕರಿಗೆ ಸಂಪರ್ಕದಲ್ಲಿ ಇರುವಂತೆ ಭಾರತೀಯ ರಾಯಭಾರಿ ಕಚೇರಿ ಸೂಚನೆ ನೀಡಿದೆ.

ಭಾರತದ ಸಹಾಯಕ ಹೈ ಕಮಿಷನ್, ಸಿಲ್ಹೆಟ್‌ನ ಅಧಿಕಾರ ವ್ಯಾಪ್ತಿಯಲ್ಲಿ ವಾಸಿಸುವ ವಿದ್ಯಾರ್ಥಿಗಳು ಸೇರಿದಂತೆ ಎಲ್ಲಾ ಭಾರತೀಯ ಪ್ರಜೆಗಳು ಈ ಕಚೇರಿಯೊಂದಿಗೆ ಸಂಪರ್ಕದಲ್ಲಿರಲು ವಿನಂತಿಸಲಾಗಿದೆ. ಜೊತೆಗೆ ಜಾಗರೂಕರಾಗಿರಲು ಸೂಚಿಸಲಾಗಿದೆ. ತುರ್ತು ಸಂದರ್ಭಗಳಲ್ಲಿ +88-01313076402 ಅನ್ನು ಸಂಪರ್ಕಿಸುವಂತೆ ತಿಳಿಸಲಾಗಿದೆ.

ಪ್ರಧಾನಿ ಶೇಖ್ ಹಸೀನಾ ಅವರ ರಾಜೀನಾಮೆಗೆ ಒತ್ತಾಯಿಸಿ ಸರ್ಕಾರಿ ಉದ್ಯೋಗ ಕೋಟಾ ಕುರಿತಾದ ಪ್ರತಿಭಟನೆಗಳು ಮತ್ತೆ ಪುನರಾರಂಭಗೊಂಡಿವೆ. ಮೃತರಲ್ಲಿ ಹದಿನಾಲ್ಕು ಮಂದಿ ಪೊಲೀಸರು ಸೇರಿದ್ದಾರೆ. ಕೆಲವೇ ದಿನಗಳ ಹಿಂದೆ, 1971 ರಲ್ಲಿ ಬಾಂಗ್ಲಾದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹೋರಾಡಿದ ಯೋಧರ ಸಂಬಂಧಿಕರಿಗೆ ಸರ್ಕಾರಿ ಉದ್ಯೋಗಗಳಲ್ಲಿ 30 ಪ್ರತಿಶತವನ್ನು ಮೀಸಲಿಡುವ ವಿವಾದಾತ್ಮಕ ಕೋಟಾ ವ್ಯವಸ್ಥೆಯನ್ನು ತೆಗೆದುಹಾಕಬೇಕು ಎಂದು ಒತ್ತಾಯಿಸಿ ಪ್ರತಿಭಟನೆ ನಡೆಸಲಾಗಿತ್ತು. ಪೊಲೀಸರು ಮತ್ತು ವಿದ್ಯಾರ್ಥಿ ಪ್ರತಿಭಟನಾಕಾರರ ನಡುವಿನ ಹಿಂಸಾತ್ಮಕ ಘರ್ಷಣೆಯಲ್ಲಿ 200 ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದರು.

ಸರ್ಕಾರದ ರಾಜೀನಾಮೆಗೆ ಒತ್ತಾಯಿಸಿ ಅಸಹಕಾರ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಪ್ರತಿಭಟನಾಕಾರರು ಮತ್ತು ಅವಾಮಿ ಲೀಗ್, ಛತ್ರ ಲೀಗ್, ಜುಬೋ ಲೀಗ್ ಕಾರ್ಯಕರ್ತರ ನಡುವೆ ಮತ್ತೆ ಘರ್ಷಣೆಯಾಗಿದೆ.

# ಸೆಲ್ಫಿ ತೆಗೆದುಕೊಳ್ಳಲು ಹೋಗಿ ಕಮರಿಗೆ ಬಿದ್ದ ಮಹಿಳೆ ರಕ್ಷಣೆ

**ಮುಂಬೈ:** ಸೆಲ್ಫಿ ತೆಗೆದುಕೊಳ್ಳಲು ಹೋಗಿ ಆಳದ ಕಮರಿಗೆ ಬಿದ್ದ ಮಹಿಳೆಯನ್ನು ರಕ್ಷಿಸಿರುವ ಘಟನೆ ಮಹಾರಾಷ್ಟ್ರದ ಸತಾರಾದಲ್ಲಿ ನಡೆದಿದೆ.

ಪುಣೆಯಿಂದ ಸ್ನೇಹಿತರ ಜೊತೆ ಸತಾರಾ ಜಿಲ್ಲೆಯ ಬೋರ್ನ್ ಘಾಟ್‌ಗೆ ಬಂದಿದ್ದ ಮಹಿಳೆ ಥೋಸ್ಘರ್ ಜಲಪಾತದ ಬಳಿ 100 ಅಡಿ ಆಳದ ಕಮರಿಗೆ ಬಿದ್ದಿದ್ದಾಳೆ. ಗೃಹರಕ್ಷಕ ದಳ ಮತ್ತು ಸಹ ಪರ್ವತಾರೋಹಿಗಳು ಮಹಿಳೆಯನ್ನು ಸುರಕ್ಷಿತವಾಗಿ ಕಮರಿನಿಂದ ಹೊರಕ್ಕೆ ಕರೆತಂದರು. ಆಕೆಯನ್ನು ರಕ್ಷಿಸಿದ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಮಹಿಳೆಯನ್ನು ಕೂಡಲೇ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಆಕೆಯ ಸ್ಥಿತಿ ಈಗ ಸ್ಥಿರವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಮಹಾರಾಷ್ಟ್ರದ ರಾಯಗಡ ಬಳಿಯ ಕುಂಭೆ ಜಲಪಾತದಲ್ಲಿ 26 ವಯಸ್ಸಿನ ವ್ಯಕ್ತಿಯೊಬ್ಬರು ರೀಲ್ಸ್ ಮಾಡಲು ಹೋಗಿ ಕಮರಿಗೆ ಬಿದ್ದು ಸಾವನ್ನಪ್ಪಿದ್ದ ಘಟನೆ ಕೆಲ ದಿನಗಳ ಹಿಂದೆ ನಡೆದಿತ್ತು. ಆನ್ವಿ ಕಾಮ್ದಾರ್ ಜು.16 ರಂದು ಜಲಪಾತ ವೀಕ್ಷಣೆಗೆ ಏಳು ಸ್ನೇಹಿತರೊಂದಿಗೆ ಪ್ರವಾಸವನ್ನು ಕೈಗೊಂಡಿದ್ದರು. ಸ್ನೇಹಿತರು ವೀಡಿಯೊವನ್ನು ಚಿತ್ರೀಕರಿಸುತ್ತಿದ್ದಾಗ ಆನ್ವಿ ಆಳವಾದ ಕಂದಕಕ್ಕೆ ಜಾರಿ ಬಿದ್ದು ಮೃತಪಟ್ಟಿದ್ದರು.



## ಕಡಿಮೆ ಶ್ರೇಣಿಯ ಕ್ಷಿಪಣಿ ಬಳಿಸಿ ಹಮಾಸ್ ನಾಯಕನ ಹತ್ಯೆ

**ದೆಹಲಿ:** ಕಡಿಮೆ ಶ್ರೇಣಿಯ ಕ್ಷಿಪಣಿ ಬಳಸಿ ಹಮಾಸ್ ನಾಯಕ ಇಸ್ಮಾಯಿಲ್ ಹನಿಯೆ ಅವರ ಹತ್ಯೆ ಮಾಡಲಾಗಿದ್ದು, ಇದಕ್ಕೆ ಅಮೆರಿಕ ಬೆಂಬಲ ನೀಡಿದೆ ಎಂದು ಇರಾನ್ನ ರೆವಲ್ಯೂಷನರಿ ಗಾರ್ಡ್ ಆಕ್ರೋಶ ಹೊರ ಹಾಕಿದೆ. ಜೊತೆಗೆ ಘಟನೆಗೆ ಪ್ರತೀಕಾರ ತೀರಿಸುವುದಾಗಿಯೂ ಹೇಳಿದೆ. 7 ಕೆ.ಜಿ ತೂಕದ ಸಿಡಿತಲೆ ಇರುವ ರಾಕೆಟ್ ಅನ್ನು ಬಳಸಿ ಹನಿಯೆ ಅವರ ನಿವಾಸದ ಮೇಲೆ ದಾಳಿ ನಡೆಸಲಾಗಿದೆ. ರಾಜಧಾನಿ ಟೆಹ್ರಾನ್ನಲ್ಲಿರುವ ಹನಿಯೆ ಅವರ ನಿವಾಸದ ಮೇಲೆ ಗುರಿ ಇಡಲಾಗಿದೆ ಎಂದು ಸೇನೆ ತಿಳಿಸಿದ್ದು, ಅವರ ನಿವಾಸ ಇರುವ ನಿಖರ ಸ್ಥಳವನ್ನು ಬಹಿರಂಗಗೊಳಿಸಲು ನಿರಾಕರಿಸಿದೆ. 'ಜಿಯೋನಿಸ್ಟ್ ಆಡಳಿತವು ಅಮೆರಿಕದ ಬೆಂಬಲದಿಂದ ಈ ದಾಳಿ ಮಾಡಿದೆ. ಯುದ್ಧಕೋರ, ಭಯೋತ್ಪಾದಕ ಜಿಯೋನಿಸ್ಟ್ ಆಡಳಿತವು ಸೂಕ್ತ ಸಮಯ, ಸ್ಥಳ ಮತ್ತು ಸಾಮರ್ಥ್ಯದಲ್ಲಿ ಕಠಿಣ ಶಿಕ್ಷೆಯನ್ನು ಪಡೆಯಲಿದೆ' ಎಂದು ಸೇನೆ ತನ್ನ ಪ್ರಕಟಣೆಯಲ್ಲಿ ತಿಳಿಸಿದೆ. ಹನಿಯೆ ಹತ್ಯೆಯಲ್ಲಿ ತನ್ನ ಪಾತ್ರವನ್ನು ಇಸ್ರೇಲ್ ಈವರೆಗೂ ದೃಢಪಡಿಸಿಲ್ಲ. ಆದರೆ ಈ ಹಿಂದೆ ಹನಿಯೆ ಹತ್ಯೆ ಮಾಡುವುದಾಗಿ ಹೇಳಿತ್ತು. ಈ ಹತ್ಯೆಯು ಭಾರಿ ಪ್ರಾದೇಶಿಕ ಸಂಘರ್ಷದ ಭಯವನ್ನು ಹುಟ್ಟುಹಾಕಿದೆ. ಇರಾನ್ ಪ್ರತೀಕಾರ ತೀರಿಸಿಕೊಂಡರೆ ಇಸ್ರೇಲ್ ಮತ್ತು ಇರಾನ್ ನಡುವೆ ಮತ್ತೊಂದು ಕದನ ಏರ್ಪಡುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ.



## ಮುಂದಿನ 72 ಗಂಟೆಗಳಲ್ಲಿ ಇಸ್ರೇಲ್ ಮೇಲೆ ದಾಳಿ; ಇರಾನ್

**ವಾಷಿಂಗ್ಟನ್:** ಹಮಾಸ್ ಮುಖ್ಯಸ್ಥ ಇಸ್ಮಾಯಿಲ್ ಹನಿಯೆ ಹತ್ಯೆಗೆ ಸೇಡು ತೀರಿಸಿಕೊಳ್ಳಲು ಇರಾನ್ ಮುಂದಿನ 72 ಗಂಟೆಗಳಲ್ಲಿ ಇಸ್ರೇಲ್ ಮೇಲೆ ದಾಳಿ ಮಾಡುವುದಾಗಿ ಬೆದರಿಕೆ ಹಾಕಿದೆ. ಈ ಹಿನ್ನೆಲೆಯಲ್ಲಿ ಅಮೇರಿಕಾವು ನೀರು, ಭೂಮಿ ಮತ್ತು ಆಕಾಶದಲ್ಲಿ ಇಸ್ರೇಲ್ ನ ಭದ್ರತೆಯನ್ನು ಹೆಚ್ಚಿಸಿದೆ. ಅಮೇರಿಕಾದ ರಕ್ಷಣಾ ಸಚಿವ ಲಾಯ್ಡ್ ಆಸ್ಟಿನ್ ಅವರ ಹೇಳಿಕೆ ಪ್ರಕಾರ, ವಿಮಾನವಾಹಕ ನೌಕೆ 'ಯು.ಎಸ್.ಎಸ್. ಅಬ್ರಹಾಂ ಲಿಂಕನ್' ಅನ್ನು ಪೆಸಿಫಿಕ್ ಸಾಗರದಿಂದ ಈಗ ಓಮನ್ ನ ಕೊಲ್ಲಿಯಲ್ಲಿ ನಿಯೋಜಿಸುವುದಕ್ಕಾಗಿ ಕಳುಹಿಸಲಾಗಿದೆ. ಇಸ್ರೇಲ್ನ ಪಶ್ಚಿಮದ ಭೂಮಧ್ಯ ಸಮುದ್ರದಲ್ಲಿ ಅಮೇರಿಕಾ ತನ್ನ ವಿಧ್ವಂಸಕ ಯುದ್ಧನೌಕೆ ಮತ್ತು 80 ಯುದ್ಧ ವಿಮಾನಗಳನ್ನು ನಿಯೋಜಿಸಿದೆ. ಮಧ್ಯ ಏಷ್ಯಾದ (ಮಧ್ಯ ಪ್ರಾಚ್ಯ ಪ್ರದೇಶದಲ್ಲಿರುವ) 10 ದೇಶಗಳಲ್ಲಿ ಪ್ರಸ್ತುತ 45 ಸಾವಿರ ಅಮೆರಿಕನ್ ಸೈನಿಕರ ಸಂಖ್ಯೆಯನ್ನು ದ್ವಿಗುಣಗೊಳಿಸಿ 50 ಸಾವಿರ ಹೊಸ ಸೈನಿಕರನ್ನು ನಿಯೋಜಿಸಲಾಗಿದೆ ಎಂದಿದ್ದಾರೆ.



# ಅಸ್ಸಾಂನಲ್ಲಿ ಲವ್ ಜಿಹಾದ್ ಪ್ರಕರಣಕ್ಕೆ ಜೀವಾವಧಿ ಶಿಕ್ಷೆ ಜಾರಿ ಶೀಘ್ರ; ಮುಖ್ಯಮಂತ್ರಿ ಶರ್ಮಾ



**ಗುವಾಹಟಿ:** ಲವ್ ಜಿಹಾದ್ ಪ್ರಕರಣಗಳಲ್ಲಿ ಜೀವಾವಧಿ ಶಿಕ್ಷೆ ವಿಧಿಸುವ ಕಾನೂನನ್ನು ತಮ್ಮ ಸರ್ಕಾರ ಶೀಘ್ರದಲ್ಲೇ ಪರಿಚಯಿಸಲಿದೆ ಎಂದು ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಭಾನುವಾರ ಹೇಳಿದ್ದಾರೆ.

ಇಲ್ಲಿ ನಡೆದ ರಾಜ್ಯ ಬಿಜೆಪಿ ಕಾರ್ಯಕಾರಿಣಿ ಸಭೆಯಲ್ಲಿ ಮಾತನಾಡಿದ ಅವರು, ಚುನಾವಣೆ ಸಂದರ್ಭದಲ್ಲಿ ಲವ್ ಜಿಹಾದ್ ಬಗ್ಗೆ ಮಾತನಾಡಿದ್ದೇವೆ.

ಶೀಘ್ರದಲ್ಲೇ, ನಾವು ಕಾನೂನು ತರುತ್ತೇವೆ, ಅಂತಹ ಪ್ರಕರಣಗಳಲ್ಲಿ ಜೀವಾವಧಿ ಶಿಕ್ಷೆ ವಿಧಿಸಲಾಗುತ್ತದೆ. ಶೀಘ್ರದಲ್ಲೇ ಹೊಸ ವಾಸಸ್ಥಳ ನೀತಿಯನ್ನು ಪರಿಚಯಿಸಲಾಗುವುದು, ಅದರ ಅಡಿಯಲ್ಲಿ ಅಸ್ಸಾಂನಲ್ಲಿ ಜನಿಸಿದವರು ಮಾತ್ರ ರಾಜ್ಯ ಸರ್ಕಾರಿ ಉದ್ಯೋಗಗಳಿಗೆ ಅರ್ಹರಾಗಿರುತ್ತಾರೆ ಎಂದು ಶರ್ಮಾ ಹೇಳಿದರು.

ಚುನಾವಣಾ ಪೂರ್ವ ಭರವಸೆಯಂತೆ ಒದಗಿಸಲಾದ ಒಂದು ಲಕ್ಷ ಸರ್ಕಾರಿ ಉದ್ಯೋಗಗಳಲ್ಲಿ ಸ್ಥಳೀಯರಿಗೆ ಆದ್ಯತೆ ನೀಡಲಾಗಿದೆ ಎಂದು ಅವರು ಸಮರ್ಥಿಸಿಕೊಂಡರು, ಇದು ಸಂಪೂರ್ಣ ಪಟ್ಟಿಯನ್ನು ಪ್ರಕಟಿಸಿದಾಗ ಸ್ಪಷ್ಟವಾಗುತ್ತದೆ ಎಂದರು. ಹಿಂದೂ-ಮುಸಲ್ಮಾನರ ನಡುವಿನ ಭೂಮಿ ಮಾರಾಟದ ಬಗ್ಗೆಯೂ ಅಸ್ಸಾಂ ಸರ್ಕಾರ ನಿರ್ಧಾರ ಕೈಗೊಂಡಿದೆ ಎಂದು ಸಿಎಂ ಹೇಳಿದರು.

ಅಂತಹ ವಹಿವಾಟನ್ನು ತಡೆಯಲು ಸರ್ಕಾರಕ್ಕೆ ಸಾಧ್ಯವಾಗದಿದ್ದರೂ, ಮುಂದುವರಿಯುವ ಮೊದಲು ಮುಖ್ಯಮಂತ್ರಿಗಳ ಒಪ್ಪಿಗೆಯನ್ನು ಪಡೆಯುವುದನ್ನು ಕಡ್ಡಾಯಗೊಳಿಸಿದೆ ಎಂದು ಶರ್ಮಾ ಹೇಳಿದರು.



# ಇಸ್ರೇಲ್ ವಿರುದ್ಧ ಕ್ಷಿಪಣಿ ದಾಳಿ ಆರಂಭಿಸಿದ ಹಿಜ್ಬುಲ್ಲಾ

**ಬೈರೂತ್:** ಲೆಬಾನಾನ್ ನ ಹಿಜ್ಬುಲ್ಲಾ ಗುಂಪು ಶನಿವಾರ ಇಸ್ರೇಲ್ನ ಮೇಲೆ ಹಲವು ಕತ್ಯುಷಾ ಕ್ಷಿಪಣಿಗಳನ್ನು ಸಿಡಿಸಿರುವುದಾಗಿ ಪ್ರಕಟಿಸಿದೆ. ಬಹುತೇಕ ಕ್ಷಿಪಣಿಗಳನ್ನು ತಾನು ಭೇದಿಸಿರುವುದಾಗಿ ಇಸ್ರೇಲ್ ಹೇಳಿಕೊಂಡಿದೆ.

ಉತ್ತರ ಇಸ್ರೇಲ್‌ನ ಬಿಯಾತ್ ಹಿಲ್ಲೆಲ್ ಮೇಲೆ ದಾಳಿ ನಡೆಸಿರುವುದಾಗಿ ಇರಾನ್ ಬೆಂಬಲಿತ ಸಂಘಟನೆ ಹಿಜ್ಬುಲ್ಲಾ ಹೇಳಿಕೊಂಡಿದೆ. ಲೆಬಬಾನ್‌ನಲ್ಲಿ ಕಫರ್ ಕಿಲಾ ಮತ್ತು ದೀರ್ ಸರಿಯನ್ ಮೇಲಿನ ದಾಳಿಗೆ ಪ್ರತೀಕಾರವಾಗಿ ಈ ದಾಳಿ ನಡೆಸಿದ್ದಾಗಿ ಸ್ಪಷ್ಟಪಡಿಸಿದೆ. ಕೇವಲ ಮಿಲಿಟರಿ ಗುರಿಗಳ ಮೇಲೆ ಮಾತ್ರವಲ್ಲದೇ ಇಸ್ರೇಲ್ನ ಒಳನುಗ್ಗಿ ಹಿಜ್ಬುಲ್ಲಾ ದಾಳಿ ನಡೆಸುವ ನಿರೀಕ್ಷೆ ಇದೆ ಎಂದು ಇರಾನ್ ಹೇಳಿದೆ.

ಹಮಾಸ್‌ನ ಮುಖ್ಯಸ್ಥ ಇಸ್ಮಾಯಿಲ್ ಹನಿಯೆಹ್ ಅವರನ್ನು ಟೆಹ್ರಾನ್ ಮೇಲೆ ನಡೆಸಿದ ದಾಳಿಯಲ್ಲಿ ಇಸ್ರೇಲ್ ಹತ್ಯೆ ಮಾಡಿದ ಬೆನ್ನಲ್ಲೇ ಹಿಜ್ಬುಲ್ಲಾ ಈ ದಾಳಿ ನಡೆಸಿದೆ.

# ವಾಲ್ಮೀಕಿ, ಮುಡಾ ಪ್ರಕರಣ ನಿಭಾಯಿಸುವಲ್ಲಿ ಸರ್ಕಾರ ವಿಫಲ: ವೇಣುಗೋಪಾಲ್ ಅಸಮಾಧಾನ



**ಬೆಂಗಳೂರು:** ವಾಲ್ಮೀಕಿ, ಮುಡಾ ಪ್ರಕರಣಗಳಲ್ಲಿ ಸರ್ಕಾರದ ಮತ್ತು ಮುಖ್ಯಮಂತ್ರಿಗಳ ಲೋಪ ಇಲ್ಲ. ಹೀಗಿದ್ದೂ ರಾಜ್ಯದ ಜನರಿಗೆ ಪ್ರಕರಣವನ್ನು ಸರಿಯಾಗಿ ಅರ್ಥ ಮಾಡಿಸುವಲ್ಲಿ ಸೋತಿದ್ದೀರಿ. ಪ್ರಕರಣವನ್ನು ನಿಭಾಯಿಸುವಲ್ಲಿ ವಿಫಲರಾಗಿದ್ದೀರಿ ಎಂದು ಸಚಿವರನ್ನು ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ ಸಿ ವೇಣುಗೋಪಾಲ್ ತರಾಟೆಗೆ ತೆಗೆದುಕೊಂಡಿದ್ದಾರೆ ಎಂದು ತಿಳಿದುಬಂದಿದೆ.

ಸಿಎಂ ನಿವಾಸ ಕಾವೇರಿಯಲ್ಲಿ ರವಿವಾರ ಸಚಿವರ ಜೊತೆ ನಡೆಸಿದ ಸಭೆಯಲ್ಲಿ ಕೆ ಸಿ ವೇಣುಗೋಪಾಲ್ ಅವರು ವಾಲ್ಮೀಕಿ, ಮುಡಾ ಪ್ರಕರಣವನ್ನು ನಿಭಾಯಿಸಿದ ರೀತಿಗೆ ಅಸಮಾಧಾನಗೊಂಡಿದ್ದರು ಎನ್ನಲಾಗಿದೆ. ಸುಪ್ರೀಂಕೋರ್ಟ್ ನಿವೃತ್ತ ಮುಖ್ಯ ನ್ಯಾಯಮೂರ್ತಿಗಳಿಂದ ಮತ್ತು ಸುಪ್ರೀಂಕೋರ್ಟ್ ಹಿರಿಯ ವಕೀಲರಿಂದ ಪ್ರಕರಣಕ್ಕೆ ದಾಖಲೆಗಳ ಪರಿಶೀಲನೆ ನಡೆಸಿದ್ದೇವೆ. ಎರಡೂ ಪ್ರಕರಣದಲ್ಲಿ ಸರ್ಕಾರದ ಪಾತ್ರ ಇಲ್ಲ ಎನ್ನುವುದು ಸ್ಪಷ್ಟವಾಗಿದೆ. ಹೀಗಿದ್ದೂ ಪ್ರಕರಣವನ್ನು ನಿಭಾಯಿಸುವಲ್ಲಿ ಸರಕಾರ ವಿಫಲವಾಗಿದೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ ಎಂದು ತಿಳಿದು ಬಂದಿದೆ.

ಸಭೆಯ ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಅವರು, ಸಿಎಂ ಸಿದ್ದರಾಮಯ್ಯಗೆ ಶೋಕಾಸ್ ನೋಟಿಸ್ ನೀಡಲು ರಾಜಭವನವನ್ನು ದುರ್ಬಳಕೆ ಮಾಡಿಕೊಳ್ಳಲಾಗಿದೆ.

ಈ ಷಡ್ಯಂತ್ರದ ವಿರುದ್ಧ ಹೋರಾಡಲು ಕಾಂಗ್ರೆಸ್ ತೀರ್ಮಾನಿಸಿದೆ ಎಂದು ಹೇಳಿದರು. ಸಿಎಂ ಪ್ರಾಮಾಣಿಕತೆ ಬಗ್ಗೆ ಎಲ್ಲರಿಗೂ ತಿಳಿದಿದೆ. ಅವರೇನೂ ಹೊಸಬರಲ್ಲ. ಸಿದ್ದರಾಮಯ್ಯ ಚಾರಿತ್ರ್ಯದ ಬಗ್ಗೆ ಎಲ್ಲರಿಗೂ ಅರಿವಿದೆ. ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸಲು ಈ ಪ್ರಯತ್ನ ನಡೆಯುತ್ತಿದೆ ಎಂದು ಅವರು ಕಿಡಿಕಾರಿದ್ದಾರೆ.

# ಪ್ರತಿಭಟನೆಗೆ ಬೆದರಿ ಬೆಂಗಾವಲು ಪಡೆ ಬಿಟ್ಟು ಬೈಕ್‌ನಲ್ಲಿ ಪರಾರಿಯಾದ ಕೇಂದ್ರ ಸಚಿವ

**ಪಾಟ್ನಾ:** ಬಿಹಾರದ ಬೇಗುಸರಾಯ್ ನಲ್ಲಿ ಭೇಟಿಯ ವೇಳೆ ಪ್ರತಿಭಟನೆ ಎದುರಾಗಿದ್ದರಿಂದ ಕೇಂದ್ರ ಸಚಿವ ಗಿರಿರಾಜ್ ಸಿಂಗ್ ತಮ್ಮ ಬೆಂಗಾವಲು ಪಡೆಯನ್ನು ಬಿಟ್ಟು ಬೈಕ್ ನಲ್ಲಿ ಪರಾರಿಯಾಗಿದ್ದಾರೆ.

ಕೇಂದ್ರ ಸಚಿವ ಮತ್ತು ಬಿಹಾರದ ಬೇಗುಸರಾಯ್ನ ಬಿಜೆಪಿ ಸಂಸದರಾದ ಗಿರಿರಾಜ್ ಸಿಂಗ್ ಅವರು ತಮ್ಮ ಸ್ವಂತ ಕ್ಷೇತ್ರದಲ್ಲಿ ಭಾನುವಾರ ಪ್ರತಿಭಟನಾಕಾರರು ಘೇರಾವ್ ಹಾಕಿದ್ದಾರೆ.

ಇದರಿಂದಾಗಿ ಅವರು ಬೈಕ್ ನಲ್ಲಿ ಪಿಲಿಯನ್ ಸವಾರಿ ಮಾಡಿಕೊಂಡು ಸ್ಥಳದಿಂದ ಪರಾರಿಯಾಗುತ್ತಿರುವ ದೃಶ್ಯ ವೈರಲ್ ಆಗಿದೆ.

ತಮ್ಮ ಬೇಡಿಕೆಗಳ ಪಟ್ಟಿಯನ್ನು ಸಚಿವರಿಗೆ ಸಲ್ಲಿಸಲು ಬಯಸಿದ ಎಎನ್ಎಂ(ವೈದ್ಯಕೀಯ) ಕಾರ್ಯಕರ್ತರು ಗಿರಿರಾಜ್ ಸಿಂಗ್ ಅವರ ವಾಹನಕ್ಕೆ ಘೇರಾವ್ ಹಾಕಿದ್ದಾರೆ. ಆದರೆ ಮನವಿ ಸ್ವೀಕರಿಸದೇ ಅವರು ಸ್ಥಳದಿಂದ ಪರಾರಿಯಾಗಿದ್ದಾರೆ. ಘಟನೆ ಬಗ್ಗೆ ಎಎನ್ಎಂ ಕಾರ್ಯಕರ್ತರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ತಮ್ಮ ಕುಂದುಕೊರತೆಗಳನ್ನು ಸಚಿವರು ಗಮನಿಸುತ್ತಾರೆ ಎಂಬ ನಿರೀಕ್ಷೆಯಲ್ಲಿದ್ದೆವು. ಸಮಸ್ಯೆಗಳನ್ನು ಪರಿಹರಿಸುವ ಬದಲು ಸ್ಥಳದಿಂದ ಪಲಾಯನ ಮಾಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.





ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಶಾರುಖ್ ಖಾನ್ ಜೊತೆ ಕಾಜೋಲ್‌ಗೆ ಇತ್ತು ರಿಲೇಶನ್ ಶಿಪ್!



ಶಾರುಖ್ ಖಾನ್ ಹಾಗೂ ಅವರ ಕೋ ಸ್ಟಾರ್ ಕಾಜೋಲ್ ಜೊತೆ ಒಳ್ಳೆಯ ಕೆಮಿಸ್ಟ್ರಿ ಇತ್ತು. ಇವರು ತೆರೆಮೇಲೆ ರೊಮ್ಯಾಂಟಿಕ್ ಜೋಡಿ ಆಗಿ ಕಾಣಿಸಿಕೊಂಡಿದ್ದರು. ಇಬ್ಬರ ಮಧ್ಯೆ ಪ್ರೀತಿ ಮೂಡಿದೆ ಎಂದೆಲ್ಲ ಮಾತನಾಡಿಕೊಂಡಿದ್ದು ಇದೆ. ಇವರು ಗುಟ್ಟಾಗಿ ಡೇಟಿಂಗ್ ಮಾಡುತ್ತಿದ್ದಾರೆ ಎನ್ನುವ ಮಾತು ಕೇಳಿ ಬಂದಿತ್ತು. ಆದರೆ, ಕೊನೆಯಲ್ಲಿ ಅಜಯ್ ದೇವಗನ್ ಅವರನ್ನು ಮದುವೆ ಆಗುವ ಮೂಲಕ ಕಾಜೋಲ್ ಅವರು ಎಲ್ಲರಲ್ಲೂ ಅಚ್ಚರಿ ಮೂಡಿಸಿದರು. ಈ ವಿಚಾರದ ಬಗ್ಗೆ ಸ್ವತಃ ಶಾರುಖ್ ಖಾನ್ ಅವರು ಮಾತನಾಡಿದ್ದರು.

ಸಂದರ್ಶನ ಒಂದರಲ್ಲಿ ಶಾರುಖ್ ಖಾನ್ ಗೆ ಈ ಬಗ್ಗೆ ಪ್ರಶ್ನೆ ಎದುರಾಗಿತ್ತು. ಇದಕ್ಕೆ ಅವರು ನೇರವಾಗಿ ಉತ್ತರ ನೀಡಿದ್ದರು. 'ನಾನು ಹಾಗೂ ಕಾಜೋಲ್ ಡೇಟಿಂಗ್ ಮಾಡುತ್ತಿದ್ದೇವೆಯೇ  ಅವಳು ಇನ್ನೂ ಸಣ್ಣವಳು. ಅವಳು ತನುಜಾ ಮಗಳು. ನನ್ನ ತಂಗಿ ಇದ್ದಂತೆ. ಗೌರಿಗೂ ಅವಳು ಇಷ್ಟ' ಎಂದಿದ್ದರು ಶಾರುಖ್.  'ನಾನು ಜೂಹಿ, ಮಾಧುರಿ, ಮನಿಶಾ, ಶಿಲ್ಪಾ, ಸೋನಾಲಿ, ನಗ್ಮಾ ಜೊತೆ ಕೆಲಸ ಮಾಡಿದ್ದೇನೆ. ನಾನು ಅವರ ಜೊತೆ ಮಂಚ ಏರಲ್ಲ. ಕಾಜೋಲ್ ಜೊತೆಯೂ ನಾನು ಮಲಗಲ್ಲ' ಎಂದಿದ್ದರು ಶಾರುಖ್ ಖಾನ್.

'ಗೌರಿ ಖಾನ್ ಬಳಿ ಎಲ್ಲಾ ಗುಣಗಳು ಇವೆ. ಹೀಗಿರುವಾಗ ಬೇರೆ ಹುಡುಗಿಯರ ಹಿಂದೆ ನಾನೇಕೆ ಹೋಗಲಿ  ನಾನು ಯಾರ ಜೊತೆಗಾದರೂ ಸಂಬಂಧ ಹೊಂದಿದ್ದರೆ ಯಾರಿಗೂ ಅದು ಗೊತ್ತಾಗುವುದಿಲ್ಲ. ನಾನು ಸಖತ್ ಸ್ಮಾರ್ಟ್. ಇದೆಲ್ಲ ನಾನ್ ಸೆನ್ಸ್ . ಜುಹಿ ಹಾಗೂ ನನ್ನ ಬಗ್ಗೆ ಸುದ್ದಿ ಹರಡಿದಾಗ ನಾನು ಅವರ ಜೊತೆ ಸಿನಿಮಾ ಮಾಡೋದು ನಿಲ್ಲಿಸಿದೆ. ಇದೇ ರೀತಿಯ ಸುದ್ದಿ ಮುಂದುವರಿದರೆ ನಾನು ಕಾಜೋಲ್ ಜೊತೆಯೂ ಸಿನಿಮಾ ಮಾಡಲ್ಲ' ಎಂದಿದ್ದರು ಅವರು.

ಶಾರುಖ್ ಖಾನ್ ಹಾಗೂ ಕಾಜೋಲ್ ಮಾಡಿದ ಸಿನಿಮಾಗಳು ಸೂಪರ್ ಹಿಟ್ ಎನಿಸಿಕೊಂಡಿವೆ. ಕಾಜೋಲ್ ಗೆ ಶಾರುಖ್ ಮೇಲೆ ಕ್ರಶ್ ಇತ್ತು ಎಂದು ಹೇಳಲಾಗಿದೆ. ಈ ವಿಚಾರವನ್ನು ಕಾಜೋಲ್ ಈ ಮೊದಲು ಒಪ್ಪಿಕೊಂಡಿದ್ದರು. ಇಂದು (ಆಗಸ್ಟ್ 5) ಕಾಜೋಲ್ ಜನ್ಮದಿನ. ಅವರಿಗೆ ಎಲ್ಲ ಕಡೆಗಳಿಂದ ಶುಭಾಶಯ ಬರುತ್ತಿದೆ.

# 'ಐಶ್ವರ್ಯಾನ ಅಮಿತಾಭ್ ಸೊಸೆಯಂತೆ ಎಂದೂ ನೋಡಿಲ್ಲ'



ಅಮಿತಾಭ್ ಬಚ್ಚನ್ ಕುಟುಂಬ ಐಶ್ವರ್ಯಾ ರೈ ಅವರನ್ನು ಬಿಟ್ಟು ತಾವಷ್ಟೇ ಅನಂತ್ ಅಂಬಾನಿ ಮದುವೆಗೆ ಬಂದಿದ್ದು ಸಾಕಷ್ಟು ಚರ್ಚೆ ಹುಟ್ಟುಹಾಕಿತ್ತು. ಬಚ್ಚನ್ ಕುಟುಂಬದ ಜೊತೆ ಐಶ್ವರ್ಯಾ ಅವರ ಸಂಬಂಧ ಸರಿ ಇಲ್ಲ ಎನ್ನುವ ಮಾತು ಕೇಳಿಬಂತು. ಈಗ ಐಶ್ವರ್ಯಾ ಹಾಗೂ ಅಭಿಷೇಕ್ ಬಚ್ಚನ್ ವಿಚ್ಛೇದನ ಪಡೆಯುತ್ತಾರೆ ಎನ್ನುವ ಮಾತು ಜೋರಾಗಿದೆ. ಹೀಗಿರುವಾಗಲೇ ಐಶ್ವರ್ಯಾ ಹಾಗೂ ಅಮಿತಾಭ್ ಸಂಬಂಧ ಎಂಥದ್ದು ಎಂಬುದನ್ನು ಜಯಾ ಈ ಮೊದಲು ವಿವರಿಸಿದ್ದರು. ಇಬ್ಬರೂ ತಂದೆ-ಮಗಳಂತೆ ಇದ್ದಾರೆ ಎಂದು ಜಯಾ ಹೇಳಿದ್ದರು.

ಕಾಫಿ ವಿತ್ ಕರಣ್ ಶೋಗೆ ಜಯಾ ಬಚ್ಚನ್ ಈ ಮೊದಲು ಬಂದಿದ್ದರು. ಈ ವೇಳೆ ಅವರು ಅಮಿತಾಭ್ ಅವರನ್ನು ಹೊಗಳಿದ್ದರು. 'ಯಾವಾಗೆಲ್ಲ ಅಮಿತಾಭ್ ಅವರು ಐಶ್ವರ್ಯಾ ಅವರನ್ನು ನೋಡುತ್ತಾರೋ ಆಗ ಖುಷಿ ಆಗುತ್ತಾರೆ. ಅವರು ಐಶ್ವರ್ಯಾ ಅವರನ್ನು ಸೊಸೆಯಂತೆ ಯಾವಾಗಲೂ ಕಾಣಲಿಲ್ಲ, ಅವರನ್ನು ಮಗಳಂತೆ ನೋಡಿಕೊಂಡರು. ಐಶ್ವರ್ಯಾ ಬರುತ್ತಿದ್ದರೆ, ಶ್ವೇತಾನೇ (ಮಗಳು) ಬರುತ್ತಿದ್ದಾರೆ ಎಂಬ ರೀತಿಯಲ್ಲಿ ನೋಡುತ್ತಾರೆ. ಶ್ವೇತಾ ಮದುವೆ ಆಗಿ ಹೋದ ಬಳಿಕ ಆ ಜಾಗವನ್ನು ಐಶ್ವರ್ಯಾ ತುಂಬಿದರು' ಎಂದಿದ್ದರು ಜಯಾ.

ಐಶ್ವರ್ಯಾ ರೈ ಹಾಗೂ ಅವರ ಮಾವ ಅಮಿತಾಭ್ ಬಚ್ಚನ್ ಮಧ್ಯೆ ಕಲಹ ಬಂದಿದೆ ಎಂದು ವರದಿ ಆಗಿತ್ತು. ಈ ಕಾರಣಕ್ಕೆ ಐಶ್ವರ್ಯಾ ಅವರು ಪತಿ ಅಭಿಷೇಕ್ ಜೊತೆ ಜಗಳ ಮಾಡಿದ್ದಾರೆ ಎನ್ನಲಾಗಿದೆ. ಆದರೆ, ಈ ವಿಚಾರವನ್ನು ಇವರು ಒಪ್ಪಿಕೊಂಡಿಲ್ಲ. ಹಾಗಂತ ಈ ವಿಚಾರವನ್ನು ತಳ್ಳಿ ಹಾಕುತ್ತಲೂ ಇಲ್ಲ. ಇವರ ನಡೆ ಅನೇಕರಿಗೆ ಅಚ್ಚರಿ ಮೂಡಿಸಿದೆ. ಈ ಮೊದಲು ಅನಂತ್ ಅಂಬಾನಿ ಮದುವೆಗೆ ಐಶ್ವರ್ಯಾ ಹಾಗೂ ಮಗಳು ಆರಾಧ್ಯಾ ಪ್ರತ್ಯೇಕವಾಗಿ ಆಗಮಿಸಿದ್ದರು.

ಮದುವೆ ಮುಗಿದ ಬಳಿಕ ಮಗಳ ಜೊತೆ ಐಶ್ವರ್ಯಾ ರೈ ವಿದೇಶಕ್ಕೆ ತೆರಳಿದ್ದಾರೆ. ಈ ಸಂದರ್ಭದಲ್ಲಿ ಅಭಿಷೇಕ್ ಇರಲಿಲ್ಲ. ಇದು ಸಾಕಷ್ಟು ಕುತೂಹಲ ಹುಟ್ಟುಹಾಕಿದೆ. ಈ ಮಧ್ಯೆ ಅಭಿಷೇಕ್ ಬಚ್ಚನ್ ಅವರು ಡಿವೋರ್ಸ್ ಬಗ್ಗೆ ಮಾಡಿದ ಪೋಸ್ಟ್‌ನ ಲೈಕ್ ಮಾಡಿ ಸುದ್ದಿ ಆಗಿದ್ದರು.



# 1 ಕೋಟಿ ರೂಪಾಯಿ ದೇಣಿಗೆ ನೀಡಿ ಭೂಕುಸಿತದ ಸಂತ್ರಸ್ತರಿಗೆ ನೆರವಾದ ಚಿರಂಜೀವಿ, ರಾಮ್ ಚರಣ್





ಕೇರಳದ ವಯನಾಡಿನಲ್ಲಿ ಸಂಭವಿಸಿದ ಭೂಕುಸಿತದಿಂದ ಜನರ ಜೀವನ ಅಸ್ತವ್ಯಸ್ತಗೊಂಡಿದೆ. ಜುಲೈ 30ರಂದು ಭೀಕರ ಭೂಕುಸಿತ ಉಂಟಾಯಿತು. ಈವರೆಗೂ 300ಕ್ಕೂ ಅಧಿಕ ಜನರು ಪ್ರಾಣ ಕಳೆದುಕೊಂಡಿರುವುದು ವರದಿ ಆಗಿದೆ. ಈ ಪ್ರಕೃತಿ ವಿಕೋಪಕ್ಕೆ ಸಿಲುಕಿ 200ಕ್ಕೂ ಹೆಚ್ಚು ಜನರು ನಾಪತ್ತೆ ಆಗಿದ್ದಾರೆ. ಅವರಿಗೆ ಹುಡುಕಾಟ ನಡೆದಿದೆ. ಊರಿಗೆ ಊರೇ ಸ್ಮಶಾನವಾಗಿದ್ದು, ಭೂಕುಸಿತದ ಸಂತ್ರಸ್ತರಿಗೆ ನೆರವಿನ ಅವಶ್ಯಕತೆ ಇದೆ. 'ಮೆಗಾ ಸ್ಟಾರ್' ಚಿರಂಜೀವಿ, ರಾಮ್ ಚರಣ್  ಅವರು ಜೊತೆಯಾಗಿ 1 ಕೋಟಿ ರೂಪಾಯಿ ದೇಣಿಗೆ ನೀಡುವ ಮೂಲಕ ಮಾನವೀಯತೆ ಮೆರೆದಿದ್ದಾರೆ.

ಚಿರಂಜೀವಿ ಅವರು ಈ ಬಗ್ಗೆ ಸೋಶಿಯಲ್ ಮೀಡಿಯಾದಲ್ಲಿ ಪೋಸ್ಟ್  ಮಾಡಿದ್ದಾರೆ. 'ಕಳೆದ ಕೆಲವು ದಿನಗಳಿಂದ ಕೇರಳದಲ್ಲಿ ಪಕೃತಿಯ ವಿಕೋಪಕ್ಕೆ ನೂರಾರು ಜನರು ಪ್ರಾಣ ಕಳೆದಕೊಂಡಿದ್ದಕ್ಕೆ ತೀವ್ರ ನೋವು ಉಂಟಾಗಿದೆ. ವಯನಾಡು ದುರಂತದ ಸಂತ್ರಸ್ತರಿಗಾಗಿ ನನ್ನ ಮನ ಮಿಡಿಯುತ್ತಿದೆ. ಚರಣ್  ಮತ್ತು ನಾನು ಜೊತೆಯಾಗಿ ಕೇರಳ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ 1 ಕೋಟಿ ರೂಪಾಯಿ ದೇಣಿಗೆ ನೀಡುವ ಮೂಲಕ ಸಂತ್ರಸ್ತರ ಬೆಂಬಲಕ್ಕೆ ನಿಲ್ಲುತ್ತೇವೆ. ನೋವಿನಲ್ಲಿ ಇರುವ ಎಲ್ಲರಿಗಾಗಿ ನಾನು ಪ್ರಾರ್ಥಿಸುತ್ತೇನೆ' ಎಂದು ಮೆಗಾ ಸ್ಟಾರ್ ಚಿರಂಜೀವಿ ಅವರು ಬರೆದುಕೊಂಡಿದ್ದಾರೆ.

ಟಾಲಿವುಡ್ , ಕಾಲಿವುಡ್  ಮುಂತಾದ ಚಿತ್ರರಂಗದ ಅನೇಕ ಸೆಲೆಬ್ರಿಟಿಗಳು ದೇಣಿಗೆ ನೀಡುತ್ತಿದ್ದಾರೆ. ಅಲ್ಲು ಅರ್ಜುನ್  ಅವರು 25 ಲಕ್ಷ ರೂಪಾಯಿ ನೀಡಿದ್ದಾರೆ. ರಶ್ಮಿಕಾ ಮಂದಣ್ಣ ಅವರು 10 ಲಕ್ಷ ರೂಪಾಯಿ ನೀಡಿದ್ದಾರೆ. ಮಲಯಾಳಂ ಚಿತ್ರರಂಗದ ಸೂಪರ್  ಸ್ಟಾರ್ ಮೋಹನ್  ಲಾಲ್  ಅವರು 3 ಕೋಟಿ ರೂಪಾಯಿ ನೀಡುತ್ತಿದ್ದಾರೆ. ಮಮ್ಮುಟ್ಟಿ ಮತ್ತು ದುಲ್ಖರ್  ಸಲ್ಮಾನ್  ಅವರು ಜೊತೆಯಾಗಿ 35 ಕೋಟಿ ರೂಪಾಯಿ ನೀಡಿದ್ದಾರೆ.

ಫಹಾದ್  ಫಾಸಿಲ್ , ನಜ್ರಿಯಾ ನಜೀಮ್ , ಸೂರ್ಯ, ಕಾರ್ತಿ, ಜ್ಯೋತಿಕಾ, ಚಿಯಾನ್ ವಿಕ್ರಮ್  ಸೇರಿದಂತೆ ಅನೇಕರು ವಯನಾಡು ಭೂಕುಸಿತದ ಸಂತ್ರಸ್ತರಿಗೆ ದೇಣಿಗೆ ನೀಡಿ ಜನರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. 'ವಯನಾಡಿನಲ್ಲಿ ಉಂಟಾದ ಭೂಕುಸಿತದ ಬಗ್ಗೆ ತಿಳಿದು ತುಂಬ ನೋವಾಯಿತು. ಕೇರಳ ರಾಜ್ಯವು ನನಗೆ ಸಾಕಷ್ಟು ಪ್ರೀತಿಯನ್ನು ನೀಡಿದೆ. ಭೂಕುಸಿತದ ಸಂತ್ರಸ್ತರ ಪುನರ್ವಸತಿ ಸಲುವಾಗಿ ಕೇರಳದ ಸಿಎಂ ಪರಿಹಾರ ನಿಧಿಗೆ 25 ಲಕ್ಷ ರೂ. ದೇಣಿಗೆ ನೀಡುವ ಮೂಲಕ ಕೈಲಾದ ಸಹಾಯವನ್ನು ನಾನು ಮಾಡುತ್ತಿದ್ದೇನೆ' ಎಂದಿದ್ದಾರೆ ಅಲ್ಲು ಅರ್ಜುನ್ .

## ಜೆಫ್ರಿ ಸ್ಪಿನ್ ಜಾದುಗೆ ಮಂಕಾದ ಟೀಂ ಇಂಡಿಯಾ

# ಲಂಕಾಗೆ 32 ರನ್‌ಗಳ ಜಯ



ಜೆಫ್ರಿ ವಾಂಡರ್ಸೆ ಸ್ಪಿನ್ ಮೋಡಿ ನೆರವಿನಿಂದ ಶ್ರೀಲಂಕಾ ತಂಡವು ಟೀಂ ಇಂಡಿಯಾ ವಿರುದ್ಧ 32 ರನ್‌ಗಳ ಜಯ ಸಾಧಿಸಿದೆ.ಭಾನುವಾರ ಇಲ್ಲಿ ನಡೆದ 2ನೇ ಏಕದಿನ ಸರಣಿಯ ಪಂದ್ಯದಲ್ಲಿ 208 ರನ್‌ಗಳಿಗೆ ಭಾರತ ಆಲೌಟ್ ಆಗಿ ಲಂಕಾ ಎದುರು ಮಂಡಿಯೂರಿತು. ಪಂದ್ಯದಲ್ಲಿ ನಾಯಕ ರೋಹಿತ್ ಶರ್ಮಾ, ಅಕ್ಷರ್ ಪಟೇಲ್ ಹೊರತುಪಡಿಸಿ ಟೀಂ ಇಂಡಿಯಾ ಬ್ಯಾಟಿಂಗ್ ವೈಫಲ್ಯ ಕಂಡುಬಂತು. ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಶ್ರೀಲಂಕಾ 50 ಓವರ್‌ಗೆ 9 ವಿಕೆಟ್ ನಷ್ಟಕ್ಕೆ 240 ರನ್ ಗಳಿಸಿತು. 241 ರನ್ ಗುರಿ ಬೆನ್ನತ್ತಿದ ಟೀಂ ಇಂಡಿಯಾ 42.2 ಓವರ್‌ಗೆ 208 ರನ್ ಗಳಿಸಿ ಆಲೌಟ್ ಆಗಿ ಸೋಲೊಪ್ಪಿಕೊಂಡಿತು.ಲಂಕಾ ಪರ ಅವಿಷ್ಕಾ ಫರ್ನಾಂಡೋ 40, ಕಾಮಿಂದು ಮೆಂಡಿಸ್ 40, ದುನಿತ್ ವೆಲ್ಲಲಾಗೆ 39, ಕುಸಾಲ್ ಮೆಂಡಿಸ್ 30, ಚರಿತ್ ಅಸಲಂಕಾ 25 ಗಳಿಸಿ ತಂಡದ ಮೊತ್ತ 200 ರ ಗಡಿ ದಾಟಲು ನೆರವಾದರು. ಟೀಂ ಇಂಡಿಯಾ ಪರ ವಾಷಿಂಗ್ಟನ್ ಸುಂದರ್ 3 ವಿಕೆಟ್ ಕಿತ್ತರು. ಉಳಿದಂತೆ ಕುಲದೀಪ್ ಯಾದವ್ 2, ಮೊಹಮ್ಮದ್ ಸಿರಾಜ್, ಅಕ್ಷರ್ ಪಟೇಲ್ ತಲಾ ಒಂದೊಂದು ವಿಕೆಟ್ ಪಡೆದರು. ಭಾರತ ತಂಡದ ಪರವಾಗಿ ನಾಯಕ ರೋಹಿತ್ ಶರ್ಮಾ ಹಾಗೂ ಶುಭಮನ್ ಗಿಲ್ ಉತ್ತಮ ಆರಂಭ ಪಡೆದುಕೊಂಡರು. ಶರ್ಮಾ ಅರ್ಧಶತಕ ಬಾರಿಸಿ (64 ರನ್, 44 ಬಾಲ್, 5 ಫೋರ್, 4 ಸಿಕ್ಸರ್) ದೊಡ್ಡ ಹೊಡೆತಕ್ಕೆ ಮುಂದಾಗಿ ಔಟಾದರು. ಗಿಲ್ 35 ಹಾಗೂ ಅಕ್ಷರ್ ಪಟೇಲ್ 44 ರನ್ ಗಳಿಸಿದ್ದು ಬಿಟ್ಟರೆ ಭಾರತದ ಯಾವೊಬ್ಬ ಬ್ಯಾಟರ್ ಕೂಡ ಹೆಚ್ಚುಹೊತ್ತು ಕ್ರೀಸ್‌ನಲ್ಲಿ ನಿಲ್ಲಲಿಲ್ಲ.

ಈ ಪಂದ್ಯದಲ್ಲೂ ಕೊಹ್ಲಿ ಮತ್ತೆ ವೈಫಲ್ಯ ಅನುಭವಿಸಿದರು. ಕೆ.ಎಲ್.ರಾಹುಲ್ ಶೂನ್ಯಕ್ಕೆ ಔಟಾಗಿ ನಿರಾಸೆ ಮೂಡಿಸಿದರು. ಪರಿಣಾಮವಾಗಿ ಟೀಂ ಇಂಡಿಯಾ 208 ರನ್‌ಗಳಿಗೆ ಆಲೌಟ್ ಆಯಿತು. ಜೆಫ್ರಿ ವಾಂಡರ್ಸೆ (6 ವಿಕೆಟ್), ಚರಿತ್ ಅಸಲಂಕಾ (3 ವಿಕೆಟ್) ಅಮೋಘ ಕೈಚಳಕದಿಂದ ಶ್ರೀಲಂಕಾ ಗೆಲುವು ದಾಖಲಿಸಿತು.

# ಹಾಕಿಯಲ್ಲಿ ಗ್ರೇಟ್ ಬ್ರಿಟನ್ ಮಣಿಸಿ ಸೆಮಿಫೈನಲ್‌ಗೆ ಭಾರತ ಲಗ್ಗೆ




2024ರ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಪುರುಷರ ಹಾಕಿಯಲ್ಲಿ ಗ್ರೇಟ್ ಬ್ರಿಟನ್ ಮಣಿಸಿ ಭಾರತ ತಂಡವು ಸೆಮಿಫೈನಲ್‌ಗೆ ಲಗ್ಗೆಯಿಟ್ಟಿದೆ.

ಸ್ಟೇಡ್ ಯೆವ್ಸ್-ಡು-ಮನೋಯಿರ್‌ನಲ್ಲಿ ಶೂಟ್-ಔಟ್ ಮೂಲಕ ಗ್ರೇಟ್ ಬ್ರಿಟನ್ ಅನ್ನು ಭಾರತ ಸೋಲುಣಿಸಿದೆ. ಒಲಿಂಪಿಕ್ಸ್‌ನಲ್ಲಿ ಸತತ ಎರಡನೇ ಪದಕಕ್ಕೆ ಭಾರತ ಒಂದು ಗೆಲುವಿನ ಅಂತರದಲ್ಲಿದೆ. ಸೆಮಿಫೈನಲ್‌ನಲ್ಲಿ ಜರ್ಮನಿ ಅಥವಾ ಅರ್ಜೆಂಟೀನಾವನ್ನು ಭಾರತ ತಂಡ ಎದುರಿಸಲಿದೆ.

ಪಂದ್ಯದ 17 ನೇ ನಿಮಿಷದಲ್ಲಿ ಹರ್ಮನ್ ಪ್ರೀತ್ ಸಿಂಗ್ ತನ್ನ ಏಳನೇ ಗೋಲು ಗಳಿಸಿದರು. ಆ ಮೂಲಕ ಭಾರತ ಮುನ್ನಡೆ ಸಾಧಿಸಿತು. ಹರ್ಮನ್‌ಪ್ರೀತ್ 22ನೇ ನಿಮಿಷದಲ್ಲಿ ಪೆನಾಲ್ಟಿ ಕಾರ್ನರ್ ಅನ್ನು ಗೋಲಾಗಿ ಪರಿವರ್ತಿಸಿದರು. ಇದಾದ ಐದು ನಿಮಿಷದಲ್ಲೇ ಲೀ ಮಾರ್ಟನ್ ಗ್ರೇಟ್ ಬ್ರಿಟನ್‌ಗೆ ಸಮಬಲ ಸಾಧಿಸಿದರು.

ಪೂರ್ಣಾವಧಿಯ ನಂತರ ಪಂದ್ಯ 1-1 ರಲ್ಲಿ ಕೊನೆಗೊಂಡರೆ, ಭಾರತವು ಶೂಟ್-ಔಟ್ ಅನ್ನು 4-2 ರಿಂದ ಗೆದ್ದು ಸೆಮಿಫೈನಲ್‌ಗೆ ಪ್ರವೇಶಿಸಿತು.

# ವಿಜಯೇಂದ್ರ, ನಿಖಿಲ್ ನೇತೃತ್ವದಲ್ಲಿ ಅಶ್ವಮೇಧ ಯಾಗ: ಹೆಚ್‌ಡಿಕೆ



**ರಾಮನಗರ:** ರಾಜ್ಯ ಸರ್ಕಾರದ ವಿರುದ್ಧ ಜೆಡಿಎಸ್ ಹಾಗೂ ಬಿಜೆಪಿ ಅಶ್ವಮೇಧ ಆರಂಭಿಸಿದ್ದು, ಈ ಸರ್ಕಾರದ ಅಂತಿಮ ಕಾಲ ಹತ್ತಿರದಲ್ಲಿಯೇ ಇದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಭವಿಷ್ಯ ನುಡಿದಿದ್ದಾರೆ.

ರಾಮನಗರದಲ್ಲಿ ಮೈಸೂರು ಚಲೋ ಪಾದಯಾತ್ರೆಯಲ್ಲಿ ಮಾತನಾಡಿದ ಅವರು, ಪ್ರತಿಯೊಂದಕ್ಕೂ ಲೆಕ್ಕ ಕೊಡುತ್ತೇವೆ. ನಿಮ್ಮ ಲೆಕ್ಕ ಚುಕ್ತಾ ಮಾಡುತ್ತೇವೆ. ಅಶ್ವಮೇಧಕ್ಕೆ ಚಾಲನೆ ಕೊಟ್ಟಿದ್ದೇವೆ. ನಿಮ್ಮನ್ನು ಮುಗಿಸುವ ಕಾಲ ಹತ್ತಿರ ಬಂದಿದೆ. ಈ ಸರ್ಕಾರ ಯಡಿಯೂರಪ್ಪ ಅವರ ವಿಷಯದಲ್ಲಿ ಅಮಾನುಷವಾಗಿ ವರ್ತಿಸಿದೆ. ಅವರ ಮನಸ್ಸಿಗೆ ನೋವು ಕೊಟ್ಟಿದೆ. ನಿಮ್ಮ ಪಾಪದ ಕೊಡ ತುಂಬಿ, ನಿಮ್ಮ ಅಂತಿಮ ಕಾಲ ಹತ್ತಿರಕ್ಕೆ ಬಂದಿದೆ ಎಂದು ಆಕ್ರೋಶ ಹೊರಹಾಕಿದ್ದಾರೆ.

ಬಿಜೆಪಿ-ಜೆಡಿಎಸ್ ಶವಯಾತ್ರೆ ನಡೆಯುತ್ತಿದೆ ಎಂದು ಹೇಳುತ್ತಿದ್ದಾರೆ. ಕಲಬುರ್ಗಿಯಲ್ಲಿ ಒಬ್ಬ ಪೊಲೀಸ್ ಅಧಿಕಾರಿಯ ಶವಯಾತ್ರೆ ಮಾಡಿಸಿದ್ದಾರಲ್ಲ, ಆ ಅಧಿಕಾರಿಯನ್ನು ಬಲಿ ತೆಗೆದುಕೊಂಡು ಆ ಕುಟುಂಬವನ್ನು ಬೀದಿಪಾಲು ಮಾಡಿದ್ದೀರಲ್ಲ. ನಿಮ್ಮ ಪ್ರಾಮಾಣಿಕತೆ ಎಂದರೆ ಇದೇನಾ? ಪೊಲೀಸ್ ಅಧಿಕಾರಿಗಳೇ ನೀವು ಜನರಿಗೆ, ಕರ್ತವ್ಯಕ್ಕೆ ನಿಷ್ಠರಾಗಿ ಕೆಲಸ ಮಾಡಿ. ನಮ್ಮ ಕಾರ್ಯಕರ್ತರ ಮೇಲೆ ಸಿಕ್ಕ ಸಿಕ್ಕವರಿಗೆಲ್ಲ ಕೇಸ್ ಹಾಕುತ್ತಿದ್ದೀರಿ. ಜಿಲ್ಲೆಯಲ್ಲಿ ಏನು ನಡೆಯುತ್ತಿದೆ ಎನ್ನುವುದು ನನ್ನ ಗಮನಕ್ಕೂ ಬರುತ್ತಿದೆ. ಪರಮೇಶ್ವರ್ ಅವರೇ, ಇಲಾಖೆಯಲ್ಲಿ ಏನು ನಡೆಯುತ್ತಿದೆ ಎಂದು ಗಮನಿಸಿ. ಒಬ್ಬ ಪೊಲೀಸ್ ಅಧಿಕಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಆತನ ಮಡದಿಯ ಪರಿಸ್ಥಿತಿ ಏನು? ಈಗಲಾದರೂ ಪೊಲೀಸರು ಈ ಸರ್ಕಾರದ ವರ್ತನೆಯ ಬಗ್ಗೆ ಎಚ್ಚೆತ್ತುಕೊಳ್ಳಬೇಕು ಎಂದು ಅವರು ಹರಿಹಾಯ್ದಿದ್ದಾರೆ.

ನಾಡಿನ ಬಡ ಜನತೆ ಬೆವರು ಸುರಿಸಿ, ತೆರಿಗೆ ರೂಪದಲ್ಲಿ ಕಟ್ಟಿದ ಹಣ ಲೂಟಿ ಆಗುತ್ತಿದೆ. ಪರಿಶಿಷ್ಟರ ಹಣ ಲೂಟಿ ಮಾಡಿರುವ ಈ ಸರ್ಕಾರ ಇರಬೇಕೋ, ಬೇಡವೋ ಎನ್ನುವ ಕಾರ್ಯಕ್ರಮ ಇದು. ರಾಜ್ಯದಲ್ಲಿ ಭ್ರಷ್ಟಾಚಾರ ನಿಲ್ಲಿಸುತ್ತೇವೆ ಎಂದು ಹೇಳಿ ಅಧಿಕಾರಕ್ಕೆ ಬಂದಿದ್ದೀರಿ. ಮಾತೆತ್ತಿದರೆ 136 ಸೀಟು ಗೆದ್ದಿದ್ದೇವೆ ಎನ್ನುತ್ತೀರಿ. ಶೀಘ್ರದಲ್ಲೇ ನೀವು 16 ಸೀಟಿಗೆ ಬಂದು ನಿಲ್ಲುವ ದಿನ ದೂರವಿಲ್ಲ ಎಂದು ಅವರು ಕುಟುಕಿದ್ದಾರೆ.

ನನ್ನ ಬಗ್ಗೆ, ವಿಜಯೇಂದ್ರ ಬಗ್ಗೆ ಸಿಡಿ ಶಿವು ಅವರು ಅತ್ಯಂತ ಲಘುವಾಗಿ ಮಾತಾಡಿದ್ದಾರೆ. ನನ್ನ ಬಗ್ಗೆ, ನನ್ನ ವೃತ್ತಿಯ ಬಗ್ಗೆ ಮಾತನಾಡಿದ್ದಾರೆ. ಹೌದು. ಬೆಂಗಳೂರಿನಲ್ಲಿ ಕಸ ತೆಗೆಯುವ ಕೆಲಸ ಮಾಡುತ್ತಿದ್ದೆ. ಜಯನಗರ, ವಿಲ್ಸನ್ ಗಾರ್ಡನ್, ಸುಧಾಮನಗರ ವಾರ್ಡುಗಳಲ್ಲಿ ಕಸ ವಿಲೇವಾರಿ ಮಾಡುವ ಗುತ್ತಿಗೆ ತೆಗೆದುಕೊಂಡಿದ್ದೆ. ಯಾರೋ ಹಿರಿಯರು ನನಗೆ ರಾಜಕೀಯಕ್ಕೆ ಬರಲು ಹೇಳಿ, ನೀನು ಕಸ ತೆಗೆಯುವ ಜಾಗ ಬೇರೆ ಇದೆ. ಅಲ್ಲಿ ಹೋಗಿ ಕೆಲಸ ಮಾಡು ಎಂದು ಹೇಳಿದರು. ಅದಕ್ಕೆ ರಾಜಕೀಯಕ್ಕೆ ಬಂದೆ. ನಾನು ಮತ್ತು ಬಿಜೆಪಿಯವರು ಕಾಂಗ್ರೆಸ್ ಭ್ರಷ್ಟಾಚಾರದ ಕಸ ಕ್ಲೀನ್ ಮಾಡಲು ಹೊರಟಿದ್ದೇವೆ. ಕರ್ನಾಟಕ ರಾಜ್ಯದ ಉದ್ದಗಲಕ್ಕೂ ವ್ಯವಸ್ಥೆಯನ್ನು ಹಾಳು ಮಾಡಿದ್ದೀರಿ. ಅದನ್ನೇ ಸ್ವಚ್ಛ ಮಾಡುವ ಕೆಲಸವನ್ನು ನಾವು ಮಾಡುತ್ತಿದ್ದೇವೆ ಎಂದು ಡಿಸಿಎಂಗೆ ತಿರುಗೇಟು ಕೊಟ್ಟಿದ್ದಾರೆ.

# ರಾಜ್ಯದಲ್ಲಿ ಟೆಂಡರ್ ರೀತಿ ಅಧಿಕಾರಿಗಳ ವರ್ಗಾವಣೆ ದಂಧೆ

**ಹುಬ್ಬಳ್ಳಿ:** ರಾಜ್ಯದಲ್ಲಿ ಹರಾಜ್ ರೀತಿ ಅಧಿಕಾರಿಗಳ ವರ್ಗಾವಣೆ ದಂಧೆ ನಡೆಯುತ್ತಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಆರೋಪಿಸಿದರು.

ಹುಬ್ಬಳ್ಳಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಅಧಿಕಾರಿಗಳ ವರ್ಗಾವಣೆಯಲ್ಲಿ ಸರ್ಕಾರ ಟೆಂಡರ್ ನೀತಿ ಅನುಸರಿಸುತ್ತಿದೆ ಎಂದು ಆರೋಪಿಸಿದರು.

ಟೆಂಡರ್‌ನಲ್ಲಿ ಸ್ಲ್ಯಾಬ್ ವಿಧಿಸಿದಂತೆ, ಅಧಿಕಾರಿಗಳ ವರ್ಗಾವಣೆಯಲ್ಲಿ ಸಹ ಕಾಂಗ್ರೆಸ್‌ನವರು ಆಯಾ ದರ್ಜೆ, ಶ್ರೇಣಿ, ಹುದ್ದೆ, ಪ್ರದೇಶವಾರು ರೇಟ್ ಸ್ಲ್ಯಾಬ್ ಹಾಕಿ ವರ್ಗಾವಣೆ ದಂಧೆಯಲ್ಲಿ ತೊಡಗಿದ್ದಾರೆ ಎಂದು ಹರಿಹಾಯ್ದರು.

ಹೀಗೆ ವರ್ಗಾವಣೆ ಪಡೆದ ಅಧಿಕಾರಿಗಳು ಅನಿವಾರ್ಯವಾಗಿ ಕಲೆಕ್ಷನ್‌ನಲ್ಲಿ ನಿರತರಾಗುತ್ತಾರೆ. ಇದು ಅಧಿಕಾರಿಗಳ ತಪ್ಪಲ್ಲ. ನಮ್ಮ ವ್ಯವಸ್ಥೆಯ ಲೋಪ. ಕಾಂಗ್ರೆಸ್ ಹಿಂದಿನಿಂದಲೂ ಈ ರೀತಿ ಭ್ರಷ್ಟಾಚಾರ ವ್ಯವಸ್ಥೆಯನ್ನು ಪೋಷಿಸಿಕೊಂಡು ಬಂದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.



Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com